## ಮಹಾಭಾರತದ ಪಾತ್ರಗಳ ಪರಿಚಯ



• ಉದಯವಾಹಿನಿ, ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಜೂನ್ 8 ರಿಂದ 15ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಡಾ|| ವಿನಾಯಕ ನಾಮಣ್ಣವರ್ ರವರಿಂದ ಮಹಾಭಾರತದ ಪಾತ್ರಗಳ ಪರಿಚಯ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ: ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರ ನಗರ, ಬೆಂಗಳೂರು-560003

## ದಯಾನಂದ್ ಅಮಾನತು ಪೊಲೀಸ್ ಇತಿಹಾಸದಲ್ಲಿ ಕರಾಳ ಅಧ್ಯಾಯ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಪೊಲೀಸ್ ಕಮಿಷನರ್ ಬಿ. ದಯಾನಂದ್ ಅವರ ಅಮಾನತು ಕರ್ನಾಟಕ ಪೊಲೀಸ್ ಇತಿಹಾಸದಲ್ಲಿ ಕರಾಳ ಅಧ್ಯಾಯವಾಗಿರಲಿದೆ ಎಂದು ಬೆಂಗಳೂರಿನ ಮಾಜಿ ಪೊಲೀಸ್ ಕಮಿಷನರ್ ಆಗಿದ್ದ ಹಾಗೂ ಸದ್ಯ ಬಿಜೆಪಿ ವಕ್ತಾರ ಆಗಿರುವ ಭಾಸ್ಕರ್ ರಾವ್ ಹೇಳಿದ್ದಾರೆ. ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು ಬೆಂಗಳೂರು ಕಾಲ್ತುಳಿತದಿಂದ ಸಿದ್ದರಾಮಯ್ಯ ಅವರು ಭಯಬೀತರಾಗಿದ್ದಾರೆ ಎಂದು ಹೇಳಿದ್ದಾರೆ. ಬೆಂಗಳೂರಿನ ಭೀಕರ ಕಾಲ್ತುಳಿತಕ್ಕೆ ಕಾರಣ ಪ್ರತಿಯೊಬ್ಬರಿಗೂ ಗೊತ್ತಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ ಇದಕ್ಕೆ ನೇರ ಹೊಣೆ ಎಂದು ಆರೋಪಿಸಿದ್ದಾರೆ. ಬುಧವಾರ ಬೆಂಗಳೂರಿನಲ್ಲಿ ಆರ್‌ಸಿಬಿ ವಿಜಯೋತ್ಸವದ ವೇಳೆ ಕಾಲ್ತುಳಿತದಿಂದ ಉಂಟಾದ ಸಾವು-ನೋವಿನ ಪ್ರಕರಣದ ಬಗ್ಗೆ ಬೆಂಗಳೂರು ನಗರ ಪೊಲೀಸ್ ಕಮಿಷನರ್ ಬಿ. ದಯಾನಂದ್ ಸೇರಿದಂತೆ ಹಲವು ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಅಮಾನತು ಮಾಡಲಾಗಿದೆ. ಬಿ. ದಯಾನಂದ್ ಅವರ ಅಮಾನತಿಗೆ ಹಲವು ಬಿಜೆಪಿ ನಾಯಕರು ಸೇರಿದಂತೆ ಸಾರ್ವಜನಿಕರೂ ವಿರೋಧ ವ್ಯಕ್ತಪಡಿಸಿದ್ದಾರೆ. ದಯಾನಂದ್ ಅವರ ಜಾಗಕ್ಕೆ ನಿನ್ನೆಯೇ ಹಿರಿಯ ಐಪಿಎಸ್ ಅಧಿಕಾರಿ ಸೀಮಂತ್‌ಕುಮಾರ್ ಸಿಂಗ್ ಅವರನ್ನು ರಾಜ್ಯ ಸರ್ಕಾರ ನೇಮಕ ಮಾಡಿ ಆದೇಶಿಸಿದೆ.

## ಲಂಚ ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತ ಬಲೆಗೆ ಬಿದ್ದ ಸರ್ಕಾರಿ ಅಧಿಕಾರಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ (ಕೆಐಎಡಿಬಿ) ಹಿರಿಯ ಅಧಿಕಾರಿಯೊಬ್ಬರು ಶುಕ್ರವಾರ 1.5 ಲಕ್ಷ ರೂ. ಲಂಚ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನರೇಂದ್ರ ಕುಮಾರ್ (51) ಬೆಂಗಳೂರಿನ ಕೆಐಎಡಿಬಿಯಲ್ಲಿ ಸರ್ವೇ ಮೇಲ್ವಿಚಾರಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಸ್ಕೆಚ್ ಸಿದ್ಧಪಡಿಸಲು ಮತ್ತು ಅದಕ್ಕೆ ಅನುಮೋದನೆ ನೀಡಲು ಆರೋಪಿ ಅಧಿಕಾರಿ ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂದು ದೂರುದಾರ ರವಿ ಆರೋಪಿಸಿದ ನಂತರ ಲೋಕಾಯುಕ್ತ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ. ಆರೋಪಿ ಸರ್ಕಾರಿ ಅಧಿಕಾರಿಯನ್ನು ಬಂಧಿಸಲಾಗಿದ್ದು, ಸದ್ಯ ತನಿಖೆ ನಡೆಯುತ್ತಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಹೈಕೋರ್ಟ್ ಮಧ್ಯಂತರ ಆದೇಶ

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತಕ್ಕೆ 11 ಮಂದಿ ಬಲಿಯಾದ ಪ್ರಕರಣದಲ್ಲಿ ಕೆಎಸ್‌ಸಿಎಗೆ ತಾತ್ಕಾಲಿಕ ರಿಲೀಫ್ ಸಿಕ್ಕಿದೆ. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ವಿರುದ್ಧ ಬಲವಂತದ ಕ್ರಮ ಬೇಡ ಎಂದು ಹೈಕೋರ್ಟ್ ಏಕಸದಸ್ಯ ಪೀಠವು ಮಧ್ಯಂತರ ಆದೇಶ ಹೊರಡಿಸಿದೆ. ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಕೆಎಸ್‌ಸಿಎ ಆಡಳಿತ ಮಂಡಳಿ, ಅದರ ಉನ್ನತ ಅಧಿಕಾರಿಗಳ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ನ್ಯಾಯಾಲಯದ ಮೆಟ್ಟಿಲೇರಿದ್ದ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ (ಕೆಎಸ್‌ಸಿಎ) ಅಧಿಕಾರಿಗಳಿಗೆ ಬಂಧನದಿಂದ ರಕ್ಷಣೆ ನೀಡಲು ಹೈಕೋರ್ಟ್ ಅನುಮತಿ ನೀಡಿದೆ. ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರು, ಕೆಎಸ್‌ಸಿಎ ಆಡಳಿತ ಮಂಡಳಿಯ ಅಧ್ಯಕ್ಷ ರಘುರಾಮ್ ಭಟ್, ಕಾರ್ಯದರ್ಶಿ ಎ. ಶಂಕರ್, ಖಜಾಂಚಿ ಇ.ಎಸ್.ಜೈರಾಮ್ ಅವರಿಗೆ ಮಧ್ಯಂತರ ಪರಿಹಾರ ನೀಡಿ ಆದೇಶ ಹೊರಡಿಸಿದ್ದಾರೆ. ಅಲ್ಲದೇ, ತನಿಖೆಗೆ ಸಹಕರಿಸುವಂತೆ ಸೂಚನೆ ನೀಡಿದ್ದಾರೆ. ಹಕ್ಕುಗಳು ಮತ್ತು ವಾದಗಳಿಗೆ ಯಾವುದೇ ಪೂರ್ವಾಗ್ರಹವಿಲ್ಲದೆ, ಮುಂದಿನ ವಿಚಾರಣೆಯ ದಿನಾಂಕದವರೆಗೆ ಅರ್ಜಿದಾರರು ನಡೆಯುತ್ತಿರುವ ತನಿಖೆ, ವಿಚಾರಣೆ, ಆಯೋಗ ಇತ್ಯಾದಿಗಳಿಗೆ ಸಹಕರಿಸಬೇಕು ಎಂದು ಕೋರ್ಟ್ ತಿಳಿಸಿದೆ.

## ಕುರಿ, ಮೇಕೆ ವ್ಯಾಪಾರ ಜೋರು



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬಕ್ರೀದ್ ಹಬ್ಬದ ಅಂಗವಾಗಿ ನಗರದ ಚಾಮರಾಜಪೇಟೆಯ ಈದ್ಗಾ ಮೈದಾನ ಹಾಗೂ ಆರ್.ಟಿ. ನಗರದ ಮುಖ್ಯರಸ್ತೆಯಲ್ಲಿ ಟಗರು, ಕುರಿ ಹಾಗೂ ಮೇಕೆಗಳ ಮಾರಾಟ ಜೋರಾಗಿದೆ. ಈ ಬಾರಿ ನಾಟಿ ಮತ್ತು ಬಾಗಲಕೋಟೆ ಜಿಲ್ಲೆಯ ಅಮೀನಗಡ ತಳಿಯ ಕುರಿಗಳಿಗೆ ಬೇಡಿಕೆ ಹೆಚ್ಚಿದೆ. ಬಕ್ರೀದ್ ಹಬ್ಬಕ್ಕೆ ಒಂದು ದಿನ ಬಾಕಿ ಇದ್ದು, ಕುರಿ ವ್ಯಾಪಾರ ಜೋರಾಗಿದೆ. ರಾಜ್ಯದ ನಾನಾ ಜಿಲ್ಲೆಗಳಿಂದ ವಿವಿಧ ತಳಿಯ ಕುರಿ ಹಾಗೂ ಮೇಕೆಗಳ ಹಿಂಡು ಚಾಮರಾಜಪೇಟೆಯ ಈದ್ಗಾ ಮೈದಾನದಲ್ಲಿ ಬೀಡುಬಿಟ್ಟಿದೆ. ಶನಿವಾರ ನಡೆಯುವ ಬಕ್ರೀದ್ ಹಬ್ಬಕ್ಕೂ ಮುನ್ನವೇ ಮುಸ್ಲಿಂ ಸಮುದಾಯದವರು ಕುರಿಗಳನ್ನು ಖರೀದಿಸುತ್ತಾರೆ. ಹಾಗಾಗಿ ಸಂತೆಯಲ್ಲಿ ವಿವಿಧ ತಳಿಯ ಸಾವಿರಾರು ಕುರಿಗಳು ಮಾರಾಟಕ್ಕಿದ್ದವು. ಕುರಿಗಳನ್ನು ಖರೀದಿಸಲು ಗ್ರಾಹಕರು ಗುಂಪು ಗುಂಪಾಗಿ ಬರುತ್ತಿದ್ದರು. ಆರ್.ಟಿ. ನಗರಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯರಸ್ತೆಯಲ್ಲಿ ನೂರಾರು ಜನ ವ್ಯಾಪಾರಿಗಳು ಕುರಿ, ಮೇಕೆ ಹಿಂಡುಗಳ ಜೊತೆಗೆ ಒಂದು ವಾರದಿಂದ ಠಿಕಾಣಿ ಹೂಡಿದ್ದಾರೆ. ಇಲ್ಲಿ ಮಧ್ಯಾಹ್ನ 1ಕ್ಕೆ ಪ್ರಾರಂಭವಾಗುವ ವ್ಯಾಪಾರ ಮಧ್ಯರಾತ್ರಿಯವರೆಗೆ ನಡೆಯುತ್ತದೆ. ಬಂಡೂರು, ಮೌಳಿ, ಶಿರೋಹಿ, ಬಾಗಲಕೋಟೆ, ಅಮೀನಗಡ, ಗೆಣಸಿ, ಶಿರಾ, ತುಮಕೂರು, ತಮಿಳುನಾಡು ಸೇರಿದಂತೆ ವಿವಿಧ ತಳಿಯ ಕುರಿಗಳು ಇಲ್ಲಿವೆ. ಬಂಡೂರು ಕುರಿಗಳು ಕನಿಷ್ಠ ರೂ.15 ಸಾವಿರದಿಂದ ಗರಿಷ್ಠ ರೂ.50 ಸಾವಿರದವರೆಗೆ ಮಾರಾಟವಾದರೆ, ಅಮೀನಗಡ ತಳಿಯ ಟಗರುಗಳು ಕನಿಷ್ಠ ರೂ.20 ಸಾವಿರದಿಂದ ಗರಿಷ್ಠ ರೂ.1.50 ಲಕ್ಷದವರೆಗೂ ಬಿಕರಿಯಾಗಿವೆ' ಎಂದು ದಾವಣಗೆರೆಯ ವ್ಯಾಪಾರಿ ನಿಸಾರ್ ಅಹ್ಮದ್ ತಿಳಿಸಿದರು. ಅಮೀನಗಡ ತಳಿಗೆ ಸೇರಿದ 25ಕ್ಕೂ ಹೆಚ್ಚು ಟಗರುಗಳನ್ನು ದಾವಣಗೆರೆಯಿಂದ ತಂದಿದ್ದೇನೆ. ಈಗಾಗಲೇ 15 ಟಗರುಗಳು ಮಾರಾಟವಾಗಿವೆ. ರಂಜಾನ್, ಬಕ್ರೀದ್ ಸಂದರ್ಭದಲ್ಲಿ ಮಾತ್ರ ಕುರಿಗೆ ಹೆಚ್ಚಿನ ಬೇಡಿಕೆ ಇರುತ್ತದೆ. ಗಾತ್ರ, ತೂಕದ ಆಧಾರದಲ್ಲಿ ಕುರಿಗಳ ಖರೀದಿ ನಡೆಯುತ್ತದೆ. ಹೋದವರ್ಷಕ್ಕೆ ಹೋಲಿಸಿದರೆ ಈ ವರ್ಷ ವ್ಯಾಪಾರ ಚೆನ್ನಾಗಿದೆ. ಕುರಿ, ಮೇಕೆಗೆ ಹೆಚ್ಚು ಬೇಡಿಕೆ ಇದ್ದು, ಉತ್ತಮ ಬೆಲೆಗೆ ಮಾರಾಟವಾಗುತ್ತಿವೆ' ಎಂದರು.

**ಉದ್ದ ಕಿವಿಯ ಹೋತಕ್ಕೆ ರೂ.65 ಸಾವಿರ!:** ಆರ್.ಟಿ. ನಗರದ ಮುಖ್ಯರಸ್ತೆಯಲ್ಲಿ ಮಾರಾಟಕ್ಕೆ ತಂದಿದ್ದ ಉದ್ದ ಕಿವಿ ಇರುವ ಹೋತವೊಂದು ನೋಡಗರನ್ನು ಸೆಳೆಯಿತು. ಇದರ ಬೆಲೆ ರೂ.65 ಸಾವಿರ ಇದೆ. ಈ ಹೋತ 60 ಕೆ.ಜಿ. ತೂಕ ಇದೆ. ಅದಕ್ಕೆ ಇದರ ಬೆಲೆಯೂ ಹೆಚ್ಚು. ಎರಡು ವರ್ಷಗಳಿಂದ ಇದನ್ನು ಸಾಕುತ್ತಿದ್ದೇನೆ. ನಾನು ನಿಗದಿಪಡಿಸಿರುವ ಬೆಲೆ ಬಂದರೆ ಮಾತ್ರ ಮಾರಾಟ ಮಾಡುತ್ತೇನೆ' ಎಂದು ದೇವನಹಳ್ಳಿ ಗೋವಿಂದರಾಜು ಹೇಳಿದರು.

# ಕಮಿಷನರ್ ದಯಾನಂದ ಅಮಾನತು : ಆಕ್ರೋಶ

### ಚಿನ್ನಸ್ವಾಮಿ ಮೈದಾನದ ಕ್ಯಾಪ್ಯಾಸಿಟಿ 36 ಸಾವಿರ, ಸೇರಿದ ಜನ 2 ಲಕ್ಷ, ರಾಷ್ಟ್ರ ಮಟ್ಟದಲ್ಲಿ ಸಿಎಂಗೆ ಛೀಮಾರಿ

• ಉದಯವಾಹಿನಿ, ಬೆಂಗಳೂರು

ಐಪಿಎಲ್ 2025ನೇ ಆವೃತ್ತಿಯನ್ನು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಗೆದ್ದ ನಂತರ, ನಗರದಲ್ಲಿ ವಿಜಯೋತ್ಸವವನ್ನು ಆಯೋಜಿಸಲಾಗಿತ್ತು. ಕಂಡು ಕೇಳರಿಯದ ಜನಸಾಗರವೇ ಹರಿದುಬಂದ ಹಿನ್ನಲೆಯಲ್ಲಿ, ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತದಲ್ಲಿ ಹನ್ನೊಂದು ಜನ ಸಾವನ್ನಪ್ಪಿದ್ದರು.

ರಾಷ್ಟ್ರ ಮಟ್ಟದಲ್ಲಿ ಸಿದ್ದರಾಮಯ್ಯ ಸರ್ಕಾರಕ್ಕೆ ತೀವ್ರ ಆಕ್ರೋಶ ವ್ಯಕ್ತವಾದ ಹಿನ್ನಲೆಯಲ್ಲಿ, ಕರ್ನಾಟಕ ಪೊಲೀಸ್ ಇತಿಹಾಸದಲ್ಲೇ ಅಪರೂಪ ಎನ್ನುವಂತೆ, ಬೆಂಗಳೂರು ನಗರದ ಪೊಲೀಸ್ ಆಯುಕ್ತ ಬಿ.ದಯಾನಂದ ಅವರನ್ನು ಸರ್ಕಾರ ಅಮಾನತು ಗೊಳಿಸಿತ್ತು. ಸರ್ಕಾರದ ಈ ನಿರ್ಧಾರಕ್ಕೂ ಅಲ್ಲಲ್ಲಿ ವಿರೋಧ ವ್ಯಕ್ತವಾಗುತ್ತಿದೆ. ಇದರ ಬಗ್ಗೆ ಬೆಂಗಳೂರು ರಾಜಾಜಿನಗರ ಬಿಜೆಪಿ ಶಾಸಕ ಎಸ್.ಸುರೇಶ್ ಕುಮಾರ್, ತಮ್ಮ ಫೇಸ್ ಬುಕ್ ಅಕೌಂಟಿನಲ್ಲಿ ಕಥೆಯೊಂದನ್ನು ಹಂಚಿಕೊಂಡಿದ್ದಾರೆ.



ಉದಯವಾಹಿನಿ ಚಿತ್ರ

**ಅದರ ಯಥಾವತ್ ಕಾಪಿ ಹೀಗಿದೆ :** ಅಂಧೇರ್ ನಗರಿ ಪ್ರಸಿದ್ಧ ಹಿಂದಿ ಸಾಹಿತಿ ಭರತೇಂದು ಹರಿಶ್ಚಂದ್ರ ಅವರ ಅತ್ಯಂತ ಜನಪ್ರಿಯ ನಾಟಕವಾಗಿದೆ. ಈ ನಾಟಕದಲ್ಲಿ, ವಿವೇಕಹೀನ ಮತ್ತು ದಬ್ಬಾಳಿಕೆಯ ಶಾಸನ ವ್ಯವಸ್ಥೆಯ ಮೇಲೆ ತೀಕ್ಷ್ಣವಾದ ವ್ಯಂಗ್ಯವನ್ನು ಮಾಡುತ್ತಾ ಮನುಷ್ಯನು ತನ್ನ ಸ್ವಂತ ಕರ್ಮಗಳಿಂದ ಹೇಗೆ ನಾಶವಾಗುತ್ತಾನೆ ಎಂಬುದನ್ನು ತೋರಿಸಲಾಗಿದೆ. ಒಂದು ಕಾಲದಲ್ಲಿ, ಕಾಶಿ ನದಿಯ ದಡದಲ್ಲಿ ಒಬ್ಬ ಸಂತ ತನ್ನ ಶಿಷ್ಯನೊಂದಿಗೆ ಒಂದು ಸಣ್ಣ ಗುಡಿಸಲಿನಲ್ಲಿ ವಾಸಿಸುತ್ತಿದ್ದನು. ಅವರ ಹೆಚ್ಚಿನ ಸಮಯ ಸ್ತೋತ್ರಗಳನ್ನು ಪಠಿಸುವುದರಲ್ಲಿ, ದೇವರನ್ನು ಆರಾಧಿಸುವುದರಲ್ಲಿ ಕಳೆದುಹೋಗುತ್ತಿತ್ತು. ಒಂದು ದಿನ, ಇಬ್ಬರೂ ದೇಶಪರ್ಯಟನೆ ಮಾಡಿ ಬರಲು ನಿರ್ಧರಿಸಿದರು. ಗುರು - ಶಿಷ್ಯರು ಪ್ರಯಾಣಿಸುತ್ತಾ ಒಂದು ಅಪರಿಚಿತ ದೇಶವನ್ನು ತಲುಪಿದರು. ಅಲ್ಲಿ ಒಂದು ಉದ್ಯಾನದಲ್ಲಿ ಕುಟೀರವನ್ನು ನಿರ್ಮಿಸಿ ತಂಗಿದರು. ಗುರು ಶಿಷ್ಯನಿಗೆ ಒಂದು ರೂಪಾಯಿ ಕೊಟ್ಟು ಮಾರುಕಟ್ಟೆಯಿಂದ ಯಾವುದಾದರೂ ಒಳ್ಳೆಯ ತರಕಾರಿ ತರಲು ಹೇಳಿದ. ಶಿಷ್ಯ ಗಂಗಾಧರ ತರಕಾರಿ ಮಾರುಕಟ್ಟೆಗೆ ಹೋದಾಗ ತರಕಾರಿಗಳ ಬೆಲೆಯನ್ನು ಕೇಳಲು ಪ್ರಾರಂಭಿಸಿದ. ಅ ಅವನಿಗೆ ಇದನ್ನು ನೋಡಿ ಬಹಳ ಆಶ್ಚರ್ಯವಾಯಿತು ಅಲ್ಲಿ ಬಹುತೇಕ ಎಲ್ಲಾ ವಸ್ತುಗಳು ಒಂದು ರೂಪಾಯಿಗೆ ಮಾರಾಟ ಆಗುತ್ತಿತ್ತು.

ತರಕಾರಿಗಳು ಮಾತ್ರವಲ್ಲ, ಹಾಲು, ಮೊಸರು ಮತ್ತು ಮಿಠಾಯಿ ಬೆಲೆ ಒಂದೇ ಆಗಿತ್ತು. ಪ್ರತಿದಿನ ತರಕಾರಿಗಳು, ರೊಟ್ಟಿಯನ್ನು ತಿಂದೇ ತಿನ್ನುತ್ತೇವೆ ಅದರ ಬದಲು ಈವತ್ತು ಮಿಠಾಯಿಯನ್ನೇಕೆ ಖರೀದಿಸಬಾರದು ಎಂದು ಯೋಚಿಸಿ ತರಕಾರಿ ಬದಲಿಗೆ ಒಳ್ಳೆಯ ಮಿಠಾಯಿ ಕೊಂಡುಕೊಂಡ.

**ಕೈಯಲ್ಲಿ ಮಿಠಾಯಿ ತೆಗೆದುಕೊಂಡು, ಸಂತೋಷದಿಂದ ಗುಡಿಸಲಿಗೆ ಬಂದು ಗುರುವಿಗೆ ಎಲ್ಲಾ ಮಾತನ್ನು ತಿಳಿಸಿದ. ಗುರುಗಳು ಧ್ಯಾನಮಗ್ನರಾಗಿ ಹೇಳಿದರು, ಮಗನೇ ಗಂಗಾಧರ! ನಾವು ಆದಷ್ಟು ಬೇಗ ಈ ಸ್ಥಳವನ್ನು ಬಿಡಬೇಕು. ಇದು ಕತ್ತಲೆಯ ನಗರವೆಂದು ತೋರುತ್ತದೆ, ಮತ್ತು ಇಲ್ಲಿಯ ರಾಜ ಮಹಾ ಮೂರ್ಖ ಮತ್ತು ಅಸಮರ್ಥನಿದ್ದಾನೆ. ಯಾವುದೇ ಕ್ಷಣದಲ್ಲಿ ನಮ್ಮ ಪ್ರಾಣಕ್ಕೆ ಕುಂದು ಬರಬಹದು ಎಂದ. ಆದರೆ ಶಿಷ್ಯನಿಗೆ ಈ ಸಲಹೆ ಒಂದು ಚೂರು ಇಷ್ಟವಾಗಲಿಲ್ಲ. ಆತ ಗುರುವಿಗೆ, ಗುರುಗಳೇ, ನನಗೆ ಈ ಸ್ಥಳ ತುಂಬ ಇಷ್ಟವಾಗಿದೆ. ನಿಮ್ಮ ಅದೇಶವಾದರೆ, ಕೆಲವು ದಿನ ಇರುತ್ತೇನೆ. ಗುರುವಿಗೆ ಅವನ ಮಾತಿನ ಮೇಲೆ ನಗು ಬಂತು ಹೇಳಿದರು, ಸರಿ ಮಗನೇ, ಒಂದು ರೂಪಾಯಿ ಬೆಲೆಯ ಮಿಠಾಯಿ ತಿಂದು ಸ್ವಲ್ಪ ಆರೋಗ್ಯ ವೃದ್ಧಿಸಿಕೋ. ಯಾವುದೇ ಸಂಕಟ ಎದುರಾದರೆ, ನನ್ನನ್ನು ನೆನಪು ಮಾಡು ಹೀಗೆ ಹೇಳಿ ಗುರು ಆ ಸ್ಥಾನದಿಂದ ಹೊರಟುಹೋದರು.**

## ಸರ್ಕಾರದ ನಿರ್ಧಾರ ಸಮರ್ಥಿಸಿಕೊಂಡ ರಾಮಲಿಂಗಾರೆಡ್ಡಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು(ಆರ್‌ಸಿಬಿ) ತಂಡದ ಸಂಭ್ರಮಾಚರಣೆ ವೇಳೆ 11 ಜನರು ಪ್ರಾಣ ಕಳೆದುಕೊಂಡ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿ, ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ, ಇತರೆ ಪೊಲೀಸ್ ಅಧಿಕಾರಿಗಳನ್ನು ಸೇವೆಯಿಂದ ಅಮಾನತುಗೊಳಿಸಿದ ರಾಜ್ಯ ಸರ್ಕಾರದ ನಿರ್ಧಾರವನ್ನು ಸಾರಿಗೆ, ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಸಮರ್ಥಿಸಿ ಕೊಂಡರು.



ಉದಯವಾಹಿನಿ ಚಿತ್ರ

ಇಲ್ಲಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು. 'ಬೆಂಗಳೂರಿನ ವಿಧಾನಸೌಧದ ಮೆಟ್ಟಿಲುಗಳ ಮೇಲೆ ಆರ್‌ಸಿಬಿ ತಂಡದ ಸಂಭ್ರಮಾಚರಣೆ ನಡೆಸಲಾಗಿತ್ತು. ಆದರೆ, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭ್ರಮಾಚರಣೆಗೆ ಅನುಮತಿ ನೀಡಿರಲಿಲ್ಲ. ಹೀಗಿದ್ದರೂ ಪೊಲೀಸರು ಆಚರಣೆಗೆ ಅವಕಾಶ ನೀಡಿದರು. ಎಷ್ಟು ಜನರು ಸೇರಬಹುದೆಂದು ಅಂದಾಜಿಸದಿರುವುದು ಪೊಲೀಸರು ಮತ್ತು ಗುಪ್ತಚರ ವಿಭಾಗದ ವೈಫಲ್ಯ ತೋರಿಸುತ್ತದೆ' ಎಂದರು. ಪೊಲೀಸರು ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಬೇಕು. ಸಂಪುಟ ಸಭೆಯಲ್ಲೂ ಈ ವಿಷಯದ ಬಗ್ಗೆ ಚರ್ಚಿಸಲಾಗಿದೆ. ಈ ಕ್ರೀಡಾಂಗಣ 35 ಸಾವಿರ ಜನರಿಗೆ ಸ್ಥಳಾವಕಾಶ ಕಲ್ಪಿಸುವ ಸಾಮರ್ಥ್ಯ ಹೊಂದಿದೆ.

ಆದರೆ, ಆರ್‌ಸಿಬಿ ತಂಡದ ಸಂಭ್ರಮಾಚರಣೆ ವೇಳೆ ಪ್ರವೇಶ ಉಚಿತ ಎಂದು ಘೋಷಿಸಿದ ಕಾರಣ 2 ಲಕ್ಷಕ್ಕೂ ಅಧಿಕ ಜನರು ಆಗಮಿಸಿದ್ದರು. ಪರಿಸ್ಥಿತಿ ನಿರ್ವಹಿಸುವಲ್ಲಿ ಪೊಲೀಸರು ವಿಫಲರಾದರು ಎಂದು ತಿಳಿಸಿದರು. ರಾಜ್ಯದಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಬರುವ 35 ಸಾವಿರ ದೇವಾಲಯಗಳಿದ್ದು, ಅವುಗಳನ್ನು ಎ, ಬಿ ಮತ್ತು ಸಿ ಎಂದು ವರ್ಗೀಕರಿಸಲಾಗಿದೆ.

ಎ ಮತ್ತು ಬಿ ದರ್ಜೆಯ ದೇವಾಲಯಗಳು ಸ್ವಾವಲಂಬಿಯಾಗಿದ್ದು, ಸಿ ದರ್ಜೆಯ ದೇವಾಲಯಗಳಿಗೆ ಧಾರ್ಮಿಕ ವಿಧಿ-ವಿಧಾನ ಕೈಗೊಳ್ಳಲು ಸರ್ಕಾರದಿಂದ ಅನುದಾನ ನೀಡುತ್ತೇವೆ. ಕೆಲವು ಖಾಸಗಿ ದೇವಾಲಯಗಳ ಬಗ್ಗೆ ವಿವಾದಗಳಿದ್ದು ಅವುಗಳನ್ನು ಪರಿಶೀಲಿಸಲಾಗುವುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

**'ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅನುಮತಿ ಇಲ್ಲದೆ ಸಂಭ್ರಮಾಚರಣೆ ಆಯೋಜಿಸಿದ್ದ ಅರ್‌ಸಿಬಿ ತಂಡದ ಮ್ಯಾನೇಜ್‌ಮೆಂಟ್, ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ಮತ್ತು ಇವೆಂಟ್ ಮ್ಯಾನೇಜ್‌ಮೆಂಟ್ ಕಂಪನಿ ವಿರುದ್ಧ ನಾವು ಪ್ರಕರಣ ದಾಖಲಿಸಿದ್ದೇವೆ. ಇದರಲ್ಲಿ ಪೊಲೀಸ್ ಅಧಿಕಾರಿಗಳನ್ನು ಬಲಿಪಶು ಮಾಡಿಲ್ಲ. ಆದರೆ, ಅನುಮತಿ ಇಲ್ಲದೆ ಕಾರ್ಯಕ್ರಮಕ್ಕೆ ಅವಕಾಶ ನೀಡಿದ್ದಕ್ಕಾಗಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ' ಎಂದು ಅವರು ಹೇಳಿದರು.**

## ಸಿಎಂ, ಡಿಸಿಎಂ ವಿರುದ್ಧ ಸ್ನೇಹಮಯಿ ಕೃಷ್ಣ ದೂರು

• ಉದಯವಾಹಿನಿ, ಬೆಂಗಳೂರು

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಶಿವಕುಮಾರ್ ಮತ್ತು ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ಪದಾಧಿಕಾರಿಗಳ ವಿರುದ್ಧ ದೂರು ದಾಖಲಿಸಿದ್ದು, ಈ ದುರಂತಕ್ಕೆ ಸರ್ಕಾರದ ಬೇಜವಾಬ್ದಾರಿಯೇ ಕಾರಣ ಎಂದು ಆರೋಪಿಸಿದ್ದಾರೆ. ಕಾನೂನು ಮತ್ತು ಸುರಕ್ಷತೆಯ ಬಗ್ಗೆ ಯಾವುದೇ ಪೂರ್ವ ಸಿದ್ಧತೆ ಇಲ್ಲದೆ ವಿಧಾನಸೌಧದ ಮುಂದೆ ತರಾತುರಿಯಲ್ಲಿ ಆಯೋಜಿಸಲಾದ ಕಾರ್ಯಕ್ರಮದಿಂದ ಈ ದುರಂತ ಸಂಭವಿಸಿದೆ. ಈ ದುರಂತಕ್ಕೆ ಸಿಎಂ ಮತ್ತು ಡಿಸಿಎಂ ಅವರೇ ಹೊಣೆ ಎಂದು ಅವರು ಆರೋಪಿಸಿದ್ದಾರೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕು. ಇದಕ್ಕೆ ಮುಖ್ಯಮಂತ್ರಿ ಮತ್ತು ಡಿಸಿಎಂ ಕಾರಣ. ಪೊಲೀಸರು ಯುಡಿಆರ್ (ಅಸ್ವಾಭಾವಿಕ ಸಾವಿನ ವರದಿ) ದಾಖಲಿಸಿದ್ದಾರೆ. ಇದು ಸರಿಯಾದ ಕ್ರಮವಲ್ಲ. ಭಾರತೀಯ ದಂಡ ಸಂಹಿತೆಯ 106ನೇ ವಿಧಿಯ ಅಡಿಯಲ್ಲಿ ಪ್ರಕರಣ ದಾಖಲಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಇನ್ನು ವಿರೋಧ ಪಕ್ಷಗಳು ಸಹ ದುರಂತಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ ಎಂದು ಟೀಕಿಸಿವೆ.



**ಸ್ನೇಹಮಯಿ ಕೃಷ್ಣ ಅವರು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ಸಿಎಂ, ಡಿಸಿಎಂ ವಿರುದ್ಧ ದೂರು ನೀಡಿದ್ದು, ಇದು ಸರ್ಕಾರದ ಬೇಜವಾಬ್ದಾರಿಯಿಂದ ಉಂಟಾದ ದುರಂತ. ಆರ್‌ಸಿಬಿ ರಾಜ್ಯವನ್ನು ಪ್ರತಿನಿಧಿಸುವ ತಂಡವಲ್ಲ. ಇದು ಮದ್ಯ ಮಾರಾಟಗಾರರು ಖರೀದಿಸಿದ ಖಾಸಗಿ ತಂಡ. ಹೀಗಾಗಿ ರಾಜ್ಯ ಸರ್ಕಾರ ಅವರನ್ನು ಆಹ್ವಾನಿಸಿ ಸನ್ಮಾನಿಸುವ ಅಗತ್ಯವಿರಲಿಲ್ಲ ಎಂದು ಹೇಳಿದ್ದಾರೆ.**

## ಐಐಎಸ್‌ಸಿಯಲ್ಲಿ ಕ್ವಾಂಟಮ್ ಪಾರ್ಕ್‌ಗೆ ಸಂಪುಟ ಒಪ್ಪಿಗೆ


• ಉದಯವಾಹಿನಿ, ಬೆಂಗಳೂರು

ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್‌ಸಿ) ಸಹಯೋಗದೊಂದಿಗೆ 'ಕ್ವಾಂಟಮ್ ಸಂಶೋಧನಾ ಪಾರ್ಕ್' ಸ್ಥಾಪನೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ.ಸಚಿವ ಸಂಪುಟ ಸಭೆಯ ಬಳಿಕ ಕಾನೂನು ಸಚಿವ ಎಚ್.ಕೆ.ಪಾಟೀಲ ಅವರು ಈ ವಿಷಯ ತಿಳಿಸಿದರು.

ಕ್ವಾಂಟಮ್ ತಂತ್ರಜ್ಞಾನದ ಕ್ರಾಂತಿಯನ್ನು ಮುನ್ನಡೆಸುವ ನಿಟ್ಟಿನಲ್ಲಿ ಕರ್ನಾಟಕದ ಈ ಪ್ರಯತ್ನ ಪ್ರಮುಖ ಹೆಜ್ಜೆಯಾಗಿದೆ. ರೂ.48 ಕೋಟಿ ಅನುದಾನದಲ್ಲಿ ಭಾರತೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ ಈ ಪಾರ್ಕ್ ಸ್ಥಾಪನೆ ಆಗಲಿದೆ. ಜಾಗತಿಕ ಮಟ್ಟದ ಪ್ರಯೋಗಾಲಯಗಳು ಮತ್ತು ಸಂಶೋಧನಾ ಉಪಕರಣಗಳನ್ನು ಹೊಂದಿರಲಿವೆ' ಎಂದು ಅವರು ಹೇಳಿದರು.

'ಕ್ವಾಂಟಮ್ ವಿಜ್ಞಾನ ಕ್ಷೇತ್ರದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿಯ ಸಾಮರ್ಥ್ಯ ಹಾಗೂ ಅವಕಾಶಗಳನ್ನು ವೃದ್ಧಿಸಲು ಈ ಪಾರ್ಕ್ ನೆರವಾಗಲಿದೆ. ವಿದ್ಯಾರ್ಥಿಗಳು, ಸಂಶೋಧಕರು, ನವೋದ್ಯಮಗಳು ಈ ಪಾರ್ಕ್‌ನ ಸವಲತ್ತುಗಳನ್ನು ಬಳಸಿಕೊಳ್ಳಲು ಅವಕಾಶ ಒದಗಿಸಲಾಗುತ್ತದೆ ಎಂದರು.

**ಮರು ಟೆಂಡರ್:** ಬಿಬಿಎಂಪಿಯ ವ್ಯಾಪ್ತಿಯ ಸಮಗ್ರ ಘನತ್ಯಾಜ್ಯ ನಿರ್ವಹಣೆಯ ಟೆಂಡರ್ ಕರೆದ ಸಂದರ್ಭದಲ್ಲಿ ಯಾವುದೇ ಬಿಡ್ಡುದಾರರು ಭಾಗವಹಿಸದ ಕಾರಣ, ನಾಲ್ಕರ ಬದಲಿಗೆ ಎರಡು ಪ್ಯಾಕೇಜ್‌ಗಳಲ್ಲಿ ಮರು ಟೆಂಡರ್ ಕರೆಯಲು ಸಚಿವ ಸಂಪುಟ ನಿರ್ಣಯಿಸಿದೆ ಎಂದರು.



ಉದಯವಾಹಿನಿ ಚಿತ್ರ

**ಶೇ 5 ಬಡ್ಡಿ ಸಹಾಯ ಧನ:** ನಗರದ ಒಂದು ಲಕ್ಷ ಬಹುಮಹಡಿ ವಸತಿ ಯೋಜನೆಯಡಿ ಸಾಲ ಪಡೆದು ಮನೆ ಖರೀದಿಸುವ ಫಲಾನುಭವಿಗಳಿಗೆ ಶೇ 5 ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು ಎಂದರು. 'ಬಡ್ಡಿ ಸಹಾಯಧನ ಯೋಜನೆ'ಯಡಿ ಫಲಾನುಭವಿಗಳ ಸಾಲದ ಮಾಸಿಕ ಕಂತಿನ ಬಡ್ಡಿ ಭಾಗದಲ್ಲಿ ರೂ. 3000 ಮಿತಿಗೆ ಒಳಪಟ್ಟು ಸರ್ಕಾರದಿಂದ ಶೇ 3 ರಿಂದ ಶೇ 5 ರ ಸಹಾಯಧನ ನೀಡಲಾಗುವುದು. ಸಹಾಯ ಧನವನ್ನು ಸರ್ಕಾರವೇ ಭರಿಸಲಿದೆ. ಈ ಸೌಲಭ್ಯವನ್ನು ಫಲಾನುಭವಿ ಯ ಸಾಲದ ಅವಧಿಯ 10 ವರ್ಷಗಳ ಅವಧಿಗೆ ಮಾತ್ರ ನೀಡಲಾಗುವುದು' ಎಂದು ಅವರು ಹೇಳಿದರು.

**ಚರ್ಚೆಗೆ ಬಾರದ ಸಮೀಕ್ಷೆ ದತ್ತಾಂಶ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಲ್ಲಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ದತ್ತಾಂಶಗಳ ಅಧ್ಯಯನ ವರದಿಯ ವಿಷಯ ಚರ್ಚೆಗೆ ಬರಲಿಲ್ಲ ಎಂದು ಪಾಟೀಲ ತಿಳಿಸಿದರು.

### ಬೂಟ್ ಆಧಾರದಲ್ಲಿ ಸುರಂಗ ರಸ್ತೆ

**ಹೆಬ್ಬಾಳ ಜಂಕ್ಷನ್‌ನಿಂದ ಎಚ್‌ಎಸ್‌ಆರ್ ಲೇಔಟ್‌ನ ಸಿಲ್ಕ್ ಬೋರ್ಡ್‌ವರೆಗೆ ಉತ್ತರ-ದಕ್ಷಿಣ ಕಾರಿಡಾರ್ (ಸುರಂಗ ರಸ್ತೆ) ಅನ್ನು ಬೂಟ್ (ಬಿಲ್ಡ್ ಓನ್ ಆಪರೇಟ್-ಬಿಒಟಿ) ಆಧಾರದಲ್ಲಿ ನಿರ್ಮಿಸಲಾಗುವುದು. ಇದಕ್ಕಾಗಿ ಸದ್ಯವೇ ಜಾಗತಿಕ ಟೆಂಡರ್ ಕರೆಯಲಾಗುವುದು ಎಂದು ಎಚ್.ಕೆ.ಪಾಟೀಲ ತಿಳಿಸಿದರು. ಅವಳಿ ಭೂಗತ ಸುರಂಗ ರಸ್ತೆಯ ಉದ್ದ 33.49 ಕಿ.ಮೀ. ಅನ್ನು 26 ತಿಂಗಳಲ್ಲಿ ಕೊರೆಯಲಾಗುತ್ತದೆ ಹಾಗೂ ನಂತರದ 12 ತಿಂಗಳಲ್ಲಿ ನಿರ್ಮಾಣ ಕಾಮಗಾರಿ ನಡೆಯಲಿದೆ. ಇದು ಟೋಲ್ ರಸ್ತೆ ಆಗಿರುತ್ತದೆ ಎಂದರು.**

## ಡಿಕೆಶಿ ಡಿಸಿಎಂ ಅಲ್ಲ, ರೀಲ್ಸ್ ಮಿನಿಸ್ಟರ್: ನಿಖಿಲ್ ಕುಮಾರಸ್ವಾಮಿ ಕಿಡಿ

• ಉದಯವಾಹಿನಿ, ಬೆಂಗಳೂರು

ಡಿಕೆಶಿ ಡಿಸಿಎಂ ಅಲ್ಲ, ರೀಲ್ಸ್ ಮಿನಿಸ್ಟರ್, ಆರ್‌ಸಿಬಿ ಅಭಿಮಾನಿಗಳ ಸಾವಿನ ಸುದ್ದಿ ತಿಳಿದ ಮೇಲೂ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಕಪ್‌ಗೆ ಮುತ್ತು ಕೊಟ್ಟು ಸಾವಿನಲ್ಲೂ ಸಂಭ್ರಮ ಮಾಡ್ತಾರೆ ಎಂದು ಡಿಕೆಶಿ ವಿರುದ್ಧ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸರ್ಕಾರ ತನ್ನ ತಪ್ಪನ್ನು ಮುಚ್ಚಿಕೊಳ್ಳಲು ಪೊಲೀಸರನ್ನು ಅಮಾನತು ಮಾಡಿದ್ದಾರೆ. ಖುದ್ದು ಪೊಲೀಸರೇ ಎರಡೆರಡು ಕಡೆ ಕಾರ್ಯಕ್ರಮ ಬೇಡ ಅಂದರು ಸಿಎಂ ಮತ್ತು ಡಿಸಿಎಂ ಕ್ರೆಡಿಟ್ ಪಡೆಯೋಕೆ ಈ ಕಾರ್ಯಕ್ರಮ ಮಾಡಿ ಅನಾಹುತಕ್ಕೆ ಕಾರಣರಾಗಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಸಾವಿನ ವಿಷಯ ನನಗೆ ಗೊತ್ತಿರಲಿಲ್ಲ, ಅಲ್ಲಿ ನೆಟ್ವರ್ಕ್ ಇರ್ಲಿಲ್ಲ, ನಾನು ಮಾಧ್ಯಮಗಳ ಮೂಲಕ ವಿಷಯ ತಿಳಿದುಕೊಂಡೆ ಅಂತ ಹೇಳಿದ್ರು, ಅಲ್ಲಿ ಜಾಮರ್ ಹಾಕಿದ್ರೆ ವಿಷಯವನ್ನ ನೀವು ಹೇಗೆ ತಿಳಿದುಕೊಂಡ್ರಿ, ಇದಕ್ಕೆ ಡಿಸಿಎಂ ಅವರೇ ಉತ್ತರಿಸಬೇಕು ಎಂದು ಆಕ್ರೋಶ ಹೊರಹಾಕಿದ್ದಾರೆ. ಇವರುಗಳು ಕ್ರೆಡಿಟ್ ಪಡೆದುಕೊಳ್ಳಲು ಹೋಗಿ ಅಮಾಯಕರ ಜೀವಗಳನ್ನ ಬಲಿ ಪಡೆದಿದ್ದಾರೆ. ಸ್ವತಃ ಸಿಎಂ ಸಿದ್ದರಾಮಯ್ಯ ಅವರೇ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ಜನರಿಗೆ ಅಭಿಮಾನಿಗಳಿಗೆ ಈ ಕಾರ್ಯಕ್ರಮಕ್ಕೆ ಎಲ್ಲರೂ ಆಗಮಿಸಬೇಕೆಂದು ಹೇಳಿದ್ರು. ಈಗ ಪೊಲೀಸರನ್ನ ಅಮಾನತು ಮಾಡಿರುವುದು ಕೋತಿ ತಾನು ಮೊಸರು ತಿಂದು ಮೇಕೆ ಬಾಯಿಗೆ ಒರೆಸಿದಂತಾಗಿದೆ ಎಂದು ವ್ಯಂಗ್ಯವಾಡಿದ್ದಾರೆ. ಐಎಎಸ್, ಐಪಿಎಸ್ ಅಧಿಕಾರಿಗಳನ್ನ ಮುಂದೆ ಇಡ್ಕೊಂಡು ನಿಮಗೆ ಬೇಕಾದ ತೀರ್ಮಾನ ತೆಗೆದುಕೊಂಡು. ಕೊನೆಗೆ ಪೊಲೀಸರ ಮೇಲೆ ಗೂಬೆ ಕೂರಿಸುವ ಕೆಲಸ ಮಾಡ್ತಿದ್ದಾರೆ. ಸರ್ಕಾರ ಏನೇ ತಪ್ಪುಮಾಡಿದ್ರು ನಿಮ್ಮ ಮೇಲೆಯೇ ಗೂಬೆ ಕೂರಿಸುತ್ತದೆ. ಈ ಹಿನ್ನೆಲೆಯಲ್ಲಿ ನಿಷ್ಠಾವಂತ ಅಧಿಕಾರಿಗಳಿಗೆ ಕೈಮುಗಿದು ಮನವಿ ಮಾಡುತ್ತೇನೆ. ಇನ್ನಾದರು ಎಚ್ಚೆತ್ತುಕೊಳ್ಳಿ ಎಂದಿದ್ದಾರೆ.



## MLC ಸ್ಥಾನ: ನನ್ನ ಬಗ್ಗೆ ಹರಿದಾಡುತ್ತಿರುವುದು ಸುಳ್ಳು ಸುದ್ದಿ-ಅಧಿಕಾರಿ ಎಲ್.ಕೆ. ಅತೀಕ್

• ಉದಯವಾಹಿನಿ, ಬೆಂಗಳೂರು

ತಮ್ಮ ಬಗ್ಗೆ ಬಿ ಟಿ.ವಿ ಸುಳ್ಳು ಸುದ್ದಿ ಹರಡಿದೆ ಎಂದು ನಿವೃತ್ತ ಐ.ಎ.ಎಸ್ ಅಧಿಕಾರಿ ಎಲ್.ಕೆ. ಅತೀಕ್ ಅವರು ಗರಂ ಆಗಿದ್ದಾರೆ. ನಿವೃತ್ತ ಐಎಎಸ್ ಅಧಿಕಾರಿ ಎಲ್.ಕೆ. ಅತೀಕ್ ವಿಧಾನ ಪರಿಷತ್‌ಗೆ ನಾಮಕರಣ, ರಾಜ್ಯಪಾಲರಿಗೆ ಶಿಫಾರಸ್ಸು ಎಂದು ಅತೀಕ್ ಅವರ ಫೋಟೊ ಸಮೇತ ಬಿ ಟಿ.ವಿ ಹೆಸರಿನಲ್ಲಿರುವ ಪೋಸ್ಟರ್ ಒಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿತ್ತು. ತಮ್ಮ ಎಕ್ಸ್ ಖಾತೆಯಲ್ಲಿ ಜೂನ್ 5 ರಂದು ಈ ಪೋಸ್ಟರ್ ಹಂಚಿಕೊಂಡಿರುವ ಅತೀಕ್ ಅವರು, 'ಇದೊಂದು ಸುಳ್ಳು ಸುದ್ದಿ, ಬಿ ಟಿ.ವಿ ಸುಳ್ಳು ಸುದ್ದಿ ಹರಡುತ್ತಿದೆ. ಇದನ್ನು ನಂಬಬೇಡಿ. ಬಿ ಟಿ.ವಿ ಅವರು ಇಂತಹ ದುಷ್ಕೃತ್ಯಗಳಿಂದ ದೂರ ಇರುತ್ತಾರೆಂದು ನಾನು ನಂಬುತ್ತೇನೆ' ಎಂದು ಹೇಳಿಕೊಂಡಿದ್ದಾರೆ. ಜೊತೆಗೆ ಪೋಸ್ಟ್ ಅನ್ನು ಬಿ ಟಿ.ವಿ ಕನ್ನಡ ಎಕ್ಸ್ ಅಕೌಂಟ್‌ಗೆ ಟ್ಯಾಗ್ ಮಾಡಿದ್ದಾರೆ. ಆದರೆ ಬಿ ಟಿ.ವಿ ಪ್ರತಿಕ್ರಿಯೆ ನೀಡಿಲ್ಲ.

# ಸುಂದರ ಭವಿಷ್ಯದ ಕನಸು ಹೊತ್ತ ಸಹನಾ ಮರಳಿ ಬಾರದ ಲೋಕಕ್ಕೆ!

### ಸಹನಾ ಸಾವಿಗೆ ಸರ್ಕಾರವೇ ಕಾರಣ ಎಂದು ಆಕ್ರೋಶ ಹೊರಹಾಕಿದ ಕುಟುಂಬಸ್ಥರು

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜಧಾನಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಸಮೀಪ ಸಂಭವಿಸಿದ ಭೀಕರ ಕಾಲ್ತುಳಿತ ದುರಂತ, ಹಲವರ ಕನಸುಗಳನ್ನು ಕಸಿದುಕೊಂಡಿದೆ. ಸುಂದರ ಭವಿಷ್ಯದ ಕನಸು ಕಾಣುತ್ತಿದ್ದ ಹಲವರು, ಈ ದುರಂತದಲ್ಲಿ ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಕಾಲ್ತುಳಿತದಲ್ಲಿ ಮೃತಪಟ್ಟ 11 ಜನರ ಪೈಕಿ, ಕೋಲಾರ ಮೂಲದ ಸಹನಾ ಕೂಡ ಒಬ್ಬರಾಗಿದ್ದು, ಆಕೆಯ ಸಾವಿನ ಆಘಾತದಿಂದ ಕುಟುಂಬಸ್ಥರು ಹೊರಬಾರದ ಸ್ಥಿತಿ ನಿರ್ಮಾಣವಾಗಿದೆ.

25 ವರ್ಷದ ಸಹನಾ ಅವರ ನಿವಾಸದಲ್ಲಿ ದುಃಖ ಮತ್ತು ಕೋಪತುಂಬಿತ್ತು. ಆಕೆಯ ಮೃತ ದೇಹವನ್ನು ಹೊಂದಿರುವ ಶವಪೆಟ್ಟಿಗೆಯ ಸುತ್ತಲೂ ದು:ಖತಪ್ತ ಸಂಬಂಧಿಕರು, ನೆರೆಹೊರೆಯವರು ನೆರೆದಿದ್ದರು. ಸುಂದರ ಭವಿಷ್ಯದ ಕನಸು ಹೊತ್ತು ಕೋಲಾರದ ಎನ್‌ಜಿ ಲೇಔಟ್‌ನಿಂದ ಬೆಂಗಳೂರಿಗೆ ವಲಸೆ ಬಂದಿದ್ದ ಸಹನಾ, ಆರ್‌ಸಿಬಿ ವಿಜಯೋತ್ಸವದಲ್ಲಿ ಭಾಗಿಯಾಗಲು ಹೋಗಿ, ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಈ ಕಾಲ್ತುಳಿತದಲ್ಲಿ ತಮಿಳುನಾಡು ಮೂಲದ ದೇವಿ ಕೂಡ ಪ್ರಾಣ ಕಳೆದುಕೊಂಡಿದ್ದನ್ನು ಇಲ್ಲಿ ಸ್ಮರಿಸಬಹುದು. ಬಾಷ್ ಉದ್ಯೋಗಿಯಾಗಿದ್ದ ಸಹನಾ, ತಮ್ಮ ಕುಟುಂಬದ ಮುಖ್ಯ ಜೀವನ ನಿರ್ವಹಣೆದಾರರಾಗಿದ್ದರು. ಇನ್ನೇನು ಕೆಲವೇ ದಿನಗಳಲ್ಲಿ ಸಹನಾ ಮದುವೆಯಾಗಲಿದ್ದರು. ಆದರೆ ಚಿನ್ನಸ್ವಾಮಿ ಕ್ರೀಡಾಂಗಣದ ಸಮೀಪ ಸಂಭವಿಸಿದ ಕಾಲ್ತುಳಿತಕ್ಕೆ ಸಿಕ್ಕು ಮೃತರಾಗಿರುವುದು ನಿಜಕ್ಕೂ ದುರಂತವೇ ಸರಿ. ಮದುವೆ ನಿಶ್ಚಯಗೊಂಡಿದ್ದ ಸಹನಾ, ಕಳೆದ ಜೂನ್ 4(ಬುಧವಾರ) ಆರ್‌ಸಿಬಿ ವಿಜಯೋತ್ಸವದಲ್ಲಿ ಪಾಲ್ಗೊಳ್ಳಲು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಹೋಗುತ್ತಿರುವುದಾಗಿ ಪೋಷಕರಿಗೆ ಕರೆ ಮಾಡಿದ್ದರು. ಆದರೆ ಅಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ಸಿಕ್ಕ ಸಹನಾ, ಕೊನೆಯುಸಿರೆಳೆದರು. ಆಸ್ಪತ್ರೆ ಸಿಬ್ಬಂದಿ ಸಹನಾ ಅವರ ಮೊಬೈಲ್‌ನಿಂದ ಪೋಷಕರಿಗೆ ಕರೆ ಮಾಡಿ ವಿಷಯ ತಿಳಿಸಿದಾಗ, ಆಕಾಶವೇ ಕಳಚಿ ಮೈಮೇಲೆ ಬಿದ್ದಂತಹ ಅನುಭವ.



ಉದಯವಾಹಿನಿ ಚಿತ್ರ

**ಏನಾಗಿತ್ತು?:** ಸಹನಾ ತಮ್ಮ 8 ಜನ ಸ್ನೇಹಿತರೊಂದಿಗೆ ಆರ್‌ಸಿಬಿ ವಿಜಯೋತ್ಸವದಲ್ಲಿ ಪಾಲ್ಗೊಳ್ಳಲು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ತೆರಳಿದ್ದರು. ಕೆಲವೇ ಕ್ಷಣಗಳಲ್ಲಿ ಸಂತೋಷದ ಸಮಯ ದುಃಸ್ವಪ್ನವಾಗಿ ಬದಲಾಯಿತು. ಕಾಲ್ತುಳಿತಕ್ಕೆ ಸಿಕ್ಕು ಸಹನಾ ಮೃತಪಟ್ಟರೆ, ಉಳಿದ ಸ್ನೇಹಿತರು ಸಣ್ಣಪುಟ್ಟ ಗಾಯಗಳಿಂದ ಹೇಗೋ ಜೀವ ಉಳಿಸಿಕೊಳ್ಳುವಲ್ಲಿ ಯಶಸ್ವಿಯಾದರು. ಚಿನ್ನಸ್ವಾಮಿ ಕಾಲ್ತುಳಿತ ದುರಂತದಲ್ಲಿ ಸಹನಾ ಮೃತಪಟ್ಟಿರುವ ಸುದ್ದಿ ತಿಳಿಯುತ್ತಿದ್ದಂತೇ, ಆಕೆಯ ಪೋಷಕರು ಮತ್ತು ಸಂಬಂಧಿಕರು ಬೆಂಗಳೂರಿಗೆ ದೌಡಾಯಿಸಿದರು. ಸಹನಾ ಅವರ ಕಳೆಬರಹ ಆಸ್ಪತ್ರೆಯಲ್ಲಿ ಇದ್ದಿದ್ದನ್ನು ನೋಡಿ, ಅವರ ದುಃಖದ ಕಟ್ಟೆ ಒಡೆದಿತ್ತು. ಕಾಲ್ತುಳಿತದಲ್ಲಿ ಗೆಳತಿಯನ್ನು ಕಳೆದುಕೊಂಡ ಸ್ನೇಹಿತರು ಕೂಡ ಇನ್ನೂ ಆಘಾತದಿಂದ ಹೊರಬಂದಿಲ್ಲ.

**ಈ ಸಾವು ನ್ಯಾಯವೇ?**

ಕಾಲ್ತುಳಿತ ಸಂಭವಿಸುವಾಗ ಸಹನಾ ಕ್ರೀಡಾಂಗಣದಲ್ಲಿದ್ದಾಳೆ ಎಂಬುದೇ ನಮಗೆ ಗೊತ್ತಿರಲಿಲ್ಲ. ಅವಳ ಕುಟುಂಬಕ್ಕೆ ಆಸ್ಪತ್ರೆಯಿಂದ ದುಃಖಕರ ಕರೆ ಬಂದಿತು.

ಅವರು ಬರುವ ಹೊತ್ತಿಗೆ ತುಂಬಾ ತಡವಾಗಿತ್ತು ಎಂದು ನಾಗರಾಜ್ ಕಣ್ಣೀರನ್ನು ತಡೆದುಕೊಂಡು ಮಾಹಿತಿ ನೀಡಿದರು. ಸಹನಾ ಸಾವಿಗೆ ಸರ್ಕಾರದ ನಿರ್ಲಕ್ಷ್ಯ ಕಾರಣ ಎಂದು ಆಕೆಯ ಕುಟುಂಬ ಆರೋಪಿಸುತ್ತಿದೆ. ಸರಿಯಾದ ಯೋಜನೆ ಇರಲಿಲ್ಲ. ಸರ್ಕಾರ ಅಂತಹ ಜನಸಂದಣಿಯನ್ನು ಅವರು ಹೇಗೆ ನಿರೀಕ್ಷಿಸಲು ಸಾಧ್ಯವಿಲ್ಲ? ಎಂದು ಸಹನಾ ಅವರ ಚಿಕ್ಕಪ್ಪ ಪ್ರಶ್ನಿಸುತ್ತಾರೆ.

### ಜೀವನೋತ್ಸಾಹಿ ಸಹನಾ

**ಸಹನಾ ಜೀವನೋತ್ಸಾಹಿ ಯುವತಿಯಾಗಿದ್ದಳು ಎಂದು ಆಕೆಯ ಸಂಬಂಧಿಕರು ಹೇಳುತ್ತಾರೆ. ಜವಾಬ್ದಾರಿಯುತ ಪ್ರಜ್ಞೆಗೆ ಹೆಸರುವಾಸಿಯಾದ ಸಹನಾ, ಎಲ್ಲರನ್ನೂ ತುಂಬ ಪ್ರೀತಿಸುತ್ತಿದ್ದಳು. ಆಕೆ ಮನೆಗೆ ಬಂದರೆ ಲವಲವಿಕೆ ತುಂಬಿ ತುಳುಕುತ್ತಿತ್ತು. ಈಗ ಆಕೆ ಇಲ್ಲ ಎಂಬ ಸತ್ಯವನ್ನು ಅರಿಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಹೇಳುತ್ತಾ ಸಹನಾ ಸಂಬಂಧಿಕರು ಕಣ್ಣೀರಿಡುತ್ತಾರೆ.ಅವಳು ಯಾವುದಕ್ಕೂ ಸಿದ್ಧಳಾಗಿದ್ದಳು, ಯಾವಾಗಲೂ ನಗುತ್ತಿದ್ದಳು, ಯಾವಾಗಲೂ ಇತರರಿಗೆ ಸಹಾಯ ಮಾಡುತ್ತಿದ್ದಳು ಎಂದು ಹೇಳುತ್ತಲೇ ಸಂಬಂಧಿ ನಾಗರಾಜ್ ಕಣ್ಣೀರಾದರು. ಅವಳು ತನ್ನ ತಂಗಿ ವೈದ್ಯೆಯಾಗುವುದನ್ನು ನೋಡುವ ಕನಸನ್ನು ಹೊಂದಿದ್ದಳು. ಅವಳು ಕುಟುಂಬದ ಬೆನ್ನೆಲುಬಾಗಿದ್ದಳು. ಈಗ ನಾವು ಏನು ಮಾಡಬೇಕು ಎಂಬ ನಾಗರಾಜ್ ಅವರ ಪ್ರಶ್ನೆಯಲ್ಲಿ ದುಃಖ ಮಡುಗಟ್ಟಿತ್ತು.**

ಉದಯ ವಾಹಿನಿ

ಪ್ರಾದೇಶಿಕ

ಶನಿವಾರ 07 ಜೂನ್ 2025



# ಕಿಕ್ಕೇರಿ ಪಿ.ಐ ರೇವತಿ ವಿರುದ್ಧ ಕ್ರಮಕ್ಕೆ ಕರವೇ ಆಗ್ರಹ

## ಗ್ರಾಮಸ್ಥರು ಕ್ಷೇತ್ರದ ಶಾಸಕ ಹೆಚ್.ಟಿ.ಮಂಜು, ತಹಶೀಲ್ದಾರ್ ಡಾ.ಎಸ್.ಯು.ಅಶೋಕ್ ಅವರಿಗೆ ಲಿಖಿತ ಮನವಿ ಪತ್ರ ಸಲ್ಲಿಕೆ

• **ಉದಯವಾಹಿನಿ, ಕೆ.ಆರ್.ಪೇಟೆ.**

ತಾಲ್ಲೂಕಿನ ಕಿಕ್ಕೇರಿ ಭಾಗದಲ್ಲಿ ನಿರಂತರವಾಗಿ ಗಂಭೀರವಾದ ಅಪರಾದ ಪ್ರಕರಣಗಳು ಜರುಗುತ್ತಿದ್ದರೂ ಕಿಕ್ಕೇರಿ ಪೊಲೀಸರು ಯಾವುದೇ ಕ್ರಮ ವಹಿಸುತ್ತಿಲ್ಲ ಕರ್ತವ್ಯ ಪಾಲನೆಯಲ್ಲಿ ನಿರ್ಲಕ್ಷ್ಯ ತೋರಿಸುತ್ತಿರುವ ಕಿಕ್ಕೇರಿ ಪೊಲೀಸ್ ನಿರೀಕ್ಷಕಿ ರೇವತಿ ವಿರುದ್ದ ಕ್ರಮ ಜರುಗಿಸುವಂತೆ ತಾಲ್ಲೂಕು ಕರವೇ ಕಾರ್ಯಕರ್ತರು ಮತ್ತು ಕಿಕ್ಕೇರಿ ಹೋಬಳಿಯ ಬೂವನಹಳ್ಳಿ ಗ್ರಾಮಸ್ಥರು ಕ್ಷೇತ್ರದ ಶಾಸಕ ಹೆಚ್.ಟಿ.ಮಂಜು ಮತ್ತು ತಹಶೀಲ್ದಾರ್ ಡಾ.ಎಸ್.ಯು. ಅಶೋಕ್ ಅವರಿಗೆ ಲಿಖಿತ ಮನವಿ ಪತ್ರ ಸಲ್ಲಿಸಿದರು.

ಜಿಲ್ಲಾ ಕರವೇ ಅಧ್ಯಕ್ಷ ಡಿ.ಎಸ್.ವೇಣು ನೇತೃತ್ವದಲ್ಲಿ ಪಟ್ಟಣದ ತಾಲ್ಲೂಕು ಆಡಳಿತ ಸೌಧಕ್ಕೆ ಆಗಮಿಸಿದ ಕರವೇ ಕಾರ್ಯಕರ್ತರು ಮತ್ತು ಬೂವನಹಳ್ಳಿ ಗ್ರಾಮಸ್ಥರು ಮನವಿ ಪತ್ರ ಸಲ್ಲಿಸಿ ಪೊಲೀಸ್ ಅಧಿಕಾರಿಯ ವಿರುದ್ದ ಆರೋಪಗಳ ಸುರಿಮಳೆ ಸುರಿಸಿದರು. ಜೂನ್ 01 ರ ಭಾನುವಾರ ಬೆಳಿಗ್ಗೆ 10.20 ರ ಸಮಯದಲ್ಲಿ ಬೂವನಹಳ್ಳಿ ಗ್ರಾಮದ ರುಕ್ಮಿಣಿ(37) ಎನ್ನುವ ರೈತ ಮಹಿಳೆ


ಉದಯವಾಹಿನಿ ಚಿತ್ರ

ತಮ್ಮ ಜಮೀನಿನ ಹತ್ತಿರ ಎಮ್ಮೆ ಮೇಯಿಸುವ ಸಂದರ್ಭದಲ್ಲಿ ಇಬ್ಬರು ಅಪರಿಚಿತ ಹುಡುಗರು ಆಕೆಯ ಮೇಲೆ ಹಿಂಬದಿಯಿಂದ ದಾಳಿ ಮಾಡಿ 30 ಗ್ರಾಂ ಚಿನ್ನದ ಮಾಂಗಲ್ಯಸರ ಹಾಗೂ 05 ಗ್ರಾಂ ತೂಕದ ಚಿನ್ನದ ತಾಳಿ ಮತ್ತು 02 ಗ್ರಾಂ ತೂಕದ ಚಿನ್ನದ ಗುಂಡುಗಳನ್ನು ಬಲವಂತವಾಗಿ ಕಿತ್ತುಕೊಂಡು ಹೋಗಿದ್ದಾರೆ. ಈ ಸಂದರ್ಭದಲ್ಲಿ ದುಷ್ಕರ್ಮಿಗಳ ದಾಳಿಗೆ ಪ್ರತಿರೋಧ ತೋರಿಸಿದ ರುಕ್ಮಿಣಿ ಅವರ ಎಡಗೈಯನ್ನು ದುಷ್ಕರ್ಮಿಗಳು ಚಾಕುವಿನಿಂದ ಕೂಯ್ದು ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದಾರೆ. ಗಾಯಗೊಂಡ ರೈತ ಮಹಿಳೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದು ಅವರ ಶಸ್ತ್ರಚಿಕಿತ್ಸೆಗೆ ಈಗಾಗಲೇ 2 ಲಕ್ಷ ರೂ ಖರ್ಚಾಗಿದೆ.

**ಇದೇ ರೀತಿ ದಿನಂಕ 28-04-2025 ರಂದು ಬೂವನಹಳ್ಳಿ ಗ್ರಾಮದ ಅನಿತಾ ಎನ್ನುವವರು ಕಿಕ್ಕೇರಿಯ ಎಸ್.ಬಿ.ಐ ಬ್ಯಾಂಕಿನಿಂದ 2,60,000 ರೂ ಹಣ ಡ್ರಾ ಮಾಡಿ ಅದನ್ನು ತಮ್ಮ ಹೋಂಡಾ ಡಿಯೋ ಬೈಕಿನ ಡಿಕ್ಕಿಯಲ್ಲಿಟ್ಟು ಮತ್ತೆ ಬ್ಯಾಂಕಿನ ಒಳಗೆ ಹೋಗಿ ಬರುವಷ್ಟರಲ್ಲಿ ದುಷ್ಕರ್ಮಿಗಳು ಹಣ ಕಳುವು ಮಾಡಿದ್ದಾರೆ. ಈ ಬಗ್ಗೆ ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಹಣ ಕಳ್ಳತನ ಪ್ರಕರಣ ಸಿ.ಸಿ ಟಿ.ವಿಯಲ್ಲಿ ದಾಖಲಾಗಿದ್ದರೂ ಕಿಕ್ಕೇರಿ ಪೊಲೀಸರು ಅಪರಾಧಿಗಳನ್ನು ಬಂಧಿಸುವ ಕೆಲಸ ಮಾಡಿಲ್ಲ. ರೈತ ಮಹಿಳೆ ರುಕ್ಮಿಣಿ ಅವರ ಮೇಲೆ ದಾಳಿ ಮಾಡಿ ಚಿನ್ನದ ಸರ ಕಿತ್ತ ಸ್ಥಳ ಸೇರಿದಂತೆ ಕಿಕ್ಕೇರಿ ಪೊಲೀಸ್ ಠಾಣಾ ವ್ಯಾಪ್ತಿಯ ಬಹುತೇಕ ಗ್ರಾಮಗಳ ವ್ಯಾಪ್ತಿಯಲ್ಲಿ ಹೊರಗಿನವರು ಬಂದು ಜೂಜು ಮತ್ತಿತರ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿದ್ದಾರೆ.**

ಈ ಬಗ್ಗೆ ಕಿಕ್ಕೇರಿ ಪೊಲೀಸರು ದೂರು ದಾಖಲಿಸಿಕೊಂಡಿದ್ದರೂ ಅಪರಾಧಿಗಳ ಪತ್ತೆಗೆ ಯಾವುದೇ ಕ್ರಮ ವಹಿಸಿಲ್ಲ.

ಇದರ ಅರಿವಿದ್ದರೂ ಕಿಕ್ಕೇರಿ ಪೊಲೀಸರು ಯಾವುದೇ ಕ್ರಮ ವಹಿಸುತ್ತಿಲ್ಲ. ಪೊಲೀಸರು ಕಳ್ಳರ ಜೊತೆ ಶಾಮೀಲು ಆಗಿರಬಹುದೆಂಬ ಅನುಮಾನ ಜನರಲ್ಲಿ ಮೂಡಿದೆ. ಆದಕಾರಣ ಕಿಕ್ಕೇರಿ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ರೇವತಿ ಅವರ ಮೇಲೆ ಕ್ರಮ ಜರುಗಿಸಿ ಕಿಕ್ಕೇರಿ ಭಾಗದ ಅಪರಾಧ ಪ್ರಕರಣಗಳನ್ನು ನಿಯಂತ್ರಿಸುವಂತೆ ಕರವೇ ಕಾರ್ಯಕರ್ತರು ಆಗ್ರಹಿಸಿದರು. ಜಿಲ್ಲಾ ಕರವೇ ಅಧ್ಯಕ್ಷ ಡಿ.ಎಸ್.ವೇಣು,ತಾ.ಅಧ್ಯಕ್ಷ ಶ್ರೀನಿವಾಸ್, ಬೂವನಹಳ್ಳಿ ಗ್ರಾಮಸ್ಥರಾದ ಬಿ.ಎನ್.ಚೇತನ್, ನಿಂಗರಾಜು, ಚಂದು, ದಿನೇಶ್, ಸಂಜಯ್, ಅನಂತರಾಜು, ವಾಸು, ಬಿ.ಎನ್. ರಾಮೇಗೌಡ, ಜಗದೀಶ್ ಸೇರಿದಂತೆ ಹಲವರಿದ್ದರು.

# ಮಹಾಬೋಧಿ ಶಾಲೆಯಲ್ಲಿ ವಿಶ್ವ ಪರಿಸರ ದಿನ ಆಚರಣೆ

• **ಉದಯವಾಹಿನಿ, ಮೈಸೂರು**

ಮಹಾಬೋಧಿ ಶಾಲೆಯು ಓಎಅ ಸೇನಾ ಅಧಿಕಾರಿಗಳು, ಶಿಕ್ಷಣ ಸಂಯೋಜಕರು, ಪ್ರಾಂಶುಪಾಲರು ಮತ್ತು ಉಪ ಪ್ರಾಂಶುಪಾಲರ ಸಮ್ಮುಖದಲ್ಲಿ ವಿಶ್ವ ಪರಿಸರ ದಿನವನ್ನು ಆಚರಿಸಿತು. ಈ ಮಹತ್ವದ ದಿನವನ್ನು ಗುರುತಿಸಲು ವಿದ್ಯಾರ್ಥಿ ಸಂಘ ಮತ್ತು ಉಸ್ತುವಾರಿ ಶಿಕ್ಷಕರು ವಿವಿಧ ಚಟುವಟಿಕೆಗಳು ಮತ್ತು ಕಾರ್ಯಕ್ರಮಗಳನ್ನು ಆಯೋಜಿಸಿದ್ದರು.

ಅತಿಥಿಗಳು ಮತ್ತು ಗಣ್ಯರು ಪರಿಸರ ಜಾಗೃತಿ, ಸಂರಕ್ಷಣೆಯ ಮಹತ್ವ ಮತ್ತು ಜಾಗತಿಕ ತಾಪಮಾನ ಏರಿಕೆಯ ತುರ್ತು ಸಮಸ್ಯೆಯ ಬಗ್ಗೆ ಮಾತನಾಡಿದರು. ಆಚರಣೆಯ ಭಾಗವಾಗಿ, ಹಸಿರನ್ನು ಉತ್ತೇಜಿಸಲು ಮತ್ತು ಪರಿಸರವನ್ನು ರಕ್ಷಿಸಲು ಕ್ಯಾಂಪಸ್‌ನಾದ್ಯಂತ ಹಲವಾರು ಮರಗಳು ಮತ್ತು ಸಸ್ಯಗಳನ್ನು ನೆಡಲಾಯಿತು.

ಶಿಕ್ಷಕರು ಮತ್ತು ನರ್ಸರಿ ವಿದ್ಯಾರ್ಥಿಗಳು ಹಸಿರು ಬಟ್ಟೆಗಳನ್ನು ಧರಿಸಿ ಪರಿಸರ ಜಾಗೃತಿ ಪ್ರತಿಜ್ಞೆಗಳಲ್ಲಿ ಭಾಗವಹಿಸಿದರು. ಓಎಅ ವಿಭಾಗವು ಪ್ರೌಢಶಾಲಾ ವಿದ್ಯಾರ್ಥಿಗಳು ಮತ್ತು ಶಿಕ್ಷಕರೊಂದಿಗೆ ಪರಿಸರ ಘೋಷಣೆಗಳನ್ನು ತೆಗೆದುಕೊಂಡು ಸುಸ್ಥಿರತೆಯ ಸಂದೇಶವನ್ನು ಹರಡಲು ಸರಸ್ವತಿ ಪುರಂ ಸುತ್ತಲೂ ಜಾಗೃತಿ ನಡಿಗೆಯನ್ನು ನಡೆಸಿತು.


ಉದಯವಾಹಿನಿ ಚಿತ್ರ

ಈ ವಿಶೇಷ ಸಂದರ್ಭದಲ್ಲಿ, ಮಹಾಬೋಧಿ ಶಾಲೆಯು ಹೆಮ್ಮೆಯಿಂದ ತನ್ನನ್ನು ಪರಿಸರ ಸ್ನೇಹಿ ಶಾಲೆ ಎಂದು ಘೋಷಿಸಿಕೊಂಡಿತು, ದೈನಂದಿನ ಕಾರ್ಯಾಚರಣೆಗಳಲ್ಲಿ ಹೆಚ್ಚು ಪರಿಸರ ಸುಸ್ಥಿರ ಮತ್ತು ಪರಿಸರ ಪ್ರಜ್ಞೆಯ ವಸ್ತುಗಳ ಬಳಕೆಗೆ ಬದ್ಧವಾಗಿದೆ.

ಇಡೀ ಕಾರ್ಯಕ್ರಮವನ್ನು ಪ್ರಾಂಶುಪಾಲರ ಮಾರ್ಗದರ್ಶನದಲ್ಲಿ ಯಶಸ್ವಿಯಾಗಿ ಆಯೋಜಿಸಲಾಗಿತ್ತು, ಇದು ಪರಿಸರ ಶಿಕ್ಷಣ ಮತ್ತು ಕ್ರಿಯೆಗೆ ಶಾಲೆಯ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

# ಕೂರಣಗೆರೆ ನರಸಿಂಹಸ್ವಾಮಿ ಬೆಟ್ಟದ ಸ್ವಚ್ಛತಾ ಕಾರ್ಯ

• **ಉದಯವಾಹಿನಿ, ಚನ್ನಪಟ್ಟಣ**

ಭಾರತ ವಿಕಾಸ ಪರಿಷದ್ ಕಣ್ವ ಶಾಖೆಯ ವತಿಯಿಂದ ತಾಲ್ಲೂಕಿನ ಇತಿಹಾಸ ಪ್ರಸಿದ್ಧ ಕೂರಣಗೆರೆ ನರಸಿಂಹಸ್ವಾಮಿ ಬೆಟ್ಟದ ಮೇಲಿದ್ದ ಪ್ಲಾಸ್ಟಿಕ್ ವಸ್ತುಗಳನ್ನು ಸಂಗ್ರಹಿಸಿ, ದೇವಾಲಯ ಪ್ರಾಂಗಣದ ಸ್ವಚ್ಛತಾ ಕಾರ್ಯ ಮಾಡುವ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ವಿಶೇಷವಾಗಿ ಆಚರಿಸಲಾಯಿತು. ಪ್ರಾಣಿ ಪಕ್ಷಿಗಳಿಗೆ ಆಹಾರ, ನೆರಳು ಸಿಗಲೆಂಬ ಕಾರಣಕ್ಕೆ ಸೀಬೆ, ನೇರಳೆ, ಹಲಸು, ಹೊಂಗೆ, ಹುಣಸೆ ಸಸಿಗಳನ್ನು ನೆಟ್ಟು, ನೀರೆರೆಯುವ ಮೂಲಕ ಪ್ರಕೃತಿ ಉಳಿಸುವ ಪ್ರತಿಜ್ಞೆ ಕೈಗೊಳ್ಳಲಾಯಿತು.

ಜೊತೆಗೆ ದೇವಾಲಯದ ಆವರಣದಲ್ಲಿ ಕಸವನ್ನು ತೆಗೆದು, ಬೇಡವಾದ ಸಸ್ಯಗಳನ್ನು ಕಿತ್ತು ಸ್ವಚ್ಛಗೊಳಿಸಲಾಯಿತು. ಬೆಟ್ಟದ ಮೇಲೆ ಬಿಸಾಡಿದ್ದ ಪ್ಲಾಸ್ಟಿಕ್ ಬಾಟಲಿ, ಚೀಲ, ಕವರ್ ಮೊದಲಾದ ತ್ಯಾಜ್ಯವನ್ನು ಸಂಗ್ರಹಿಸಲಾಯಿತು.

ಭಾವಿಪ ಕಣ್ವ ಶಾಖೆಯ ಪರಿಸರ ಸಂಚಾಲಕ ಕೂರಣಗೆರೆ ಕೃಷ್ಣಪ್ಪ ಮಾತನಾಡಿ, ಪರಿಸರ ದಿನವನ್ನು ಧಾರ್ಮಿಕ ಕೇಂದ್ರಗಳನ್ನು ಸ್ವಚ್ಛ ಮಾಡುವ ಮೂಲಕ ವಿಶೇಷವಾಗಿ ಆಚರಿಸಿ ಜನ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.


ಉದಯವಾಹಿನಿ ಚಿತ್ರ

**ಭಾವಿಪ ಅಧ್ಯಕ್ಷ ಪುಟ್ಟಸ್ವಾಮಿಗೌಡ ಮಾತನಾಡಿ, ಅರಣ್ಯ ನಾಶದಿಂದಲೇ ಕಾಡು ಪ್ರಾಣಿಗಳು ನಾಡಿಗೆ ಧಾವಿಸುತ್ತಿವೆ. ಪರಿಸರ ಮಾಲಿನ್ಯದಿಂದ ಪಕ್ಷಿ, ಪ್ರಾಣಿಗಳ ಸಂತತಿಯೂ ನಶಿಸುತ್ತಿದೆ. ಗಿಡಮರಗಳನ್ನು ಹೆಚ್ಚು ಬೆಳೆಸುವುದರಿಂದ ಕಾಡು ಉಳಿಯುತ್ತದೆ. ಜೊತೆಗೆ ಮುಂದಿನ ಪೀಳಿಗೆ ಉಳಿಯಬೇಕಾದರೆ ಎಲ್ಲರೂ ಪರಿಸರವನ್ನು ಕಾಪಾಡಬೇಕು ಎಂದರು.**

ಯೋಗೇಶ್ ಚಕ್ಕೆರೆ, ವಸಂತ್ ಕುಮಾರ್, ವಿ.ಟಿ. ರಮೇಶ್, ಕರಿಯಪ್ಪ, ಬಿ.ಎನ್. ಕಾಡಯ್ಯ, ಪುಟ್ಟಲಿಂಗೇಗೌಡ, ಸಿದ್ದರಾಮೇಗೌಡ, ಗುರುಮಾದಯ್ಯ, ಗೋವಿಂದಯ್ಯ, ತಿಪ್ಪೇಗೌಡ, ಕೃಷ್ಣಕುಮಾರ್, ಬಸವರಾಜು, ಪುಟ್ಟಸ್ವಾಮಿಗೌಡ, ಅರೇಂದ್ರಗೌಡ, ಕೂರಣಗೆರೆ ಪುಟ್ಟಸ್ವಾಮಿ, ಚಕ್ಕಲೂರು ಕೃಷ್ಣಪ್ಪ, ಡಾ.ಲಿಖಿತ್, ಚಿನ್ಮಯ್, ಇತರರು ಭಾಗವಹಿಸಿದ್ದರು.

# ಜಿಲ್ಲೆಯ ಅಭಿವೃದ್ಧಿ, ಶೈಕ್ಷಣಿಕ ಪ್ರಗತಿಗಾಗಿ ಜಿಲ್ಲಾ ಕೇಂದ್ರದಲ್ಲಿ ಕಾನೂನು ಕಾಲೇಜು ಆರಂಭ

• **ಉದಯವಾಹಿನಿ, ಚಾಮರಾಜನಗರ**

ಜಿಲ್ಲೆಯ ಅಭಿವೃದ್ಧಿ ಹಾಗೂ ಶೈಕ್ಷಣಿಕ ಪ್ರಗತಿಗಾಗಿ ಜಿಲ್ಲಾ ಕೇಂದ್ರದಲ್ಲಿ ಕಾನೂನು ಕಾಲೇಜು ಆರಂಭಕ್ಕೆ ಅನುಮೋದನೆ ದೊರೆತಿದ್ದು, ತಮ್ಮ ಪ್ರಯತ್ನದ ಫಲವಾಗಿ ಪ್ರಸಕ್ತ ವರ್ಷದಿಂದಲೇ ಕಾಲೇಜು ಆರಂಭವಾಗಲಿದೆ ಎಂದು ಎಂಎಸ್ಐಎಲ್ ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಜನರ ಬಹುದಿನಗಳ ಕನಸಾಗಿದ್ದ ಕಾನೂನು ಕಾಲೇಜು ಆರಂಭಕ್ಕೆ ಈಗಾಗಲೇ ಅನುಮೋದನೆ ನೀಡಲಾಗಿದೆ. ಇದಕ್ಕೆ ಬಾರ್ ಕೌನ್ಸಿಲ್ ಆಫ್ ಇಂಡಿಯಾ ಅನುಮತಿ ನೀಡಿದೆ. ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ, ನನ್ನ ಹೋರಾಟದ ಫಲವಾಗಿ ಕಾನೂನು ಕಾಲೇಜು ಮಂಜೂರಾಗಿದೆ ಎಂದರು.

2017-18ನೇ ಸಾಲಿನಲ್ಲಿ ಚಾಮರಾಜನಗರದಲ್ಲಿ ಕಾನೂನು ಕಾಲೇಜು ಮಂಜೂರಾಗಿತ್ತು. ಆದರೆ, ಸೂಕ್ತ ಮೂಲ ಸೌಕರ್ಯಗಳ ಕೊರತೆಯಿಂದಾಗಿ ಕಾಲೇಜು ಆರಂಭಕ್ಕೆ ಅಡ್ಡಿಯಾಗುತ್ತಿತ್ತು. ಈ ಹಿಂದೆ ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ


ಉದಯವಾಹಿನಿ ಚಿತ್ರ

ಕಾನೂನು ಕಾಲೇಜಿಗೆ ಅನುಮತಿಯಾಗಿತ್ತು.

ಈಗ ಮತ್ತೆ ಅವರೇ ಮುಖ್ಯಮಂತ್ರಿಯಾಗಿರುವ ಅವಧಿಯಲ್ಲಿ ಕಾಲೇಜು ಆರಂಭವಾಗುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದ ಅವರು ಈ ಹಿಂದೆ ಸಂಸದರಾಗಿದ್ದ ದಿ. ಆರ್. ಧ್ರುವನಾರಾಯಣ್ ಜಿಲ್ಲೆಯಲ್ಲಿ ಕಾನೂನು ಕಾಲೇಜು ಅಗಬೇಕೆಂದು ಹೋರಾಟ ಮಾಡಿದ್ದರು. ಅವರ ಜೊತೆ ನಾನು ಸಹ ಕೈ ಜೋಡಿಸಿ ದೆಹಲಿ ಬಾರ್ ಕೌನ್ಸಿಲ್ ಮತ್ತು ರಾಜ್ಯ ಸರ್ಕಾರ ಕಾನೂನು ಸಚಿವರಿಗೆ ಮನವಿ ಮಾಡಿದ್ದೆ. ಈಗಿನ ಸಂಸದ ಸುನೀಲ್ ಅವರು ಮುಂದುವರಿದು ಪತ್ರ ಬರೆದು ಮಂಜೂರು ಮಾಡುವಂತೆ ಮನವಿ ಮಾಡಿದ್ದರು ಎಂದರು. ಕಾನೂನು ಕಾಲೇಜಿಗೆ ಅನುಮತಿ ಪಡೆದುಕೊಳ್ಳಲು ಕಟ್ಟಡ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕಾಗಿತ್ತು.

**ಕಾನೂನು ಕಾಲೇಜಿನ ಪ್ರಾಂಶುಪಾಲೆ ಕೆ.ಎಸ್. ಲಲಿತಾ ಮಾತನಾಡಿ, ಈ ವರ್ಷದಿಂದಲೇ ಕಾನೂನು ಕಾಲೇಜು ಆರಂಭಕ್ಕೆ ಅನುಮತಿ ದೊರೆತಿದೆ. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯದಿಂದ ಆದೇಶ ಬಂದ ನಂತರ ದಾಖಲಾತಿಗೆ ಅರ್ಜಿ ಸ್ವೀಕರಿಸಲಾಗುವುದು. 60 ವಿದ್ಯಾರ್ಥಿಗಳಿಗೆ ದಾಖಲಾತಿಗೆ ಅವಕಾಶವಿದ್ದು ಮೆರಿಟ್ ಆಧಾರದ ಮೇಲೆ ಪ್ರವೇಶ ನೀಡಲಾಗುತ್ತಿದೆ. ಈಗಾಗಲೇ ಕಾಲೇಜಿನಲ್ಲಿ 5 ಪ್ರಾಧ್ಯಾಪಕರಿದ್ದು ಕಾಲೇಜಿನಲ್ಲಿ ಪೀಠೋಪಕರಣ, ಶೌಚಾಲಯ ಎಲ್ಲಾ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಕನ್ನಡ ಹಾಗೂ ಇಂಗ್ಲೀಷ್ ಮಾಧ್ಯಮದಲ್ಲಿ ಕಾನೂನು ಪದವಿ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು.**

ರೇಷ್ಮೆ ಇಲಾಖೆಗೆ ಸೇರಿದ ಜಾಗದಲ್ಲಿ ಮೂಲ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದ್ದೇವೆ. ಈಗ ಮತ್ತೇ ಎಂಎಸ್ಐಎಲ್ ವತಿಯಿಂದ 13.50 ಲಕ್ಷ ವೆಚ್ಚದ ಪೀಠೋಪಕರಗಳನ್ನು ಕಾಲೇಜಿಗೆ ಕೊಡಿಸಿದ್ದೇನೆ.

ದೆಹಲಿಯ ಬಾರ್ ಕೌನ್ಸಿಲ್ ಅವರು ಪರಿಶೀಲನೆಗೆ ಬಂದಾಗ ಎಲ್ಲಾ ವ್ಯವಸ್ಥೆಯು ಸರಿ ಇರುವಂತೆ ನೋಡಿಕೊಂಡಿದ್ದೇವು.

ಈಗಾಗಲೇ ಕಾಲೇಜಿಗೆ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ ಎಂದರು. ಕಾನೂನು ಕಾಲೇಜಿಗೆ ಸ್ವಂತ ನಿವೇಶನ, ಕಟ್ಟಡ ನಿರ್ಮಾಣ ಮಾಡಲು ಅನುದಾನವು ಸಹ ಬಿಡುಗಡೆಯಾಗಿದೆ.

ಚಾಮರಾಜನಗರ ತಾಲ್ಲೂಕು ಕಸಬಾ ಹೋಬಳಿಯ ಯಡಪುರ ಗ್ರಾಮದ ಸ.ನಂ.112ರಲ್ಲಿ ಸರ್ಕಾರಿ ಖರಾಬು ಜಮೀನಿನ ಪೈಕಿ 4 ಎಕರೆ ಜಮೀನನ್ನು ಸರ್ಕಾರಿ ಕಾನೂನು ಕಾಲೇಜು ನಿರ್ಮಾಣಕ್ಕೆ ಗುರ್ತಿಸಲಾಗಿದ್ದು ಮುಂದಿನ ದಿನಗಳಲ್ಲಿ ಸುಸಜ್ಜಿತ ಕಾಲೇಜು ಕಟ್ಟಡ ನಿರ್ಮಾಣವಾಗಲಿದೆ. ಜಿಲ್ಲೆಯ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಮೊದಲ ವರ್ಷದ ಮೂರು ವರ್ಷದ ಕಾನೂನು ಕೋರ್ಸುಗಳನ್ನು ಆರಂಬಿಸಲಾಗುತ್ತಿದೆ. ಪದವಿ ಪಡೆದವರು ಕಾನೂನು ಕಾಲೇಜಿಗೆ ಪ್ರವೇಶ ಪಡೆದುಕೊಳ್ಳಲು ಆಗಸ್ಟ್‌ನಿಂದ ಅನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಿ, ಸೇರ್ಪಡೆ ಮಾಡಿಕೊಳ್ಳಲಾಗುತ್ತಿದೆ ಎಂದರು.

# ಬಸ್ ನಿಲ್ದಾಣ: ದ್ವಿಚಕ್ರ, ಆಟೊ ಪ್ರವೇಶಕ್ಕೆ ನಿಷೇಧ

• **ಉದಯವಾಹಿನಿ, ಕೆಜಿಎಫ್**

ರಾಬರ್ಟ್‌ಸನ್‌ಪೇಟೆಯ ನಗರಸಭೆ ಬಸ್ ನಿಲ್ದಾಣದಲ್ಲಿ ಖಾಸಗಿ, ಸರ್ಕಾರಿ ಬಸ್‌ಗಳನ್ನು ಹೊರತುಪಡಿಸಿ ಯಾವುದೇ ವಾಹನಗಳಿಗೆ ಪ್ರವೇಶವಿಲ್ಲ ಎಂಬ ಸೂಚನೆಯನ್ನು ನಗರಸಭೆ ಶುಕ್ರವಾರ ಹೊರಡಿಸಿದೆ. ನಗರದ ಕುವೆಂಪು ಬಸ್ ನಿಲ್ದಾಣದಲ್ಲಿ ಸಾರ್ವಜನಿಕರು ತಮ್ಮ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳ ನಿಲುಗಡೆಯಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ. ಅಲ್ಲದೆ, ಸರ್ಕಾರಿ ಮತ್ತು ಖಾಸಗಿ ಬಸ್‌ಗಳು ಬಸ್ ನಿಲ್ದಾಣ ಪ್ರವೇಶಿಸಲು ದುಸ್ತರವಾಗಿದೆ. ಹೀಗಾಗಿ, ಅನಧಿಕೃತ ವಾಹನಗಳ ದಟ್ಟಣೆ ತಡೆದು, ಸ್ವಚ್ಛತೆ ನಿರ್ವಹಣೆಗಾಗಿ ಗುರುವಾರದಿಂದ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳನ್ನು ನಿಲ್ದಾಣದಲ್ಲಿ ನಿಲ್ಲಿಸಬಾರದು ಎಂದು ಸೂಚಿಸಲಾಗಿದೆ. ಆದೇಶ ಉಲ್ಲಂಘಿಸಿದಲ್ಲಿ, ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ನಗರಸಭೆ ಆಯುಕ್ತ


ಉದಯವಾಹಿನಿ ಚಿತ್ರ

ಪವನ್ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನಗರಸಭೆ ಅಧ್ಯಕ್ಷೆ ಇಂದಿರಾಗಾಂಧಿ, ಸ್ಥಾಯಿ ಸಮಿತಿ ಅಧ್ಯಕ್ಷ ವಳ್ಳಲ್ ಮುನಿಸ್ವಾಮಿ, ಪೌರಾಯುಕ್ತ ಪವನ್‌ಕುಮಾರ್ ಶುಕ್ರವಾರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಗರಸಭೆಯ ಆದೇಶ ಪಾಲಿಸುವಂತೆ ಮತ್ತು ಪ್ರಸ್ತುತ ಉಂಟಾಗಿರುವ ವಾಹನ ದಟ್ಟಣೆ ನಿವಾರಣೆಗೆ ಸಹಕರಿಸಬೇಕು ಎಂದು ವರ್ತಕರಲ್ಲಿ ಮನವಿ ಮಾಡಿದರು. ಬಸ್ ನಿಲ್ದಾಣ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ವಾಹನ ದಟ್ಟಣೆ ಮತ್ತು ಅಸ್ತವ್ಯಸ್ತ ಸಂಚಾರದ ಬಗ್ಗೆ ಸೋಮವಾರ ಸಂಚಿಕೆಯಲ್ಲಿ ವರದಿ ಪ್ರಕಟವಾಗಿತ್ತು.

# ಪಹಲ್ಗಾಮ್ ಘಟನೆಗೆ ಮೋದಿ ರಾಜೀನಾಮೆ ಯಾಕೆ ಕೇಳಲಿಲ್ಲ?

• **ಉದಯವಾಹಿನಿ, ರಾಮನಗರ**

ಪಹಲ್ಗಾಮ್ ಘಟನೆಯಲ್ಲೂ ಅಮಾಯಕರು ಸತ್ತಿರಲಿಲ್ಲವೇ ಅದೂ ಕೇಂದ್ರ ಸರ್ಕಾರದ ವೈಫಲ್ಯವಲ್ಲವೇ? ಅದಕ್ಕೆ ಸಂಬಂಧಿಸಿದಂತೆ, ಪ್ರಧಾನಿ ನರೇಂದ್ರ ಮೋದಿ ಅವರಿಂದ ಯಾಕೆ ರಾಜೀನಾಮೆ ಕೇಳಲಿಲ್ಲ? ದುರಂತದಲ್ಲೂ ರಾಜಕೀಯ ಮಾಡುವುದು ಬಿಜೆಪಿಯ ಕೆಟ್ಟ ಚಾಳಿ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಕಿಡಿಕಾರಿದರು. ಆರ್‌ಸಿಬಿ ವಿಜಯೋತ್ಸವದಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ಸರ್ಕಾರವೇ ಹೊಣೆ' ಎಂಬ ವಿರೋಧ ಪಕ್ಷಗಳ ವಾಗ್ದಾಳಿ ಕುರಿತು ತಾಲ್ಲೂಕಿನ ಜಾಲಮಂಗಲದಲ್ಲಿ ಶುಕ್ರವಾರ ಸುದ್ದಿಗಾರರಿಗೆ ಅವರು ಪ್ರತಿಕ್ರಿಯಿಸಿದರು. 'ಕಾಲ್ತುಳಿತದ ದುರಂತವನ್ನು ಪಹಲ್ಗಾಮ್


ಉದಯವಾಹಿನಿ ಚಿತ್ರ

ಘಟನೆಗೆ ಹೋಲಿಸಲಾರೆ. ಆದರೆ, ದುರಂತಕ್ಕೆ ಸಂಬಂಧಿಸಿದಂತೆ ನಮಗೆ ಪ್ರಶ್ನೆ ಕೇಳುವ ಬಿಜೆಪಿಯವರು, ಅಪರೇಷನ್ ಸಿಂಧೂರ ಯಾಕೆ ನಿಲ್ಲಿಸಿದರು ಎಂಬ ಪ್ರಶ್ನೆಗೆ ಇಲ್ಲಿಯವರೆಗೆ ಉತ್ತರ ಕೊಟ್ಟಿದ್ದಾರಾ ಎಂದು ಪ್ರಶ್ನಿಸಿದರು. ಕಾಲ್ತುಳಿತಕ್ಕೆ ಮುಂಚೆ ಬಿಜೆಪಿಯವರು ಏನೇನು ಟ್ವಿಟ್ ಮಾಡಿದ್ದಾರೆಂದು ಗೊತ್ತಿದೆ. ಘಟನೆಗೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಅವರು ಈಗಾಗಲೇ ಚರ್ಚಿಸಿ ಕೆಲವರ ವಿರುದ್ಧ ಕ್ರಮ ಕೈಗೊಂಡಿದ್ದಾರೆ. ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ನ್ಯಾಯಾಂಗ ತನಿಖೆಗೂ ಆದೇಶಿಸಿದ್ದಾರೆ. ಕಾನೂನು ಪ್ರಕಾರ ಏನಾಗಬೇಕೊ ಆಗಲಿದೆ' ಎಂದರು. 'ಮಾತೆತ್ತಿದರೆ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ರಾಜೀನಾಮೆ ಕೇಳುವ ಬಿಜೆಪಿ ಮತ್ತು ಜೆಡಿಎಸ್‌ನವರು ತಲೆ ಇಲ್ಲದೆ ಮಾತನಾಡುತ್ತಿದ್ದಾರೆ. ಅವರಿಗೆ ಕಾಮನ್ ಸೆನ್ಸ್ ಇಲ್ಲ. ಇದೇ ಕಾರಣಕ್ಕೆ ಅಧಿಕಾರ ಕಳೆದುಕೊಂಡು ವಿರೋಧ ಪಕ್ಷದಲ್ಲಿ ಕುಳಿತಿದ್ದಾರೆ. ಕಾಲ್ತುಳಿತ ಸಂಭವಿಸಬಾರದಿತ್ತು. ಮುಂದೆ ಇಂತಹ ಘಟನೆ ಮರುಕಳಿಸದಂತೆ ಸರ್ಕಾರ ಎಚ್ಚರಿಕೆ ವಹಿಸಲಿದೆ ಎಂದು ತಿಳಿಸಿದರು.

# ಮಿನಿ ನ್ಯೂಸ್

## ಕಂಟೇನರ್ ಬೈಕ್ ಅಪಘಾತ ಮೂವರು ಯುವಕರು ಸಾವು

• **ಉದಯವಾಹಿನಿ, ತುಮಕೂರು**

ತಾಲ್ಲೂಕಿನ ನಂದಿಹಳ್ಳಿ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ಬೆಳಗಿನ ಜಾವ ಕಂಟೇನರ್, ಬೈಕ್ ಮಧ್ಯೆ ಸಂಭವಿಸಿದ ಅಪಘಾತದಲ್ಲಿ ಮೂವರು ಯುವಕರು ಮೃತಪಟ್ಟಿದ್ದಾರೆ. ನಗರದ ಉಪ್ಪಾರಹಳ್ಳಿ ನಿವಾಸಿಗಳಾದ ರಾಜೇಶ್ (25), ದನಂಜಯ್ (27), ಧನುಷ್ (23) ಮೃತರು. ದಾಬಸ್‌ಪೇಟೆಯ ಎಂ.ಇ.ಸೋಲಾರ್ ಪ್ಲಾಂಟ್‌ನಲ್ಲಿ ಕೆಲಸ ಮುಗಿಸಿ ಬರುವಾಗ ಅಘಾತ ಸಂಭವಿಸಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಡಿವೈಎಸ್ ಪಿ ಕೆ.ಆರ್.ಚಂದ್ರಶೇಖರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕ್ಯಾತ್ಸಂದ್ರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜೂ. 21ರಂದು ಹನುಮ ಜಯಂತಿ

• **ಉದಯವಾಹಿನಿ, ನಂಜನಗೂಡು**

ನಗರದಲ್ಲಿ ಜೂ.21ರಂದು ಪ್ರತಿ ವರ್ಷದಂತೆ ವೀರಾಜಂನೇಯ ಧರ್ಮ ಜಾಗೃತಿ ಬಳಗದ ವತಿಯಿಂದ ಅದ್ದೂರಿಯಾಗಿ ಹನುಮ ಜಯಂತಿ ಆಚರಿಸಲಾಗುತ್ತದೆ ಎಂದು ದೇವೀರಮ್ಮನಹಳ್ಳಿ ಶರಣ ಸಂಗಮ ಮಠದ ನಾಗರಾಜ ಸ್ವಾಮೀಜಿ ಹೇಳಿದರು. ನಗರದ ಚಿಂತಾಮಣಿ ಗಣಪತಿ ದೇವಾಲಯದ ಆವರಣದಲ್ಲಿ ಹನುಮ ಜಯಂತಿಯ ಪ್ರಚಾರದ ಪೋಸ್ಟರ್ ಬಿಡುಗಡೆ ಮಾಡಿ ಅವರು ಮಾತನಾಡಿದರು. ಜೂ. 21ರಂದು ಶ್ರೀಕಂಠೇಶ್ವರ ದೇವಾಲಯದ ಮುಂಭಾಗದಿಂದ ವಿವಿಧ ಜನಪದ ತಂಡ, ಹನುಮನ ವಿವಿಧ ಸ್ತಬ್ಧ ಚಿತ್ರಗಳೊಂದಿಗೆ ನಗರದಲ್ಲಿ ನಡೆಯುವ ಅದ್ದೂರಿ ಮೆರವಣಿಗೆಯಲ್ಲಿ ಸಾವಿರಾರು ಯುವಕರು ಭಾಗವಹಿಸಲಿದ್ದಾರೆ. ಹನುಮ ಜಯಂತಿ ಪ್ರಯುಕ್ತ ಜೂ.14 ರಂದು ನಗರದ ಅಯ್ಯಪ್ಪಸ್ವಾಮಿ ದೇವಾಲಯದಲ್ಲಿ ಸಾವಿರಾರು ಭಕ್ತರು ಹನುಮಾನ್ ಚಾಲೀಸ ಪಠಿಸಲಿದ್ದಾರೆ ಎಂದು ಹೇಳಿದರು.

ವೀರಾಂಜನೇಯ ಧರ್ಮ ಜಾಗೃತಿ ಬಳಗದ ಚಂದ್ರ ಶೇಖರ್, ನಿತೀನ್ ಕುಮಾರ್,ಅನಂತ.ಉಮೇಶ್,ಸುನೀಲ್ ಕುಮಾರ್, ಗಿರೀಶ್,ಕಿಶೋರ್. ಜೋಯಿಷ್.ಸುಜಯ್.ರವಿ ಉಪಸ್ಥಿತರಿದ್ದರು.

## ಪುರಸಭೆಯಿಂದ ಪರಿಸರ ದಿನಾಚರಣೆ



• **ಉದಯವಾಹಿನಿ, ಶ್ರೀನಿವಾಸಪುರ**

ಇತ್ತೀಚಿನ ದಿನಗಳಲ್ಲಿ ಪರಿಸರದಲ್ಲಿ ಉಸಿರಾಡಲು ಶುದ್ಧಗಾಳಿ ಇಲ್ಲದೆ ರಾಸಾಯನಿಕ ವಿಷ ಮಿಶ್ರಿತ ಗಾಳಿ ಉಸಿರಾಡುವಂತಾಗಿದೆ ಎಂದು ಪುರಸಭೆ ಅಧ್ಯಕ್ಷ ಬಿ.ಆರ್. ಭಾಸ್ಕರ್ ಹೇಳಿದರು.ಪಟ್ಟಣದ ಪುರಸಭೆಯಿಂದ ಗುರುವಾರ ಅಂತರರಾಷ್ಟ್ರೀಯ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಉಳಿಸಿ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿ ಮನೆ ಸುತ್ತಮುತ್ತ ಮಗುವಿಗೊಂದು ಸಸಿ ನೆಟ್ಟು, ಮರಗಳಾಗಿಸಿ, ವನವಾಗಿಸಬೇಕು. ಮುಂದಿನ ಪೀಳಿಗೆಗಾಗಿ ಶುದ್ಧ ಗಾಳಿ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ' ಎಂದರು. 'ಪ್ಲಾಸ್ಟಿಕ್ ಬಳಸುವುದು ನಿಷೇಧ ಮಾಡಬೇಕು. ಪರಿಸರ ಉಳಿಸುವ ವಿಚಾರವಾಗಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಪ್ಲಾಸ್ಟಿಕ್‌ನ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ ಎಂದು ಸಲಹೆ ನೀಡಿದರು. ಪುರಸಭೆ ಉಪಾಧ್ಯಕ್ಷೆ ಸುನಿತಾ ಮಾತನಾಡಿ, ಪ್ರಕೃತಿಯ ಮಹತ್ವ ನಮಗೆ ಹೆಚ್ಚು ಅರ್ಥವಾಗುತ್ತಿದೆ. ಹೀಗಾಗಿ, ನಾವು ಇತರೆ ಜನರಲ್ಲಿ ಇನ್ನಷ್ಟು ಜಾಗೃತಿ ಮೂಡಿಸುವ ಅಗತ್ಯವಿದೆ. ನಮ್ಮ ಮಕ್ಕಳು ಮುಂದಿನ ಪೀಳಿಗೆಗೆ ಪರಿಸರವನ್ನು ರಕ್ಷಿಸಿಕೊಳ್ಳಬೇಕಾದವರು. ಅವರಿಗೂ ಪರಿಸರದ ಕಾಳಜಿಯನ್ನು ಅರ್ಥ ಮಾಡಿಸುವ ಅಗತ್ಯ ಹೆಚ್ಚಿದೆ' ಎಂದರು. ಕೋಚಿಮುಲ್ ಮಾಜಿ ಅಧ್ಯಕ್ಷ ಎನ್.ಜಿ.ಬ್ಯಾಟಪ್ಪ ಮಾತನಾಡಿದರು. ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಮುಖ್ಯಾಧಿಕಾರಿ ವಿ.ನಾಗರಾಜ್, ಸದಸ್ಯರಾದ ಸಂಜಯ್‌ಸಿಂಗ್, ಎನ್‌ಎನ್‌ಆರ್ ನಾಗರಾಜ್, ಲಕ್ಷ್ಮೀಶ್, ಆರೋಗ್ಯಾಧಿಕಾರಿ ಸಂತೋಷ, ಸಿಬ್ಬಂದಿ ಪ್ರತಾಪ್, ಸುರೇಶ್, ಶಾರದಾ, ಭಾಗ್ಯಮ್ಮ, ಗೌತಮ್, ಚಂದು, ನಾಗೇಶ್, ಸತೀಶ್ ಇದ್ದರು.

# ಪರಿಸರ ಸಂರಕ್ಷಣೆಯಿಂದ ಸುಸ್ಥಿರ ಅಭಿವೃದ್ಧಿ

## ನಗರದ ಸಿಎಫ್‌ಟಿಆರ್‌ಐನಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನ ಕಾರ್ಯಕ್ರಮ

• **ಉದಯವಾಹಿನಿ, ಮೈಸೂರು**

ದೇಶದ ಸರ್ವೋತೋಮುಖ ಸುಸ್ಥಿರ ಅಭಿವೃದ್ಧಿಗೆ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆಯಾಗಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟರು. ನಗರದ ಸಿಎಫ್‌ಟಿಆರ್‌ಐನಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಾರತ ಸೂಪರ್ ಪವರ್ ರಾಷ್ಟ್ರವಾಗಲು, ಆರ್ಥಿಕತೆಯಲ್ಲಿ ಮುಂದುವರೆಯಲು ಪರಿಸರದ ಸಂರಕ್ಷಣೆಯೂ ಪ್ರಮುಖ ಪಾತ್ರ ವಹಿಸುತ್ತದೆ.

ಪರಿಸರ ಉತ್ತಮವಾಗಿದ್ದರೆ ದೇಶ-ನಾಡು ಕೂಡ ಉತ್ತಮವಾಗಿ ಇರುತ್ತದೆ. ಈ ಹಿನ್ನೆಲೆಯಲ್ಲಿ ದೇಶದ ಪ್ರತಿಯೊಬ್ಬ ನಾಗರಿಕರು ತಮ್ಮ ಹೊಣೆಗಾರಿಕೆ ಅರಿತುಕೊಂಡು ಪರಿಸರ ಸಂರಕ್ಷಣೆ ಮಾಡಿ, ದೇಶವನ್ನು ಸುಸ್ಥಿರ ಅಭಿವೃದ್ಧಿ ರಾಷ್ಟ್ರವನ್ನಾಗಿ ಮಾಡಲು ಕೈ ಜೋಡಿಸಬೇಕಾಗಿದೆ ಎಂದರು.

ಪರಿಸರ ಸಂರಕ್ಷಣೆಯನ್ನು ಹೇಗೆ ಮಾಡಿಕೊಳ್ಳಬೇಕು, ಏಕೆ ಮಾಡಿಕೊಳ್ಳಬೇಕು ಎನ್ನುವ ವಿಚಾರವೂ ನಮಗೆ ಪುರಾತನ ಕಾಲದಿಂದಲೇ ಗೊತ್ತಾಗಿದೆ. ನಮ್ಮ ವೇದಗಳಲ್ಲಿ ಈ ಕುರಿತು ಸಾಕಷ್ಟು ಮಾಹಿತಿ ಇದೆ. ಪರಿಸರ ಸಂರಕ್ಷಣೆ ಮಾಡಿದರೆ ಯಾವ ರೀತಿ ಉಪಯೋಗವಿದೆ ಎನ್ನುವುದು ಅವುಗಳಿಂದ ತಿಳಿಯುತ್ತದೆ. ಇವುಗಳಿಂದ ಸ್ಫೂರ್ತಿ ಪಡೆದು ನಾವು ಮುಂದುವರೆಯಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ತ್ಯಾಜ್ಯ ಸಂಸ್ಕರಣೆ ಹೆಚ್ಚಾಗಬೇಕು:** ಮೈಸೂರು ನಗರ ಹಿಂದೆ ಹಲವು ಸಲ ಸ್ವಚ್ಛನಗರಿ ಎನ್ನುವ ಕೀರಿಟ ಮುಡಿಗೇರಿಸಿಕೊಂಡಿತ್ತು.

ಈಗ ಕೆಲವು ವರ್ಷಗಳಿಂದ ಅದು ಕೈ ತಪ್ಪಿ ಹೋಗುತ್ತಿದೆ. ಮತ್ತೆ ಮೈಸೂರಿಗೆ ಪ್ರಶಸ್ತಿ ಬರಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಿದರು. ಸ್ವಚ್ಛನಗರಿ ಪ್ರಶಸ್ತಿ ಬರಲು ಹಲವಾರು ಮಾನದಂಡಗಳು ಇವೆ. ಮೈಸೂರಿನಲ್ಲಿ ಸ್ವಚ್ಛತೆಗೆ ಹಿಂದಿನಿಂದಲೂ ಆದ್ಯತೆ ನೀಡಲಾಗಿದೆ. ಆದರೆ, ಈಗ ಕಾಮಗಾರಿಗಳು ಹೆಚ್ಚಾಗಿ ನಡೆಯುತ್ತಿರುವುದರಿಂದ ಅವುಗಳ ತ್ಯಾಜ್ಯ ಸಾಗಣೆ ದುಸ್ತರವಾಗಿದೆ. ಅಲ್ಲದೇ ಮೈಸೂರು ಸುತ್ತ ಮುತ್ತ ಬಡಾವಣೆಗಳು ಬೆಳೆದಿವೆ. ಅವುಗಳ ಪ್ರಮಾಣಕ್ಕೆ ಅನುಗುಣವಾಗಿ ಕಸ ಸಂಗ್ರಹಣೆ, ವಿಲೇವಾರಿ ಹಾಗೂ ತ್ಯಾಜ್ಯ ಸಂಸ್ಕರಣೆ ಮಾಡಲು ಆಗುತ್ತಿಲ್ಲ. ಈ ನಿಟ್ಟಿನಲ್ಲಿ ಇವುಗಳನ್ನು ಬಲವರ್ಧನೆಗೊಳಿಸಬೇಕಾದ ಅವಶ್ಯಕತೆ ಇದೆ ಎಂದರು. ಸಿಎಫ್‌ಟಿಆರ್‌ಐ ನಿರ್ದೇಶಕಿ ಶ್ರೀದೇವಿ ಅನ್ನಪೂರ್ಣ ಸಿಂಗ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದರು.

**ಕೇಂದ್ರ ಸರ್ಕಾರ ಪರಿಸರ ಸಂರಕ್ಷಣೆಗಾಗಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ತಾಯಿ ಹೆಸರಲ್ಲಿ ಒಂದು ಸಸಿ ಎನ್ನುವ ಅಭಿಯಾನದ ಮೂಲಕ ಎಲ್ಲರೂ ಗಿಡ ನೆಡುವ ಕಾರ್ಯದಲ್ಲಿ ಭಾಗವಹಿಸಲು ಉತ್ತೇಜಿಸುತ್ತಿದೆ. ಅದೇ ರೀತಿ ಜಲಜೀವನ್ ಮಿಷನ್ ಮೂಲಕ ಪ್ರತಿ ಮನೆಗೂ ಶುದ್ದವಾದ ನೀರನ್ನು ಕೊಡುವುದರ ಮೂಲಕ ಸ್ವಚ್ಛ ಪರಿಸರಕ್ಕೆ ಆದ್ಯತೆ ನೀಡಿದೆ. ಇದಲ್ಲದೇ ಸಣ್ಣ-ಸಣ್ಣ ಹಾಡಿಗಳಲ್ಲೂ ಕೂಡಾ ಸ್ವಚ್ಛತೆ ಹಾಗೂ ಶುದ್ಧತೆಗೆ ಒತ್ತು ನೀಡುವುದರ ಮೂಲಕ ಅಭಿವೃದ್ಧಿಯ ಕಾರ್ಯವನ್ನು ಕೈಗೊಂಡಿದೆ. ನನ್ನ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲೂ ಸುಸ್ಥಿರ ಅಭಿವೃದ್ಧಿಗೆ ಹೆಚ್ಚು ಒತ್ತನ್ನು ನೀಡಲಾಗಿದ್ದು, ಈ ನಿಟ್ಟಿನಲ್ಲಿ ಹಲವಾರು ಯೋಜನೆಗಳನ್ನು ಕಾರ್ಯಗತಗೊಳಿಸಲು ಮುಂದಡಿ ಇಡಲಾಗಿದೆ ಎಂದರು.**

ಮಾಜಿ ಎಂಎಲ್‌ಎ ಎಲ್.ನಾಗೇಂದ್ರ, ಸಿಎಫ್‌ಟಿಆರ್‌ಐನ ವಿಜ್ಞಾನಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಕನ್ನಡ ಭಾಷೆಯಲ್ಲಿ 125 ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮುಳಬಾಗಿಲು**

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ಭಾಷಾ ವಿಷಯದಲ್ಲಿ 125ಕ್ಕೆ 125 ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಕರುನಾಡ ಕನ್ನಡ ಸಂಘದವತಿಯಿಂದ ಸನ್ಮಾನಿಸಲಾಯಿತು.

ಅಲ್ಲದೆ, ಇದೇ ವೇಳೆ ಪರಿಸರ ದಿನವನ್ನೂ ಆಚರಿಸಲಾಯಿತು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ತಹಶೀಲ್ದಾರ್ ವಿ. ಗೀತಾ, ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಆದ್ದರಿಂದ ಪ್ರತಿಯೊಬ್ಬರೂ ಕನ್ನಡ ನಾಡು, ನುಡಿಯನ್ನು ಉಳಿಸಿ ಬೆಳೆಸಬೇಕು ಎಂದು ಹೇಳಿದರು.

ಅತ್ಯಂತ ಹೆಚ್ಚು ಪ್ರಾಚೀನ, ದೊಡ್ಡದಾದ ಕನ್ನಡ ಭಾಷೆಯ ಸಾಧಕರಿಗೆ ಬೂಕರ್, ಜ್ಞಾನಪೀಠ, ಪದ್ಮಭೂಷಣ, ಪದ್ಮ ವಿಭೂಷಣ, ಕೇಂದ್ರ ಸಾಹಿತ್ಯ ಅಕಾಡೆಮಿ ಸೇರಿದಂತೆ ಎಲ್ಲ ರೀತಿಯ ಪ್ರಶಸ್ತಿಗಳು ಸಿಕ್ಕಿವೆ. ಇಂಥ ಭಾಷೆಯನ್ನು ವಿದ್ಯಾರ್ಥಿಗಳು ಅಪ್ಪಿಕೊಂಡು ಪ್ರೀತಿಯಿಂದ ಓದಿದಾಗ 125 ಅಂಕಗಳನ್ನು ಪಡೆಯಲು ಸಾಧ್ಯವಿದೆ. ಹೀಗಾಗಿ ವಿದ್ಯಾರ್ಥಿಗಳು ಶ್ರದ್ದೆಯಿಂದ ಓದಿ ಸಾಧಕರಾಗಬೇಕು ಎಂದು ಕಿವಿಮಾತು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಗೋಪಾಲಗೌಡ ಮಾತನಾಡಿ, ಶೈಕ್ಷಣಿಕ ವಲಯದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಭಾಷೆಯ ಆಯಕಟ್ಟು ಇರುವುದಿಲ್ಲ. ಅವರ ವಿದ್ಯಾಭ್ಯಾಸದಲ್ಲಿ ಹಲವಾರು ವಿಷಯಗಳಿದ್ದು, ಅದರ ಜೊತೆ ಕನ್ನಡ ಭಾಷೆ ಇರುತ್ತದೆ. ಹೀಗಾಗಿ, ವಿದ್ಯಾರ್ಥಿಗಲು ಕನ್ನಡ ಭಾಷೆಗೆ ಮೊದಲ ಪ್ರಾಶಸ್ತ್ಯ ನೀಡಬೇಕು ಎಂದು ಸಲಹೆ ನೀಡಿದರು.

ಕನ್ನಡ, ಸಂಸ್ಕೃತಿ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕ ಬಿ.ಎಸ್. ವೆಂಕಟಾಚಲಪತಿ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಗೀತಾ, ಎಸ್‌ಡಿಸಿ ಪ್ರಾಂಶುಪಾಲ ಮುರಳಿಕೃಷ್ಣ, ಬ್ರಾಹ್ಮಣರ ಸಂಘದ ತಾಲ್ಲೂಕು ಅಧ್ಯಕ್ಷ ಬಿ.ಎಸ್. ಶ್ರೀನಿವಾಸಮೂರ್ತಿ, ಕರುನಾಡು ಕನ್ನಡ ಸಂಘದ ಅಧ್ಯಕ್ಷ ಇ.ಶ್ರೀನಿವಾಸಗೌಡ, ಪ್ರಧಾನ ಕಾರ್ಯದರ್ಶಿ ಎಂ.ವಿ. ಜನಾರ್ಧನ್, ನಂದ ಕಿಶೋರ್, ಆರ್. ಅರುಣ್ ಕುಮಾರ್, ಪ್ರಾಂಶುಪಾಲ ನವೀದ್ ಸಿದ್ದಲಿಂಗಯ್ಯ, ಅತ್ತಿಕುಂಟೆ ಸುಬ್ರಮಣಿ, ಶ್ರೀರಾಮ್, ಎಂ.ಶಿವಣ್ಣ, ಕಿಶೋರ್, ಬ್ರಹ್ಮಯ್ಯ, ಜಿಎಸ್ ಕವಿತಾ, ಜಿ.ಪುಷ್ಪ, ಜಿ.ರವೀಂದ್ರ, ಬಾಬು, ಪತ್ರಿಕಾ ಕಾರ್ಯದರ್ಶಿ ಅತ್ತಿಕುಂಟೆ ಎಸ್.ಸುಬ್ರಮಣಿ, ಮೋಹನ್ ಸಿಂಗ್, ವಿ.ಕೆ.ಕೃಷ್ಣಪ್ಪ, ನಾಗೇಂದ್ರ, ನಾಗಭೂಷಣಾಚಾರ್, ಹೆಚ್.ವಿ.ಸುಬ್ರಮಣಿ ಇದ್ದರು.

ಅಂತರಾಳದಿಂದ.. EDITORIAL

# ಮತೀಯ ಹಿಂಸೆ ನಿಗ್ರಹ: ಪೊಲೀಸ್ ಕೆಲಸದಲ್ಲಿ ಹಸ್ತಕ್ಷೇಪ ಸಲ್ಲದು

ಮತೀಯ ದ್ವೇಷದ ಹಿಂಸೆಯ ತಾಣವಾಗಿ ಬದಲಾಗಿರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಏಪ್ರಿಲ್ ಕೊನೆಯ ವಾರ ಕೇರಳದ ವ್ಯಕ್ತಿಯೊಬ್ಬರನ್ನು ಗುಂಪು ಹಲ್ಲೆ ನಡೆಸಿ, ಹತ್ಯೆ ಮಾಡಲಾಗಿತ್ತು. ಮೇ 1ರ ಬಳಿಕ ಮತೀಯ ದ್ವೇಷದ ಕಾರಣಕ್ಕಾಗಿಯೇ ಇಬ್ಬರ ಕೊಲೆಗಳು ನಡೆದಿವೆ. ಈ ಪ್ರಕರಣಗಳ ಬೆನ್ನಲ್ಲೇ ಮತೀಯ ದ್ವೇಷದ ಬೆಂಕಿ ಇಡೀ ಕರಾವಳಿಯನ್ನು ವ್ಯಾಪಿಸಿಕೊಳ್ಳುವ ಲಕ್ಷಣಗಳು ಗೋಚರಿಸಿದ್ದವು.




ಕೊಲೆಪ್ರಕರಣಗಳನ್ನೇ ಮುಂದಿಟ್ಟುಕೊಂಡು ಹಿಂದೂ-ಮುಸ್ಲಿಮರ ನಡುವೆ ದ್ವೇಷ ಬಿತ್ತುವ ಪ್ರಯತ್ನಗಳೂ ಆರಂಭವಾಗಿದ್ದವು. ತಕ್ಷಣವೇ ಎಚ್ಚೆತ್ತುಕೊಂಡ ರಾಜ್ಯ ಸರ್ಕಾರವು ಮಂಗಳೂರು ಪೊಲೀಸ್ ಕಮಿಷನರ್, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಬದಲಾವಣೆ ಮಾಡಿತು. ದೀರ್ಘಕಾಲದಿಂದ ಒಂದೇ ಠಾಣೆ, ಉಪವಿಭಾಗಗಳಲ್ಲಿ ಠಿಕಾಣಿ ಹೂಡಿರುವ ಕೆಳಹಂತದ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಯನ್ನು ವರ್ಗಾವಣೆ ಮಾಡುವ ಪ್ರಕ್ರಿಯೆಯನ್ನೂ ಆರಂಭಿಸಲಾಗಿದೆ.

**ವಿದೇಶಗಳಲ್ಲಿ ಕುಳಿತು ಸಾಮಾಜಿಕ ಮಾಧ್ಯಮಗಳ ಮೂಲಕ ಹಿಂಸೆಯನ್ನು ಪ್ರಚೋದಿಸುವವರನ್ನು ನಿಯಂತ್ರಿಸುವುದು ಪೊಲೀಸರಿಗೆ ಸವಾಲಾಗಿತ್ತು. ಈಗ ಹೊಸ ತಂತ್ರಗಾರಿಕೆ ಪ್ರಯೋಗಿಸಿರುವ ಪೊಲೀಸರು, ಲುಕ್‌ಔಟ್ ನೋಟಿಸ್ ಹೊರಡಿಸಿ ಅಂತಹವರನ್ನು ಸ್ವದೇಶಕ್ಕೆ ಕರೆಸಿಕೊಂಡು, ಬಂಧಿಸಿ ಜೈಲಿಗೆ ಕಳುಹಿಸುತ್ತಿದ್ದಾರೆ.**

ಕರಾವಳಿ ಜಿಲ್ಲೆಗಳಲ್ಲಿನ ಮತೀಯ ದ್ವೇಷದ ಹಿಂಸಾ ಕೃತ್ಯಗಳ ಹಿಂದಿನ ಆಳ-ಅಗಲ ಬಲ್ಲ ಐಪಿಎಸ್ ಅಧಿಕಾರಿಗಳನ್ನು ಅಲ್ಲಿಗೆ ನಿಯೋಜಿಸುತ್ತಿದ್ದಂತೆಯೇ ಪೊಲೀಸರ ಕಾರ್ಯವೈಖರಿ ಬದಲಾಗಿದೆ. ಮತೀಯ ದ್ವೇಷದ ಭಾಷಣ ಮಾಡುವವರು, ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್‌ಗಳನ್ನು ಹಾಕುವ ಮೂಲಕ ಹಿಂಸೆಯನ್ನು ಪ್ರಚೋದಿಸುವವರು. ನಿರಂತರವಾಗಿ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿ ಶಾಂತಿ ಕದಡುವ ವ್ಯಕ್ತಿಗಳ ವಿರುದ್ಧದ ಕಾರ್ಯಾಚರಣೆ ಚುರುಕುಗೊಂಡಿದೆ. ಮತೀಯ ಹಿಂಸಾ ಕೃತ್ಯಗಳಲ್ಲಿ ನೇರವಾಗಿ ಭಾಗಿಯಾದವರು ಮತ್ತು ಅಂತಹ ಕೃತ್ಯಗಳಿಗೆ ಪ್ರಚೋದನೆ ನೀಡಿದ್ದಾರೆ ಎನ್ನಲಾದ 36 ಮಂದಿಯನ್ನು ದಕ್ಷಿಣ ಕನ್ನಡ ಜಿಲ್ಲೆಯಿಂದ ಗಡೀಪಾರು ಮಾಡುವ ಪ್ರಕ್ರಿಯೆ ಆರಂಭವಾಗಿದೆ. ಕರಾವಳಿಯಲ್ಲಿನ ಮತೀಯ ದ್ವೇಷದ ಹಿಂಸಾಚಾರಕ್ಕೂ ಅಕ್ರಮ ಮರಳು ಸಾಗಣೆ, ಮಾದಕ ವಸ್ತು ಮಾರಾಟ ಮತ್ತು ದನದ ಮಾಂಸ ಪೂರೈಕೆ ಜಾಲಕ್ಕೂ ನಂಟು ಇದೆ ಎಂಬುದನ್ನು ಅರಿತು, ಅಂತಹ ಕೃತ್ಯಗಳನ್ನೂ ಹತ್ತಿಕ್ಕಲು ಕಾರ್ಯತಂತ್ರ ರೂಪಿಸಿ, ಕಾರ್ಯಾಚರಣೆ ಆರಂಭಿಸಿದ್ದಾರೆ. ಕೋಮು ಆಧಾರಿತ ಹಿಂಸೆಯನ್ನು ಹತ್ತಿಕ್ಕಲು ಈ ಬಾರಿ ಪೊಲೀಸರು ದೃಢವಾದ ಹೆಜ್ಜೆಗಳನ್ನು ಇರಿಸಿದ್ದಾರೆ. ಪೊಲೀಸರ ಈ ನಡೆಯನ್ನು ಬೆಂಬಲಿಸಬೇಕಾದ ಜವಾಬ್ದಾರಿ ಸರ್ಕಾರ, ರಾಜಕೀಯ ಪಕ್ಷಗಳು ಮತ್ತು ಸಮಾಜದ ಮೇಲಿದೆ. ಈ ವಿಚಾರದಲ್ಲಿ ಆರಂಭಿಕ ಹಂತದಲ್ಲಿ ರಾಜ್ಯ ಸರ್ಕಾರವು ಪೊಲೀಸರಿಗೆ ಮುಕ್ತವಾಗಿ ಕೆಲಸ ಮಾಡಲು ಅವಕಾಶ ಕಲ್ಪಿಸಿದೆ ಎಂಬ ಮಾತು ಅಧಿಕಾರಿಗಳ ವಲಯದಲ್ಲಿ ಇದೆ. ಆದರೆ, ಪೊಲೀಸರ ಕಾರ್ಯಾಚರಣೆಗೆ ರಾಜಕೀಯ ಬಣ್ಣ ಬಳಿಯುವ ಪ್ರಯತ್ನವೂ ಕೆಲವರಿಂದ ಆರಂಭವಾಗಿದೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಕೂಡ ಆ ಗುಂಪಿನಲ್ಲಿ ಸೇರಿದ್ದಾರೆ. ಪೊಲೀಸರ ಕಾರ್ಯಾಚರಣೆಯನ್ನೇ ಶಂಕಿಸಿ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರ ಹಾಗೂ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ಪತ್ರ ಬರೆದಿದ್ದಾರೆ. ಹಿಂದುತ್ವಪರ ಸಂಘಟನೆಗಳ ಕಾರ್ಯಕರ್ತರ ವಿರುದ್ಧ ಕಾನೂನು ಕ್ರಮವನ್ನೇ ಕೈಗೊಳ್ಳಬಾರದು ಎಂಬ ಧಾಟಿಯಲ್ಲಿ ಅವರ ಪತ್ರವಿದೆ. ಸಾಂವಿಧಾನಿಕ ಅಧಿಕಾರ ಹೊಂದಿರುವ ಶೋಭಾ ಅವರು ಕಾನೂನಿನ ಆಡಳಿತವನ್ನು ಬೆಂಬಲಿಸಬೇಕೇ ವಿನಾ ಧರ್ಮದ ಹೆಸರಿನಲ್ಲಿ ಸಂಘಟನೆಗಳನ್ನು ಕಟ್ಟಿಕೊಂಡು ಹಿಂಸಾಚಾರಕ್ಕೆ ಇಳಿಯುವವರನ್ನಲ್ಲ. ಪೊಲೀಸರು ಒಂದೇ ಧರ್ಮಕ್ಕೆ ಸೇರಿದವರ ವಿರುದ್ಧವಷ್ಟೇ ಕ್ರಮಕ್ಕೆ ಮುಂದಾಗಿಲ್ಲ ಎಂಬುದನ್ನು ದಾಖಲೆಗಳು ಹೇಳುತ್ತವೆ. ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುವವರನ್ನು ಧರ್ಮದ ಆಧಾರದಲ್ಲಿ ನೋಡುವುದು, ಧರ್ಮದ ನೆರಳಿನಲ್ಲಿ ರಕ್ಷಿಸುವುದು ಸಂವಿಧಾನಕ್ಕೆ ಅಪಚಾರ ಬಗೆಯುವ ಕೆಲಸ. ಕೋಮು ಹಿಂಸೆಯಲ್ಲಿ ನೇರವಾಗಿ ಭಾಗಿಯಾಗುವವರ ವಿರುದ್ಧವಷ್ಟೇ ಕ್ರಮ ಆದರೆ ಸಾಲದು. ತೆರೆಯ ಹಿಂದೆ ಕುಳಿತು ಪ್ರಚೋದನೆ ನೀಡುವ, ಕಾರ್ಯತಂತ್ರ ರೂಪಿಸುವ ಸೂತ್ರಧಾರರನ್ನೂ ಕಾನೂನಿನ ಅಡಿಯಲ್ಲಿ ಕ್ರಮಕ್ಕೆ ಒಳಪಡಿಸುವ ಕೆಲಸ ಆಗಬೇಕು. ಅವರು ಯಾವುದೇ ಸಂಘಟನೆ ಅಥವಾ ರಾಜಕೀಯ ಪಕ್ಷಗಳಲ್ಲಿ ಎಷ್ಟೇ ಪ್ರಭಾವಿಗಳಾಗಿದ್ದರೂ ಒತ್ತಡಕ್ಕೆ ಮಣಿಯದೇ ಕ್ರಮ ಜರುಗಿಸಬೇಕು. ರಾಜಕೀಯ ಲಾಭಕ್ಕಾಗಿ ಮತೀಯ ಹಿಂಸೆಯನ್ನು ಬೆಂಬಲಿಸುವವರು, ಅದನ್ನು ತಡೆಗಟ್ಟುವ ಪ್ರಯತ್ನಕ್ಕೆ ವಿರುದ್ಧವಾಗಿ ಕೆಲಸ ಮಾಡುವ ರಾಜಕಾರಣಿಗಳು ಮತ್ತು ಸಂಘಟನೆಗಳ ಮುಖಂಡರ ವಿರುದ್ಧವೂ ಕಾನೂನು ಕ್ರಮ ಜರುಗಿಸುವ ಬಲವಾದ ಇಚ್ಛಾಶಕ್ತಿಯನ್ನು ರಾಜ್ಯ ಸರ್ಕಾರ ಪ್ರದರ್ಶಿಸಬೇಕು. ಆಗ ಕೋಮು ಹಿಂಸೆ ನಿಗ್ರಹಕ್ಕೆ ಪಣ ತೊಟ್ಟ ಪೊಲೀಸರ ಕೈಗಳು ಮತ್ತಷ್ಟು ಬಲಗೊಳ್ಳುತ್ತವೆ.

# ರಾಮಾಯಣ



## ದಶರಥ ರಾಯನ ಶರೀರವನ್ನು ಎಣ್ಣೆಯ ಕೊಪ್ಪರಿಗೆಯಲ್ಲಿ ಇಟ್ಟಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

**ಭರತ ನಿಗೆ ಕೈ ಕೇಯಾ ದೇವಿಯು ದಶರಥನ ಮರಣವನ್ನ ಶ್ರೀ ರಾಮನ ವನವಾಸ ವೃತ್ತಾಂತವನ್ನೂ ಹೇಳಿದ್ದು** : ಈ ಪ್ರಕಾರವಾಗಿ ಭರತನು ತನ್ನ ತಂದೆಯಾದ ದಶರಥರಾಯನ ಅರಮನೆಗೆ ಹೋಗಿ ಅಲ್ಲಿ ಆ ರಾಯನನ್ನು ಕಾಣದೆ ತನ್ನ ತಾಯಿಯಾದ ಕೈಕೇಯಾದೇವಿಯ ಮನೆಗೆ ಹೋದನು. ಆಕೆಯು ಮಣಿಮಂಚದಿಂದಿಳಿದು ಆಲಿಂಗಿಸಿಕೊಳ್ಳಲು ಆಕೆಗೆ ನಮಸ್ಕಾರ ಮಾಡಿದನು. ಆಕೆಯು ಆತನ ಶಿರಸ್ಸನ್ನಾಘ್ರಾಣಿಸಿ ತನ್ನ ತೊಡೆಯಮೇಲೆ ಕುಳ್ಳಿರಿಸಿಕೊಂಡು

ಆತನನ್ನು ಕುರಿತು ಎಲೈ ಮಗನೆ, ನೀನು ಮಾತಾಮಹನ ಮನೆಯಿಂದ ಹೊರಟು ಎಷ್ಟು ದಿವಸಗಳಾದವು ದಾರಿಯಲ್ಲಿ ಶೀಘ್ರವಾಗಿ ಪ್ರಯಾಣಮಾಡಿದ್ದರಿಂದ ಬಳಲಿಕೆ ತೋರಿತೆ ನನ್ನ ತಂದೆಯೂ ನಿನ್ನ ಸೋದರಮಾವನೂ ಚೆನ್ನಾಗಿದ್ದಾರೆಯೆ ? ನೀನು ದಾರಿಯಲ್ಲಿ ಸುಖವಾಗಿ ಬಂದೆಯಾ ಎಂದು ಕೇಳಿದಳು. ಭರತನು ಆಕೆಯನ್ನು ಕುರಿತು ಅಮ್ಮ, ನಾನು ಸೋದರಮಾವನ ಮನೆಯಿಂದ ಹೊರಟು ಇಂದಿಗೆ ಏಳು ದಿವಸಗಳಾದುವು. ನಿನ್ನ ತಂದೆಯಾದ ಕೇಕಯರಾಯನು ಸುಖವಾಗಿದ್ದಾನೆ. ನನ್ನ ಸೋದರಮಾವನಾದ ಯುಧಾಜಿತ ಸುಖವಾಗಿದ್ದಾನೆ. ಆತನು ನನಗೆ ಅನೇಕ ದ್ರವ್ಯಗಳನ್ನೂ ರತ್ನಭೂಷಣಗಳನ್ನೂ ಕೊಟ್ಟಿದ್ದಾನೆ. ಅದು ಹಿಂದೆ ದಾರಿಯಲ್ಲಿ ಬರುತ್ತಿದೆ. ನಾನು ನಿನ್ನನ್ನು ನೋಡಬೇಕೆಂದು ಬೇಗ ಬಂದೆನು. ಇದೇನು ನೀನು ಮಲಗುವ ರತ್ನಮಂಚವು ಶೂನ್ಯವಾಗಿದೆ ಮಹಾರಾಜನು ಏಕೆ ಇಲ್ಲಿಲ್ಲ ಯಾವಾಗಲೂ ನಿನ್ನ ಮನೆಯಲ್ಲಿಯೇ ಇರುತ್ತಿದ್ದ ಆ ರಾಯನು ಇಲ್ಲಿರುವನೆಂದು ಬಂದೆನು. ನನ್ನ ತಂದೆಯನ್ನು ಕಂಡು ನಮಸ್ಕಾರವನ್ನು ಮಾಡಬೇಕು. ನನ್ನ ಹಿರಿಯ ತಾಯಿಯಾದ ಕೌಸಲ್ಯಾದೇವಿಯ ಮನೆಯಲ್ಲಿದ್ದಾನೆಯೆ? ಅಲ್ಲಿಗೆ ಹೋಗಲೆ ಎಂದು ಕೇಳಿದನು. ಕೈಕೇಯಾದೇವಿಯು ಭರತನಿಗೆ ಪ್ರಿಯವಾರ್ತೆಯೆಂದೆಣಿಸಿ ಮನಸ್ಸಿನಲ್ಲಿ ಸಂತೋಷಪಟ್ಟು 44 ಆ ಘೋರವಾರ್ತೆಯನ್ನು ತಿಳಿಸಿದಳು.

ಭರತ, ನಿನಗೆ ರಾಜ್ಯಭಾರವಾಯಿತು. ಲೋಕದಲ್ಲಿ ಹುಟ್ಟಿದ ಮನುಷ್ಯರು ತಮ್ಮ ತಮ್ಮ ದಿನ ತುಂಬಿದ ಬಳಿಕ ಯಮಲೋಕಕ್ಕೆ ಹೋಗುವರು. ಮಹಾತ್ಮನಾಗಿ ಕೀರ್ತಿವಂತನಾದ ದಶರಥರಾಯನ ಆ ಲೋಕಕ್ಕೆ ಹೋದನು ಎಂದು ಹೇಳಿದಳು. ಭರತನು ಶೋಕಾತಿಶಯದಿಂದ ಕಂಗೆಟ್ಟು ಹಾ! ಕೆಟ್ಟೆನಲ್ಲ ಎಂದು ಕೂಗುತ್ತಾ ಮೂರ್ಛಿತನಾಗಿ ಬಿದ್ದನು. ಸ್ವಲ್ಪ ಹೊತ್ತಿಗೆ ಎಚ್ಚೆತ್ತು ಅಕಟಕಟಾ! ನನಗೆ ಪಿತೃವಿಯೋಗ ವಾಗಬಹುದೆ ಎಂದು ಹಂಬಲಿಸಿ ಮುಂದುಗಾಣದೆ ಚಂದ್ರನಿಲ್ಲದ ಆಕಾಶದಂತೆಯೂ ನೀರುಬತ್ತಿದ ಸಮುದ್ರದಂತೆಯೂ ಅತ್ಯಂತ ಭಯಂಕರವಾಗಿದ್ದ ತನ್ನ ತಂದೆಯ ಶಯ್ಯಾಗೃಹವನ್ನು ನೋಡಿ ಕಂಗೆಟ್ಟು ಹಂಬಲಿಸುತ್ತ ಅಳುತ್ತ ತರಿದುಬಿದ್ದ ಮರದಂತೆ ಭೂಮಿಯಲ್ಲಿ ಮುಖವಡಿಯಾಗಿ ಬಿದ್ದನು. ಕೈಕೇಯಾದೇವಿಯು ಭರತನನ್ನು ಕೈ ಹಿಡಿದು '' ಮಗನೆ, ಏಳು ಏಳು ; ಮಹಾಕೀರ್ತಿಶಾಲಿ ಗಳಾದ ನಿನ್ನಂತಹ ರಾಜಕುಮಾರರು ಹೀಗೆ ಶೋಕವನ್ನು ಮಾಡುವರೆ ! ನೀನು ರಾಜ್ಯಾಧಿಪತ್ಯವನ್ನೂ ದಾನ ಯಜ್ಞಾದಿ ಸತ್ಕರ್ಮಗಳನ್ನೂ ಶಾಸ್ತ್ರಾಭ್ಯಾಸಗಳನ್ನೂ ಮಾಡಿಕೊಂಡಿರಬೇಕಲ್ಲದೆ ರೋದನಮಾಡಿಕೊಂಡಿರುವುದು ಸರಿಯಲ್ಲ. ನಿನ್ನ ಬುದ್ಧಿಯು ಸೂರ್ಯಪ್ರಭೆಯಂತೆ ಅತಿಪ್ರಕಾಶಮಾನ ವಾದುದು ಎಂದು ಸಂತವಿಸಿದಳು.

**ಮುಂದುವರಿಯುವುದು...**

# ಇಂತಹ ಕಾಯಿಲೆಗಳು ಕಾಣಿಸಿಕೊಂಡರೆ





ಒಂದು ವೇಳೆ ಎದ್ದ ತಕ್ಷಣ ಕುತ್ತಿಗೆ ನೋವು ಕಾಣಿಸಿಕೊಂಡರೆ ದಿನದಲ್ಲಿ ಪದೇ ಪದೇ ಬೆನ್ನು ನೋವು ಕೂಡ ಕಾಡುತ್ತಿದ್ದರೆ, ನಿರ್ಲಕ್ಷ್ಯ ಮಾಡಲು ಹೋಗಬೇಡಿ. ಯಾಕೆಂದ್ರೆ ಇವೆಲ್ಲಾ ಗಂಭೀರ ಕಾಯಿಲೆಯ ರೋಗಲಕ್ಷಣಗಳು ಆಗಿರುವ ಸಾಧ್ಯತೆ ಹೆಚ್ಚಿರುತ್ತದೆ

ಕುತ್ತಿಗೆಯ ಹಿಂದಿನ ಭಾಗದಲ್ಲಿ ಹಿಡಿದುಕೊಂಡಂತೆ ಆಗುವುದು, ವಿಪರೀತವಾಗಿ ನೋವು ಕಾಣಿಸಿಕೊಳ್ಳುವುದು, ಇದರ ಜೊತೆಗೆ ಆಗಾಗ ಬೆನ್ನು ನೋವು ಬರುವುದು ಇವೆಲ್ಲಾ ಇಂದಿನ ದಿನಗಳಲ್ಲಿ ಕಾಮನ್ ಆಗಿಬಿಟ್ಟಿದೆ ಇದಕ್ಕೆಲ್ಲಾ ಕಾರಣಗಳನ್ನು ನೋಡುವುದಾದರೆ ಕಚೇರಿಯಲ್ಲಿ ದೀರ್ಘಕಾಲದವರೆಗೆ ಕುಳಿತುಕೊಂಡು ಕೆಲಸ ಮಾಡುವುದು, ಗಂಟೆಗಟ್ಟಲೆ ಕುತ್ತಿಗೆ ಬಗ್ಗಿಸಿ ಕೊಂಡು ಮೊಬೈಲ್ ನೋಡುವುದು, ಭಾರವಾದ ವಸ್ತುಗಳನ್ನು ಎತ್ತುವುದು ಅಥವಾ ಮಲಗಿಕೊಳ್ಳುವಾಗ ಸರಿಯಾಗಿ ತಲೆಗೆ ದಿಂಬು ಇಟ್ಟುಕೊಳ್ಳದಿದ್ದರೆ, ಕುತ್ತಿಗೆಯ ಭಾಗ ಹಾಗೂ ಬೆನ್ನು ಹುರಿಯ ಕಡೆಗಳಲ್ಲಿ ಒಂದು ರೀತಿಯ ನೋವು ಮತ್ತು ಸೆಳೆತ ಕಾಣಿಸಿಕೊಳ್ಳಲು ಶುರುವಾಗುತ್ತದೆ!

ಕೆಲವರಿಗೆ ಇದು ತಾತ್ಕಾಲಿಕವಾಗಿ ಕಂಡು ಬಂದರೆ ಇನ್ನು ಕೆಲವರಿಗೆ ದೀರ್ಘಕಾಲದವರೆಗೂ ಕಾಡುತ್ತಲೇ ಇರುತ್ತದೆ. ಆದರೆ ನಿಮಗೆ ಗೊತ್ತಿರಲಿ ಕೆಲವೊಮ್ಮೆ ಈ ನೋವು ಗಂಭೀರ ಕಾಯಿಲೆಯ, ರೋಗ ಲಕ್ಷಣದ ಸಂಕೇತವೂ ಕೂಡ ಆಗಿರುವ ಸಾಧ್ಯತೆ ಹೆಚ್ಚಿರುತ್ತದೆ. ಒಂದು ವೇಳೆ ಈ ನೋವಿನ ರೋಗಲಕ್ಷಣಗಳು ಹಾಗೆಯೇ ಮುಂದುವರಿದರೆ ವಿಶ್ರಾಂತಿ ಪಡೆದ ನಂತರವೂ ಹೋಗದಿದ್ದರೆ ಅಥವಾ ದೈನಂದಿನ ಕೆಲಸಗಳ ಮೇಲೆ ಪರಿಣಾಮ ಬೀರಲು ಪ್ರಾರಂಭಿಸಿದರೆ, ಅದನ್ನು ನಿರ್ಲಕ್ಷಿಸುವುದು ಅಪಾಯಕಾರಿ ಎನ್ನುತ್ತಾರೆ ತಜ್ಞರು

**ಯಾರಲ್ಲಿ ಈ ಸಮಸ್ಯೆ ಹೆಚ್ಚಿರುತ್ತದೆ :** ಒಂದು ವೇಳೆ ಕುತ್ತಿಗೆಯ ಭಾಗದಲ್ಲಿ ಆಗಾಗ್ಗೆ ಬಿಗಿತ ಮತ್ತು ನೋವು ಕಾಣಿಸಿಕೊಳ್ಳುತ್ತಿದ್ದರೆ ಅದರಲ್ಲೂ ಮುಖ್ಯವಾಗಿ ಬೆಳಗ್ಗಿನ ಸಮಯದಲ್ಲಿ ಹೆಚ್ಚು ಈ ಸಮಸ್ಯೆ ಕಾಣಿಸಿಕೊಳ್ಳುತ್ತಿದ್ದರೆ, ಅದು ಸರ್ವೈಕಲ್ ಸ್ಪಾಂಡಿಲೈಟಿಸ್ ಸಮಸ್ಯೆ ಆಗಿರಬಹುದು ಎನ್ನುತ್ತಾರೆ ಅರೋಗ್ಯ ತಜ್ಞರು. ಇದರಲ್ಲಿ ಕುತ್ತಿಗೆಯ ಹತ್ತಿರವಿರುವ ಮೂಳೆಗಳು ಮತ್ತು ಸುತ್ತ ಮುತ್ತಲಿನ ನರಗಳು ಒತ್ತಡಕ್ಕೊಳಗಾಗುತ್ತವೆ. ಕೆಲವೊಮ್ಮೆ ಈ ಸಮಸ್ಯೆಯಿಂದ ಕೈಗಳಲ್ಲಿ ಜುಮ್ಮೆನಿಸುವಿಕೆ ಅಥವಾ ಮರಗಟ್ಟು ವಿಕೆಯಂತಹ ಸಮಸ್ಯೆಗಳು ಕೂಡ ಕಾರಣವಾಗುತ್ತದೆ. ಈ ಸಮಸ್ಯೆ ವಿಶೇಷವಾಗಿ ಕಂಪ್ಯೂಟರ್‌ನಲ್ಲಿ ದೀರ್ಘಕಾಲ ಕೆಲಸ ಮಾಡುವ ವರಲ್ಲಿ ಅಥವಾ ಕುತ್ತಿಗೆ ಬಗ್ಗಿಸಿ ಮೊಬೈಲ್ ನೋಡುವವರಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆಯಂತೆ





**ಈ ಬಗ್ಗೆ ವೈದ್ಯರು ಏನು ಹೇಳುತ್ತಾರೆ?** ದೆಹಲಿಯ ಎಲ್‌ಎನ್‌ಜೆಪಿ ಆಸ್ಪತ್ರೆಯ ಮೂಳೆಚಿಕಿತ್ಸಾ ವಿಭಾಗದ ಮಾಜಿ ವೈದ್ಯ ರೋಹನ್ ಕೃಷ್ಣ ಅವರು ಹೇಳುವ ಪ್ರಕಾರ, ಸರ್ವಿಕಲ್ ಸ್ಪಾಂಡಿ ಲೈಟಿಸ್ ಆರೋಗ್ಯ ಸಮಸ್ಯೆಗಳು ಕಾಣಿಸಿ ಕೊಂಡಾಗ, ಕುತ್ತಿಗೆಯ ಮೂಳೆಗಳು ಮತ್ತು ಡಿಸ್ಕ್ ನಡುವಿನ ಅಂತರ ಕಡಿಮೆ ಆಗುವ ಸಾಧ್ಯತೆಗಳಿರುತ್ತವೆಯಂತೆ ಅಲ್ಲದೆ ಇಂತಹ ಆರೋಗ್ಯ ಸಮಸ್ಯೆಗಳು ಕಾಣಿಸಿ ಕೊಂಡಾಗ, ಬೆನ್ನುಹುರಿಯ ಮೇಲೆ ಒತ್ತಡ ಉಂಟಾಗಬಹುದು, ಇದ ರಿಂದಾಗಿ ಹಿಂಭಾಗದಿಂದ ಕುತ್ತಿಗೆಯವರೆಗೆ ನೋವು ಕಾಣಿಸಿ ಕೊಳ್ಳಬಹು ದಂತೆ

**ಹೆಲ್ತ್‌ಲೈನ್ ವರದಿಯ ಪ್ರಕಾರ:** ಹೆಲ್ತ್‌ಲೈನ್ ಪ್ರಕಾರ, ನಮ್ಮ ಬೆನ್ನುಮೂಳೆಯು ಕುಶನ್ ತರಹದ ಡಿಸ್ಕ್‌ಗಳನ್ನು ಹೊಂದಿದ್ದು ಅದು ಆಘಾತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಆದರೆ ಕೆಲವೊಮ್ಮೆ ಈ ಡಿಸ್ಕ್‌ಗಳು ಸ್ಥಳದಿಂದ ಜಾರಿ ಹೋಗುತ್ತವೆ, ಇದನ್ನು ಸ್ಲಿಪ್ ಡಿಸ್ಕ್ ಎಂದು ಕರೆಯಲಾಗುತ್ತದೆ. ಇದು ಬೆನ್ನುಮೂಳೆಯ ನರಗಳನ್ನು ಸಂಕುಚಿತಗೊಳಿಸಬಹುದು, ಅಲ್ಲದೆ ಕೆಳಬೆನ್ನು ಅಥವಾ ಕುತ್ತಿಗೆಯಲ್ಲಿ ತೀವ್ರ ನೋವನ್ನು ಉಂಟುಮಾಡುತ್ತದೆ. ಇದರೊಂದಿಗೆ, ಕೈಗಳು ಅಥವಾ ಪಾದಗಳಲ್ಲಿ ದೌರ್ಬಲ್ಯ ಮರಗಟ್ಟುವಿಕೆ ಅಥವಾ ಉರಿಯೂತದಂತಹ ಸಮಸ್ಯೆಗಳು ಕೂಡ ಕಾಣಿಸಿಕೊಳ್ಳಬಹುದು

**ಕಿಡ್ನಿಗಳಲ್ಲಿ ಸಮಸ್ಯೆಗಳು ಕಾಣಿಸಿಕೊಂಡಾಗ ಕೂಡ ಹೀಗಾಗುತ್ತದೆ :** ಕೆಲವೊಮ್ಮೆ ಕಿಡ್ನಿಗಳಲ್ಲಿ ಸಮಸ್ಯೆಗಳು ಕಾಣಿಸಿ ಕೊಂಡಾಗ ಕೂಡ, ವಿಪರೀತವಾಗಿ ಬೆನ್ನುನೋವಿನ ಸಮಸ್ಯೆ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆಯಂತೆ ಅದರಲ್ಲೂ ಮೂತ್ರ ವಿಸರ್ಜನೆಯ ಸಮಯದಲ್ಲಿ ವಿಪರೀತ ನೋವು ಉರಿಯುತ ಕಾಣಿಸಿಕೊಳ್ಳುತ್ತಿದ್ದರೆ, ಪದೇ ಪದೇ ಮೂತ್ರ ಬರುತ್ತಿದ್ದರೆ ಅಥವಾ ಮೂತ್ರದಲ್ಲಿ ರಕ್ತ ಕಾಣಿಸಿಕೊಂಡರೆ, ತಕ್ಷಣ ವೈದ್ಯರ ಬಳಿ ಪರೀಕ್ಷಿಸಿಕೊಳ್ಳಿ.

**ಸೋಂಕು ಅಥವಾ ಗೆಡ್ಡೆ:** ಈ ಪ್ರಕರಣಗಳು ಅಪರೂಪ ವಾಗಿದ್ದರೂ, ನೋವು ತುಂಬಾ ತೀವ್ರವಾ ಗಿದ್ದರೆ, ರಾತ್ರಿಯಲ್ಲಿ ಹೆಚ್ಚಾದರೆ, ಜ್ವರದಿಂದ ಕೂಡಿದ್ದರೆ ಹಾಗೂ ಇದ್ದಕ್ಕಿದಂತೆ ತೂಕ ಕೂಡ ಕಡಿಮೆ ಆಗುತ್ತಿದ್ದರೆ ಅದು ಗಂಭೀರ ಸೋಂಕು ಅಥವಾ ಗೆಡ್ಡೆಯ ಸಂಕೇತವಾಗಿರಬಹುದು.

# ಬನ್ನಿ ಬನ್ನಿ ಮಕ್ಕಳೆ..



● ವಿ.ಎಂ.ಎಸ್.ಗೋಪಿ
• ಉದಯವಾಹಿನಿ, ವಿಶೇಷ

ಕವನ

ಬನ್ನಿ ಬನ್ನಿ ಮಕ್ಕಳೆ ಇಲ್ಲಿ
ಆಟವ ಆಡೋಣ ಇಲ್ಲಿ
ಮರಗಿಡಗಳು ಎಲ್ಲಿ
ಶಾಲೆ ಸುತ್ತಮುತ್ತ ಖಾಲಿ
ತನ್ನಿರಿ ತನ್ನಿರಿ ಬೀಜವನ್ನು
ವಿಧ ವಿಧ ಬೀಜವ ಚೆಲ್ಲೋಣ
ಹಸಿರು ತೋಟ ಮಾಡೋಣ
ಬೀಜವ ಒಡೆದು ಸಸಿ ಆಯಿತ್ತು
ಸಸಿ ಗಿಡವಾಗಿ ಮರವಾಯಿತ್ತು
ಮರ ಗಿಡಗಳಿಂದಲೇ ತರಕಾರಿ ಹಣ್ಣುಗಳು
ಗಿಡ ಮರಗಳಿಂದಲೇ ಗಾಳಿ ನೆರಳು
ಮರ ಗಿಡಗಳಿಂದಲೇ ಮಳೆ ಬೆಳೆ ಎಲ್ಲಾ
ಗಿಡ ಮರಗಳು ನೋಡುತ್ತ
ವಿಧ ವಿಧ ಹಣ್ಣುನ್ನು ತಿನ್ನುತ
ಹಾಡುತ ಕುಣಿಯುತ ಸವಿಯೋಣ.



# ವಿಧಾನಸಭಾ ಕ್ಷೇತ್ರದ ಅಭಿವೃದ್ಧಿ-ಎಸ್.ಸುರೇಶ್ ಕುಮಾರ್

• ಉದಯವಾಹಿನಿ, ರಾಜಾಜಿನಗರ

**ವಿಧಾನಸಭಾ ಕ್ಷೇತ್ರ:** ಶ್ರೀರಾಮಮಂದಿರ ವಾರ್ಡ್‌ನ 50ನೇ ಅಡ್ಡರಸ್ತೆಯಲ್ಲಿ ಅಮೃತ್ ನಗರೋತ್ಥನ ಯೋಜನೆಯ ಅಡಿಯಲ್ಲಿ ಮಾದರಿ ಹೈಟೆಕ್ ರಸ್ತೆ ನಿರ್ಮಾಣ ಡಾಂಬರೀಕರಣ ಕಾಮಗಾರಿಗೆ ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರು ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ಜನರ ತೆರಿಗೆ ಸಮರ್ಪಕವಾಗಿ ಬಳಕೆಯಾಗಬೇಕು, ಜನರ ಆಶಯದಂತೆ ಕಾಮಗಾರಿ ಅನುಷ್ಠಾನವಾಗಬೇಕು ಎರಡು ಉದ್ದೇಶಗಳಿಂದ ಪ್ರತಿಯೊಂದು ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದೆ. ಶ್ರೀರಾಮಮಂದಿರ ವಾರ್ಡ್ 50ನೇ ಅಡ್ಡರಸ್ತೆ ಮಾದರಿ ಹೈಟೆಕ್ ರಸ್ತೆಯಾಗಿ ನಿರ್ಮಸಲಾಗುತ್ತಿದೆ. ನವೀನವೀನ



ಉದಯವಾಹಿನಿ ಚಿತ್ರ

ಫುಟ್ ಪಾತ್, ಜನಮಗಿಸುವ ವಿದ್ಯುತ್ ದೀಪಗಳು ಉತ್ತಮ ಡಾಂಬರೀಕರಣ ರಸ್ತೆ ಮಾಡಲಾಗುತ್ತಿದೆ.

ಸಾರ್ವಜನಿಕರ ನಡೆಯಲು ಮತ್ತು ವಾಹನ ಸಂಚಾರಕ್ಕೆ ಅನುಕೂಲ ಹಾಗೂ ಮಳೆ ನೀರಿಗಾಗಿ ಇಂಗು ಗುಂಡಿಗಳು ನಿರ್ಮಿಸಲಾಗಿದೆ. ಯಾವುದೇ ಕಾಮಗಾರಿ ಅನುಷ್ಠಾನವಾದಗ ಜನರ ಸಹಕಾರಬೇಕು, ವಿನಾಕಾರಣ ರಸ್ತೆ ಅಗೆಯುವುದ ರಿಂದ ರಸ್ತೆಗಳು ಹಾಳಾಗುತ್ತದೆ. ನಮ್ಮ ವಾರ್ಡ್, ನಮ್ಮ ರಸ್ತೆ ಎಂಬ ಅಭಿಮಾನ ಬೆಳಸಿಕೊಳ್ಳಬೇಕು, ಸ್ವಚ್ಛ, ಸುಂದರ ರಾಜಾಜಿನಗರ ವಿಧಾನಸಭಾ ಕ್ಷೇತ್ರ ನಿರ್ಮಾಣಕ್ಕೆ ಬನ್ನಿ ಕೈಜೋಡಿಸಿ ಎಂದು ಹೇಳಿದರು.

ರಾಜಾಜಿನಗರ ಮಂಡಲ ಬಿಜೆಪಿ ಅಧ್ಯಕ್ಷರಾದ ಸುದರ್ಶನ್, ಮಾಜಿ ಪಾಲಿಕೆ ಸದಸ್ಯರುಗಳಾದ ಹೆಚ್. ವಿಜಯಕುಮಾರ್, ಶ್ರೀಮತಿ ದೀಪಾ ನಾಗೇಶ್, ಬಿಜೆಪಿ ಮುಖಂಡರುಗಳಾದ ಕೇಶವಮೂರ್ತಿ, ಗಿರೀಶ್ ಗೌಡ, ಯಶಸ್ ನಾಯಕ್, ಮಂಜುನಾಥ್, ವಿಶ್ವನಾಥ್, ವೆಂಕಟೇಶ್ ಬಾಬು, ಅಮಿತ್ ಜೈನ್, ಮೋಹನ್ ರಾಜು, ಧರ್ಮಣ್ಣ, ಪುಟ್ಟ, ಉಮೇಶ್, ರವರು ಬಿಬಿಎಂಪಿ ಇಂಜನಿಯರ್ ಗಳು ಮತ್ತು ಸ್ಥಳೀಯ ನಾಗರಿಕರು ಭಾಗವಹಿಸಿದ್ದರು.

# ನೇಕಾರರ ಒಕ್ಕೂಟದಿಂದ ಜಾತಿ ಗಣತಿ

• ಉದಯವಾಹಿನಿ, ಬೆಂಗಳೂರು


ಜಾತಿಸಮೀಕ್ಷೆಯಲ್ಲಿ ನೇಕಾರರ ಜನ ಸಂಖ್ಯೆಯನ್ನು ಕಡಿಮೆ ತೋರಿಸ ಲಾಗಿದೆ. ನಿಖರ ಮಾಹಿತಿಗಾಗಿ ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಒಕ್ಕೂಟದಿಂದಲೇ ಸಮೀಕ್ಷೆ ನಡೆಸಲಾಗುತ್ತಿದೆ' ಎಂದು ಒಕ್ಕೂಟದ ಅಧ್ಯಕ್ಷ ಬಿ.ಎಸ್. ಸೋಮಶೇಖರ್ ತಿಳಿಸಿದರು.ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಅವರು, 'ನಾವು



ಜಾತಿಗಣತಿಯನ್ನು ಸ್ವಾಗತಿಸುತ್ತೇವೆ. ಆದರೆ, ಗಣತಿ ಸಮರ್ಪಕವಾಗಿ ನಡೆದಿಲ್ಲ. ನಮ್ಮ ಪ್ರಕಾರ ಸಮುದಾಯದ ಜನಸಂಖ್ಯೆ 40 ಲಕ್ಷದಿಂದ 45 ಲಕ್ಷ ಇದೆ. ಆದರೆ, ಆಯೋಗದ ವರದಿ ಕೇವಲ 9.30 ಲಕ್ಷ ಇದೆ' ಎಂದು ಹೇಳಿದರು. 'ನೇಕಾರರ ಸಮುದಾಯದ ಮಠಾಧೀಶರು, ರಾಜಕೀಯ ಮುಖಂಡರು, ಸಮಾಜದ ಗಣ್ಯರು ಸೇರಿ ಐದಾರು ಸಭೆಗಳನ್ನು ನಡೆಸಲಾಗಿದೆ. ಮರುಸಮೀಕ್ಷೆಗೆ ರಾಜ್ಯ ಸರ್ಕಾರವನ್ನು ಒತ್ತಾಯಿಸಲಾಗಿದೆ' ಎಂದು ಹೇಳಿದರು. ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಒಕ್ಕೂಟ ಎಂಬ ಆಯಪ್ ತಯಾರಿಸಲಾಗಿದೆ. ಅದರಲ್ಲಿ ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಮಾಹಿತಿ ಭರ್ತಿ ಮಾಡಬಹುದು. ಅಲ್ಲದೇ 224 ವಿಧಾನಸಭಾ ಕ್ಷೇತ್ರಗಳಲ್ಲೂ ಒಕ್ಕೂಟದಿಂದ ನೇಮಕಗೊಂಡವರು ನೇಕಾರರ ಮನೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ.

# ಪುರುಷರಲ್ಲಿ ಹಿಮೋಗ್ಲೋಬಿನ್ ಮಟ್ಟ ಎಷ್ಟಿರಬೇಕು?

ಹಿಮೋಗ್ಲೋಬಿನ್ ಎನ್ನುವುದು ಮನುಷ್ಯನ ರಕ್ತದದಲ್ಲಿ ಕಂಡುಬರುವ ಒಂದು ಪ್ರಮುಖ ಪ್ರೋಟೀನ್ ಅಂಶ. ಇದು ನಮ್ಮ ದೇಹದಲ್ಲಿ ಹರಿಯುವ ಕೆಂಪುರಕ್ತದ ಮೂಲಕ ಅಂಗಾಂಶ ಗಳಿಗೆ ಆಮ್ಲಜನಕ ಪೂರೈಕೆ ಮಾಡುವ ಕೆಲಸ ಮಾಡುವುದು. ಒಂದು ವೇಳೆ ಇದರಲ್ಲಿ ಸಮಸ್ಯೆಗಳು ಕಾಣಿಸಿಕೊಂಡರೆ ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ನಮ್ಮ ದೇಹದಲ್ಲಿ ಹರಿಯುವ ಕೆಂಪು ರಕ್ತಕಣಗಳಲ್ಲಿ ಮುಖ್ಯವಾಗಿ ಹಿಮೋಗ್ಲೋಬಿನ್ ಅಂಶ ಉತ್ತಮ ಪ್ರಮಾಣದಲ್ಲಿ ಕಂಡು ಬರಬೇಕು ಎನ್ನುತ್ತಾರೆ ವೈದ್ಯರು. ಒಂದು ವೇಳೆ ದೇಹದ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗುತ್ತಾ ಹೋದರೆ, ಆಗ



ದೇಹದಲ್ಲಿ ಹರಿಯುವ ಕೆಂಪು ರಕ್ತ ಕಣಗಳು ಕಡಿಮೆಯಾಗಿದೆ ಎಂಬುದನ್ನು ನಾವು ಮೊದಲಿಗೆ ಅರ್ಥ ಮಾಡಿಕೊಳ್ಳಬೇಕು. ಹಾಗಾದ್ರೆ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗುವುದು ಯಾಕೆ ಎನ್ನುವುದನ್ನು ನಾವು ನೋಡುವುದಾದರೆ ದೇಹದಲ್ಲಿ ಕಬ್ಬಿಣಾಂಶದ ಕೊರತೆಯಾದಾಗ ಈ ಪ್ರಮುಖ ಪೌಷ್ಟಿಕಾಂಶದ ಕೊರತೆ ಕಾಣಿಸಿಕೊಳ್ಳುತ್ತದೆ.

**ಹಾಗಾದ್ರೆ ಹಿಮೋಗ್ಲೋಬಿನ್ ಎಂದರೇನು:** ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಹಿಮೋಗ್ಲೋಬಿನ್ ಎನ್ನುವುದು ಕೆಂಪು ರಕ್ತ ಕಣದಲ್ಲಿ ಇರುವಂತಹ ಪ್ರೋಟೀನ್ ಎನ್ನುವ ಆರೋಗ್ಯಕಾರಿ ಅಂಶವು, ದೇಹದ ಎಲ್ಲಾ ನರನಾಡಿಗಳಿಗೆ ಆಮ್ಲಜನಕ ಪೂರೈಕೆ ಮಾಡಲು ನೆರವಾ ಗುತ್ತದೆ. ಒಂದು ವೇಳೆ ದೇಹದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗಿ ಬಿಟ್ಟರೆ ತುಂಬಾನೇ ಬಳಲಿಕೆ, ಸುಸ್ತು ಆಯಾಸ ಹಾಗೂ ನಿಶ್ಯಕ್ತಿ ಮತ್ತು ಉಸಿರಾಟದಂತಹ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಲು ಶುರುವಾ ಗುತ್ತದೆ.

**ಪುರುಷರಲ್ಲಿ ಹಿಮೋಗ್ಲೋಬಿನ್ ಮಟ್ಟ ಎಷ್ಟಿರಬೇಕು** ರಾಷ್ಟ್ರೀಯ ಜೈವಿಕ ತಂತ್ರಜ್ಞಾನ ಮಾಹಿತಿ ಕೇಂದ್ರದ ವರದಿಯ ಪ್ರಕಾರ, ವಯಸ್ಕರಾದ ಪುರುಷರಲ್ಲಿ ಹಿಮೋಗ್ಲೋಬಿನ್ ಮಟ್ಟವು 14 ರಿಂದ 18 ಮಿಗ್ರಾಂ/ಡಿಎಲ್ ನಡುವೆ ಇರಬೇಕು.ಒಂದು ವೇಳೆ ದೇಹದಲ್ಲಿ ಹಿಮೋ



ಗ್ಲೋಬಿನ್ ಮಟ್ಟ ಇದಕ್ಕಿಂತ ಕಡಿಮೆಯಿದ್ದರೆ, ಇನ್ನಿತರ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ ಎನ್ನುತ್ತಾರೆ ಆರೋಗ್ಯ ತಜ್ಞರು

**ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗಲು ಕಾರಣಗಳು :** ಒಂದು ವೇಳೆ ದೇಹದಲ್ಲಿ ಕಬ್ಬಿಣಾಂಶದ ಕೊರತೆ ಕಾಣಿಸಿಕೊಂಡಾಗ ಅಥವಾ ವಿಟಮಿನ್ಸ್ ಗಳಾದ ಬಿ12 ಮತ್ತು ಬಿ9 ನಂತಹ ಪ್ರಮುಖ ಅಂಶಗಳು ದೇಹದಲ್ಲಿ ಕಡಿಮೆ ಆಗುತ್ತಾ ಬರುವುದರಿಂದ ಕೂಡ, ಕೆಂಪು ರಕ್ತದ ಕಣಗಳಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗುವ ಸಾಧ್ಯತೆ ಹೆಚ್ಚಿರುತ್ತದೆಯಂತೆ ಇಲ್ಲಿ ಮುಖ್ಯವಾಗಿ ಗಮನಿಸಬೇಕಾದ ಸಂಗತಿ ಏನೆಂದರೆ ಒಂದು ವೇಳೆ ಈ ಪ್ರಮುಖ ಪೋಷಕಾಂಶದ ಕೊರತೆ ಕಾಣಿಸಿಕೊಂಡರೆ, ಆಕಸ್ಮಾತ್ ದೇಹದಲ್ಲಿ ಆಗಿರುವ ಗಾಯದ ಸಮಸ್ಯೆ ಬೇಗನೇ ವಾಸಿಯಾಗುವುದಿಲ್ಲ,

ಬಾಯಿ ಹುಣ್ಣು ಕಾಣಿಸಿಕೊಳ್ಳಬಹುದು ಅಥವಾ ಕರುಳಿನ ಕ್ಯಾನ್ಸರ್ ನಂತಹ ಮಾರಕ ಕಾಯಿಲೆಗಳು ಕೂಡ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ ಎನ್ನುತ್ತಾರೆ ತಜ್ಞರು. ನಮ್ಮ ದೇಹವು ನಾವು ಸೇವಿಸುವ ಆಹಾರ ಪದಾರ್ಥಗಳಲ್ಲಿ ಸಿಗುವ ಕಬ್ಬಿಣಾಂಶವನ್ನು ಹೀರಿಕೊಳ್ಳುವ ಸಾಮರ್ಥ್ಯ ಕಡಿಮೆಯಾದರೆ, ಹಿಮೋಗ್ಲೋಬಿನ್ ಮಟ್ಟವೂ ಕಡಿಮೆಯಾಗಬಹುದು.

### ರೋಗಲಕ್ಷಣಗಳು ಹೀಗಿರುತ್ತವೆ

**ಒಂದು ವೇಳೆ ದೇಹದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗುತ್ತಾ ಬಂದರೆ, ಅತಿಯಾಗಿ ಆಯಾಸ ಸುಸ್ತು, ಚರ್ಮಕ್ಕೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು, ಪದೇ ಪದೇ ತಲೆತಿರುಗುವಿಕೆಯಂತಹ ರೋಗಲಕ್ಷಣಗಳು ಕಾಣಿಸಿಕೊಳ್ಳುತ್ತದೆ. ಇನ್ನೂ ಆತಂಕಕಾರಿ ವಿಚಾರ ಏನೆಂದರೆ ಇದ್ದಕ್ಕಿದಂತೆ ಉಸಿರಾಟ ದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳುವುದು, ಎದೆ ನೋವು ಬರುವುದು, ಕೈಗಳು ಮತ್ತು ಪಾದಗಳು ತಣ್ಣಗೆ ಆಗುವುದು, ತಲೆನೋವು ಮತ್ತು ಅನಿಯಮಿತ ಹೃದಯ ಬಡಿತ ಕಾಣಿಸಿಕೊಳ್ಳುವುದು ಕೂಡ, ದೇಹ ದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗಿರುವ ಲಕ್ಷಣಗಳನ್ನು ಸೂಚಿಸುತ್ತದೆ.**

# ಪೊಲೀಸ್ ಅಧಿಕಾರಿಗಳ ಅಮಾನತು ರದ್ದುಪಡಿಸಿ: ಸಿ ವಿ ದೇವರಾಜ್

## ಕಾಲ್ತುಳಿತದಲ್ಲಿ ಸಾವನಪ್ಪಿದವರಿಗೆ ತಲಾ ಒಂದು ಕೋಟಿ ರೂ. ಪರಿಹಾರ ನೀಡಿ

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ತಂಡ ಐಪಿಎಲ್ ಕಪ್ ಗೆದ್ದ ಸಂಭ್ರಮಾಚರಣೆ ಕಾರ್ಯಕ್ರಮ ಸಮಯದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಸಮೀಪ ನಡೆದ ಕಾಲ್ತುಳಿತದಲ್ಲಿ ಸಾವನಪ್ಪಿದ ಹನ್ನೊಂದು ಮಂದಿಯ ಕುಟುಂಬಕ್ಕೆ ತಲಾ ಒಂದು ಕೋಟಿ ರೂಪಾಯಿ ಪರಿಹಾರ ನೀಡಬೇಕು. ಘಟನೆಯ ಜವಾಬ್ದಾರಿ ಹಿನ್ನಲೆಯಲ್ಲಿ ಪೊಲೀಸ್ ಆಯುಕ್ತ ಬಿ.ದಯಾನಂದ ಸಹಿತ ಪೊಲೀಸ್ ಅಧಿಕಾರಿಗಳ ಅಮಾನತು ಆದೇಶ ರದ್ದು ಪಡಿಸಬೇಕು. ಸಂತ್ರಸ್ತರ ಕುಟುಂಬ ಸದಸ್ಯರೊಬ್ಬರಿಗೆ ಉದ್ಯೋಗ ನೀಡಬೇಕು ಎಂದು ರಾಜ್ಯ ಒಕ್ಕಲಿಗರ ಒಕ್ಕೂಟದ ಅಧ್ಯಕ್ಷ ಸಿ.ವಿ.ದೇವರಾಜ್ ಒತ್ತಾಯಿಸಿದ್ದಾರೆ.

ಕಾಲ್ತುಳಿತದಲ್ಲಿ ವಿದ್ಯಾರ್ಥಿಗಳು ಯುವಕರೆ ಸಾವನಪ್ಪಿದ್ದು ಅವರ ಕುಟುಂಬಕ್ಕೆ ಆಕಾಶವೆ ಕಳಚಿ ಬಿದ್ದಂತಾಗಿದೆ. ಕುಟುಂಬಕ್ಕೆ ಆಶ್ರಯವಾಗಬೇಕಾಗಿದ್ದ ಮುದ್ದಿನ ಮಕ್ಕಳನ್ನು ಕಳೆದುಕೊಂಡು ಪಾಲಕರ ನೋವು ಎಷ್ಟು ಕೋಟಿ ಕೊಟ್ಟರು ಶಮನ ಮಾಡಲು ಸಾಧ್ಯವಿಲ್ಲ. ಆದರೂ ಸಹ ಆರ್‌ಸಿಬಿ ತಂಡದ ಮಾಲಿಕರು ಮೃತ್ತರ



ಐಪಿಎಲ್ ಸಂಭ್ರಮಾಚರಣೆ

ಕುಟುಂಬಕ್ಕೆ ತಲಾ ಒಂದು ಕೋಟಿ ರೂಪಾಯಿ ಪರಿಹಾರ ನೀಡಬೇಕು ಹಾಗೂ ಕುಟುಂಬ ಸದಸ್ಯರೊಬ್ಬರಿಗೆ ಉದ್ಯೋಗ ನೀಡಬೇಕು ಎಂದು ಸಿ.ವಿ.ದೇವರಾಜ್ ಒತ್ತಾಯಿಸಿದ್ದಾರೆ. ಯಾವುದೇ ಪೂರ್ವ ತಯಾರಿ ಮಾಡದೆ ತರಾತುರಿಯಲ್ಲಿ ಸಂಭ್ರಮಾಚರಣೆ ಮಾಡಿರುವುದೇ ಈ ದುರಂತಕ್ಕೆ ಕಾರಣ ಎಂದು ಸಿ.ವಿ.ದೇವರಾಜ್ ಅಸಮಧಾನ ವ್ಯಕ್ತಪಡಿಸಿದ್ದಾರೆ. ಪೊಲೀಸ್ ಅಧಿಕಾರಿಗಳ ಸಲಹೆಯನ್ನು ನಿರ್ಲಕ್ಷಿಸಿ ಸಂಭ್ರಮಾಚರಣೆ ಮಾಡಿ ದುರಂತಕ್ಕೆ ಕಾರಣರಾದ ರಾಜಕೀಯ ನಾಯಕರು ತಮ್ಮ ತಪ್ಪು ಮರೆಮಾಚಲು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ, ಹೆಚ್ಚುವರಿ ಪೊಲೀಸ್ ಆಯುಕ್ತ ವಿಕಾಸ್ ಕುಮಾರ್ ವಿಕಾಸ್, ಕೇಂದ್ರ ವಿಭಾಗದ ಡಿಸಿಪಿ ಎಚ್.ಟಿ.ಶೇಖರ್, ಎಸಿಪಿ ಸಿ.ಬಾಲಕೃಷ್ಣ, ಇನ್ಸ್ಪೆಕ್ಟರ್ ಎ.ಕೆ.ಗಿರೀಶ್ ಸಹಿತ ಅಲ್ಲಿನ ಎಲ್ಲಾ ಸಿಬ್ಬಂದಿಗಳನ್ನು ಅಮಾನತು ಮಾಡಿರುವುದು ಸಮಾಜಕ್ಕೆ ತಪ್ಪು ಸಂದೇಶ ನೀಡುತ್ತದೆ.

ಕರ್ನಾಟಕದ ಇತಿಹಾಸದಲ್ಲಿಯೇ ಎಡಿಜಿಪಿ ದರ್ಜೆಯ ಪೊಲೀಸ್ ಆಯುಕ್ತರನ್ನು ಅಮಾನತು ಮಾಡಿರುವುದು ಇದೇ ಮೊದಲು. ಸರಕಾರ ಅಮಾನತು ಆದೇಶವನ್ನು ಕೂಡಲೆ ವಾಪಾಸ್ ಪಡೆದು ಅವರನ್ನು ಕರ್ತವ್ಯಕ್ಕೆ ನಿಯೋಜಿಸಬೇಕು ಎಂದು ಸಿ.ವಿ ದೇವರಾಜ್ ಒತ್ತಾಯಿಸಿದ್ದಾರೆ.

ಭವಿಷ್ಯದಲ್ಲಿ ರಾಜ್ಯದ ಯಾವುದೇ ಭಾಗದಲ್ಲಿ ಇಂತಹ ಘಟನೆಗಳು ಪುನರಾವರ್ತನೆಯಾಗದಂತೆ ಸರ್ಕಾರ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಬೇಕು ಎಂದು ಸಿ.ವಿ.ದೇವರಾಜ್ ಸಲಹೆ ನೀಡಿದ್ದಾರೆ.

# ಮನೆಕೆಲಸದವರನ್ನು ಕಾರ್ಮಿಕರನ್ನಾಗಿ ಗುರುತಿಸಲು ಆಗ್ರಹ

• ಉದಯವಾಹಿನಿ, ಬೆಂಗಳೂರು

ಮನೆ ಕೆಲಸದವರಿಗೆ ಜೀವನ ಭದ್ರತೆ ಇಲ್ಲ. ಅವರನ್ನು ಮೊದಲು ಕಾರ್ಮಿಕರು ಎಂದು ಗುರುತಿಸಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಗೃಹ ಕಾರ್ಮಿಕರಿಗಾಗಿ ರಾಷ್ಟ್ರೀಯ ಕಾನೂನು ರೂಪಿಸಬೇಕು ಎಂದು



ಕರ್ನಾಟಕ ರಾಜ್ಯ ಮನೆಕೆಲಸ ಕಾರ್ಮಿಕರ ಯೂನಿಯನ್‌ಗಳ ಒಕ್ಕೂಟ ಆಗ್ರಹಿಸಿದೆ. ಕಾನೂನು ರೂಪಿಸುವಾಗ ಪ್ರಮುಖ ಅಂಶಗಳನ್ನು ಗಮನಿಸಬೇಕು. ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆಗೆ ನಿಯಮ ರೂಪಿಸಬೇಕು.

ಗೃಹ ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಗೆ ತರಬೇಕು. ಭವಿಷ್ಯನಿಧಿ ಮತ್ತು ಪಿಂಚಣಿ ನೀಡಲು ಕ್ರಮವಹಿಸಬೇಕು ಎಂದು ಒಕ್ಕೂಟದ ಸದಸ್ಯರಾದ ಕರಿಬಸಪ್ಪ, ಸಿಸ್ಟರ್ ಸಹಾಯ ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು. ಕನಿಷ್ಠ ಕೂಲಿ ಜಾರಿ ಮಾಡಬೇಕು. ಮಾಲೀಕರು ಜಾತಿ ತಾರತಮ್ಯ ಮಾಡುವುದನ್ನು ತಡೆಗಟ್ಟಬೇಕು. ಕಾರ್ಮಿಕರು ಎಂದು ನೋಂದಣಿ ಮಾಡಿಕೊಳ್ಳಬೇಕು ಮತ್ತು ಅವರಿಗೆ ಗುರುತಿನ ಚೀಟಿ ನೀಡಬೇಕು. ವಾರ್ಷಿಕವಾಗಿ ಬೋನಸ್ ನೀಡಬೇಕು. ವಾರದ ರಜೆ ನೀಡಬೇಕು. ವಲಸೆ ಕಾರ್ಮಿಕರನ್ನು ಗುರುತಿಸಬೇಕು. ಅನಾರೋಗ್ಯ ಅಥವಾ ಸಾಂದರ್ಭಿಕ ರಜೆ ಬೇಕಾದ ಸಂದರ್ಭದಲ್ಲಿ ವೇತನ ಸಹಿತ ರಜೆ ನೀಡಬೇಕು ಎಂದು ಒತ್ತಾಯಿಸಿದರು.

# ತಂಬಾಕು ಸೇವನೆಯಿಂದ ಪ್ರತಿ ವರ್ಷ 60 ಲಕ್ಷ ಸಾವು

## ತಂಬಾಕು ಜಾಗೃತಿ ಕಾರ್ಯಕ್ರಮದಲ್ಲಿ ಡಾ.ಶ್ರೀನಿವಾಸ ಹೇಳಿಕೆ

• ಉದಯವಾಹಿನಿ, ಚಿತ್ರದುರ್ಗ

ತಂಬಾಕು ಸೇವನೆಯಿಂದ ವಿಶ್ವದಾದ್ಯಂತ ಪ್ರತಿ ವರ್ಷ 60 ಲಕ್ಷಕ್ಕಿಂತ ಹೆಚ್ಚು ಮಂದಿ ಸಾವನ್ನಪ್ಪುತ್ತಿದ್ದಾರೆಂದು ಎಂದು ಡಾ. ಶ್ರೀನಿವಾಸ ಹೇಳಿದರು. ಜೆ.ಆರ್.ಹಳ್ಳಿ ಸ್ನಾತಕೋತ್ತರ ಕೇಂದ್ರದ ಜ್ಞಾನ ಗಂಗೋತ್ರಿಯ ಆವರಣದಲ್ಲಿ ಜಿಲ್ಲಾಡಳಿತ, ಜಿ. ಪಂ., ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ವಿಜ್ಞ, ಕ್ಷಯರೋಗ ನಿಯಂತ್ರಣ ಕಛೇರಿ, ಜಿಲ್ಲಾ ರಕ್ತ ನಿಧಿ ಮತ್ತು ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2 ಇವರ ಸಹಯೋಗದೊಂದಿಗೆ ಆಯೋಜಿಸಲಾದ ಮಲೇರಿಯಾ ಮಾಸಚರಣೆ, ಕೋವಿಡ್-19 ಬಗ್ಗೆ ಅರಿವು, ರಕ್ತದಾನ ಶಿಬಿರ, ತಂಬಾಕು ನಿಯಂತ್ರಣ ಕುರಿತು, ಜಾಗೃತಿ, ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

**ಮಲೇರಿಯಾ ನಿಯಂತ್ರಣ ಸಾಧ್ಯ**

ಡಾ. ನಂದಿನಿಯವರು ಮಾತನಾಡಿ ಮಲೇರಿಯ ನಿಯಂತ್ರಣದಲ್ಲಿ ಸಮುದಾಯದ ಸಹಭಾಗಿತ್ವ ಅತೀ ಮುಖ್ಯವಾಗಿರುತ್ತದೆಯೆಂದು ತಿಳಿಸಿದರು. ಯಾವುದೇ ಜ್ವರ ಮಲೇರಿಯ ಆಗಿರಬಹುದು ಪತ್ತೆ ಮಾಡುವುದರಿಂದ ಸಂಪೂರ್ಣ ಚಿಕಿತ್ಸೆಯಿಂದ ತಡೆಯಬಹುದು. ಸೊಳ್ಳೆಗಳ ನಿಯಂತ್ರಣ ಕ್ರಮಗಳ, ಜೈವಿಕ ಪರಿಸರ ನಿಯಂತ್ರಣ ಕ್ರಮ ಕೈಗೊಳ್ಳುವುದು ಸ್ವಯಂರಕ್ಷಣಾ ವಿಧಾನಗಳನ್ನು ಬಳಸುವುದು


ಉದಯವಾಹಿನಿ ಚಿತ್ರ

ಪರಿಸರ ನೈರ್ಮಲ್ಯ ಕಾಪಾಡುವುದು ಗ್ರಾಮ ಪಂಚಾಯಿತಿ ಸದಸ್ಯರು, ಸ್ಥಳೀಯ ಮುಖಂಡರು ಆರೋಗ್ಯ ಕಾರ್ಯಕರ್ತರೊಡನೆ ಸಹಕರಿಸಿ, ಮಲೇರಿಯಾ ನಿಯಂತ್ರಣ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಮಲೇರಿಯಾ ನಿಯಂತ್ರಣ ಖಂಡಿತ ಸಾಧ್ಯವೆಂದು

> ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕ, ತಂಬಾಕಿನಲ್ಲಿರುವ ನಿಕೋಟಿನ್ ಎಂಬ ಮಾದಕ ವಸ್ತು ವ್ಯಸನವಾಗುತ್ತದೆ. ಎಂಬ ಕಟು ಸತ್ಯ ಅರ್ಥ ಮಾಡಿಕೊಳ್ಳಬೇಕು. ಹದಿ ಹರೆಯದವರು ತಂಬಾಕು ಉತ್ಪನ್ನಗಳನ್ನು ಸೇವನೆ ಮಾಡಲು ನೇರ, ಪರೋಕ್ಷವಾಗಿ ಜಾಹಿರಾತುಗಳು ಉತ್ತೇಜನ ನೀಡುತ್ತವೆ. ಸಾಮಾನ್ಯವಾಗಿ 18 ವಯಸ್ಸಿನಿಂದ ಯುವಕರು ತಂಬಾಕು ಉತ್ಪನ್ನ ಸೇವನೆಯನ್ನು ಆರಂಭಿಸುವುದಾಗಿ ಅಂದಾಜಿಸಲಾಗಿದೆ. ಧೂಮಪಾನ ಮಾಡುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮಕ ಬೀರುವುದರೊಂದಿಗೆ ಕ್ಯಾನ್ಸರ್ , ಹೃದಯ ಶ್ವಾಸ ಸಂಬಂಧಿ ಇತ್ಯಾದಿ ಕಾಯಿಲೆಗಳು ಬರುತ್ತವೆ
> - ಡಾ.ಶ್ರೀನಿವಾಸ್

ತಿಳಿಸಿದರು. ಡಾ. ರವೀಂದ್ರಎಸ್ ಪಿ ಇವರು ಮಾತನಾಡಿ, ಯಾವುದೇ ಜ್ವರ ಮತ್ತಿತರೆ ಖಾಯಿಲೆಗಳನ್ನು ಶೀಘ್ರದಲ್ಲಿ ಪತ್ತೆ ಮಾಡಿ ನಿಯಂತ್ರಣ ಮಾಡಿ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ಹಾಗೂ ಉತ್ತಮ ಆಹಾರ ಸೇವನೆ, ವ್ಯಾಯಾಮಗಳಿಂದ ಆರೋಗ್ಯವನ್ನು ಕಾಪಾಡಿಕೊಳ್ಳಬಹುದೆಂದು ತಿಳಿಸಿದರು. ಕೋವಿಡ್ -19 ನಿಯಂತ್ರಣಕ್ಕಾಗಿ ಮಾಸ್ಕ್, ಕೈಗಳನ್ನು ಶುಚಿಯಾಗಿಟ್ಟುಕೊಳ್ಳುವುದು ಸ್ಯಾನಿಟೈಜರ್ ಬಳಸುವುದು ಇದರಿಂದಾಗಿ ನಿಯಂತ್ರಣ ಮಾಡಬಹುದೆಂದು ತಿಳಿಸಿದರು. ಕನ್ನಡ ಅಧ್ಯಯನ ವಿಭಾಗದ ಡಾ.ವಿಜಯಕುಮಾರ್. ಹೆಚ್.ಜೆ ಅಧ್ಯಕ್ಷೀಯ ಭಾಷಣದಲ್ಲಿ ಸ್ನಾತಕೋತ್ತರ ಕೇಂದ್ರದ ಎಲ್ಲಾ ವಿದ್ಯಾರ್ಥಿಗಳಿಗೆ, ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಗಮನ ಹರಿಸಬೇಕು. ಕುಟುಂಬದ ಸದಸ್ಯರ ಆರೋಗ್ಯ ಕಾಪಾಡುವಲ್ಲಿ ಮಹಿಳೆಯರಿಗೆ ಹೆಚ್ಚಿನ ಜವಾಬ್ದಾರಿಯು ಇರುತ್ತದೆ ತಿಳಿಸಿದರು.

ಕಾರ್ಯಕ್ರಮದಲ್ಲಿ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು. ಸ್ನಾತಕೋತ್ತರ ಕೇಂದ್ರದ ಎಲ್ಲಾ ಅಧ್ಯಯನ ವಿಭಾಗದ ಎನ್ಎಸ್ಎಸ್ ವಿದ್ಯಾರ್ಥಿ, ವಿದ್ಯಾರ್ಥಿನಿಯರು ರಕ್ತದಾನವನ್ನು ಮಾಡಿದರು. ರಸಾಯನಶಾಸ್ತ್ರ ಅಧ್ಯಯನ ವಿಭಾಗದ ಡಾ.ರಾಜೇಂದ್ರ ಪ್ರಸಾದ್, ಜಿ ಆರ್ ಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ, ಡಾಗೀತಾಂಜಲಿ, ಎನ್ಎಸ್ಎಸ್ ಕಾರ್ಯಕ್ರಮಾಧಿಕಾರಿಗಳಾದ ನಿವೇದಿತ.ಬಿ.ಟಿ, ಡಾ.ಸುಂದರಂ.ಎಂ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

# ಕೂಲೂರು ಮಲ್ಲಪ್ಪ ಸ್ಮಾರಕಕ್ಕೆ ಜಮೀನು ಮಂಜೂರು: ಸಚಿವ ದರ್ಶನಾಪುರಗೆ ಸನ್ಮಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಶಹಾಪುರ

ಸ್ವಾತಂತ್ರ್ಯ ಹೋರಾಟಗಾರರು, ಕಲ್ಯಾಣ ಕರ್ನಾಟಕ ಗಾಂಧಿ ದಿ. ಕೂಲೂರು ಮಲ್ಲಪ್ಪ ಸ್ಮಾರಕ ನಿರ್ಮಾಣಕ್ಕಾಗಿ ಯಾದಗಿರಿ ನಗರದಲ್ಲಿ 1 ಎಕರೆ 27 ಗುಂಟೆ ಅಂದಾಜು 4 ಕೋಟಿ 66 ಲಕ್ಷ ಮೊತ್ತದ ಜಮೀನು ಉಚಿತವಾಗಿ ಮಂಜೂರು ಮಾಡಿ ಸುವಲ್ಲಿ ಶ್ರಮಿಸಿದ ಸಣ್ಣ ಕೈಗಾರಿಕೆ ಸಚಿವರು, ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣ ಬಸಪ್ಪ ಗೌಡ ದರ್ಶನಾಪೂರ ರವರಿಗೆ ಕೂಲೂರು ಮಲ್ಲಪ್ಪ ಸ್ಮಾರಕ ಟ್ರಸ್ಟ್, ಅವರ ಅಭಿಮಾನಿಗಳ ಬಳಗದ ವತಿಯಿಂದ ಶಹಾಪುರ ನಗರದ ಪ್ರವಾಸಿ ಮಂದಿರದಲ್ಲಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ ರವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ ಮಾತನಾಡಿದರು ಕೂಲೂರು ಮಲ್ಲಪ್ಪನವರು ನಮ್ಮ ಭಾಗದ ಹಿರಿಯ ಸ್ವಾತಂತ್ರ್ಯ ಹೋರಾಟಗಾರರು ಅವರು ಕಲ್ಯಾಣ ಕರ್ನಾಟಕದ ಗಾಂಧಿಯಂದೆ ಹೆಸರನ್ನು ಹೊಂದಿದ್ದರು ಅವರ ಸ್ಮಾರಕ ನಿರ್ಮಾಣಕ್ಕೆ ಸಿಎಂ ಸಿದ್ದರಾಮಯ್ಯ ನವರನ್ನು ಸಂಬಂಧಿಸಿದ ಸಚಿವರನ್ನು ಭೇಟಿಯಾಗಿ ಮನವಿ ಪತ್ರ ಸಲ್ಲಿಸಿದ್ದೆ ಅವರು ನಮ್ಮ ಭಾಗದ ಸ್ವಾತಂತ್ರ್ಯ ಹೋರಾಟಗಾರರಾಗಿದ್ದು ಉಚಿತವಾಗಿಯೇ ಜಮೀನು ಮಂಜೂರು ಮಾಡುವಂತೆ ಕೋರಿದ್ದೆ ಆ ಕಾರಣ ಉಚಿತವಾಗಿಯೇ ನಮ್ಮ ಸರಕಾರವು ಜಮೀನು ಮಂಜೂರು ಮಾಡಿದೆ ಇದು ನನಗೆ ತುಂಬಾ ಸಂತಸವನ್ನು ಉಂಟು ಮಾಡಿದೆ ಮುಂದಿನ ದಿನಗಳಲ್ಲಿಯೂ ಕೂಡಾ ಅವರ ಸ್ಮಾರಕ ನಿರ್ಮಾಣ ಕಾರ್ಯಕ್ಕೆ ನನ್ನ ಸಂಪೂರ್ಣ ಸಹಕಾರ ಬೆಂಬಲ ಇರುತ್ತದೆ ಎಂದು ಅವರು ತಿಳಿಸಿದರು.

# ಬಾಲಕಾರ್ಮಿಕ ಪದ್ಧತಿ ಸಂಪೂರ್ಣ ನಿರ್ಮೂಲನೆಗೆ ಕ್ರಮ

• ಉದಯವಾಹಿನಿ, ಉಡುಪಿ

ಬಾಲಕಾರ್ಮಿಕ ಪದ್ಧತಿಯು ಸಮಾಜದಲ್ಲಿ ಅನಿಷ್ಠ ಪಿಡುಗಾಗಿದೆ. ಜಿಲ್ಲೆಯಲ್ಲಿ ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದರೊಂದಿಗೆ ಮಕ್ಕಳನ್ನು ಶಿಕ್ಷಣ ವಂತರನ್ನಾಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ ವಿದ್ಯಾಕುಮಾರಿ ಅಧಿಕಾರಿಗಳಿಗೆ ಕರೆ ನೀಡಿದರು. ಅವರು ನಗರದ ಮಣಿಪಾಲ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಬಾಲಕಾರ್ಮಿಕ ಯೋಜನಾ ಸಂಘದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ, ಸಲಹಾ ಸಮಿತಿ ಮತ್ತು ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

**ಕಾನೂನಿನ ಅಡಿಯಲ್ಲಿ ಪ್ರಕರಣ ದಾಖಲಿಸಿ**

ಮಕ್ಕಳು ತಮ್ಮ ಬಾಲ್ಯಾವಸ್ಥೆಯಲ್ಲಿಯೇ ದುಡಿಮೆಗೆ ತೊಡ ಗಿಕೊಂಡಲ್ಲಿ ಅವರುಗಳು ಶಿಕ್ಷಣದಿಂದ ವಂಚಿತರಾಗುವುದರ ಜೊತೆಗೆ ಮಾನಸಿಕ, ದೈಹಿಕ ಶಾರೀರಿಕ ಬೆಳವಣಿಗೆಗೆ ಹಾನಿ ಉಂಟಾಗುವುದರ ಜೊತೆಗೆ ಭವಿಷ್ಯದ ಆಯ್ಕೆಗಳನ್ನು ಸೀಮಿತಗೊಳಿಸುತ್ತದೆ. ಈ ಹಿನ್ನೆಲೆ ಬಾಲಕಾರ್ಮಿಕ ರಕ್ಷಣಾ ಕಾಯಿದೆಯನ್ನು ಜಾರಿಗೆ ತರಲಾಗಿದೆ. ಇದನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕರ್ತವ್ಯ ಜನಸಾಮಾನ್ಯರು ಹಾಗೂ ಅಧಿಕಾರಿಗಳ ಮೇಲಿದ್ದು, ಇದನ್ನು ಜವಾಬ್ದಾರಿಯುತವಾಗಿ ನಿರ್ವಹಿಸುವುದರೊಂದಿಗೆ ಮಕ್ಕಳು ತಮ್ಮ ಬಾಲ್ಯಾವಸ್ಥೆಯನ್ನು ಸವಿಯುವುದರೊಂದಿಗೆ ಶಿಕ್ಷಣವಂತರನ್ನಾಗಿಸಲು ಪೂರಕ ವಾತಾವರಣವನ್ನು ನಿರ್ಮಿಸಬೇಕು ಎಂದರು. ಜಿಲ್ಲೆಯ ಮಲ್ಪೆ ಮೀನುಗಾರಿಕೆಯ ಹರಾಜು ಸ್ಥಳ ಗಳಲ್ಲಿ, ಕೆಲವು ವಾಣಿಜ್ಯ ಸ್ಥಳಗಳಲ್ಲಿ, ಕಲ್ಲುಕೋರೆಗಳಲ್ಲಿ


ಉದಯವಾಹಿನಿ ಚಿತ್ರ

ಮರಳು ತೆಗೆಯುವ ಪ್ರದೇಶಗಳು ಸೇರಿದಂತೆ ಮತ್ತಿತರ ಕಡೆಗಳಲ್ಲಿ ಮಕ್ಕಳು ದುಡಿಮೆಗೆ ತೊಡಗಿಕೊಳ್ಳುತ್ತಿರುವ ಬಗ್ಗೆ ಈ ಹಿಂದೆ ಅನೇಕ ಪ್ರಕರಣಗಳು ಆಗಿವೆ. ಅಲ್ಲಿಯೇ ಪುನರಾವರ್ತಿತವಾಗುವ ಸಾಧ್ಯತೆಗಳು ಇರುತ್ತವೆ. ಇಂತಹ ತಾಣಗಳ ಮೇಲೆ ನಿರಂತರವಾಗಿ ಆಗಿಂದಾಗ್ಗೆ ಹಠಾತ್ ದಾಳಿ ನಡೆಸಿ, ಮಕ್ಕಳು ನಿಯೋಜನೆಗೊಂಡಿರುವುದು ಕಂಡು ಬಂದಲ್ಲಿ ಕಾನೂನಿನ ಅಡಿಯಲ್ಲಿ ಪ್ರಕರಣ ದಾಖಲಿಸಿ, ಅವರುಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಬಾಲ, ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡ ಸಂಸ್ಥೆಯ ವಿರುದ್ಧ ಹಾಕಿರುವ ಮೊಕದ್ದಮೆಗಳನ್ನು ನಿರಂತರವಾಗಿ ಅನುಕರಣೆ ಮಾಡುವುದರೊಂದಿಗೆ ತಪ್ಪಿತಸ್ಥರಿಗೆ ದಂಡ, ಶಿಕ್ಷೆ ವಿಧಿಸುವಂತೆ ನೋಡಿಕೊಳ್ಳಬೇಕು ಎಂದ ಅವರು, ಪುನರಾವರ್ತಿತವಾಗಿ ಬಾಲ ಕಾರ್ಮಿಕರನ್ನು ನಿಯೋಜಿಸಿ ಕೊಂಡ ಸಂಸ್ಥೆ ಅಥವಾ ವಾಣಿಜ್ಯ ಉದ್ಯಮಿಗಳಿದ್ದಲ್ಲಿ ಅಂತಹ ಸಂಸ್ಥೆಯ ಪರವಾನಿಗೆಯನ್ನು ರದ್ದುಪಡಿಸಲು ಸ್ಥಳೀಯ ಸಂಸ್ಥೆಗಳು ಕ್ರಮ ವಹಿಸುವಂತೆ ವೃತ್ತ ನಿರೀಕ್ಷಕರು ನೋಡಿಕೊಳ್ಳಬೇಕು ಎಂದರು.

**ಮಕ್ಕಳಿಗೆ ಅನುದಾನ ನೀಡಬೇಕು**

ಕೆಲವು ವರ್ಷಗಳ ಹಿಂದೆ ಬಾಲಕಾರ್ಮಿಕ, ಕಿಶೋರ ಕಾರ್ಮಿಕರಾಗಿ ಕಂಡಿಬಂದ ಮಕ್ಕಳಿಗೆ ಬಾಲ ಕಾರ್ಮಿಕ ಪುನರ್ವಸತಿ ನಿದಿ ಹಾಗೂ ಕಾರ್ಪಸ್ ನಿಧಿ ಒಳಗೊಂಡ ಒಟ್ಟು 35000 ರೂ.ಗಳನ್ನು ಅವರುಗಳಿಗೆ ವಿದ್ಯಾಭ್ಯಾಸಕ್ಕಾಗಿ 18 ವರ್ಷ ತುಂಬಿದ ಮೂರು ತಿಂಗಳ ಒಳಗಾಗಿ ಕಾಯಿದೆ ಅನ್ವಯ ನೀಡಬೇಕು. ಆದರೆ ಅನೇಕ ಪ್ರಕರಣಗಳಲ್ಲಿ ನೀಡದೇ ಇರುವುದು ಕಂಡು ಬಂದಿದೆ. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಅವರು, ಕೂಡಲೇ ಮಕ್ಕಳಿಗೆ ಅನುದಾನವನ್ನು ನೀಡಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಭಿಕ್ಷಾಟನೆಯನ್ನು ಸಣ್ಣ ಮಗುವಿನೊಂದಿಗೆ ತಾಯಂದಿರು ಮಾಡುತ್ತಿರುವ ಪ್ರಕರಣಗಳು ಆಗಿವೆ. ಅವರನ್ನು ನಿರಾಶ್ರಿತರ ಕೇಂದ್ರಗಳಲ್ಲಿ ಪುನರ್ವಸತಿ ಕಲ್ಪಿಸಲು ನೆರೆಯ ದಕ್ಷಿಣ ಕನ್ನಡ ಜಿಲ್ಲೆಗೆ ಕಳುಹಿಸಿಕೊಟ್ಟಾಗ ಸಣ್ಣ ಮಕ್ಕಳನ್ನು ನಿರಾಶ್ರಿತ ಕೇಂದ್ರದಲ್ಲಿ ನಿಯೋಜಿಸಲು ಅವಕಾಶವಿಲ್ಲ ಎಂಬ ಕಾರಣ ಹೇಳುತ್ತಾರೆ. ಇದರಿಂದ ಸಮಸ್ಯೆ ಉಂಟಾಗುತ್ತಿದೆ. ಜಿಲ್ಲೆಯಲ್ಲಿ ನಿರಾಶ್ರಿತರ ಕೇಂದ್ರ ತೆರೆಯಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಡಿಎಪಿಗೆ ಪರ್ಯಾಯ ಸಂಯುಕ್ತ ರಸಗೊಬ್ಬರ ಬಳಕೆ

• ಉದಯವಾಹಿನಿ, ಮಂಗಳೂರು

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೇಳು ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ, ಆಮ್ಲಜನಕ ಸ್ವಾಭಾವಿಕವಾಗಿ ಗಾಳಿ, ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತದೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಸಸ್ಯಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಬೇಕಿರುತ್ತದೆ. ಲಘು ಪೋಷಕಾಂಶಗಳು ಕಡಿಮೆ ಯಾದರೂ ಸಸ್ಯಗಳ ಮೇಲೆ ಪ್ರಭಾವ ಬೀರಿ ಇಳುವರಿ ಕಡಿಮೆಯಾಗಬಹುದು. ಡಿಎಪಿಯು ಸಾರಜನಕ, ರಂಜಕ ಅಧಿಕವಾಗಿರುವ ಗೊಬ್ಬರವಾಗಿದ್ದು ಸಂಯುಕ್ತ ಗೊಬ್ಬರಗಳು ಸಾರಜನಕ,ರಂಜಕ, ಪೊಟ್ಯಾಷಿಯಂ ಸೇರಿದಂತೆ ಬಹು ಪೋಷಕಾಂಶಗಳ ಮಿಶ್ರಣಗಳಾಗಿವೆ.

**ಸಸ್ಯಗಳ ಬೆಳವಣಿಗೆ ಕುಂಠಿತ**

ಪ್ರಾಥಮಿಕ ಹಂತದಲ್ಲಿ ಡಿಎಪಿ ಬಳಕೆಯನ್ನು ಕಡಿಮೆ ಮಾಡಬೇಕು ಏಕೆಂದರೆ ಮಣ್ಣಿನಲ್ಲಿ ರಂಜಕದ ಶೇಖರಣೆ ಹೆಚ್ಚಾಗುತ್ತದೆ. ಇದು ಇತರ ಅಗತ್ಯ ಪೋಷಕಾಂಶಗಳ ಹೀರಿಕೊಳ್ಳುವಿಕೆಯನ್ನು ತಡೆಯುತ್ತದೆ.

ಡಿಎಪಿಯ ಅತ್ಯಂತ ವೇಗವಾಗಿ ಕರಗಿ ಹೋಗುವ, ಆವಿಯಾಗುವ ಗುಣವು ಪರಿಸರ ಮಾಲಿನ್ಯ, ಆರ್ಥಿಕ ನಷ್ಟಕ್ಕೆ ಕಾರಣವಾಗಬಹುದು. ಅಲ್ಲದೆ ಕ್ಷಾರೀಯ ಅಂದರೆ ಪಿಎಚ್ ಅಧಿಕವಾಗಿರುವ (7) ಮಣ್ಣಿನಲ್ಲಿ ಸಸ್ಯಗಳ ಬೇರುಗಳಿಗೆ ವಿಷಕಾರಿ ಅಮೋನಿಯಂ ಅನ್ನು ಬಿಡುಗಡೆಗೊಳಿಸಿ ಸಸ್ಯಗಳ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತದೆ.

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಹುಳಿ ಮಣ್ಣು ಇರುವುದರಿಂದ ಡಿಎಪಿ ಬಳಸುವುದು ಸೂಕ್ತವಲ್ಲ. ಏಕೆಂದರೆ ಇದು ಮಣ್ಣನ್ನು ಇನ್ನೂ ಹೆಚ್ಚು ಹುಳಿಯನ್ನಾಗಿಸಿ ಪೋಷಕಾಂಶಗಳನ್ನು ಗಿಡಗಳಿಗೆ ಸಿಗದಹಾಗೆ ಮಾಡುತ್ತದೆ. ಆದುದರಿಂದ ನಿರ್ದಿಷ್ಟ ಪೋಷಕಾಂಶಗಳ ಕೊರತೆಯನ್ನು ನಿರ್ಧರಿಸಲು, ಅದಕ್ಕೆ ಅನುಗುಣವಾಗಿ ರಸಗೊಬ್ಬರ ಅನ್ವಯಿಕೆಗಳನ್ನು ಹೊಂದಿಸಲುಮಣ್ಣಿನ ಪರೀಕ್ಷೆಗಳನ್ನು ನಡೆಸುವುದು


ಉದಯವಾಹಿನಿ ಚಿತ್ರ

ಬಹಳ ಮುಖ್ಯ. ಹಾಗಾಗಿ ಡಿಎಪಿಗೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳನ್ನು ಬಳಸುವುದರಿಂದ ಸಮತೋಲಿತ ಪೌಷ್ಟಿಕಾಂಶಗಳನ್ನು ಸಸ್ಯಗಳಿಗೆ ಒದಗಿಸಬಹುದಾಗಿದೆ.

ಭತ್ತ ಬೆಳೆಗೆ ಸಾರಜನಕ, ರಂಜಕ, ಪೊಟ್ಯಾಷಿಯಂ ನಂತರ ಪ್ರಮುಖ ಪೋಷಕಾಂಶಗಳ ಅವಶ್ಯಕತೆ ತುಂಬಾ ಇರುತ್ತದೆ. ಮಂಗಳೂರು ಪ್ರದೇಶದಲ್ಲಿ ಡಿಎಪಿಗೆ ಪರ್ಯಾಯವಾಗಿ ರಸಗೊಬ್ಬರಗಳ ಜೊತೆಗೆ ಹಸಿರು ಎಲೆ, ಕಾಂಪೋಸ್ಟ್ ಮತ್ತು ಗದ್ದೆ ಗೊಬ್ಬರದಂತಹ ಸಾವಯವ ಪರ್ಯಾಯಗಳು ಭತ್ತ, ತೆಂಗು, ಅಡಿಕೆ ಬೆಳೆಗೆ ಪ್ರಯೋಜನಕಾರಿಯಾಗಿದೆ. ತೆಂಗಿನ ಬೆಳೆಗೆ ಸನ್‌ಹೆಂಪ್, ತೆಂಗಿನಕಾಯಿ ಪಿತ್ ಕಾಂಪೋಸ್ಟ್, ವರ್ಮಿ ಕಾಂಪೋಸ್ಟ್‌ನ್ನು ಬಳಸಬಹುದಾಗಿದೆ. ಅಡಿಕೆ ಬೆಳೆಗೆ ಓಕಪಿ ರಾಕ್ ಫಾಸ್ಪೇಟ್ ಮತ್ತು ಒಔಕ ಯನ್ನು ಬಳಸಬಹುದಾಗಿದೆ. ಹಸಿರು ಎಲೆ ಕಾಂಪೋಸ್ಟ್, ಗದ್ದೆ ಗೊಬ್ಬರ ಕೂಡ ಉತ್ತಮ ಆಯ್ಕೆಗಳಾಗಿವೆ. ಮೇಲು ಗೊಬ್ಬರವಾಗಿ ನಾಟಿ ಮಾಡಿದ 25ರಿಂದ 30 ದಿನಗಳಲ್ಲಿ ಯೂರಿಯಾ 17.5 ಕೆ.ಜಿ, ಪೊಟ್ಯಾಷ್‌ಯಂ- 16 ಕೆ.ಜಿಗಳನ್ನು ನೀಡಬೇಕಾಗುತ್ತದೆ. ನಾಟಿ ಮಾಡಿದ 55 ರಿಂದ 60 ದಿನಗಳಲ್ಲಿ (ಕಾಳು ಕಟ್ಟುವ ಹಂತದಲ್ಲಿ) ಯೂರಿಯಾ 17.5 ಕೆ.ಜಿ, ಪೊಟ್ಯಾಷ್‌ಯಂ- 16 ಕೆ.ಜಿಗಳನ್ನು ರಸಗೊಬ್ಬರದ ಮೂಲಕ ನೀಡಬೇಕಾಗುತ್ತದೆ ಎಂದು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಭೂಮಿಯೇ ಮುಖ್ಯ ಆಧಾರ**

ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರ. ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲ. ಆದುದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ. ಬೆಳೆಗಳಿಗೆ ಬೇಕಾದ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ, ರಸಗೊಬ್ಬರಗಳಿಂದ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ದೊರೆಯುವ ರೂಪದಲ್ಲಿದ್ದು ಅವುಗಳ ಬಳಕೆ ಅತ್ಯಗತ್ಯವಾಗಿರುತ್ತದೆ.

# ತ್ಯಾಜ್ಯ ಪ್ಲಾಸ್ಟಿಕ್ ತ್ಯಾಜ್ಯ ಸಂಪೂರ್ಣ ನಿರ್ಮೂಲನೆ

• ಉದಯವಾಹಿನಿ, ಪುತ್ತೂರು



ಪುತ್ತೂರು ನಗರಸಭೆಯಲ್ಲಿ ಇ-ತ್ಯಾಜ್ಯ ಮತ್ತು ಪ್ಲಾಸ್ಟಿಕ್ ತ್ಯಾಜ್ಯದ ಸಂಪೂರ್ಣ ನಿರ್ಮೂಲನೆಯ ಗುರಿಯೊಂದಿಗೆ ಈ ಬಾರಿಯ ವಿಶ್ವ ಪರಿಸರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಪುತ್ತೂರು ನಗರಸಭೆಯ ಪೌರಾಯುಕ್ತ ಮಧು ಎಸ್ ಮನೋಹರ್ ಅವರು ತಿಳಿಸಿದ್ದಾರೆ.

ಅವರು ಗುರುವಾರ ಪುತ್ತೂರು ನಗರಸಭೆಯಲ್ಲಿ ಸುದ್ದಿಗಾರಗೊಂದಿಗೆ ಮಾತನಾಡಿ ಗಾರ್ಬೇಜ್ ಟು ಗಾರ್ಡನ್, ಪ್ಲಾಸ್ಟಿಕ್ ಸಂಗ್ರಹ ಘಟಕ ಮತ್ತು ಇ-ತ್ಯಾಜ್ಯ ಸಂಗ್ರಹ ಘಟಕ ನಿರ್ಮಾಣದ ಗುರಿ ಹೊಂದಲಾಗಿದೆ. ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪುತ್ತೂರು ನಗರಸಭೆಯ ವತಿಯಿಂದ ಈ ಮೂರು ಪ್ರಮುಖ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತಿದೆ.

ನಗರ, ಗ್ರಾಮ ಪಂಚಾಯತ್ ನಡುವಿನ ಅಂತರದಲ್ಲಿ ಕಸ ಎಸೆಯುವುದನ್ನು ತಡೆಯುವ ನಿಟ್ಟಿನಲ್ಲಿಗಾರ್ಬೇಜ್ ಆನರೇಬಲ್ ಪಾಯಿಂಟ್ ಅಂತ ಗುರುತಿಸಿ ಅಲ್ಲಿ ಸ್ವಚ್ಛಗೊಳಿಸಿ ಬಳಿಕ ಅಲ್ಲಿ ಗಾರ್ಬೇಜ್‌ಟು ಗಾರ್ಡನ್ ಹೆಸರಿನಲ್ಲಿ ಗಾರ್ಡನ್ ನಿರ್ಮಾಣ ಮಾಡಲಾಗುತ್ತಿದೆ. ಮೊಟ್ಟೆತ್ತಡ್ಕದಲ್ಲಿ ಗಾರ್ಬೇಜ್ ಟು ಗಾರ್ಡನ್‌ಗೆ ಚಾಲನೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಪ್ಲಾಸ್ಟಿಕ್‌ನಿಂದ ಉಂಟಗುತ್ತಿರುವ ದುಷ್ಪರಿಣಾಮವನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ಲಾಸ್ಟಿಕ್ ಸಂಗ್ರಹಣಾ ತೊಟ್ಟಿಯನ್ನು ಗುರುತಿಸಿದ ಕಡೆಗಳಲ್ಲಿ ಇಡಲಾಗುತ್ತಿದೆ. ಈ ತೊಟ್ಟಿಯಲ್ಲಿ ಒಣ ತ್ಯಾಜ್ಯವಾಗಿರುವ ಪ್ಲಾಸ್ಟಿಕ್‌ಗಳನ್ನು ಬಳಸಲು ಅವಕಾಶವಿದೆ. ಬಳಸಿದ ಪ್ಲಾಸ್ಟಿಕ್ ಬಾಟಲಿ, ಪ್ಲಾಸ್ಟಿಕ್ ಆಹಾರ ಪಾತ್ರೆಗಳು ಮತ್ತು ಪ್ಯಾಕೇಜಿಂಗ್, ಕ್ಯಾರಿಬ್ಯಾಗ್‌ಗಳು ಇನ್ನಿತರ ಈ ತೊಟ್ಟಿಯಲ್ಲಿ ಹಾಕಬಹುದಾಗಿದೆ. ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಹಾಗೂ ವರ್ತಕರಿಗೆ ಬಟ್ಟೆ ಚೀಲ ವಿತರಣೆ ಮಾಡಲಾಗುವುದು. ಪ್ಲಾಸ್ಟಿಕ್ ಕಸದ ವೈಜ್ಞಾನಿಕ ವಿಲೇವಾರಿಯ ಜೊತೆಗೆ ಇ-ಕಸದ ಸಮರ್ಪಕ ವಿಲೇವಾರಿಯ ಗುರಿಯನ್ನೂ ಹೊಂದಲಾಗಿದೆ.

ನಗರಸಭೆಯಲ್ಲಿ ಸಂಗ್ರಹವಾಗುವ ಇ ಕಸವನ್ನು ವೈಜ್ಞಾನಿಕ ವಿಲೇವಾರಿಗಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಇದಕ್ಕಾಗಿ ಮಂಗಳೂರು ಬೈಕಂಪಾಡಿಯಲ್ಲಿರುವ ಮೂಕಾಂಬಿಕಾ ಮೆಟಲ್ ರಿಫೆಂಡರ್ ಪ್ರೈ ಲಿ ಅವರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಮುಂದೆ ಹಸಿ ಕಸ, ಒಣ ಕಸಗಳ ಜತೆಗೆ ಇ-ಕಸವನ್ನೂ ವಿಂಗಡನೆಗೊಳಿಸಿ ಮನೆ ಮನೆಯಿಂದ ಸಂಗ್ರಹ ಮಾಡಲಾಗುವುದು.

ಇ-ಕಸದ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ನಗರಸಭೆಯ ವ್ಯಾಪ್ತಿಯಲ್ಲಿನ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿನ ಮುಖ್ಯಸ್ಥರೊಂದಿಗೆ ಮಾತುಕತೆ ನಡೆಸಿ, ಶಿಕ್ಷಣ ಸಂಸ್ಥೆಗಳನ್ನು ಇ-ಕಸ ಸಂಗ್ರಹ ಕೇಂದ್ರವಾಗಿ ಗುರುತಿಸಲಾಗುವುದು. ಪ್ರತಿ ತಿಂಗಳಿಗೊಮ್ಮೆ ಅಲ್ಲಿ ಸಂಗ್ರಹವಾದ ಇ-ಕಸವನ್ನು ನಗರಸಭೆಯ ವತಿಯಿಂದ ಸಂಗ್ರಹಿಸಲಾಗುವುದು. ಈ ವೇಸ್ಟ್ ಪ್ಲಾಸ್ಟಿಕ್ ವೇಸ್ಟ್ ಸಂಪೂರ್ಣ ನಿರ್ಮೂಲನೆ ಗುರಿಯನ್ನು ಇರಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

# ಆರೋಗ್ಯ ಸಂಜೀವಿನಿ ಯೋಜನೆ ಪ್ರಯೋಜನ ಪಡೆಯಿರಿ

• ಉದಯವಾಹಿನಿ, ಬೀದರ್

ರಾಜ್ಯ ಸರ್ಕಾರಿ ನೌಕರರು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಸಲಹೆ ಮಾಡಿದರು. ನಗರದ ಪ್ರತಾಪನಗರದ ನೌಕರರ ಸಮುದಾಯ ಭವನದಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಕಾರ್ಯಕಾರಿಣಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಯೋಜನೆಯಡಿ ನೌಕರರು ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ನಿಗದಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ನಗದು ರಹಿತ ವೈದ್ಯಕೀಯ ಸೌಲಭ್ಯ ಸಿಗಲಿದೆ.

ಹೃದಯ ಸಂಬಂಧಿ ಕಾಯಿಲೆ, ಕ್ಯಾನ್ಸರ್, ಕಿಡ್ನಿ ವೈಫಲ್ಯ, ಡಯಾಲಿಸಿಸ್, ಅಂಗಾಂಗ ಕಸಿ, ಮೂಳೆ ಸಮಸ್ಯೆ, ನವಜಾತ ಶಿಶುಗಳ ಚಿಕಿತ್ಸಾ ಸೇವೆ, ತುರ್ತು ಶಸ್ತ್ರಚಿಕಿತ್ಸೆ, ಲಘು ಶಸ್ತ್ರಚಿಕಿತ್ಸೆ, ಲಘು ವೈದ್ಯಕೀಯ ಸೇವೆ ಮೊದಲಾದವು ಇದರ ವ್ಯಾಪ್ತಿಗೆ ಬರಲಿವೆ ಎಂದು ತಿಳಿಸಿದರು. ಸಂಘದ ಪದಾಧಿಕಾರಿಗಳು ಯೋಜನೆ ಕುರಿತು ನೌಕರರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.



ಉದಯವಾಹಿನಿ ಚಿತ್ರ

> ನೌಕರರು ಬ್ಯಾಂಕ್‌ಗಳ ಸಮಗ್ರ ವೇತನ ಪ್ಯಾಕೇಜ್ ಯೋಜನೆ ಲಾಭ ಸಹಪಡೆಯಬೇಕು, ಸಂಘವು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 90 ಕ್ಕೂ ಹೆಚ್ಚು ಅಂಕಗಳಿಸಿದ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಿದೆ ಎಂದು ಹೇಳಿದರು.

ನೌಕರರ ರಾಜ್ಯಮಟ್ಟದ ಕ್ರೀಡಾಕೂಟದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ನೌಕರರನ್ನು ಸನ್ಮಾನಿಸಲಾಯಿತು.

## ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಜಾಥಾ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

# ಜಿಲ್ಲಾಧಿಕಾರಿಗಳ ಕಚೇರಿಯಿಂದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ

• ಉದಯವಾಹಿನಿ, ಬೀದರ

ಇದೇ ಜೂನ್.12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಬೃಹತ್ ಜಾಥಾ ಮತ್ತು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು. ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. ಈ ಜಾಥಾವು ಜಿಲ್ಲಾಧಿಕಾರಿ ಕಚೇರಿಯಿಂದ ಭಗತಸಿಂಗ್ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಕೆ.ಎಂ. ಕರಿಯಪ್ಪ ವೃತ್ತದ ಮೂಲಕ ರಂಗಮಂದಿರ ತಲುಪುವುದು ನಂತರ 10 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಜಾಥಾದಲ್ಲಿ 600 ಪ್ರೌಢ ಶಾಲಾ ಮಕ್ಕಳು ಭಾಗವಹಿಸುವಂತೆ

**ಕಾರ್ಮಿಕ ರಕ್ಷಣಾ ಅಭಿಯಾನ**


ಉದಯವಾಹಿನಿ ಚಿತ್ರ

ನೋಡಿಕೊಳ್ಳಲು ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು. ಈ ಜಾಥಾದಲ್ಲಿ ಅಂಗನವಾಡಿ ಮೇಲ್ವಿಚಾರಕಿಯರು ಮತ್ತು ಕಾರ್ಯಕರ್ತೆಯರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಧಾಭಾ ಮತ್ತು ಕಾರ್ಖಾನೆ ಮಾಲೀಕರು ಭಾಗವಹಿಸುವಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಕಾರ್ಯಕ್ರಮ ಅಂಗವಾಗಿ ಪ್ರಬಂಧ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಭಾಷಣ, ಕಿರು ನಾಟಕ ಪ್ರದರ್ಶನ ನಡೆಸುವಂತೆ ತಿಳಿಸಿದರು.

> ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜನಜಾಗೃತಿ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿ, ಅಡಿಯಲ್ಲಿ 56 ಗೋಡೆ ಬರಹಗಳು, 2 ದಿನ ಆಟೋ ಮೂಲಕ ಪ್ರಚಾರ, 2 ಜಿಲ್ಲಾ ಮಟ್ಟದ, 7 ತಾಲ್ಲೂಕು ಮಟ್ಟದ ಕಾನೂನು ಅರಿವು ಕಾರ್ಯಕ್ರಮ, ಜಿಲ್ಲಾ ಮಟ್ಟದ 1, ತಾಲ್ಲೂಕು ಮಟ್ಟದ 19 ಟಾಸ್ಕ್ ಫೋರ್ಸ್ ಸಮಿತಿ ಸಭೆ, 1489 ಕರಪತ್ರಗಳ ಹಂಚುವಿಕೆ, 189 ಬಿತ್ತಿ ಪತ್ರಗಳ ಅಂಟಿಸುವಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಾಯೋಗಿಕತ್ವದ ಅಡಿಯಲ್ಲಿ ಬಾಲಕಾರ್ಮಿಕ ಮಕ್ಕಳಿಗೆ 2024-25 ನೇ ಸಾಲಿನಲ್ಲಿ 5 ಮಕ್ಕಳಿಗೆ ಪ್ರತಿ ಮಗುವಿಗೆ 4000 ರೂ. ರಂತೆ ಶಿಷ್ಯ ವೇತನ ನೀಡಲಾಗುತ್ತಿದೆ
> -ಅರ್ಜುನ. ಎಸ್, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧಿಕಾರಿ

ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬೆಳಿಗ್ಗೆ 11 ಗಂಟೆಗೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಪ್ರಮಾಣ ವಚನ ಬೋಧಿಸಬೇಕು, ಜಿಲ್ಲೆಯ ಪ್ರತಿ ಗ್ರಾಮಗಳಲ್ಲಿ ಪಂಚಾಯಿತಿ ವತಿಯಿಂದ ಡಂಗೂರ ಸಾರಿಸುವುದು, ಎಲ್ಲಾ ಗ್ರಾಮ ಪಂಚಾಯಿತಿ, ಪುರಸಭೆ, ನಗರಸಭೆ ವತಿಯಿಂದ ಕಸ ವಿಲೇವಾರಿ ವಾಹನಗಳಲ್ಲಿ ಬಾಲ, ಕಿಶೋರ ಕಾರ್ಮಿಕ ನಿರ್ಮೂಲನೆ ಕುರಿತು ಧ್ವನಿವರ್ಧಕ ಮೂಲಕ ಘೋಷಣೆ ಕೂಗಿಸಬೇಕೇಂದರು. ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು, ತಾಲೂಕಾ ಟಾಸ್ಕ್ ಫೋರ್ಸ್ ಸಮಿತಿ ಅಧಿ ಕಾರಿಗಳು ಜೂನ್13 ರಿಂದ ಜೂನ್30 ವರೆಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ರಕ್ಷಣಾ ಅಭಿಯಾನ ಕಾರ್ಯಕ್ರಮ ಆಯೋಜಿಸಲು ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಜಿಲ್ಲಾಧಿಕಾರಿಗಳು ಜಿಲ್ಲಾ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿ ಜಿಲ್ಲೆಯಲ್ಲಿ ಎಲ್ಲೇ ಬಾಲಕಾರ್ಮಿಕರು ಕಂಡು ಬಂದಲ್ಲಿ ಅಂತಹವರನ್ನು ನೇರವಾಗಿ ಮುರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ದಾಖಲಿಸಿ ಶಿಕ್ಷಣ ನೀಡಲು ಅಧಿಕಾರಿಗಳಿಗೆ ತಿಳಿಸಿದರು, ಎಲ್ಲಾ ಕಾರ್ಖಾನೆ, ಧಾಭಾ, ಹೋಟೆಲ್, ಗ್ಯಾರೇಜ್, ಅಂಗಡಿ ಮುಂಗಟ್ಟುಗಳಗೆ ಭೇಟಿ ನೀಡಿ ಪರಿಶೀಲನೆ ಪಡಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

## ಮಿನಿ ನ್ಯೂಸ್

### ನಾವು ಪರಿಸರ ರಕ್ಷಿಸಿದಾಗ ಪರಿಸರ ನಮ್ಮನ್ನು ರಕ್ಷಿಸುತ್ತದೆ: ಅಲಿಝೂರ

• ಉದಯವಾಹಿನಿ, ಸೈದಾಪುರ

ನಾವು ಪರಿಸರವನ್ನು ರಕ್ಷಿಸಿದಾಗ ಮಾತ್ರ ಪರಿಸರ ನಮ್ಮನ್ನು ರಕ್ಷಿಸುತ್ತದೆ ಎಂದು ವಿದ್ಯಾ ವರ್ಧಕ ಸಂಘದ ಕೋಶಾಧ್ಯಕ್ಷ ಮುಕುಂದಕುಮಾರ ಅಲಿಝೂರ ಅಭಿಪ್ರಾಯಪಟ್ಟರು. ಪಟ್ಟಣದ ವಿದ್ಯಾ ವರ್ಧಕ ಸಂಘದ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಸಸಿ ನೆಟ್ಟು ಮಾತನಾಡಿದರು. ಭೂಮಿಯ ಮೇಲೆ ಜೀವವಿರುವ ಪ್ರತಿಯೊಂದು ಜೀವ ರಾಶಿಗೆ ಆಹಾರಕ್ಕಿಂತ ಮೊದಲು ಗಾಳಿ ಅತ್ಯಗತ್ಯವಾಗಿ ಬೇಕು. ಇಂದಿನ ಸ್ಥಿತಿಗತಿಯನ್ನು ನೋಡುತ್ತಿದ್ದರೆ ಗಿಡಗಳ ಮಹತ್ವದ ಅರಿವು ಉಂಟಾಗುತ್ತದೆ. ಪರಿಸರ ದಿನಾಚರಣೆ ಶಾಶ್ವತ ಜಾಗೃತಿ ಮೂಡಿಸುವ ಕಾರ್ಯವಾಗಬೇಕು. ಈ ದಿನದ ಮಹತ್ವವನ್ನು ಪ್ರತಿಯೊಬ್ಬ ವ್ಯಕ್ತಿಯೂ ತಿಳಿಯಬೇಕು. ಪ್ರತಿಯೊಬ್ಬರು ಪರಿಸರವನ್ನು ಉಳಿಸಿ ಬೆಳೆಸುವಂತ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಸಲಹೆ ನೀಡಿದರು.

### ಸಸಿ ನೆಡುವುದರ ಮೂಲಕ ಜಾಗತಿಕ ತಾಪಮಾನ ಕಡಿಮೆಗೊಳಿಸಿ

• ಉದಯವಾಹಿನಿ, ಬೈಲಹೊಂಗಲ

ಅಭಿವೃದ್ಧಿಯ ಹೆಸರಿನಲ್ಲಿ ನಿರಂತರ ಮರಗನ್ನು ಕಡಿಯಲಾಗುತ್ತಿದ್ದು ಇದರಿಂದಾಗಿ ಜಾಗತಿಕ ತಾಪಮಾನ ಹೆಚ್ಚುತ್ತಿದೆ ಎಂದು ಪುರಸಭೆ ಅಧ್ಯಕ್ಷ ವಿಜಯ ಬೋಳನ್ನವರ ಹೇಳಿದರು. ಪಟ್ಟಣದಲ್ಲಿ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಪುರಸಭೆಯ ವ್ಯಾಪ್ತಿಯ ಅಮೃತ ಮಿತ್ರ ಕಾರ್ಯಕ್ರಮದಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಮರಗಳ ರಕ್ಷಣೆಗೆ ಮಹಿಳೆಯರು, ತಾಯಿ ಹೆಸರಿನಲ್ಲಿ ಒಂದು ಗಿಡ ಎಂಬ ಘೋಷಣೆಯೊಂದಿಗೆ ವಿವಿಧ ಉದ್ಯಾನವನದಲ್ಲಿ ಸಸಿ ನೆಡುವ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿ ಮರಗಳ ಕಡಿತದಿಂದಾಗಿ ವಾಯು ಮಾಲಿನ್ಯ ಉಂಟಾಗಿ ಇದರಿಂದಾಗಿ ಮನುಷ್ಯ ಹಲವು ರೋಗಗಳಿಗೆ ತುತ್ತಾಗುತ್ತಿದ್ದಾರೆ.

ಕೊರೋನ ಸಂದರ್ಭದಲ್ಲಿ ಉಸಿರಾಡಲು ಶುದ್ಧ ಗಾಳಿ ಸಿಗದೇ ಪರದಾಡಿರುವುದನ್ನು ನಾವು ಮರೆಯುವಂತಿಲ್ಲ. ಸರಿಯಾದ ಸಮಯಕ್ಕೆ ಮಳೆಯಾಗಿ ನಾಡು ಸಮೃದ್ಧಿಯಾಗುವಲ್ಲಿ ಮರಗಳ ಪಾತ್ರ ಅತ್ಯಮೂಲ್ಯವಾಗಿದೆ.ಆದ್ದರಿಂದ ಪ್ರತಿಯೊಬ್ಬರೂ ಸಸಿಗಳನ್ನು ನೆಟ್ಟು ಪೋಷಿಸಬೇಕೆಂದು ಸಲಹೆ ನೀಡಿದರು.

### ಶಿಲಾಯುಗದ ಪಳಿಯುಳಿಕೆ ಪತ್ತೆ

• ಉದಯವಾಹಿನಿ, ಹಿರೇಕೆರೂರು

ತಾಲ್ಲೂಕಿನ ಬಾಳಬಿಂಡ ಗ್ರಾಮದ ರೈತ ಮಲ್ಲಿಕಾರ್ಜುನ ಜೋಗಿಹಳ್ಳಿ ಎಂಬುವರ ಜಮೀನಿನಲ್ಲಿ 300 ವರ್ಷಗಳ ಹಿಂದಿನ ಶಿಲಾಯುಗದ ಪಳಿಯುಳಿಕೆಗಳು ಪತ್ತೆಯಾಗಿವೆ. ಇದೊಂದು ಪ್ರಾಚೀನ ಕಾಲದ ಬೃಹತ್ ಶಿಲಾಯುಗ ಸಂಸ್ಕೃತಿಯ ನೆಲೆ ಎಂದು ಇತಿಹಾಸತಜ್ಞ ಆರ್. ಎಂ. ಷಡಾಕ್ಷರಯ್ಯ ತಿಳಿಸಿದ್ದಾರೆ. ಈ ನೆಲೆಯನ್ನು ಹಂಸಭಾವಿ ಮಹಾಂತಸ್ವಾಮಿ ಮಹಾವಿದ್ಯಾಲಯದ ಇತಿಹಾಸ ವಿಭಾಗದ ಮುಖ್ಯಸ್ಥ


ಉದಯವಾಹಿನಿ ಚಿತ್ರ

ಎಂ.ಎಂ.ಅಕ್ಕಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಾಗ ರಾಜಪ್ಪ ಎಂ.ಎಸ್. ಅವರು ಈಚೆಗೆ ಪತ್ತೆ ಮಾಡಿದ್ದಾರೆ. ಕರ್ನಾಟಕ ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ವಿಭಾಗದ ನಿವೃತ್ತ ಸಂಶೋಧಕ ಈರಣ್ಣ ಪತ್ತಾರ ಕೂಡ ಅಧ್ಯಯನ ಮಾಡಿದ್ದರು. ಅರ್ಧ ಹೆಕ್ಟೇರ್ ವಿಸ್ತಾರದ ಜಮೀನಿನಲ್ಲಿ ಅರ್ಧ ಅಡಿ ಗುಂಡಿ ತೋಡಿದಾಗ, ಅಲ್ಲಿ ಕೆಂಪು ಬಣ್ಣದ ಮಡಿಕೆ ಚೂರುಗಳು ಸಿಕ್ಕಿವೆ. ಮಡಿಕೆಗಳ ಬಣ್ಣ, ರಚನೆ, ವಿನ್ಯಾಸ ಗಮನಿಸಿದರೆ, ಹಳ್ಳೂರು, ರಾಯಚೂರು ಜಿಲ್ಲೆಯ ಮಸ್ಕಿ, ಹರಪನಹಳ್ಳಿ ತಾಲ್ಲೂಕಿನ ಮರಬಳ್ಳಿ ನೆಲೆಗಳಿಗೆ ಹೋಲಿಕೆಯಾಗುತ್ತಿವೆ ಎಂದು ತಿಳಿಸಿದ್ದಾರೆ.

### ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರಕ್ಕೆ ಸಚಿವರ ಭೇಟಿ

• ಉದಯವಾಹಿನಿ, ಕಲಬುರಗಿ

ನಗರದ ಹೊರವಲಯದ ವಾಜಪೇಯಿ ಬಡಾವಣೆಯಲ್ಲಿ ಸುಮಾರು 10 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಐಎಎಸ್, ಐಪಿಎಸ್, ಕೆಎಎಸ್, ಬ್ಯಾಂಕಿಂಗ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸುವ ವಿದ್ಯಾರ್ಥಿಗಳಿಗೆ ನೀಡುವ ತರಬೇತಿ ಕೇಂದ್ರವನ್ನು ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್, ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ವೀಕ್ಷಿಸಿದರು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಅಗತ್ಯ ತರಬೇತಿ ನೀಡುವುದರ ಜೊತೆಗೆ ಅವರಿಗೆ ಬೇಕಾಗುವ ಪುಸ್ತಕಗಳ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಈ ಕೇಂದ್ರ ಹೊಂದಲಿದೆ.

### ಹವಾಮಾನ ಬದಲಾವಣೆಯಿಂದ ಪರಿಸರದ ಮೇಲೆ ಹಾನಿಕಾರಕ

• ಉದಯವಾಹಿನಿ, ಕಲಬುರಗಿ

ಹವಾಮಾನ ಬದಲಾವಣೆಯು ಪರಿಸರದ ಮೇಲೆ ಹಾನಿಕಾರಕ ಪರಿಣಾಮಗಳನ್ನು ಬೀರುತ್ತಿದ್ದು, ಮಾನವ ಜನಾಂಗದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್‍ಪರ್ಸನ್ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಎಚ್ಚರಿಸಿದರು. ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶರಣ ಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪಾ ಸಭಾಮಂಟಪದಲ್ಲಿ, ವಿವಿಯ ವ್ಯವಹಾರ ಅಧ್ಯಯನ ನಿಕಾಯದ ವತಿಯಿಂದ ಕಲಬುರಗಿ ನಗರದಲ್ಲಿ 1000 ಮರದ ಸಸಿಗಳನ್ನು ನೆಡುವ ಒಂದು ವಾರದ ಹಸಿರು ಮಿಷನ್ ಉಪಕ್ರಮವನ್ನು ಉದ್ಘಾಟಿಸಿದ ನಂತರ ಮಾತನಾಡಿದರು.

ಡಾ. ಅವ್ವಾಜಿ, ಮರಗಳನ್ನು ಅನಿಯಂತ್ರಿತವಾಗಿ ಕಡಿಯುವುದು, ಗಾಳಿಯಲ್ಲಿ ಇಂಗಾಲದ ಅಂಶದ ಅಪಾಯಕಾರಿ ಹೆಚ್ಚಳ, ಜಲಮೂಲಗಳು, ನದಿಗಳಲ್ಲಿ ಹಾನಿಕಾರಕ ರಾಸಾಯನಿಕಗಳನ್ನು ಬಿಡುಗಡೆ ಮಾಡುವುದರಿಂದ ಪರಿಸರಕ್ಕೆ ಅಪಾರ ಹಾನಿಯಾಗುತ್ತಿದ್ದು, ಇದರ ಪರಿಣಾಮವಾಗಿ ಹವಾಮಾನ ಬದಲಾವಣೆಯು ಮಾನವ ಜನಾಂಗದ ಮೇಲೆ ಹಾನಿಕಾರಕ ಪರಿಣಾಮ ಬೀರುತ್ತಿದೆ ಎಂದು ತಿಳಿಸಿದರು.

ಪರಿಸರವನ್ನು ರಕ್ಷಿಸುವುದು ಮತ್ತು ಹಸಿರು ಉಪಕ್ರಮವನ್ನು ಮಿಷನ್ ರೀತಿಯಲ್ಲಿ ಕೈಗೊಳ್ಳುವುದು, ಪರಿಸರಕ್ಕೆ ಆಗುವ ಹಾನಿಯನ್ನು ತಪ್ಪಿಸಲು ಮರದ ಸಸಿಗಳನ್ನು ನೆಡುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:30 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನಿಮ್ಮ ಸಮರ್ಪಣೆ, ಶ್ರಮವನ್ನು ಗಮನಿಸಲಾಗುತ್ತದೆ, ಇಂದು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಮನೆಯ ಸುತ್ತ ಸಣ್ಣ ಬದಲಾವಣೆಗಳು ಅದರ ನೋಟವನ್ನು ಸುಧಾರಿಸಲು ಸಹಾಯ ಮಾಡುತ್ತವೆ.

**ವೃಷಭ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು.

**ಮಿಥುನ** ನೀವು ಕೆಲವು ಗಂಭೀರ ತೊಂದರೆಗಳನ್ನು ಎದುರಿಸಲು ಸಾಧ್ಯತೆಯಿರುವುದರಿಂದ ನಿಮ್ಮನ್ನು ನಿಯಂತ್ರಿಸಿಕೊಳ್ಳಿ. ವಿಶೇಷವಾಗಿ ಸಣ್ಣ ಹುಚ್ಚಲ್ಲದೇ ಬೇರೇನೂ ಅಲ್ಲದ ನಿಮ್ಮ ಕೋಪವನ್ನು ನಿಯಂತ್ರಿಸಿಕೊಳ್ಳಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು.

**ಕರ್ಕಾಟಕ** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

**ಸಿಂಹ** ಧಾರ್ಮಿಕ ಭಾವನೆಗಳನ್ನು ಉದ್ಭವಿಸಿ ಒಬ್ಬ ಪವಿತ್ರ ವ್ಯಕ್ತಿಯಿಂದ ದೈವಿಕ ಜ್ಞಾನವನ್ನು ಪಡೆಯಲು ನೀವು ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ನೀಡುವಂತೆ ಮಾಡುತ್ತವೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ಕನ್ಯಾ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಜೊತೆಗಿರುವವರ ಜೊತೆ ವಾದವಿವಾದಕ್ಕೆ ತೊಡಗಬೇಡಿ. ಯಾವುದೇ ಭಿನ್ನಾಭಿಪ್ರಾಯದ ವಿಷಯಗಳಿದ್ದಲ್ಲಿ – ಸೌಹಾರ್ದತೆಯಿಂದ ಬಗೆಹರಿಸಿಕೊಳ್ಳಿ.

**ತುಲಾ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ದಿನವನ್ನು ಎಚ್ಚರಿಕೆಯಿಂದ ಆಯೋಜಿಸಿ – ನೀವು ನಂಬಿಕೆಯಿಡಬಹುದಾದ ಜನರ ಸಹಾಯ ಪಡೆಯಲು ಅವರ ಜೊತೆ ಚರ್ಚಿಸಿ. ನಿಮ್ಮ ಪ್ರೇಮಮಯ ವೀಕ್ಷಣೆಗಳನ್ನು ಅಭಿವ್ಯಕ್ತಿಗೊಳಿಸಿ.

**ವೃಶ್ಚಿಕ** ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದು ಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು.

**ಧನಸ್ಸು** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

**ಮಕರ** ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ? ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

**ಕುಂಭ** ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ವೆಚ್ಚದ ಏರಿದರೂ ಆದಾಯ ದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ನಿಮ್ಮ ಸಕಾಲಿಕ ಸಹಾಯ ಯಾರಾದರೊಬ್ಬರ ದೌರ್ಭಾಗ್ಯವನ್ನು ನಿವಾರಿಸುತ್ತದೆ.

**ಮೀನ** ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ಉಂಟುಮಾಡಬಹುದು. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು. ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ.

# ಸಿಎಂ, ಡಿಸಿಎಂ ಅವರೇ ನೈತಿಕ ಹೊಣೆ ಹೊರಬೇಕು

## ಚೆನ್ನಸ್ವಾಮಿ ಪ್ರಕರಣದಲ್ಲಿ ಎ1 ಆರೋಪಿ ಸಿದ್ದರಾಮಯ್ಯ, ಎ2 ಆರೋಪಿ ಡಿಕೆಶಿ: ಶ್ರೀರಾಮುಲು ಆರೋಪ

• **ಉದಯವಾಹಿನಿ, ಬಳ್ಳಾರಿ**

ಆರ್‌ಸಿಬಿ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲು ತುಂಬಾ ಕಡಿಮೆ ಸಮಯವನ್ನು ಅಧಿಕಾರಿಗಳಿಗೆ ನೀಡಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಅವರೆಲ್ಲರೂ ವರ್ಕ್ ಫ್ರಂ ಎಂಬ ರೀತಿಯಲ್ಲಿ ಮನೆಯಲ್ಲಿ ಕುಳಿತುಕೊಂಡು ಕೆಲಸ ಮಾಡಿದ್ದಾರೆ. ಹಾಗಾಗಿ, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಂಟಾಗಿರುವ ಕಾಲ್ತುಳಿತ ಪ್ರಕರಣಕ್ಕೆ ಸಿಎಂ, ಡಿಸಿಎಂ ಅವರೇ ನೈತಿಕ ಹೊಣೆ ಹೊರಬೇಕು. ಈ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯನವರು ಎ1 ಆರೋಪಿಯಾಗಿದ್ದರೆ, ಡಿಸಿಎಂ ಡಿಕೆ ಶಿವಕುಮಾರ್ ಅವರು ಎ2 ಆರೋಪಿಯಾಗಿದ್ದಾರೆ ಎಂದು ಮಾಜಿ ಸಚಿವ ಶ್ರೀರಾಮುಲು ಆಗ್ರಹಿಸಿದ್ದಾರೆ. ಬಳ್ಳಾರಿ ನಗರದಲ್ಲಿ ಶುಕ್ರವಾರ ನಡೆದ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್ ಸಿಬಿ ವಿಜಯೋತ್ಸವದ ಆಚರಣೆ ವೇಳೆ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅವರು ಕೆಲವು ಅಧಿಕಾರಿಗಳನ್ನು ಅಮಾನತು ಮಾಡಿದ್ದಾರೆ. ಆದರೆ, ಈ ಅವಘಡಕ್ಕೆ ಸಂಪೂರ್ಣ ಹೊಣೆಗಾರಿಕೆಯನ್ನು ಸಿಎಂ, ಡಿಸಿಎಂ, ಗೃಹ ಸಚಿವರು ಹೊರಬೇಕು. ಯಾವುದೇ ಮುಂಜಾಗ್ರತಾ ಇಲ್ಲದೆ ಇಷ್ಟು ದೊಡ್ಡ ದುರಂತಕ್ಕೆ ಕಾರಣ ವಾಗಿದೆ ಎಂದು ಹೇಳಿದರು. ವರ್ಕ್ ಫ್ರಮ್ ಹೋಮ್ ಎನ್ನುವಂತೆ ಎಲ್ಲರೂ ಮನೆಯಲ್ಲಿ ಕುಳಿತು ಕಾರ್ಯನಿರ್ವಹಿಸಿದ್ದಾರೆ. ಇದರ ಹೊಣೆಗಾರಿಕೆ ಹೊತ್ತು ಸಿಎಂ, ಡಿಸಿಎಂ, ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಘಟನೆಗೆ ನಿವೃತ್ತ ನ್ಯಾಯಾಧೀಶರಿಂದ, ಸಿಐಡಿಯಿಂದ ತನಿಖೆ ಮಾಡಲು ಸಾಧ್ಯವಿಲ್ಲ ಎಂದು ಆಗ್ರಹಿಸಿದ ಅವರು, ಕೋತಿ ಮೊಸರನ್ನು ತಿಂದು ಮೇಕೆ ಬಾಯಿಗೆ ಹೊರೆಸುವ ಕಾರ್ಯವಾಗುತ್ತಿದೆ. ಸಿಎಂ ಅವರು ತಪ್ಪಿತಸ್ಥರಾಗಿದ್ದರಿಂದ ಅಧಿಕಾರಿಗಳ ಮೇಲೆ ಕ್ರಮಕ್ಕೆಗೊಳ್ಳುತ್ತಿದ್ದಾರೆ. ಕಾಂಗ್ರೆಸ್ ನವರು ತುಘಲಕ್ ಆಡಳಿತ ನಡೆಸುತ್ತಿದ್ದಾರೆ. ಬೇಜಾವಾಬ್ದಾರಿಯಾಗಿ ಮಾತನಾಡುತ್ತಿದ್ದು, ತಮ್ಮ ತಪ್ಪನ್ನು ಮುಚ್ಚಿಕೊಳ್ಳಲು ಐಪಿಎಲ್ ಸ್ಪಾನ್ಸರ್‌ಗಳ ಮೇಲೆ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಸರಕಾರದಿಂದ ಪ್ರಾಯೋಜಿತವಾಗಿ ಕೊಲೆ ಮಾಡಲಾಗಿದೆ. ಡಿಸಿಎಂ ಡಿಕೆಶಿ ಅವರು ಕಣ್ಣೀರು ಹಾಕುತ್ತಿದ್ದಾರೆ. ಆದರೆ, ಮೃತಪಟ್ಟ ಕುಟುಂಬದವರ ಕಣ್ಣೀರು ಹೊರೆಸುವ, ಸಾಂತ್ವನ ಹೇಳುವ ಕಾರ್ಯ ಮಾಡಲಿಲ್ಲ. ಪ್ರಕರಣದಲ್ಲಿ ರಾಜ್ಯ ಪೊಲೀಸ್ ಇಲಾಖೆ ಎ1 ಆರೋಪಿಯಾಗಿ ಸಿಎಂ ಸಿದ್ದರಾಮಯ್ಯ ಅವರನ್ನು, ಎ2 ಆಗಿ ಡಿಸಿಎಂ, ಎ3 ಆಗಿ ಗೃಹ ಸಚಿವರನ್ನು ಆರೋಪಿಗಳಾಗಿ ಮಾಡಿ ತಕ್ಷಣ ಅವರನ್ನು ಬಂಧಿಸಬೇಕು ಎಂದು ಸರಕಾರದ ವಿರುದ್ಧ ಹರಿಹಾಯ್ದರು.



**ಸಾಧನಾ ಸಮಾವೇಶಕ್ಕೆ ಸರ್ವೆ ಮಾಡಿದ್ದರು**

**ಹೊಸಪೇಟೆಯಲ್ಲಿ ಸಾಧನ ಸಮಾವೇಶಕ್ಕೆ ಈಡೀ ಸರಕಾರವೇ ಅನೇಕ ಬಾರಿ ಭೇಟಿ ನೀಡಿ ಸರ್ವೆ ಮಾಡಲಾಗಿತ್ತು. ಆದರೆ, ಪಕ್ಷದ ಕಾರ್ಯಕ್ರಮಕ್ಕೆ ತೋರಿದ ಕಾಳಜಿ ವಿಜಯೋತ್ಸವಕ್ಕೆ ತೋರದೆ, ಯಾವುದೇ ತಯಾರಿಯಿಲ್ಲದೆ ಆಯೋಜಿಸಿರುವುದು ದುರದೃಷ್ಟಕರವಾಗಿದೆ. ಪ್ರಕರಣದ ಬಗ್ಗೆ ಸಂಪೂರ್ಣ ತನಿಖೆ ನಡೆಸಲು ಸಿಬಿಐ ತನಿಖೆಗೆವಹಿಸಬೇಕು. ಸರಕಾರಕ್ಕೆ ಮನುಷ್ಯತ್ವ ಇದ್ದರೆ ಮೃತಪಟ್ಟ ಕುಟುಂಬಕ್ಕೆ ಒಂದು ಕೋಟಿ ರೂ. ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.**

> **ಘಟನೆಗೆ ಸಂಬಂಧಿಸಿದಂತೆ ಸಿಎಂ ಅವರು ಸಭಾಪತಿಗಳೊಂದಿಗೆ ಚರ್ಚಿಸಿ ಮೂರು ದಿನಗಳ ಕಾಲ ವಿಶೇಷ ಜಂಟಿ ಅಧಿವೇಶನ ಕರೆಯಬೇಕು. ಸಿಎಂ ಅವರು ರಾಜ್ಯದ ಜನತೆಗೆ ಕೂಡಲೇ ಕ್ಷಮೆಯಾಚಿಸಬೇಕು**
> **– ಶ್ರೀರಾಮುಲು, ಮಾಜಿ ಸಚಿವ**

# ಶಿಕ್ಷಣ, ಕೌಶಲ ಒದಗಿಸುವ ಸಂಸ್ಥೆಗಳನ್ನು ಸ್ಥಾಪಿಸಿ

• **ಉದಯವಾಹಿನಿ, ಬೆಳಗಾವಿ**

ರಡ್ಡಿ ಸಮುದಾಯದ ನಾಯಕರು ಎಲ್ಲಾ ಸಮಾಜದ ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವಂಥ ಶಿಕ್ಷಣ, ಕೌಶಲ ಒದಗಿಸುವ ಸಂಸ್ಥೆಗಳನ್ನು ಸ್ಥಾಪಿಸಬೇಕು ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಸಲಹೆ ನೀಡಿದರು. ತಾಲ್ಲೂಕಿನ ಕೆ.ಕೆ.ಗುಡ್ಡದ ಮೇಲೆ ಶುಕ್ರವಾರ ಹಮ್ಮಿಕೊಂಡಿದ್ದ ವೆಂಕಟೇಶ್ವರ ದೇವಸ್ಥಾನ, ಹೇಮರಡ್ಡಿ ಮಲ್ಲಮ್ಮ ಧ್ಯಾನ ಮಂದಿರ, ಕಲ್ಯಾಣ ಮಂಟಪ ನಿರ್ಮಾಣಕ್ಕೆ ಭೂಮಿಪೂಜೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಡ್ಡಿ ಸಮುದಾಯದ ಜನರು ವಿದ್ಯಾವಂತರು, ಅಧಿಕಾರಸ್ಥರು, ಆರ್ಥಿಕವಾಗಿ ಸದೃಢತೆ ಹೊಂದಿದವರಿದ್ದೀರಿ. ಸಮಾಜ ನಿಮ್ಮಿಂದ ಬಹಳ ಅಪೇಕ್ಷೆಪಡುತ್ತದೆ. ಹಾಗಾಗಿ ಇಲ್ಲಿ ದೇವಸ್ಥಾನ, ಕಲ್ಯಾಣ ಮಂಟಪ ನಿರ್ಮಿಸುವ ಜತೆಗೆ, ಸಮಾಜದ ವಿದ್ಯಾರ್ಥಿ ಗಳು ಹೆಚ್ಚಿನ ಸಾಧನೆ ಮಾಡಲು ಶಿಕ್ಷಣ ಸಂಸ್ಥೆಗಳನ್ನು ಕಟ್ಟಬೇಕು. ಆಗ ನಾವು ಗೆಲುವು ಸಾಧಿಸಿದಂತೆ ಎಂದು ಅಭಿಪ್ರಾಯಪಟ್ಟರು. ಬೆಳಗಾವಿ, ಧಾರವಾಡ, ಬೆಂಗಳೂರಿನಲ್ಲಿ ಯುಪಿಎಸ್‌ಸಿ ಪರೀಕ್ಷೆಗಳಿಗೆ ತರಬೇತಿ ನೀಡಲು ಅವಕಾಶವಿದೆ. ಸಮಾಜಕ್ಕೆ ತಾಂತ್ರಿಕ ಮತ್ತು ಕೌಶಲ ತರಬೇತಿ ಸಂಸ್ಥೆಗಳ ಅಗತ್ಯವಿದೆ. ಹಾಗಾಗಿ ಈ ದೇವಾಲಯದಲ್ಲಿ ದೇವರ ವಿಗ್ರಹ ಪ್ರತಿಷ್ಠಾಪನೆ ಯಾಗುವ ಹೊತ್ತಿಗೆ, ಶಿಕ್ಷಣ ಸಂಸ್ಥೆಗಳ ಸ್ಥಾಪನೆಯನ್ನು ನಾವು ನಿರೀಕ್ಷಿಸುತ್ತೇವೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳಕರ, ರಡ್ಡಿ ಸಮುದಾಯವು ಸಾಮರಸ್ಯಕ್ಕೆ ಹೆಸರಾಗಿದೆ. ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ವೆಂಕಟೇಶ್ವರ ದೇವಸ್ಥಾನ ನಿರ್ಮಿಸುತ್ತಿರುವುದು ನನ್ನ ಅದೃಷ್ಟ. ಈ ಕಾಮಗಾರಿಗೆ ಎಲ್ಲಾ ರೀತಿಯ ಸಹಕಾರ ನೀಡುತ್ತೇನೆ. ಇದು ನನ್ನದೇ ಸಮುದಾಯದ ಕಾರ್ಯವೆಂದು ತಿಳಿದು, ಕೊರತೆಯಾಗದಂತೆ ನೋಡಿಕೊಳ್ಳುತ್ತೇನೆ ಎಂದರು.

ಬೆಳಗಾವಿ ನಗರ ಈಗ ವೇಗವಾಗಿ ಬೆಳೆಯುತ್ತಿದೆ. ಈ ದೇವಾಲಯವು ಪ್ರವಾಸೋದ್ಯಮ ಆಕರ್ಷಣೆಗಳಿಗೆ ಸೇರ್ಪಡೆಯಾಗಲಿದೆ. ಮುಂದಿನ ದಿನಗಳಲ್ಲಿ ಇಲ್ಲಿ ಶಿಕ್ಷಣ ಸಂಸ್ಥೆ ಸ್ಥಾಪಿಸಿದರೂ ಸಹಕಾರ ನೀಡುತ್ತೇನೆ ಎಂದು ಭರವಸೆ ನೀಡಿದರು.



ಉದಯವಾಹಿನಿ ಚಿತ್ರ


> **ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಸಮುದಾಯದಿಂದ ಜನಸ್ನೇಹಿ ಕಾರ್ಯಕ್ರಮಗಳು ನಡೆಯಬೇಕಿದೆ. ಉನ್ನತ ಶಿಕ್ಷಣ ಪಡೆಯುತ್ತಿರುವ ಯುವಕ, ಯುವತಿಯರಿಗೆ ಹಾಸ್ಟೆಲ್‌ಗಳ ಅಗತ್ಯವಿದೆ. ಅವುಗಳನ್ನು ಸ್ಥಾಪಿಸಬೇಕು ಎಂದರು.**

# ವರ್ಷಪೂರ್ತಿ ಪರಿಸರ ದಿನಾಚರಣೆ ನಡೆಸಬೇಕು

• **ಉದಯವಾಹಿನಿ, ವಾಡಿ**

ಪಟ್ಟಣದ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಬಿಜೆಪಿ ಮುಖಂಡರು ಗಿಡ ನೆಟ್ಟು ವಿಶ್ವ ಪರಿಸರ ದಿನ ಆಚರಿಸಿದರು. ಈ ವೇಳೆ ಬಿಜೆಪಿ ಅಧ್ಯಕ್ಷ ವೀರಣ್ಣ ಯಾರಿ ಅವರು ಮಾತನಾಡಿ ಕೇವಲ ಒಂದು ದಿನ ಪರಿಸರ ದಿನಾಚರಣೆ ಮಾಡಿದರೆ ಸಾಲದು. ವರ್ಷಪೂರ್ತಿ ಪರಿಸರ ದಿನಾಚರಣೆ ನಡೆಸಬೇಕಾಗಿದೆ ಎಂದರು.

ಅರಣ್ಯ ನಾಶ ದಿಂದ ಅಂತಜಲ ಮಟ್ಟ ದಿನದಿಂದ ದಿನಕ್ಕೆ ಕುಸಿಯುತ್ತಿದ್ದು, ಕುಡಿಯುವ ನೀರಿಗೂ ಪರಿತಪಿಸ ಬೇಕಾದ ದಿನಗಳು ಎದುರಾಗುತ್ತಿವೆ. ಗಿಡಮರ ಗಳನ್ನು ಕಡಿದು ಕಾಡನ್ನು ಬರಿದಾಗಿಸುತ್ತಿರುವು ದರಿಂದ ಮಳೆ ಕೊರತೆಯಾಗಿದೆ. ಪರಿಸರ ಸಂರಕ್ಷಣೆ, ಉತ್ತಮ ಮಳೆಗಾಗಿ ಪ್ರತಿದಿನವೂ ಸಸಿ ನೆಟ್ಟು ಅವುಗಳನ್ನು ಬೆಳೆಸಲು ಪಣತೊಡಬೇಕು. ಪರಿಸರವನ್ನು ಸಂರಕ್ಷಿಸಿ, ನೆಲ– ಜಲವನ್ನು ಉಳಿಸುವುದು ಅನಿವಾರ್ಯವಾಗಿದೆ ಎಂದರು. ನಮ್ಮ ಆರೋಗ್ಯದ ಮೇಲು ಗಂಭೀರ ಪರಿಣಾಮ ಉಂಟಾಗತ್ತಿರುವುದರಿಂದ ಪ್ರತಿ ಮನೆ ಹಾಗು ವಾರ್ಡ್ ಮಟ್ಟದಲ್ಲಿ ಗಿಡನೇಡುವ ಕಾರ್ಯ ನಮ್ಮ ಪಕ್ಷದ ಕಾರ್ಯಕರ್ತರಿಂದ ನಡೆಯಲಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

> **ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ. ಪರಿಸರವನ್ನು ಇಂದು ನಾವು ಉಳಿಸಿದರೆ ಮುಂದಿನ ಪೀಳಿಗೆ ಸುಖವಾಗಿರಬಹುದು. ಮರಗಳನ್ನು ಕಡಿಯುತ್ತಿರುವುದರಿಂದ ಇತ್ತೀಚಿನ ದಿನಗಳಲ್ಲಿ ಹವಾಮಾನದಲ್ಲಿ ಏರುಪೇರಾಗುತ್ತಿದೆ.**

# ಪ್ಲಾಸ್ಟಿಕ್ ಬಳಕೆ ನಿಲ್ಲಿಸಿ, ಪರಿಸರ ಉಳಿಸಿ

• **ಉದಯವಾಹಿನಿ, ವಿಜಯಪುರ**

ಪ್ರಸ್ತುತ ದಿನಗಳಲ್ಲಿ ನಾವು ಬಳಕೆ ಮಾಡುವ ಪ್ಲಾಸ್ಟಿಕ್‌ನಿಂದ ಪರಿಸರಕ್ಕೆಅತಿಯಾದ ಹಾನಿ ಉಂಟುಮಾಡುತ್ತಿದೆ. ಮಣ್ಣಿನಗುಣಮಟ್ಟತೆಕಡಿಮೆಯಾಗಿ ಅನೇಕ ಅಪಾಯಕಾರಿ ರೋಗಗಳ ಹುಟ್ಟಿಗೆಕಾರಣವಾಗುತ್ತಿದೆ ಎಂದು ಎಕ್ಸಲಂಟ್ ಆಂಗ್ಲ ಮಾಧ್ಯಮ ಶಾಲೆಯ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿಗಳಾದ ಡಾ.ಶಿವಾನಂದ ಕೆಲೂರರವರು ತಮ್ಮ ಮಾತುಗಳಿಂದ ವಿದ್ಯಾರ್ಥಿಗಳಲ್ಲಿ ಜಾಗ್ರತೆನ್ನುಂಟು ಮಾಡಿದರು. ನಗರದ ಹೊರ ವಲಯದ ಇಟ್ಟಂಗಿಹಾಳ ರಸ್ತೆಯಲ್ಲಿರುವ ಎಕ್ಸಲಂಟ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸಸಿಗಳನ್ನು ನೆಡುವುದರ ಮೂಲಕವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯಲ್ಲಿತಮ್ಮ ಪಾತ್ರದ ಬಗ್ಗೆ ತಿಳಿಸಿದರು.

# ಸ್ವಂತ ಕಟ್ಟಡ ನಿರ್ಮಾಣಕ್ಕೆ ಮನವಿ

• **ಉದಯವಾಹಿನಿ, ಚನ್ನಮ್ಮನ ಕಿತ್ತೂರು**





ಉದಯವಾಹಿನಿ ಚಿತ್ರ

ಐತಿಹಾಸಿಕ ಚನ್ನಮ್ಮನ ಕಿತ್ತೂರು ತಾಲ್ಲೂಕಾಗಿ ಸುಮಾರು ವರ್ಷ ಕಳೆದರೂ ಬೆರಳೆಣಿಕೆಯಷ್ಟು ಇಲಾಖೆಗಳು ತಾಲ್ಲೂಕಿಗೆ ಬಂದದ್ದು ವಿಪರ್ಯಾಸದ ಸಂಗತಿ. ಸ್ವಂತ ಕಟ್ಟಡದಲ್ಲಿ ಒಂದಿಷ್ಟು ಇಲಾಖೆಗಳು ಮಾತ್ರ ಕಾರ್ಯನಿರ್ವಹಿಸುತ್ತಿವೆ. ಅದರಲ್ಲಂತೂ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಸ್ವಂತ ಕಟ್ಟಡ ಇಲ್ಲದೇ ಬೇರೆ ಕಟ್ಟಡದಲ್ಲಿ 14 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದೆ ಎಂದು ರಾಣಿ ಚನ್ನಮ್ಮ ನವಭಾರತ ಸೇನೆ ರಾಜ್ಯ ಸಂಚಾಲಕ ಜಗದೀಶ ಕಡೋಲಿ ಬೇಸರ ವ್ಯಕ್ತಪಡಿಸಿದ್ದಾರೆ. ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಮುಂದೆ ಪ್ರತಿಭಟಿಸಿ ತಹಶೀಲ್ದಾರ ಅವರಿಗೆ ಮನವಿ ಸಲ್ಲಿಸಿ ಮಾತನಾಡಿ ನಮ್ಮ ಸಂಘಟಣೆಯಿಂದ ಸರ್ಕಾರಕ್ಕೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಇದುವರೆಗೆ ಯಾವುದೇ ಪ್ರಯೋಜನವಾಗಿಲ್ಲ. ಜನಪ್ರತಿನಿಧಿಗಳು, ಶಿಕ್ಷಣ ಸಚಿವರು ಈ ಕಡೆ ಗಮನಹರಿಸಿ ಆದಷ್ಟು ಬೇಗನೇ ಸ್ವಂತ ಕಟ್ಟಡ ನಿರ್ಮಾಣ ಮಾಡಬೇಕು. ಇಲ್ಲದಿದ್ದರೆ ಮುಂಬರುವ ದಿನಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಮುಂಭಾಗ ಉಗ್ರ ಹೋರಾಟದೊಂದಿಗೆ ಉಪವಾಸ ಸತ್ಯಾಗ್ರಹ ನಡೆಸಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

# ಕಾನೂನಿಗೆ ಗೌರವ ಪ್ರತಿಯೊಬ್ಬನ ಕರ್ತವ್ಯ : ರಾಜೇಂದ್ರ

• **ಉದಯವಾಹಿನಿ, ಪುತ್ತೂರು**

ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಪೊಲೀಸ್ ಇಲಾಖೆಯಷ್ಟೇ ಸಾರ್ವಜನಿಕರಿಗೂ ಇದೆ. ಸಾಮಾಜಿಕ ಜಾಲತಾಣಗಳು ಸೇರಿದಂತೆ ಮಾಧ್ಯಮ ಗಳ ಬಳಕೆಯಲ್ಲಿ ಜನರು ಜವಾಬ್ದಾರಿಯುತವಾಗಿ ವರ್ತಿಸಬೇಕು. ಪ್ರತಿಯೊಬ್ಬರು ಕಾನೂನಿಗೆ ಗೌರವ ನೀಡುವ ಜತೆಗೆ ಕಟ್ಟುನಿಟ್ಟಾಗಿ ಅದನ್ನು ಪಾಲನೆ ಮಾಡುವುದು ಅತೀ ಅಗತ್ಯ ಎಂದು ಜಿಲ್ಲಾ ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಜೇಂದ್ರ ಹೇಳಿದರು. ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ನಗರದ ಟೌನ್ ಹಾಲ್‌ನಲ್ಲಿ ಗುರುವಾರ ನಡೆದ ಶಾಂತಿಸಭೆಯಲ್ಲಿ ಅವರು ಮಾತನಾಡಿದರು.

ಡಿವೈಎಸ್ಪಿ ಅರುಣ್ ನಾಗೇಗೌಡ ಅವರು ಮಾತನಾಡಿ, ಅಹಿತಕರ ಘಟನೆ ಸಂದರ್ಭ ಪೊಲೀಸ್ ಇಲಾಖೆ ಯಾವುದೇ ಮುಲಾಜು ಇಲ್ಲದೆ ಅದನ್ನು ಹತ್ತಿಕ್ಕುವ ಹಾಗೂ ಕಾನೂನುಕ್ರಮ ಕೈಗೊಳ್ಳುವ ಕೆಲಸ ಮಾಡುತ್ತದೆ. ಹಾಗಾಗಿ ಯಾವುದೇ ಘಟನೆಗಳಿಗೆ ಬಣ್ಣ ಹಚ್ಚುವ ಕೆಲಸ ಮಾಡದೆ ಸೌಹಾರ್ಧತೆಯನ್ನು ಕಾಪಾಡಿಕೊಳ್ಳಬೇಕು. ಸಾರ್ವಜನಿಕರ ಹಿತಾಸಕ್ತಿಗೆ ಧಕ್ಕೆ ತರದಂತೆ ವರ್ತನೆ ಇರಬೇಕು. ಹಬ್ಬಗಳನ್ನು ಪರಸ್ಪರ ಸೌಹಾರ್ಧತೆಯಿಂದ ಆಚರಣೆ ಮಾಡಬೇಕು ಎಂದರು. ಪುತ್ತೂರು ಮಹಾಲಿಂಗೇಶ್ವರ ದೇವಾಲಯದ ವ್ಯವಸ್ಥಾಪನ ಸಮಿತಿ ಅಧ್ಯಕ ಈಶ್ವರ ಭಟ್ ಪಂಜಿಗುಡ್ಡೆ ಮಾತನಾಡಿ, ಹಬ್ಬ ಅನ್ನುವುದು ಇಡೀ ಮಾನವ ಕುಲಕ್ಕೆ ಅನ್ನುವ ಯೋಚನೆ ನಮ್ಮಲ್ಲಿ ಇರಬೇಕು. ಜಾತಿ, ಧರ್ಮ ಅನ್ನುವುದು ನಂತರ. ಮೊದಲು ನಾವು ಭಾರತೀಯರು. ಧರ್ಮ ಹೆಸರಿನಲ್ಲಿ ಪರಸ್ಪರ ಟೀಕೆ, ದೂಷಣೆ, ಸಾಮಾಜಿಕ ಜಾಲತಾಣದಲ್ಲಿ ಉತ್ತರ–ಪ್ರತ್ಯುತ್ತರ ಮಾಡುವ ಬದಲು ನಾವೆಲ್ಲರೂ ಒಂದಾಗಿ ಜೀವಿಸಲು ಸರ್ವ ಧರ್ಮದ ಹಬ್ಬಗಳು ಪ್ರೇರಣೆ ನೀಡಲಿ ಎಂದರು.

ಬಿಜೆಪಿ ಮುಖಂಡ ಮುರಳೀಕೃಷ್ಣ ಹಸಂತ್ತಡ್ಕ ಅವರು ಮಾತನಾಡಿ, ಹಿಂದೂಗಳಿಗೆ ಗೋವು ದೇವರ ಸಮಾನ. ಅದರ ಹತ್ಯೆ ಆಗದಂತೆ ಪೊಲೀಸ್ ಇಲಾಖೆ ನೋಡಿಕೊಳ್ಳಬೇಕು. ಆಗ ಯಾವುದೇ ಸಮಸ್ಯೆ ಉಂಟಾಗುವುದಿಲ್ಲ. ಅಪರಾಧ ಕೃತ್ಯಗಳಿಗೆ ಡ್ರಗ್ಸ್, ಸಾಮಾಜಿಕ ಜಾಲ ತಾಣ ಕಾರಣವಾಗುತ್ತಿದ್ದು ಇದರ ನಿಯಂತ್ರಣಕ್ಕೂ ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದರು.



ಉದಯವಾಹಿನಿ ಚಿತ್ರ

> **ಗಾಂಜಾದಂತಹ ಅಮಲು ಪದಾರ್ಥಗಳ ಜಾಲ ಯುವ ಸಮಾಜವನ್ನು ದಾರಿ ತಪ್ಪಿಸುತ್ತಿದೆ. ಇದರಿಂದ ಹಲವು ಸಂಘರ್ಷಗಳು ಉಂಟಾಗುತ್ತಿದೆ. ಹೀಗಾಗಿ ಡ್ರಗ್ಸ್ ಮುಕ್ತ ಪುತ್ತೂರಿನ ನಿರ್ಮಾಣದ ಅಗತ್ಯ ಇದೆ. ಶಾಲಾ ಕಾಲೇಜುಗಳಲ್ಲಿ ಪರಸ್ಪರ ಶಾಂತಿ, ಸಾಮರಸ್ಯ ಮೂಡಿಸುವ ಕಾರ್ಯಾಗಾರಗಳು ಪೊಲೀಸ್ ಇಲಾಖೆಯ ನೇತೃತ್ವದಲ್ಲಿ ನಡೆಯಬೇಕು**
> **– ಅಬ್ದುಲ್ ರಜಾಕ್ ಬಪ್ಪಳಿಗೆ**


# ಈರುಳ್ಳಿ ಬೆಂಬಲ ಬೆಲೆ, ಬೆಳೆ ಪರಿಹಾರ ನೀಡಲು ಸರ್ಕಾರಕ್ಕೆ ಮನವಿ

• **ಉದಯವಾಹಿನಿ, ಕೊಲ್ಹಾರ**

ಕೊಲ್ಹಾರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ರೈತರ ಈರುಳಿ (ಉಳ್ಳಾಗಡ್ಡಿ) ಬೆಳಯ ಫರಿಹಾರ, ಬೆಂಬಲ ಬೆಲೆ ನೀಡಲು ಸರ್ಕಾರಕ್ಕೆ ಕರ್ನಾಟಕ ರಾಜ್ಯ ರೈತ ಸಂಘದಿಂದ ತಹಶೀಲ್ದಾರ ಎಸ್ ಎಸ್ ನಾಯಕ ಲಮಠ ರವರಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ರಾಜ್ಯ ರೈತರ ಸಂಘ, ಹಸಿರು ಸೇನೆ ತಾಲ್ಲೂಕ ಘಟಕ ಅಧ್ಯಕ್ಷ ಸೋಮು ಬಿರಾದಾರ ಮಾತನಾಡಿ ಕೊಲ್ಹಾರ, ಬಬಲೇಶ್ವರ ತಾಲ್ಲೂಕು, ಸುತ್ತಮುತ್ತಲ್ಲಿನ ಎಲ್ಲಾ ರೈತರು ಬೆಳೆದ ಈರುಳ್ಳಿ ಬೆಳೆ ಮೇ ತಿಂಗಳಲ್ಲಿ 15–16 ದಿನಗಳಿಂದ ಸತತವಾಗಿ ಅತೀ ಮಳೆಯಿಂದ ಈರುಳ್ಳಿ ಬೆಳೆಗಳು ಮುಚ್ಚಿದ ಕಾರಣ ಇಲಾರೆ, ಕುಟ್ಟರಿಯಲ್ಲಿ ಕೊಳುತ್ತು ನಾಶವಾಗುತ್ತಿದ್ದು, ಈರುಳ್ಳಿ ಬೆಳೆಯ ಬೆಲೆ ಕುಸಿತಕಂಡಿದ್ದು ಇದರಿಂದ ನಮ್ಮ ರೈತರಿಗೆ ತುಂಬಾ ಹಾನಿಯಾಗಿದ್ದು, ಕಾರಣ ತಾವು ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೈತರ ಸ್ಟೋರೇಜ್ ಇಲಾರಿಗಳನ್ನು ತೋಟಗಾರಿಕೆಯಿಂದ 10 ದಿನಗಳಲ್ಲಿ ಪರಿಶೀಲಿಸಿ, ರೈತರಿಗೆ 1 ಎಕರೆಗೆ ಸುಮಾರು 65 ರಿಂದ 70 ಸಾವಿರ ಖರ್ಚ ಹಾಕಿದ್ದು, ಇದರ ಪರಿಹಾರ ಕೊಡಬೇಕು.

ಈರುಳ್ಳಿ (ಉಳ್ಳಾಗಡ್ಡಿ) ರಾಜ್ಯ ಸರಕಾರ, ಕೇಂದ್ರ ಸರಕಾರದಿಂದ ಬೆಂಬಲ ಬೆಲೆ ಘೋಷಿಸಬೇಕು, ಬೆಳೆಯ ಪರಿಹಾರ ಹಣ ಬಿಡುಗಡೆಮಾಡಿ ಬೆಂಬಲ ಬೆಲೆ ಘೋಷಿಸಿ ರೈತರಿಗೆ ಸಹಾಯ ಮಾಡಬೇಕೆಂದು ಈ ಮೂಲಕ ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇವೆ. ಇಲ್ಲದಿದ್ದರೆ ನಾವು 10 ದಿನಗಳ ನಂತರ ಎಲ್ಲಾ ರೈತರು ಸೇರಿಕೊಂಡು ಯುಕೆಪಿ ರಾಜ್ಯ ಹೆದ್ದಾರಿಯಲ್ಲಿ ಕುಳಿತು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

# ಶುದ್ಧ ಪರಿಸರ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ : ಗುರಿಕಾರ

• **ಉದಯವಾಹಿನಿ, ಚಿತ್ತಾಪುರ**

ಆರೋಗ್ಯಯುತ ಸಮಾಜ ನಿರ್ಮಾಣವಾಗಬೇಕಾದರೆ ಸ್ವಚ್ಛ ಹಾಗೂ ಶುದ್ಧ ಪರಿಸರ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಪುರಸಭೆ ಮುಖ್ಯಾಧಿಕಾರಿ ಮನೋಜಕುಮಾರ ಗುರಿಕಾರ ಅಭಿಪ್ರಾಯಪಟ್ಟರು. ಪಟ್ಟಣದ ಪುರಸಭೆ ಕಚೇರಿ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪರಿಸರ ಸ್ವಚ್ಛತೆ ಇರಬೇಕಾದರೆ ಎಲ್ಲರೂ ಸಸಿಗಳನ್ನು ನೆಟ್ಟು ಬೆಳೆಸಿ ಪೋಷಿಸುವ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು. ಪುರಸಭೆ ಅಧ್ಯಕ್ಷೆ ಅನ್ನಪೂರ್ಣ ನಾಗಪ್ಪ ಕಲ್ಲಕ್ ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿದರು.

# ಪರಿಸರವೆಂದರೆ ಕೇವಲ ಮರ ನೆಡುವುದೇ ಅಲ್ಲ

• **ಉದಯವಾಹಿನಿ, ಬೀದರ**

ಪರಿಸರ ಸಂರಕ್ಷಣೆ ವರ್ಷಕ್ಕೊಮ್ಮೆ ಆಚರಿಸುವ ವಿಶ್ವ ಪರಿಸರ ದಿನಕ್ಕೆ ಸೀಮಿತವಾಗದೆ ನಿತ್ಯ ಪರಿಸರ ದಿನವಾಗಿ ಆಚರಿಸಬೇಕು ಎಂದು ಪ್ರಾಚಾರ್ಯ ಡಾ. ಬಸವರಾಜ ಬಲ್ಲೂರ ನುಡಿದರು ಅವರು ಕರಾಶಿ ಸಂಸ್ಥೆಯ ಕರ್ನಾಟಕ ಪದವಿಪೂರ್ವ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಪರಿಸರವೆಂದರೆ ಕೇವಲ ಮರ ನೆಡುವುದೇ ಅಲ್ಲ ನಮ್ಮ ಸುತ್ತಲಿನ ಪಂಚಭೂತಗಳನ್ನು ಮಲೀನಗೊಳಿಸದಂತೆ ಎಚ್ಚರವಹಿಸಬೇಕು.

ಇಂದು ಏರುತ್ತಿರುವ ಜಾಗತಿಕ ತಾಪಮಾನ ನಿಯಂತ್ರಣ ಇಂದಿನ ತುರ್ತು ಅಗತ್ಯವಾಗಿದೆ. ಇದೆಲ್ಲ ಒಬ್ಬರಿಂದ ಆಗುವ ಕೆಲಸವಲ್ಲ ಇದಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು ಅಂದಾಗ ಸ್ವಸ್ಥ ಪರಿಸರ ನಿರ್ಮಾಣ ಸಾಧ್ಯವೆಂದು ಅಭಿಪ್ರಾಯಪಟ್ಟರು.

# ನಿಷೇಧಿತ ಎಂಡಿಎಂಎ ಮಾರಾಟ ಇಬ್ಬರ ಬಂಧನ

• **ಉದಯವಾಹಿನಿ, ಕುಂದಾಪುರ**

ಕಸಬಾ ಗ್ರಾಮದ ಕೋಡಿ ಚಕ್ರೇಶ್ವರಿ ದೇವಸ್ಥಾನದ ಬಳಿ ನಿಷೇಧಿತ ಮಾದಕ ವಸ್ತು ಎಂಡಿಎಂಎ ಮಾರಾಟ ಮಾಡುತ್ತಿದ್ದ ಇಬ್ಬರು ವ್ಯಕ್ತಿಗಳನ್ನು ಕುಂದಾಪುರ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ಕಾಪು ತಾಲ್ಲೂಕಿನ ಸುಭಾಷ್ ನಗರದ ಸರ್ಕಾರಿ ಗುಡ್ಡೆಯ ನಿವಾಸಿ ಮುದಸ್ಸಿರ್ (23) ಮತ್ತು ಉಡುಪಿ ತಾಲ್ಲೂಕಿನ ಉದ್ಯಾವರ ನಿವಾಸಿ ಆದೇನ್ ಲೋಬೊ (18) ಎಂದು ಗುರುತಿಸಲಾಗಿದೆ. ಎಂಡಿಎಂಎ ಮಾರಾಟ ಮಾಡಲು ಯತ್ನಿಸುತ್ತಿದ್ದಾಗ ಇಬ್ಬರೂ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಆರೋಪಿಸಲಾಗಿದೆ.

ಶಂಕಿತರನ್ನು ಶೋಧಿಸಿದಾಗ, ಪೊಲೀಸರು ಸುಮಾರು 2,49,440 ರೂ. ಮೌಲ್ಯದ 124.72 ಗ್ರಾಂ ಎಂಡಿಎಂಎ ಮತ್ತು ಮಾದಕವಸ್ತು ವಿತರಣೆ, ಪ್ಯಾಕೇಜಿಂಗ್‌ನಲ್ಲಿ ಬಳಸಲಾಗುತ್ತಿರುವ ಶಂಕಿತ ಹಲವಾರು ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕುಂದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಂಧಿತ ವ್ಯಕ್ತಿಗಳನ್ನು ನ್ಯಾಯಾಲಯದ ಮುಂದೆ ಹಾಜರು ಪಡಿಸಲಾಗುವುದು. ಹೆಚ್ಚಿನ ತನಿಖೆ ನಡೆಯುತ್ತಿದೆ.

## ಶಿವಮೊಗ್ಗ ಜಿಲ್ಲೆಯಲ್ಲಿ ಹೊಸ ವಿದ್ಯುತ್ ಸಂಪರ್ಕಕ್ಕೆ ಸಿಗದ ಎನ್‌ಒಸಿ, ವಿದ್ಯುತ್ ಸಂಪರ್ಕಕ್ಕೆ ಎನ್‌ಒಸಿ ಕಡ್ಡಾಯ ಜನರಿಗೆ ಫಜೀತಿ


# ಮೆಸ್ಕಾಂ- ಗ್ರಾ.ಪಂ. ಜಟಾಪಟಿಗೆ ಸಾರ್ವಜನಿಕರು ಸುಸ್ತು

• **ಉದಯವಾಹಿನಿ, ತೀರ್ಥಹಳ್ಳಿ**

ವಿದ್ಯುತ್ ಸಂಪರ್ಕಕ್ಕೆ ಅಗತ್ಯವಾಗಿರುವ ಪ್ರಮುಖ ದಾಖಲೆ ಎನ್‌ಒಸಿ ಪಡೆಯುವುದು ಸಾರ್ವಜನಿಕರಿಗೆ ಇದೀಗ ಸುಲಭವಲ್ಲ. ವಿವಿಧ ಮಾಹಿತಿಯುಳ್ಳ ಕ್ರಮಬದ್ಧ ಎನ್‌ಒಸಿ ದಾಖಲೆ ಇಲ್ಲದಿದ್ದರೆ ವಿದ್ಯುತ್ ಸಂಪರ್ಕ ಸಿಗುವುದಿಲ್ಲ. ಎನ್‌ಒಸಿ ಸಾರ್ವಜನಿಕ ವಲಯದಲ್ಲಿ ಭಾರೀ ಗದ್ದಲ ಎಬ್ಬಿಸಿದ್ದು, ಆಡಳಿತದಲ್ಲಿಕಿರಿಕಿರಿ ಉಂಟುಮಾಡಿದೆ. ಮನೆ, ವಾಣಿಜ್ಯ ಕಟ್ಟಡ, ಮಳಿಗೆಗೆ ವಿದ್ಯುತ್ ಸಂಪರ್ಕ ನೀಡಲು ಸ್ಥಳೀಯವಾಗಿ ಮೆಸ್ಕಾಂ ಎನ್‌ಒಸಿ ದಾಖಲೆ ಕ್ರಮಬದ್ಧತೆ ಅಂಶಗಳ ಕುರಿತು ಸೂಚನೆ ಪತ್ರ ನೀಡಿದೆ. ಈ ಪತ್ರದಲ್ಲಿರುವ ಅಂಶಗಳನ್ನು ಉಲ್ಲೇಖಿಸಿ ಎನ್‌ಒಸಿ ನೀಡಲು ಗ್ರಾಮ ಪಂಚಾಯಿತಿ ಆಡಳಿತ ಸಿದ್ಧವಾಗಿಲ್ಲ. ಈ ರೀತಿಯಲ್ಲಿಎನ್‌ಒಸಿ ನೀಡುವ ಅಧಿಕಾರ ಗ್ರಾ.ಪಂ.ಗಿಲ್ಲಎಂದು ಸ್ಪಷ್ಟನೆ ನೀಡಿ ಸಾರ್ವಜನಿಕರ ಅರ್ಜಿ ತಿರಸ್ಕರಿಸುತ್ತಿರುವುದು ಬಿಕ್ಕಟ್ಟಿಗೆ ಕಾರಣವಾಗಿದೆ. ಮೆಸ್ಕಾಂ, ಗ್ರಾ.ಪಂ. ಆಡಳಿತದ ಜಂಗೀಕುಸ್ತಿಯ ನಡುವೆ ಸಿಕ್ಕಿ ಕೊಂಡಿರುವ ವಿದ್ಯುತ್ ಸಂಪರ್ಕ ಕೋರಿದ ಅರ್ಜಿದಾರ ಸುಸ್ತಾಗು ವಂತಾಗಿದೆ. ವರ್ಷದಿಂದೀಚೆ ಈ ಸಮಸ್ಯೆ ಉಲ್ಬಣ ಹಂತಕ್ಕೆ ತಲುಪಿದ್ದು ಸರಕಾರ, ಜನಪ್ರತಿನಿಧಿಗಳ ಗಮನದಲ್ಲಿದ್ದರೂ ಬಗೆಹರಿ ದಿಲ್ಲ. ಕೆಲ ದಿನಗಳಿಂದ ಮೆಸ್ಕಾಂ ನಿಯಮವನ್ನು ಕಟ್ಟುನಿಟ್ಟಾಗಿ ಜಾರಿ ಮಾಡಿದ್ದು, ವಿದ್ಯುತ್ ಸಂಪರ್ಕ ಪಡೆಯುವುದು ಸಾರ್ವಜನಿಕರಿಗೆ ಕಿರಿಕಿರಿ ಎನ್ನಿಸುವಂತಾಗಿದೆ.

**ಎನ್‌ಒಸಿ ನೀಡಲು ಸಾಧ್ಯವಿಲ್ಲ**

**ಇಕ್ಕಟ್ಟಿನ ನಿಯಮ:** ಗೃಹ ಮತ್ತು ವಾಣಿಜ್ಯ ಉದ್ದೇಶದ ವಿದ್ಯುತ್ ಸಂಪರ್ಕ ಪಡೆಯಲು ಸೂಕ್ತ ಮಾಹಿತಿಯುಳ್ಳ ಎನ್‌ಒಸಿ ನೀಡುವ ಕ್ರಮವನ್ನು ಮೆಸ್ಕಾಂ ಜಾರಿ ಮಾಡಿದೆ. 2024 ಡಿಸೆಂಬರ್ 17ರಂದು ಸುಪ್ರೀಂಕೋರ್ಟ್ ನೀಡಿದ ಆದೇಶದ ಅನ್ವಯ ಎನ್‌ಒಸಿ ಪಡೆಯಲು ಮೆಸ್ಕಾಂ ಕ್ರಮವಹಿಸಿದೆ. ಇದರನ್ವಯ ಗ್ರಾ.ಪಂ. ಆಡಳಿತದಲ್ಲಿಮನೆ, ಕಟ್ಟಡ, ಮಳಿಗೆ ಹೊಂದಿರುವ ಖಾತೆ ನಂಬರ್ ವಿವರ ನಮೂದಿಸಿ ವಾಸಕ್ಕೆ ಯೋಗ್ಯವಾಗಿದೆ. ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ ಚೆಕ್ ಬಂದಿ ನಮೂದಿಸಿ ಕಟ್ಟಡ, ಮನೆ ಜಾಗ ಗ್ರಾಮ ಠಾಣ ಪ್ರದೇಶ ವ್ಯಾಪ್ತಿಯಲ್ಲಿದೆ, ಇಲ್ಲ ಎಂದು ದೃಢೀಕರಿಸಿ ಗ್ರಾ.ಪಂ. ಪಿಡಿಒ ಎನ್‌ಒಸಿ ನೀಡ ಬೇಕಿದೆ. ವಿದ್ಯುತ್ ಸಂಪರ್ಕ ಪಡೆಯಲು ಹೊಸ ಮಾದರಿಯಲ್ಲಿ ಎನ್‌ಒಸಿ ಸಲ್ಲಿಸ ಬೇಕು ಎಂಬ ಕಡ್ಡಾಯ ಸೂಚನೆ ಸಾರ್ವಜನಿಕರನ್ನು ಇಕ್ಕಟ್ಟಿಗೆ ಸಿಕ್ಕಿಸಿದೆ.



ಉದಯವಾಹಿನಿ ಚಿತ್ರ

> **ಸಾರ್ವಜನಿಕರ ಅವಶ್ಯಕತೆ ಗಮನಿಸಲಿ**
> **ವಿದ್ಯುತ್ ಸಂಪರ್ಕ ನೀಡಲು ಕಡ್ಡಾಯ ನಿಯಮ ಪಾಲಿಸುವ ಮುನ್ನ ಸಾರ್ವಜನಿಕರ ಅವಶ್ಯಕತೆ ಏನಿದೆ ಎಂಬುದನ್ನು ಮೆಸ್ಕಾಂ, ಗ್ರಾಮ ಪಂಚಾಯಿತಿ ಪಿಡಿಒ ಗಮನಿಸಬೇಕು. ಮೆಸ್ಕಾಂ, ಗ್ರಾಮ ಪಂಚಾಯಿತಿ ಸಾರ್ವಜನಿಕರ ಪರವಾಗಿ ಕೆಲಸ ಮಾಡುವುದು ಮುಖ್ಯ. ಗ್ರಾಮ ಪಂಚಾಯಿತಿ ನೀಡಿದ ಎನ್‌ಒಸಿ ದಾಖಲೆಯನ್ನು ಮೆಸ್ಕಾಂ ಪರಿಗಣಿಸುವುದು ಅವಶ್ಯಕ. ಸಾರ್ವಜನಿಕರ ಹಿತದೃಷ್ಟಿಯಿಂದ ಸಮಸ್ಯೆಯನ್ನು ಸರಕಾರದ ಗಮನಕ್ಕೆ ತರುತ್ತೇನೆ –ಕಿಮ್ಮನೆ ರತ್ನಾಕರ್, ಮಾಜಿ ಸಚಿವ, ತೀರ್ಥಹಳ್ಳಿ**

**ಗ್ರಾ.ಪಂ. ಆಕ್ಷೇಪಣೆ:** ವಿದ್ಯುತ್ ಸಂಪರ್ಕಕ್ಕೆ ಎನ್‌ಒಸಿ ದಾಖಲೆ ನೀಡಲು ಗ್ರಾ.ಪಂ. ಆಡಳಿತ ಮಾದರಿ ಯೊಂದನ್ನು ಪಾಲಿಸುತ್ತಿದೆ. ಕಟ್ಟಡ, ಮನೆ ಖಾತೆ ನಂಬರ್ ದಾಖಲಿಸಿ ಕೆಲವು ಷರತ್ತು ವಿಧಿಸಿ ಎನ್‌ಒಸಿ ನೀಡುತ್ತಿದೆ. ಎನ್‌ಒಸಿ ಆಸ್ತಿ ಮಾಲೀಕತ್ವ ಹಕ್ಕು ದೃಢೀ ಕರಿಸುವುದಿಲ್ಲ, ಸಿವಿಲ್ ವ್ಯಾಜ್ಯಕ್ಕೆ ಹೊರತಾಗಿರುತ್ತದೆ. ಕಂದಾಯ, ಅರಣ್ಯ ಇಲಾಖೆಯಿಂದ ಎನ್‌ಒಸಿ ಪಡೆಯ ಬೇಕಿದ್ದರೆ ಅದನ್ನು ಪಡೆದ ನಂತರ ವಿದ್ಯುತ್ ಸಂಪರ್ಕದ ಎನ್‌ಒಸಿ ಪರಿಗಣಿಸಬೇಕು. ಸಿವಿಲ್ ವ್ಯಾಜ್ಯಕ್ಕೆ ಸಂಬಂಧಿಸಿದಂತೆ ಎನ್‌ಒಸಿಗೆ ಸಹಿ ಮಾಡಿದ ವ್ಯಕ್ತಿ ಹೊಣೆಯಲ್ಲಎಂದು ಗ್ರಾ.ಪಂ. ಪಿಡಿಒ ಎನ್‌ಒಸಿ ದಾಖಲೆ ನೀಡುತ್ತಿರುವುದು ಸಮಸ್ಯೆ ತಾರಕಕ್ಕೇರುವಂತೆ ಮಾಡಿದೆ. ಕಟ್ಟಡ, ಮನೆಗಿರುವ ಚೆಕ್‌ಬಂದಿ ಮಾಹಿತಿ ನಮೂದಿಸುವ ಅಧಿಕಾರ ಸರ್ವೆಯರ್ ಇಲಾಖೆಗೆ ಸಂಬಂಧಪಟ್ಟಿದೆ. ವಾಸಕ್ಕೆ ಯೋಗ್ಯ ಎಂಬ ಮಾಹಿತಿ ದೃಢೀಕರಿಸುವ ಅಧಿಕಾರ ಪಿಡಿಒಗಿಲ್ಲ. ಈ ರೀತಿಯ ಮಾಹಿತಿಯುಳ್ಳ ಎನ್‌ಒಸಿ ನೀಡಲು ಸಾಧ್ಯವಿಲ್ಲ ಎಂಬ ಆಕ್ಷೇಪಣೆ ಜಟಾಪಟಿಗೆ ಆಸ್ಪದ ಒದಗಿಸಿದೆ.

**ಇದಕ್ಕೆ ಸರಕಾರ ಉತ್ತರಿಸಲಿ:** ಕುಡಿಯುವ ನೀರು, ವಿದ್ಯುತ್ ಸಾರ್ವಜನಿಕರಿಗೆ ಕಡ್ಡಾಯವಾಗಿ ನೀಡ ಬೇಕಿರುವ ಮೂಲಸೌಕರ್ಯಗಳ ಪಟ್ಟಿಯಲ್ಲಿದೆ. ಎನ್‌ಒಸಿ ವಿಷಯ ಮುಂದಿಟ್ಟು ವಿದ್ಯುತ್ ಸಂಪರ್ಕ ನಿರಾಕರಣೆ ಪ್ರಜಾಪ್ರಭುತ್ವ ಆಡಳಿತಕ್ಕೆ ನಾಚಿಕೆಗೇಡಿನ ಸಂಗತಿಯಂತಿದೆ. ಭೂಮಿ ದಾಖಲೆ ನಕ್ಷೆ, ಒಡೆತನ ಇಲ್ಲದೆ ಸಂಪರ್ಕ ಬೇಡ ಎಂಬ ನಿರ್ಧಾರ ಸರಿಯೇ ಎಂಬ ಸಾರ್ವಜನಿಕರ ಪ್ರಶ್ನೆಗೆ ಸರಕಾರ ಉತ್ತರಿಸಬೇಕಿದೆ.

**ವಿದ್ಯುತ್ ಸಂಪರ್ಕಕ್ಕೆ ಎನ್‌ಒಸಿ ಕಡ್ಡಾಯ – ಜನರಿಗೆ ಫಜೀತಿ:** ರಾಜ್ಯಾದ್ಯಂತ ಹೊಸ ವಿದ್ಯುತ್ ಸಂಪರ್ಕ ಪಡೆಯಲು ಸ್ವಾಧೀನಾನುಭವ ಪತ್ರವನ್ನು ಕಡ್ಡಾಯಗೊಳಿಸಲಾಗಿದೆ. ಇದರಿಂದ ಕಟ್ಟಡ ನಿರ್ಮಾಣ ಹಾಗೂ ಕೈಗಾರಿಕೆಗಳಿಗೆ ತೊಂದರೆಯಾಗಿದೆ. ಒಸಿ ಪ್ರಮಾಣ ಪತ್ರ ಇಲ್ಲದ ಕಾರಣಕ್ಕೆ ವಿದ್ಯುತ್ ವಿತರಣಾ ಕಂಪನಿಗಳು ವಿದ್ಯುತ್ ಸಂಪರ್ಕಕ್ಕಾಗಿ ಸಲ್ಲಿಸಲಾಗಿರುವ ಮನವಿಯನ್ನು ನಿರಾಕರಿಸುತ್ತಿವೆ. ಇದರಿಂದಾಗಿ, ಕಟ್ಟಡ ಮಾಲೀಕರು, ಇಂಧನ ಇಲಾಖೆ ಸಂಕಷ್ಟಕ್ಕೆ ಸಿಲುಕಿದ್ದಾರೆ.

> **ಸ್ಮಾರ್ಟ್ ಮೀಟರ್ ಬಗ್ಗೆ ಇಲಾಖೆ ಸ್ಪಷ್ಟನೆ**
> **ರಾಜ್ಯದಲ್ಲಿ ಹೊಸ, ತಾತ್ಕಾಲಿಕ ವಿದ್ಯುತ್ ಸಂಪರ್ಕಗಳಿಗೆ ಸ್ಮಾರ್ಟ್ ಮೀಟರ್ ವ್ಯವಸ್ಥೆ ಜಾರಿಗೊಳಿಸಲಾಗಿದೆ. ಈಗಿರುವ ವಿದ್ಯುತ್ ಸಂಪರ್ಕಗಳಿಗೆ ಸ್ಮಾರ್ಟ್ ವಿದ್ಯುತ್ ಮೀಟರ್ ಅಳವಡಿಕೆ ಕಡ್ಡಾಯವೇನಲ್ಲ ಎಂದು ವಿದ್ಯುತ್ ಇಲಾಖೆ ಸ್ಪಷ್ಟಪಡಿಸಿದೆ. ಸದ್ಯ ಬೆಸ್ಕಾಂ ವ್ಯಾಪ್ತಿಯಲ್ಲಿ ಹಂತಹಂತವಾಗಿ ಸ್ಮಾರ್ಟ್ ಮೀಟರ್ ಅಳವಡಿಕೆ, ಬದಲಾವಣೆ ಕಾರ್ಯ ಕೈಗೊಳ್ಳಲಾಗಿದೆ ಎಂದು ಇಲಾಖೆ ಸ್ಪಷ್ಟಪಡಿಸಿದೆ.**

ಡೊನಾಲ್ಡ್ ಟ್ರಂಪ್ ಜೊತೆ ನಿಲ್ಲಲು ಹೆಮ್ಮೆ ಇದೆ; ಎಲಾನ್ ಮಸ್ಕ್‌ಗೆ ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ತಿರುಗೇಟು

# ಡೊನಾಲ್ಡ್ ಟ್ರಂಪ್ ವಿರುದ್ಧ ತೊಡೆ ತಟ್ಟಿರುವ ಎಲಾನ್ ಮಸ್ಕ್ ವಿರುದ್ಧ ಜೆಡಿ ವ್ಯಾನ್ಸ್ ಕಿಡಿ

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿರುದ್ಧ ಜೆಫ್ರಿ ಎಪ್ಸ್ಟೀನ್ ಲೈಂಗಿಕ ಪ್ರಕರಣಕ್ಕೆ ಸಂಬಂಧಿಸಿದಂತೆ ದೋಷಾರೋಪಣೆ ಹೊರಿಸಿ ತನಿಖೆ ನಡೆಸಬೇಕು ಎಂಬ ಟೆಸ್ಲಾ ಸಿಇಒ ಎಲಾನ್ ಮಸ್ಕ್ ಒತ್ತಾಯಕ್ಕೆ, ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ತಿರುಗೇಟು ನೀಡಿದ್ದಾರೆ. ಡೊನಾಲ್ಡ್ ಟ್ರಂಪ್, ಎಲಾನ್ ಮಸ್ಕ್ ಗೆಳೆತನದಲ್ಲಿ ಭಾರೀ ಬಿರುಕು ಮೂಡಿದ್ದು, ಇಬ್ಬರೂ ಬದ್ಧ ವೈರಿಗಳಂತೆ ವರ್ತಿಸುತ್ತಿದ್ದಾರೆ. ಡೊನಾಲ್ಡ್ ಟ್ರಂಪ್ ಅವರನ್ನು ಎದುರಿಸಲು ಅಮೆರಿಕದಲ್ಲಿ ಹೊಸ ರಾಜಕೀಯ ಪಕ್ಷ ಸ್ಥಾಪನೆ ಮಾಡಿದರೆ ಹೇಗೆ? ಎಂದು ಎಲಾನ್ ಮಸ್ಕ್ ಅಮೆರಿಕನ್ನರನ್ನು ಪ್ರಶ್ನಿಸುವ ಮಟ್ಟಿಗೆ ವೈರತ್ವ ಬೆಳೆದಿದೆ. ಆದರೆ ಎಲಾನ್ ಮಸ್ಕ್ ಮತ್ತು ಅಮೆರಿಕ ಉಪಾಧ್ಯಕ್ಷರ ನಡುವಿನ ಒಡನಾಟ ಜೋರಾಗುತ್ತಿದ್ದಂತೆ, ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರು ಡೊನಾಲ್ಡ್ ಟ್ರಂಪ್ ಅವರ ಬೆಂಬಲಕ್ಕೆ ಧಾವಿಸಿದ್ದಾರೆ. ಟ್ರಂಪ್ ಅವರ ವಿರುದ್ಧ ಗಂಭೀರ ಆರೋಪಗಳನ್ನು ಮಾಡುತ್ತಿರುವ ಎಲಾನ್ ಮಸ್ಕ್ ವಿರುದ್ಧ ಜೆಡಿ ವ್ಯಾನ್ಸ್ ತಿರುಗಿ ಬಿದ್ದಿದ್ದಾರೆ.



ಇಂತಹ ನಾಯಕತ್ವವನ್ನು ನೋಡಿಲ್ಲ

**ಜೆಡಿ ವ್ಯಾನ್ಸ್ ಟ್ವೀಟ್:** ಎಲಾನ್ ಮಸ್ಕ್, ಡೊನಾಲ್ಡ್ ಟ್ರಂಪ್ ನಡುವಿನ ಕಿತ್ತಾಟಕ್ಕೆ ಸಂಬಂಧಿಸಿದಂತೆ, ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿದ್ದಾರೆ. ಎಲಾನ್ ಮಸ್ಕ್ ಅವರು ಜೆಡಿ ವ್ಯಾನ್ಸ್ ಅವರನ್ನು ಅಮೆರಿಕದ ಉಪಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಬೇಕು ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಸಬಹುದು. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತಮ್ಮ ನಾಯಕತ್ವದ ಚಳುವಳಿಯ ವಿಶ್ವಾಸಗಳಿಸಲು, ಬೇರೆ ಯಾರೂ ಮಾಡದಷ್ಟು ಕೆಲಸವನ್ನು ಮಾಡಿದ್ದಾರೆ.

**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಟೆಸ್ಲಾ ಸಿಇಒ ಎಲಾನ್ ಮಸ್ಕ್ ಸಂಬಂಧ ಸಂಪೂರ್ಣವಾಗಿ ಹಳಸಿದೆ. ಡೊನಾಲ್ಡ್ ಟ್ರಂಪ್ ಅವರ ವಿರುದ್ಧವೇ ತಿರುಗಿ ಬಿದ್ದಿರುವ ಎಲಾನ್ ಮಸ್ಕ್, ಅಮೆರಿಕ ಅಧ್ಯಕ್ಷರ ವಿರುದ್ಧ ದೋಷಾರೋಪಣೆ ಹೊರಿಸಿ ತನಿಖೆ ನಡೆಸಬೇಕು ಎಂದು ಆಗ್ರಹಿಸುತ್ತಿದ್ದಾರೆ. ಎಲಾನ್ ಮಸ್ಕ್ ಅವರ ಈ ತೀವ್ರ ವಾಗ್ದಾಳಿಯನ್ನು ಖಂಡಿಸಿರುವ ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್, ಡೊನಾಲ್ಡ್ ಟ್ರಂಪ್ ಅವರಂತಹ ಶ್ರೇಷ್ಠ ನಾಯಕನ ಜೊತೆ ನಿಲ್ಲಲು ನಾನು ಹೆಮ್ಮೆಪಡುತ್ತೇನೆ ಎಂದರು.**

ನನ್ನ ಜೀವಿತಾವಧಿಯಲ್ಲಿ ನಾನು ಇಂತಹ ನಾಯಕತ್ವವನ್ನು ನೋಡಿಲ್ಲ, ಅವರ ಪಕ್ಕದಲ್ಲಿ ನಿಲ್ಲಲು ನನಗೆ ಹೆಮ್ಮೆಯಾಗುತ್ತಿದೆ ಎಂದು ಜೆಡಿ ವ್ಯಾನ್ಸ್ ಟ್ವೀಟ್ ಮಾಡಿದ್ದಾರೆ. ಎಲಾನ್ ಮಸ್ಕ್ ಅವರನ್ನು ಪರೋಕ್ಷವಾಗಿ ತರಾಟೆಗೆ ತೆಗೆದುಕೊಂಡಿರುವ ಜೆಡಿ ವ್ಯಾನ್ಸ್, ಬಹುಶ: ಅಧ್ಯಕ್ಷರನ್ನು ಅರಿಯುವಲ್ಲಿ ಬಹುತೇಕರು ವಿಫಲವಾಗುತ್ತಾರೆ. ಅವರ ಆಪ್ತರೂ ಈ ವಿಚಾರದಲ್ಲಿ ಸೋಲುತ್ತಿದ್ದಾರೆ ಎಂದು ತಿರುಗೇಟು ನೀಡಿದ್ದಾರೆ.

**ದ್ವೇಷ ಏಕೆ?:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತಮ್ಮ ಮಹತ್ವಾಕಾಂಕ್ಷೆ ಒನ್ ಬಿಗ್ ಬ್ಯೂಟಿಫುಲ್ ಬಿಲ್‌ನ್ನು ಅಂಗೀಕಾರ ಮಾಡಿದ್ದಾರೆ. ಈ ಮಸೂದೆಯನ್ನು ಮೊದಲಿನಿಂದಲೂ ವಿರೋಧಿಸುತ್ತಿದ್ದ ಎಲಾನ್ ಮಸ್ಕ್, ಟ್ರಂಪ್ ಅವರ ನಿರ್ಧಾರಕ್ಕೆ ಬೇಸತ್ತು ಅಮೆರಿಕದ ದಕ್ಷತಾ ಇಲಾಖೆ ಮುಖ್ಯಸ್ಥ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಡೊನಾಲ್ಡ್ ಟ್ರಂಪ್ ಕೂಡ ಎಲಾನ್ ಮಸ್ಕ್ ಅವರ ವಿರೋಧವನ್ನು ಲೆಕ್ಕಿಸದೇ, ಒನ್ ಬಿಗ್ ಬ್ಯೂಟಿಫುಲ್ ಬಿಲ್‌ನ್ನು ಅಂಗೀಕಾರ ಮಾಡಿದ್ದು, ಇದರಿಂದ ಟೆಸ್ಲಾದ ಷೇರು ಮೌಲ್ಯ ಕುಸಿದಿದೆ. ಇದರಿಂದ ಕೆರಳಿರುವ ಎಲಾನ್ ಮಸ್ಕ್, ಡೊನಾಲ್ಡ್ ಟ್ರಂಪ್ ವಿರುದ್ಧ ಅಕ್ಷರಶಃ ಯುದ್ಧಕ್ಕೆ ಇಳಿದಿದ್ದಾರೆ. ಕೇವಲ 9 ತಿಂಗಳ ಹಿಂದಷ್ಟೇ ಟ್ರಂಪ್ ಅವರನ್ನು ಅವತಾರ ಪುರುಷನಂತೆ ಕಾಣುತ್ತಿದ್ದ ಎಲಾನ್ ಮಸ್ಕ್, ಇದೀಗ ಟ್ರಂಪ್ ಅಮೆರಿಕದ ಆರ್ಥಿಕತೆಯನ್ನು ಮಣ್ಣುಪಾಲು ಮಾಡುತ್ತಿದ್ದಾರೆ ಎಂದು ಕಿಡಿಕಾರುತ್ತಿದ್ದಾರೆ. ಎಲಾನ್ ಮಸ್ಕ್ ಮತ್ತು ಡೊನಾಲ್ಡ್ ಟ್ರಂಪ್ ಅವರ ಈ ಕಿತ್ತಾಟ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.

## 32 ಉಗ್ರರ ಅಡ್ಡೆಗಳ ಮೇಲೆ ಎನ್‌ಐಎ ದಾಳಿ

**ಕಾಶ್ಮೀರ:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದ ಬಳಿಕ ಭದ್ರತೆಯನ್ನು ಮತ್ತಷ್ಟು ಹೆಚ್ಚಿಸಲಾಗಿದೆ. ಜತೆಗೆ ಭಯೋತ್ಪಾದನೆ ವಿರುದ್ಧ ಸಮರ ಸಾರಲಾಗುತ್ತಿದೆ. ಹಾಗೂ ಉಗ್ರರ 32 ಅಡ್ಡೆಗಳ ಮೇಲೆ ನಿರಂತರ ದಾಳಿ ನಡೆಸಲಾಗಿದೆ. ಇದೀಗ ಎನ್‌ಐಎ ಕಾಶ್ಮೀರದ 32 ಕಡೆಗಳಲ್ಲಿ ದಾಳಿ ನಡೆಸಿ, ಮದ್ದುಗುಂಡುಗಳು, ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿದ್ದಾರೆ. ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಸಂಘಟನೆಗಳು, ಅವುಗಳ ಶಾಖೆಗಳಿಂದನಡೆಯುತ್ತಿರುವ ಭಯೋತ್ಪಾದಕ ಪಿತೂರಿಯ ವಿರುದ್ಧ ನಡೆಯುತ್ತಿರುವ ತನಿಖೆಯ ಭಾಗವಾಗಿ ರಾಷ್ಟ್ರೀಯ ತನಿಖಾ ಸಂಸ್ಥೆ ಕಾಶ್ಮೀರ ಕಣಿವೆಯ ವಿವಿಧ ಸ್ಥಳಗಳಲ್ಲಿ ಸರಣಿ ಶೋಧ ನಡೆಸಿತು. ಕಾರ್ಯಾಚರಣೆಯ ಭಾಗವಾಗಿ ಒಟ್ಟು ಮೂವತ್ತೆರಡು ಸ್ಥಳಗಳ ಮೇಲೆ ದಾಳಿ ನಡೆಸಲಾಯಿತು. ಇವುಗಳಲ್ಲಿ ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಗಳಾದ ದಿ ರೆಸಿಸ್ಟೆನ್ಸ್ ಫ್ರಂಟ್, ಯುನೈಟೆಡ್ ಲಿಬರೇಶನ್ ಫ್ರಂಟ್, ಜಮ್ಮು ಮತ್ತು ಕಾಶ್ಮೀರ, ಮುಜಾಹಿದ್ದೀನ್ ಗಜ್ವತ್-ಉಲ್-ಹಿಂದ್, ಜಮ್ಮು,



ಕಾಶ್ಮೀರ ಸ್ವಾತಂತ್ರ್ಯ ಹೋರಾಟಗಾರರು, ಕಾಶ್ಮೀರ ಟೈಗರ್ಸ್, ಪಿಎಎಫ್ ಮತ್ತು ಇತರರೊಂದಿಗೆ ಸಂಬಂಧ ಹೊಂದಿರುವ ಭಯೋತ್ಪಾದಕರು, ಭೂಗತ ಪಾತಕಿಗಳ ಮನೆಗಳೂ ಸೇರಿವೆ. ಇವು ಲಷ್ಕರ್-ಎ-ತೋಯ್ಬಾ, ಜೈಶ್-ಎ-ಮೊಹಮ್ಮದ್, ಅಲ್-ಬದರ್, ಇತರ ನಿಷೇಧಿತ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಯೋಜಿತವಾಗಿವೆ.

ಮ್ಯಾಗ್ನೆಟಿಕ್ ಬಾಂಬ್‌ಗಳು, ಐಇಡಿಗಳು, ನಿಧಿಗಳು, ಮಾದಕ ವಸ್ತುಗಳು ಮತ್ತು ಶಸ್ತ್ರಾಸ್ತ್ರ, ಮದ್ದು ಗುಂಡುಗಳನ್ನು ಸಂಗ್ರಹ, ವಿತರಿಸುವುದು ಮುಂತಾದ ಭಯೋತ್ಪಾದಕ ಚಟುವಟಿಕೆಗಳನ್ನು ಬೆಂಬಲಿಸುವಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಶೋಧ ನಡೆಸಲಾಯಿತು. ಜಮ್ಮು, ಕಾಶ್ಮೀರದಲ್ಲಿ ಶಾಂತಿ ಮತ್ತು ಕೋಮು ಸಾಮರಸ್ಯವನ್ನು ಕದಡಲು ಸ್ಥಳೀಯ ಯುವಕರನ್ನು ಮೂಲಭೂತವಾದಿಗಳಾಗಿ ಮತ್ತು ಉಗ್ರರನ್ನಾಗಿ ಸಜ್ಜುಗೊಳಿಸುವ ಮೂಲಕ ಕಣಿವೆಯಲ್ಲಿ ಭಯೋತ್ಪಾದಕ ಚಟುವಟಿಕೆಗಳು ಮತ್ತು ಹಿಂಸಾಚಾರಕ್ಕೆ ಸಂಚು ರೂಪಿಸುತ್ತಿವೆ.


ಪಾಕಿಸ್ತಾನ ಮೂಲದ ಕಾರ್ಯಕರ್ತರು ಭಯೋತ್ಪಾದನೆಯನ್ನು ಉತ್ತೇಜಿಸಲು ಸಾಮಾಜಿಕ ಮಾಧ್ಯಮ, ಆನ್‌ಲೈನ್ ಅಪ್ಲಿಕೇಶನ್‌ಗಳನ್ನು ಬಳಸುತ್ತಿದ್ದಾರೆ ಎಂದು ತನಿಖೆಗಳು ಬಹಿರಂಗಪಡಿಸಿವೆ. ಕಾಶ್ಮೀರ ಕಣಿವೆಯಲ್ಲಿರುವ ತಮ್ಮ ಕಾರ್ಯಕರ್ತರು ಮತ್ತು ಕಾರ್ಯಕರ್ತರಿಗೆ ಶಸ್ತ್ರಾಸ್ತ್ರ, ಮದ್ದುಗುಂಡುಗಳು, ಸ್ಫೋಟಕಗಳು, ಮಾದಕ ದ್ರವ್ಯಗಳು ಮತ್ತು ಇತರ ಲಾಜಿಸ್ಟಿಕ್ಸ್ ಅನ್ನು ತಲುಪಿಸಲು ಅವರು ಡ್ರೋನ್‌ಗಳನ್ನು ಬಳಸುತ್ತಿದ್ದರು. ಶುಕ್ರವಾರ ಪ್ರಧಾನಿ ಮೋದಿ ಅವರು ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿಯವರು 46 ಸಾವಿರ ಕೋಟಿ ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ.

## ಬಿಹಾರ ಭಾರತದ ಅಪರಾಧಿ ಚಟುವಟಿಕೆಗಳ ರಾಜಧಾನಿ

**ರಾಜಗೀರ್:** ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಸಮ್ಮಿಶ್ರ ಸರ್ಕಾರದ ಆಡಳಿತದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಬಿಹಾರ ಭಾರತದ ಅಪರಾಧಿ ಚಟುವಟಿಕೆಗಳ ರಾಜಧಾನಿಯಾಗುತ್ತಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ. ಶುಕ್ರವಾರ ನಳಂದದಲ್ಲಿ ಸಂವಿಧಾನ ಸುರಕ್ಷಾ ಸಮ್ಮೇಳನದಲ್ಲಿ ಜನರನ್ನು ಉದ್ದೇಶಿಸಿ ಮಾತನಾಡಿದರು. ಬಿಹಾರವು ಒಂದು ಕಾಲದಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆಗೆ ಹೆಸರಾಗಿತ್ತು. ಇದೀಗ ಅಪರಾಧಿ ಚಟುವಟಿಕೆಗಳ ತಾಣವಾಗಿದೆ ಎಂದು ಹೇಳಿದರು.

**ಟ್ರಂಪ್ ಅವರ ಒಂದು ಫೋನ್ ಕರೆಗೆ ಪ್ರಧಾನಿ ಮೋದಿಯವರು ಶರಣಾಗಿಬಿಟ್ಟರು. ಭಾರತ, ಪಾಕ್ ನಡುವೆ ಶಾಂತಿ ಸಂಧಾನ ಮಾಡಿಸಿದ್ದು ನಾನೇ ಎಂದು ಟ್ರಂಪ್ 11ಕ್ಕೂ ಹೆಚ್ಚು ಬಾರಿ ಹೇಳಿದ್ದಾರೆ. ಆದರೆ ಪ್ರಧಾನಿ ಮೋದಿಯವರು ಮಾತ್ರ ಮೌನವಹಿಸಿದ್ದಾರೆ. ಈ ಕುರಿತು ಅವರಿಗೆ ಹೇಳಲು ಏನು ಉಳಿದಿಲ್ಲ ಎಂದು ನನಗೆ ಗೊತ್ತು ಎಂದರು.**

ಹಿಂದುಳಿದ ವರ್ಗ, ದಲಿತರು, ಬುಡಕಟ್ಟು ಅಧಿಕಾರಿಗಳು ಇಲ್ಲದೇ ಜಾತಿಗಣತಿಯ ಪ್ರಶ್ನೆಗಳನ್ನು ತಯಾರಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಜಾತಿಗಣತಿ ವರದಿಯ ಕುರಿತು ಅನುಮಾನ ವ್ಯಕ್ತ ವಾಗುತ್ತಿದೆ ಎಂದರು. ಸಂವಿಧಾನ ಉಳಿಸಲು, ದೇಶದ ಅಭಿವೃದ್ಧಿಗಾಗಿ ನಾನು ಜಾತಿಗಣತಿಗಾಗಿ ಹೋರಾಡುತ್ತೇನೆ. ನಾವು ಸರ್ಕಾರವನ್ನುರಚಿಸಿದರೆ,




ಶೇ. 50ರಷ್ಟು ಮಾತ್ರ ಮೀಸಲಾತಿ ನೀಡಬೇಕು ಎನ್ನುವ ನಿಯಮದಲ್ಲಿ ಬದಲಾವಣೆ ತರುತ್ತೇವೆ.

ಇದು ಬಿಹಾರದಿಂದಲೇ ಶುರುವಾಗಲಿದೆ ಎಂದು ತಿಳಿಸಿದರು. ಭಾರತ, ಪಾಕ್ ನಡುವಿನ ಶಾಂತಿ ಮಾತುಕತೆ ತನ್ನಿಂದಲೇ ಸಾಧ್ಯವಾಯಿತು ಎನ್ನುವ ಅಮೆರಿಕ ಅಧ್ಯಕ್ಷ ಟ್ರಂಪ್ ವಿರುದ್ಧ ಮಾತನಾಡದೇ ಪ್ರಧಾನಿ ಮೋದಿ ಯಾಕೆ ಸುಮ್ಮನಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಬಿಹಾರದಲ್ಲೂ ಬುಲ್ಡೋಜರ್ ಆಕ್ಷನ್ ಅತ್ಯಾಚಾರಿ ಮನೆ, ಕೆಫೆ ಧ್ವಂಸ

**ಮುಜಫರ್‌ಪುರ್:** ಬಿಹಾರದ ಮುಜಫರ್‌ಪುರ ಜಿಲ್ಲೆಯಲ್ಲಿ ಅತ್ಯಾಚಾರ ಆರೋಪಿಯೊಬ್ಬನ ಮನೆಯನ್ನು ನೆಲಸಮ ಮಾಡಲಾಗಿದೆ. ಇಲ್ಲಿನ ನಿವಾಸಿಯೊಬ್ಬರು ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಆರೋಪ ಹೊತ್ತಿದ್ದು, ಪೊಲೀಸರು, ಸ್ಥಳೀಯ ಆಡಳಿತದ ಮೇಲ್ವಿಚಾರಣೆಯಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ ಅವರ ಮನೆ, ಉಪಾಹಾರ ಗೃಹವನ್ನು ಧ್ವಂಸಗೊಳಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕುರ್ಹಾನಿ ಉಪವಿಭಾಗದ ಟರ್ಕಿ ಪೊಲೀಸ್ ಠಾಣೆ ಪ್ರದೇಶದಲ್ಲಿ ಈ ಕಾರ್ಯಾಚರಣೆ ನಡೆದಿದೆ, ಅಲ್ಲಿ ಲೈಂಗಿಕ ದೌರ್ಜನ್ಯದಲ್ಲಿ ಗಾಯಗೊಂಡು ದಲಿತ ಅಪ್ರಾಪ್ತ ಬಾಲಕಿ ಸಾವನ್ನಪ್ಪಿದ ಘಟನೆ ಹೆಚ್ಚು ಚರ್ಚೆಗೆ ಗ್ರಾಸವಾಗಿದೆ. ನೆರೆಹೊರೆಯಲ್ಲಿ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ನಂತರ ಪರಾರಿಯಾಗಿದ್ದ ಆರೋಪಿಯ ಆಸ್ತಿಗಳನ್ನು ನಾವು ಮುಟ್ಟುಗೋಲು ಹಾಕಿಕೊಂಡಿದ್ದೇವೆ. ಇಂದು, ಮಣ್ಣು ತೆಗೆಯುವ ಯಂತ್ರಗಳನ್ನು ತರಲಾಯಿತು, ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ ಶ್ರೇಯಾ ಶ್ರೀ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಯಿತು ಎಂದು ಎಸ್ಪಿ ವಿದ್ಯಾ ಸಾಗರ್ ಮಾಹಿತಿ ನೀಡಿದ್ದಾರೆ. ಪೊಲೀಸರ ಕೈಯಿಂದ ತಪ್ಪಿಸಿಕೊಳ್ಳುತ್ತಿದ್ದ ಆರೋಪಿ ಶರಣಾಗಿದ್ದಾನೆ. ನ್ಯಾಯಾಲಯದ ನಿರ್ದೇಶನದಂತೆ



ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಸ್ಪಿ ಹೇಳಿದರು. ಉತ್ತರ ಪ್ರದೇಶದ ಪಕ್ಕದ ರಾಜ್ಯದಲ್ಲಿ ಯೋಗಿ ಆದಿತ್ಯನಾಥ್ ಅವರ ಬುಲ್ಡೋಜರ್ ನ್ಯಾಯ ಮಾದರಿಯಿಂದ ಪ್ರೇರಿತವಾಗಿದೆ ಎಂದು ಸ್ಥಳೀಯರು ನಂಬುವ ಈ ಕ್ರಮ, ಬಿಹಾರದ ಉಪಮುಖ್ಯಮಂತ್ರಿ ವಿಜಯ್ ಕುಮಾರ್ ಸಿನ್ಹಾ ಜಿಲ್ಲೆಗೆ ಭೇಟಿ ನೀಡಿ ಎರಡೂ ಅತ್ಯಾಚಾರ ಪ್ರಕರಣಗಳಲ್ಲಿ ಅಪರಾಧಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಪ್ರತಿಜ್ಞೆ ಮಾಡಿದ ಕೆಲವೇ ಗಂಟೆಗಳ ನಂತರ ನಡೆದಿದೆ, ಇದು ನಿತೀಶ್ ಕುಮಾರ್ ಸರ್ಕಾರವನ್ನು ತೀವ್ರ ವಿರೋಧ ಪಕ್ಷಗಳ ಟೀಕೆಗೆ ಗುರಿಪಡಿಸಿದೆ. ಆರೋಪಿಗಳ ವಿರುದ್ಧದ ಕ್ರಮವು ಘೋರ ಅಪರಾಧಗಳನ್ನು ಮಾಡುವ ಪ್ರವೃತ್ತಿಯನ್ನು ಹೊಂದಿರುವ ಎಲ್ಲರಿಗೂ ಜ್ಞಾಪನೆಯಾಗಬೇಕು. ಅವರು ಕಾನೂನಿನ ದೀರ್ಘ ತೋಳುಗಳಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ಸಾಗರ್ ಹೇಳಿದರು.

## ದೇಶದಲ್ಲಿ ಕೋಮು ಗಲಭೆಗೆ ಪಾಕಿಸ್ತಾನ ಪ್ರಚೋದನೆ

**ಕಟ್ರಾ:** ಜಮ್ಮುಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರನ್ನು ಗುರಿಯಾಗಿಸಿ ದಾಳಿ ನಡೆಸುವ ಮೂಲಕ ಭಾರತದಲ್ಲಿ ಕೋಮು ಗಲಭೆಗಳಿಗೆ ಪ್ರಚೋದನೆ ನೀಡಲು ಪಾಕಿಸ್ತಾನ ಪ್ರಯತ್ನಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಗುರುವಾರ ಹೇಳಿದ್ದಾರೆ. ಚೆನಾಬ್ ನದಿಗೆ ನಿರ್ಮಿಸಿರುವ ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಕಾಶ್ಮೀರದಲ್ಲಿ ಜನರ ದುಡಿಮೆಯನ್ನು ನಾಶ ಮಾಡಬೇಕು ಎಂದು ಪಾಕಿ ಸ್ತಾನದ ಉದ್ದೇಶಿಸಿದೆ ಎಂದು ಅವರು ಗಂಭೀರ ಆರೋಪ ಮಾಡಿದರು. ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ನಡೆಸುವ ಮೂಲಕ ಪಾಕಿಸ್ತಾನವು ಮಾನವೀಯತೆ, ಕಾಶ್ಮೀರದ ಅಸ್ಮಿತೆ ಮೇಲೆಯೂ ದಾಳಿ ಮಾಡಿದೆ. ಕಾಶ್ಮೀರ ಜನರು ತಮ್ಮ ಜೀವನೋಪಾಯಕ್ಕೆ ಪ್ರವಾ ಸೋದ್ಯಮವನ್ನೇ ಅಲವಂಬಿಸಿದ್ದಾರೆ. ಆದರೆ,



ಪಾಕಿಸ್ತಾನ ಪ್ರವಾಸೋದ್ಯಮಕ್ಕೇ ಪೆಟ್ಟುಕೊಡುವ ಮೂಲಕ ಇಲ್ಲಿನ ಜನರ ಬದುಕನ್ನು ಕಸಿಯಲು ಯತ್ನಿಸಿದೆ ಎಂದೂ ವಾಗ್ದಾಳಿ ನಡೆಸಿದ್ದಾರೆ. ಪ್ರವಾಸೋದ್ಯಮ ಕಾಶ್ಮೀರ ಜನತೆಗೆ ಉದ್ಯೋಗ ನೀಡುವ ಜೊತೆಗೆ, ದೇಶದ ಇತರ ಜನರೊಂದಿಗೆ ಬೆಸೆಯುವ ಸೇತುವೆಯೂ ಆಗಿದೆ. ದುರದೃಷ್ಟವಶಾತ್, ನಮ್ಮ ನೆರೆಯ ರಾಷ್ಟ್ರವು ಮಾನವೀಯತೆ, ಸೌಹಾರ್ದ, ಪ್ರವಾಸೋದ್ಯಮದ ಶತ್ರುವಾಗಿದೆ ಎಂದು ಟೀಕಾಪ್ರಹಾರವನ್ನು ಹರಿತಗೊಳಿಸಿದರು. ಪ್ರವಾಸಿಗರ ಗೈಡುಗಳು, ಕುದುರೆ ಸವಾರಿ ಸೇವೆ ಒದಗಿಸುವವರು, ಅತಿಥಿ ಗೃಹಗಳ ಮಾಲೀಕರು, ಅಂಗಡಿಕಾರರು, ರಸ್ತೆ ಬದಿಯ ಢಾಬಾ ನಡೆಸುವವರಿಗೆ ಪ್ರವಾಸೋದ್ಯಮವೇ ಬದುಕಿನ ಆಧಾರ. ಅಂತಹ ಪ್ರವಾಸೋದ್ಯಮವನ್ನೇ ನಾಶ ಮಾಡುವುದಕ್ಕೆ ಪಾಕಿಸ್ತಾನ ಬಯಸಿತು.

ಉಗ್ರರಿಗೆ ತಡೆಯೊಡ್ಡಿದ್ದ ಆದಿಲ್ ಕೂಡ ತನ್ನ ಜೀವನೋಪಾಯಕ್ಕಾಗಿ ದುಡಿಯುತ್ತಿದ್ದರು ಎಂದು ಮೋದಿ ಹೇಳಿದರು. ಆಪರೇಷನ್ ಸಿಂಧೂರ ಪ್ರಸ್ತಾಪಿಸಿದ ಮೋದಿ, ಈ ಕಾರ್ಯಾಚರಣೆಗೆ ಇಂದು ತಿಂಗಳು ತುಂಬಿದೆ. ಪಾಕಿಸ್ತಾನದಲ್ಲಿರುವ ಉಗ್ರರ ನೆಲೆಗಳನ್ನು ನಮ್ಮ ಸೇನಾ ಪಡೆಗಳು ಈ ಕಾರ್ಯಾಚರಣೆ ನಡೆಸಿ ಧ್ವಂಸಗೊಳಿಸಿವೆ ಎಂದರು ಹೇಳಿದರು.


## ದೇಶದಲ್ಲಿ ಸೋಂಕು ಹೆಚ್ಚಳ, 5 ಸಾವಿರ ಸಕ್ರಿಯ ಪ್ರಕರಣ ಕೇರಳದಲ್ಲಿ ಅಧಿಕ

**ನವದೆಹಲಿ:** ದೇಶದಲ್ಲಿ ಕೋವಿಡ್-19 ಪ್ರಕರಣಗಳ ಸಂಖ್ಯೆ ಹೆಚ್ಚಳವಾಗಿದ್ದು, ಒಟ್ಟು ಸಕ್ರಿಯ ಪ್ರಕರಣಗಳು ಐದು ಸಾವಿರ ಗಡಿ ದಾಟಿವೆ. ಕೇರಳದಲ್ಲಿ ದೇಶದಲ್ಲೇ ಅತಿ ಹೆಚ್ಚು (1,679) ಪ್ರಕರಣಗಳು ದಾಖಲಾಗಿವೆ. ನಂತರದ ಸ್ಥಾನದಲ್ಲಿ ಗುಜರಾತ್ (615), ಪಶ್ಚಿಮ ಬಂಗಾಳ(596) ಮತ್ತು ದೆಹಲಿ(592) ರಾಜ್ಯಗಳಿವೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಶುಕ್ರವಾರ ಹೊರಡಿಸಿದ ಮಾಹಿತಿಯಲ್ಲಿ ಹೇಳಲಾಗಿದೆ. ಕೋವಿಡ್ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆಮ್ಲಜನಕ, ಐಸೋಲೇಷನ್ ಬೆಡ್‌ಗಳು, ವೆಂಟಿಲೇಟರ್‌ಗಳು ಮತ್ತು ಅಗತ್ಯ ಔಷಧಿಗಳ ಲಭ್ಯತೆಯನ್ನು ಖಾತ್ರಿಪಡಿಸಿಕೊಳ್ಳುವಂತೆ ಎಲ್ಲಾ ರಾಜ್ಯಗಳಿಗೆ ಕೇಂದ್ರ ಸರ್ಕಾರ ಸೂಚನೆ ನೀಡಿದೆ.

ಸದ್ಯ ಭಾರತದಲ್ಲಿ 5,364 ಸಕ್ರಿಯ ಪ್ರಕರಣಗಳಿವೆ. ಕಳೆದ 24 ಗಂಟೆಗಳಲ್ಲಿ ನಾಲ್ಕು ಮಂದಿ ಮೃತಪಟ್ಟಿದ್ದಾರೆ. ಸೋಂಕಿನ ತೀವ್ರತೆ ಕಡಿಮೆ ಇದೆ. ಬಹಳಷ್ಟು ಸೋಂಕಿತರು ಮನೆ ಆರೈಕೆಯಲ್ಲಿದ್ದಾರೆ. ಭಯಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳು ಹೇಳಿದ್ದಾರೆ. 2025ರ ಜನವರಿಯಿಂದ ಇಲ್ಲಿಯವರೆಗೆ ದೇಶದಲ್ಲಿ 55 ಸಾವುಗಳು ವರದಿಯಾಗಿವೆ. ಮೇ 22 ರಂದು ದೇಶದಲ್ಲಿ ಒಟ್ಟು 257 ಸಕ್ರಿಯ ಪ್ರಕರಣಗಳಿದ್ದವು. ಈ ಸಂಖ್ಯೆ ಮೇ 26ರ ಹೊತ್ತಿಗೆ 1,010ಕ್ಕೆ ಏರಿತ್ತು.

## ಭಯೋತ್ಪಾದನೆ ವಿರುದ್ಧ ಹೋರಾಟ ವ್ಯಾನ್ಸ್ ಜೊತೆ ತರೂರು ನಿಯೋಗ ಚರ್ಚೆ

**ವಾಷಿಂಗ್ಟನ್:** ಭಯೋತ್ಪಾದನೆ ವಿರುದ್ಧ ಜಂಟಿ ಹೋರಾಟ, ಭಾರತ- ಅಮೆರಿಕಾ ನಡುವೆ ಬಾಂಧವ್ಯ ಬಲವರ್ಧನೆ ಸೇರಿದಂತೆ ಪ್ರಮುಖ ವಿಷಯಗಳ ಕುರಿತು ಅಮೆರಿಕಾ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಜೊತೆ ಕಾಂಗ್ರೆಸ್ ಸಂಸದ ಶಶಿ ತರೂರು ನೇತೃತ್ವದ ಸರ್ವ ಪಕ್ಷಗಳ ಸಭೆ ಮಹತ್ವ ಸಮಾಲೋಚನೆ ನಡೆಸಿದೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆ, ಪಾಕಿಸ್ತಾನ ನಡೆಸಿದ ಪ್ರಾಯೋಜಿತ ಭಯೋತ್ಪಾದನೆ ವಿಷಯವನ್ನು ಜಗತ್ತಿಗೆ ಮನವರಿಕೆ ಮಾಡಿಕೊಡಲು ವಿವಿಧ ದೇಶಗಳ ಪ್ರವಾಸದಲ್ಲಿರುವ ಶಶಿ ತರೂರ್ ನಿಯೋಗ ಅಮೇರಿಕಾದ ರಾಜಧಾನಿ ವಾಷಿಂಗ್ಟನ್ ಡಿಸಿಯಲ್ಲಿ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರನ್ನು ಭೇಟಿ ಮಾಡಿ ಸುದೀರ್ಘ ಚರ್ಚೆ ನಡೆಸಿತು. ಚರ್ಚೆಯ ನಂತರ ಮಾಹಿತಿ ಹಂಚಿಕೊಂಡಿರುವ ಶಶಿ ತರೂರ್, ಭಾರತದ ಸರ್ವ ಪಕ್ಷದ ನಿಯೋಗ ಅಮೇರಿಕಾ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರೊಂದಿಗೆ ಭಯೋತ್ಪಾದನೆ ವಿರುದ್ಧ ಉಭಯ



ಕೊನೆಯ ಹಂತದಲ್ಲಿ ಅಮೇರಿಕಾ ಪ್ರವಾಸ

ದೇಶಗಳು ಜಂಟಿಯಾಗಿ ಹೋರಾಟ ಮಾಡುವುದು, ಎರಡೂ ದೇಶಗಳ ನಡುವೆ ಮುಂದಿನ ದಿನಗಳಲ್ಲಿ ಬಾಂಧವ್ಯ ಮತ್ತಷ್ಟು ಬಲವರ್ಧನೆ ಮಾಡುವ ನಿಟ್ಟಿನಲ್ಲಿ ಫಲಪ್ರದ ಚರ್ಚೆ ನಡೆಯಿತು ಎಂದು ತಿಳಿಸಿದ್ದಾರೆ. ಮುಖ್ಯವಾಗಿ ಪಾಕಿಸ್ತಾನ ಭಯೋತ್ಪಾದನೆಗೆ ನೀಡುತ್ತಿರುವ ಪ್ರೋತ್ಸಾಹ, ಬೆಂಬಲ ನಿಗ್ರಹ ಮಾಡುವುದು ಸೇರಿದಂತೆ ಗಡಿಯಾಚೆಗಿನ ಭಯೋತ್ಪಾದನೆ ಹತ್ತಿಕ್ಕುವ ವಿಷಯದ ಕುರಿತು ಚರ್ಚೆ ನಡೆಸಲಾಗಿತ್ತು ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಹೇಳಿದ್ದಾರೆ.

**ಭಾರತ- ಅಮೆರಿಕಾ ನಡುವೆ ಭಯೋತ್ಪಾದನಾ ನಿಗ್ರಹ ಪ್ರಯತ್ನಗಳಿಂದ ಹಿಡಿದು ಉಭಯ ದೇಶಗಳ ನಡುವೆ ತಾಂತ್ರಿಕ ಸಹಕಾರ ಹೆಚ್ಚಿಸುವವರೆಗೆ ನಿರ್ಣಾಯಕ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಸಲಾಗಿದೆ.. ಭಾರತ-ಅಮೆರಿಕಾ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸಲು ಉಭಯ ದೇಶಗಳು ಉತ್ಸುಕವಾಗಿವೆ ಎಂದು ತಿಳಿಸಿದ್ದಾರೆ.**

ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂದೂರ್ ನಂತರ ಭಯೋತ್ಪಾದನೆಯ ವಿರುದ್ಧ ಭಾರತದ ನಿಲುವನ್ನು ತಿಳಿಸಲು ಪ್ರವಾಸದ ಕೊನೆಯ ಹಂತಕ್ಕಾಗಿ ವಾಷಿಂಗ್ಟನ್‌ಗೆ ಆಗಮಿಸುವ ಮೊದಲು ನಿಯೋಗವು ಗಯಾನಾ, ಪನಾಮ, ಕೊಲಂಬಿಯಾ ಮತ್ತು ಬ್ರೆಜಿಲ್‌ಗೆ ಪ್ರಯಾಣಿಸಿದ್ದು ಕೊನೆಯ ಹಂತದಲ್ಲಿ ಅಮೇರಿಕಾ ಪ್ರವಾಸದಲ್ಲಿದೆ.

## ಅಯೋಧ್ಯೆ ರಾಮಮಂದಿರಕ್ಕೆ ವಜ್ರಖಚಿತ ಕಿರೀಟ, ಚಿನ್ನದ ಬಿಲ್ಲು, ಬಾಣ ನೀಡಿದ ಉದ್ಯಮಿ

**ಅಯೋಧ್ಯೆ:** ಗುಜರಾತ್‌ನ ವಜ್ರ ವ್ಯಾಪಾರಿಯೊಬ್ಬರು ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ಗೆ 11ವಜ್ರಖಚಿತ ಕಿರೀಟಗಳು, ಚಿನ್ನದ ಬಿಲ್ಲು, ಬಾಣ ಸೇರಿದಂತೆ ಹಲವಾರು ಅಮೂಲ್ಯ ಆಭರಣಗಳನ್ನು ದಾನ ನೀಡಿದ್ದಾರೆ ಎಂದು ವಿಶ್ವ ಹಿಂದೂ ಪರಿಷತ್ ತಿಳಿಸಿದೆ. ಸೂರತ್ ಮೂಲದ ಮುಖೇಶ್ ಪಟೇಲ್ ಎಂಬುವವರು ಆಭರಣಗಳನ್ನು ಉಡುಗೊರೆಯಾಗಿ ನೀಡಿದ್ದಾರೆ. ಅವರು ಪ್ರಸಿದ್ಧ ಆಭರಣ ಸಂಸ್ಥೆ ಗ್ರೀನ್ ಲ್ಯಾಬ್‌ನ ಮಾಲೀಕರಾಗಿದ್ದಾರೆ. ಉಡುಗೊರೆಯಲ್ಲಿ ವಜ್ರ, ಚಿನ್ನ, ಬೆಳ್ಳಿ ಮತ್ತು ಮಾಣಿಕ್ಯಗಳಿಂದ ಮಾಡಿದ ಆಭರಣಗಳು ಸೇರಿವೆ ಎಂದು ವಿಎಚ್‌ಪಿಯ ರಾಷ್ಟ್ರೀಯ ಖಜಾಂಚಿ ದಿನೇಶ್ ನೆವಾಡಿಯಾ ಹೇಳಿದ್ದಾರೆ. ಮುಖೇಶ್ ಪಟೇಲ್ ಅವರು, 11 ವಜ್ರಖಚಿತ ಕಿರೀಟಗಳು, 30 ಕಿಲೋಗ್ರಾಂ ಬೆಳ್ಳಿ, 300ಗ್ರಾಂ ಚಿನ್ನ ಮತ್ತು ಮಾಣಿಕ್ಯಗಳನ್ನು ದಾನ ಮಾಡಿದ್ದಾರೆ.



**ಇವುಗಳ ಜತೆಗೆ, ಹಾರಗಳು, ಕಿವಿಯೋಲೆಗಳು, ಹಣೆಯ ತಿಲಕ, ರಾಮಾಯಣದ ನಾಲ್ವರು ಸಹೋದರರನ್ನು ಪ್ರತಿನಿಧಿಸುವ ನಾಲ್ಕು ದೊಡ್ಡ ಮತ್ತು ಮೂರು ಸಣ್ಣ ಬಿಲ್ಲುಗಳು, ನಾಲ್ಕು ಬತ್ತಳಿಕೆಗಳು, ಮೂರು ಗದೆಗಳು ಮತ್ತು ರೇಷ್ಮೆಯಿಂದ ಮಾಡಿದ ಬೀಸಣಿಕೆಯನ್ನು ದಾನ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಈ ವಸ್ತುಗಳನ್ನು ವಿಶೇಷ ವಿಮಾನದಲ್ಲಿ ಅಯೋಧ್ಯೆಗೆ ಸಾಗಿಸಲಾಗಿದೆ.**

## ಮನುಷ್ಯನ ಜೀವಕ್ಕಿಂತ ಯಾವ ವಿಜಯೋತ್ಸವವೂ ಮುಖ್ಯವಲ್ಲ

### ಸಾರ್ವಜನಿಕ ಕಾರ್ಯಕ್ರಮದ ವೇಳೆ ಸುರಕ್ಷಾ ನಿಯಮಗಳ ಪಾಲನೆಗೆ ವಿಪಕ್ಷ ನಾಯಕ ಕರೆ

**ಹೊಸದಿಲ್ಲಿ:** ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಚೊಚ್ಚಲ ಐಪಿಎಲ್ ಟ್ರೋಫಿ ವಿಜಯೋತ್ಸವ ವೇಳೆ, ಕರ್ನಾಟಕ ರಾಜಧಾನಿ ಬೆಂಗಳೂರಿನಚಿನ್ನಸ್ವಾಮಿ ಕ್ರೀಡಾಂಗಣದ ಸಮೀಪ ಸಂಭವಿಸಿದ ಕಾಲ್ತುಳಿತ ದುರಂತಕ್ಕೆ, ರಾಹುಲ್ ಕಂಬನಿ ಮಿಡಿದಿದ್ದಾರೆ. ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್ ನಲ್ಲಿ ಟ್ವೀಟ್ ಮಾಡಿರುವ ರಾಹುಲ್ ಗಾಂಧಿ, ಘಟನೆಯನ್ನು ಹೃದಯವಿದ್ರಾವಕಎಂದು ಕರೆದಿದ್ದಾರೆ. 11 ಜೀವಗಳನ್ನು ಬಲಿ ಪಡೆದ ಈ ದುರಂತ ನಿಜಕ್ಕೂ ತಮ್ಮ ಮನಸ್ಸನ್ನು ಘಾಸಗೊಳಿಸಿರುವುದಾಗಿ ರಾಹುಲ್ ಗಾಂಧಿ ಹೇಳಿದ್ದಾರೆ. ಇದೇ ವೇಳೆ ಮೃತರ ಕುಟುಂಬಗಳಿಗೆ ಸಾಂತ್ವನ ತಿಳಿಸಿರುವ ರಾಹುಲಗಾಂಧಿ, ದುರಂತದಲ್ಲಿ ಗಾಯಗೊಂಡು ಆಸ್ಪತ್ರೆಯಲ್ಲಿಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳು ಬೇಗ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

ಕರ್ನಾಟಕ ಸರ್ಕಾರವು ಸಂತ್ರಸ್ತರಿಗೆ ಸಂಪೂರ್ಣ ಬೆಂಬಲ ನೀಡಬೇಕು, ಎಲ್ಲಾ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಕಾಂಗ್ರೆಸ್ ಮುಖಂಡ ಇದೇ ವೇಳೆ ಒತ್ತಿ ಹೇಳಿದ್ದಾರೆ. ಕರ್ನಾಟಕದ ಡಿಸಿಎಂ ಡಿಕೆ ಶಿವಕುಮಾರ್ ಅವರು, ಕಾಲ್ತುಳಿತ ದುರಂತದ ಹೊಣೆ ಹೊರಲು ಸರ್ಕಾರ ಸಿದ್ಧ ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಸಬಹುದು.



**ರಾಹುಲ್ ಗಾಂಧಿ ಟ್ವೀಟ್‌ನಲ್ಲೇನಿದೆ?:** ಕಾಲ್ತುಳಿತ ದುರಂತದ ಬಗ್ಗೆ ಟ್ವೀಟ್ ಮಾಡಿರುವ ರಾಹುಲ್ ಗಾಂಧಿ, ಆರ್‌ಸಿಬಿಯ ಐಪಿಎಲ್ ವಿಜಯೋತ್ಸವದ ಸಂದರ್ಭದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತವು ದುರಂತವು ಹೃದಯವಿದ್ರಾವಕವಾಗಿದೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ನನ್ನ ಸಂತಾಪಗಳು.

**ಬೆಂಗಳೂರಿನ ಜನರೊಂದಿಗೆ ನಿಲ್ಲುತ್ತೇನೆ: ರಾಹುಲ್ ಗಾಂಧಿ**

**ಈ ದುಃಖದ ಸಮಯದಲ್ಲಿ, ನಾನು ಬೆಂಗಳೂರಿನ ಜನರೊಂದಿಗೆ ನಿಲ್ಲುತ್ತೇನೆ. ಕರ್ನಾಟಕ ಸರ್ಕಾರ ಸಂತ್ರಸ್ತ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲಾ ಬೆಂಬಲ ಮತ್ತು ಪರಿಹಾರವನ್ನು ಒದಗಿಸಬೇಕು. ಈ ದುರಂತವು ನೋವಿನ ಜ್ಞಾಪನೆಯಾಗಿದೆ. ಯಾವುದೇ ಆಚರಣೆಯು ಮಾನವ ಜೀವಕ್ಕಿಂತ ದೊಡ್ಡದಲ್ಲ. ಸಾರ್ವಜನಿಕ ಕಾರ್ಯಕ್ರಮಗಳಿಗೆ ಪ್ರತಿಯೊಂದು ಸುರಕ್ಷತಾ ನಿಯಮಗಳನ್ನು ಪರಿಶೀಲಿಸಬೇಕು, ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಲೋಕಸಭೆ ವಿಪಕ್ಷ ನಾಯಕ ಸೂಚ್ಯವಾಗ ಹೇಳಿದ್ದಾರೆ.**

ಗಾಯಗೊಂಡವರೆಲ್ಲರೂ ಶೀಘ್ರವಾಗಿ. ಸಂಪೂರ್ಣವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈ ಸುತ್ತೇನೆ ಎಂದು ಹೇಳಿದ್ದಾರೆ. ಮುಂದುವರೆದು, ಮಾನವ ಜೀವಕ್ಕಿಂತ ಯಾವ ಸಂಭ್ರಮಾಚರಣೆಯೂ ಮುಖ್ಯವಲ್ಲ. ಜನರು ವಿಜಯೋತ್ಸವದ ಗುಂಗಿನಲ್ಲಿ ತಮ್ಮ ಸುರಕ್ಷತೆಯ ಮಹತ್ವವನ್ನು ಮರೆಯಬಾರದು ಎಂದು ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ. ಇದಕ್ಕೂ ಮೊದಲು, ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ದುರಂತದಲ್ಲಿ, ಜೀವಹಾನಿ ಸಂಭವಿಸಿದ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದುಃಖ ವ್ಯಕ್ತಪಡಿಸಿದರು. ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಮಲ್ಲಿಕಾರರ್ಜುನ ಖರ್ಗೆ, ಭವಿಷ್ಯದಲ್ಲಿ ಇಂತಹ ಯಾವುದೇ ದುರಂತವನ್ನು ತಡೆಗಟ್ಟಲು, ಸುರಕ್ಷತಾ ಪ್ರೋಟೋಕಾಲ್‌ಗಳನ್ನು ತಕ್ಷಣವೇ ಬಲಪಡಿಸುವಂತೆ ಅಧಿಕಾರಿಗಳಿಗೆ ಕರೆ ನೀಡಿದ್ದಾರೆ.



**ರಾಯಲ್ ಚಾಲೆಂಜರ್ಸ್ ಬೆಂಗಳೂರಿನ ಐಪಿಎಲ್ 2025 ಗೆಲುವಿನ ಸಂಭ್ರಮಾಚರಣೆ ಸಂದರ್ಭದಲ್ಲಿ, ಬೆಂಗಳೂರಿನಲ್ಲಿ ಸಂಭವಿಸಿದ ಕಾಲ್ತುಳಿತ ದುರಂತದಿಂದ ತೀವ್ರ ದುಃಖಿತನಾಗಿದ್ದೇನೆ. ಈ ದುರದೃಷ್ಟಕರ ಘಟನೆಯಲ್ಲಿ ಅಮೂಲ್ಯ ಜೀವಗಳನ್ನು ಕಳೆದುಕೊಂಡಿರುವುದು ಮತ್ತು ಅನೇಕರು ಗಾಯಗೊಂಡಿರುವುದು ತೀವ್ರ ದುಃಖಕರವಾಗಿದೆ. ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳೊಂದಿಗೆ ನನ್ನ ಆಲೋಚನೆಗಳು ಮತ್ತು ಪ್ರಾರ್ಥನೆಗಳು ಇವೆ. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಪ್ರಾರ್ಥಿಸುತ್ತೇನೆ -ಮಲ್ಲಿಕಾರ್ಜುನ ಖರ್ಗೆ,**

## ಮಿನಿ ನ್ಯೂಸ್

### ಉತ್ತರ ಪ್ರದೇಶದ ಲಕ್ನೋದಲ್ಲಿ ಮೂರು ವರ್ಷದ ಬಾಲಕಿ ಮೇಲೆ ಅತ್ಯಾಚಾರ

**ಲಕ್ನೋ:** ಮೂರು ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ವೆಸಗಿರುವ ಘಟನೆ ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆದಿದೆ. ಲಕ್ನೋದ ಆಲಂಬಾಗ್ ಪ್ರದೇಶದಲ್ಲಿ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ ಆಕೆಯನ್ನು ಮೆಟ್ರೋ ಸೇತುವೆ ಕೆಳಗೆ ಎಸೆದು ಹೋಗಿದ್ದರು, ಪ್ರಜ್ಞಾಹೀನ ಸ್ಥಿತಿಯಲ್ಲಿ ಆಕೆ ಪತ್ತೆಯಾಗಿದ್ದು, ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.ಕೆಲವು ದುಷ್ಕರ್ಮಿಗಳು ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ, ಲೈಂಗಿಕ ದೌರ್ಜನ್ಯವೆಸಗಿ ಅಲ್ಲಿಯೇ ಎಸೆದು ಹೋಗಿದ್ದರು. ಘಟನೆ ಬಗ್ಗೆ ಮಾಹಿತಿ ತಿಳಿದ ತಕ್ಷಣ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಆಲಂಬಾಗ್ ಪೊಲೀಸ್ ಠಾಣೆಯಲ್ಲಿ ಸಂಬಂಧಿತ ವಿಭಾಗಗಳಡಿಯಲ್ಲಿ ಪ್ರಕರಣ ದಾಖ ಲಿಸಲಾಗಿದೆ. ಆ ಬಾಲಕಿ ಪೋಷಕರೊಂದಿಗೆ ಚಂದಾನಗರ ಮೆಟ್ರೋ ನಿಲ್ದಾಣದಲ್ಲಿ ಬಳಿ ವಾಸವಾಗಿದ್ದಳು. ಬೆಳಗ್ಗೆ ಪೋಷಕರಿಗೆ ಮಗಳು ಎಲ್ಲೂ ಕಾಣದ ಹಿನ್ನೆಲೆ ಹುಡುಕಲು ಪ್ರಾರಂಭಿಸಿದ್ದರು. ಸ್ವಲ್ಪ ಸಮಯದ ನಂತರ ಅಮಾಯಕ ಬಾಲಕಿ ಮೆಟ್ರೋ ಸೇತುವೆಯ ಕೆಳಗೆ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದಳು. ಪೋಷಕರು ಬಾಲಕಿಯನ್ನು ಲೋಕ ಬಂಧು ಆಸ್ಪತ್ರೆಗೆ ಕರೆದೊಯ್ದು ಆಲಂಬಾಗ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಮಗುವಿನ ಭದ್ರತೆಗಾಗಿ ಆಸ್ಪತ್ರೆಗೆ ಪೊಲೀಸ್ ತಂಡವನ್ನು ಕಳುಹಿಸಲಾಗಿದೆ. ಪ್ರಕರಣ ದಾಖಲಾದ ನಂತರ ಪೊಲೀಸರು ತನಿಖೆ ಆರಂಭಿಸಿದರು. ಐದು ತಂಡಗಳನ್ನು ನಿಯೋಜಿಸಲಾಗಿದೆ. ಅಪರಾಧಿಗಳನ್ನು ಹುಡುಕಲು ನಾವು ಕೆಲಸ ಮಾಡುತ್ತಿದ್ದೇವೆ. ಆಸ್ಪತ್ರೆಯಲ್ಲಿ ಮಗುವಿನೊಂದಿಗೆ ನಮ್ಮ ತಂಡದ ಸದಸ್ಯರು ಸಹ ಇದ್ದಾರೆ ಎಂದು ಲಕ್ನೋ ಕೇಂದ್ರ ವಿಭಾಗದ ಡಿಸಿಪಿ ಆಶಿಶ್ ಶ್ರೀವಾಸ್ತವ ಮಾಹಿತಿ ನೀಡಿದ್ದಾರೆ,

### ಕೆಟ್ಟ ತಾಯಿ ಇರುವುದಿಲ್ಲ ಎಂಬುದನ್ನು ಸುಳ್ಳಾಗಿಸಿದ ಉತ್ತರಾಖಂಡದ ಮಹಿಳೆ

**ಡೆಹ್ರಾಡೂನ್:** ಪ್ರಪಂಚದಲ್ಲಿ ಕೆಟ್ಟ ಮಕ್ಕಳಿರುತ್ತಾರೆ, ಆದ್ರೆ ಕೆಟ್ಟ ತಾಯಿ ಇರುವುದಿಲ್ಲ ಎಂಬ ಮಾತಿಗೆ ಅಪಚಾರವೆಂಬಂತೆ ವರ್ತಿಸಿದ್ದಾಳೆ ಉತ್ತರಾಖಂಡದ ಹರಿದ್ವಾರದ ಬಿಜೆಪಿ ನಾಯಕಿ. ಹರಿದ್ವಾರದ ಬಿಜೆಪಿ ಮಹಿಳಾ ಮೋರ್ಚಾದ ಮಾಜಿ ಅಧ್ಯಕ್ಷೆ ಅನಾಮಿಕಾ ಶರ್ಮಾ ಎಂಬ ಮಹಾತಾಯಿ ತನ್ನ ಬಾಯ್‌ಫ್ರೆಂಡ್, ಆತನ ಸ್ನೇಹಿತನಿಂದಲೇ ಸ್ವಂತ ಅಪ್ರಾಪ್ತ ಮಗಳ ಮೇಲೆಯೇ ಅತ್ಯಾಚಾರ ಮಾಡಿಸಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಘಟನೆ ಸಂಬಂಧ ಅನಾಮಿಕಾ, ಆಕೆಯ ಬಾಯ್‌ಫ್ರೆಂಡ್ ಸುಮಿತ್ ಪತ್ವಾಲ್ ಮತ್ತು ಆತನ ಸ್ನೇಹಿತ ಶುಭಂನನ್ನ ಪೊಲೀಸರು ಬಂಧಿಸಿದ್ದಾರೆ. ಪ್ರಕರಣ ಬೆಳಕಿಗೆ ಬಂದ ಬಳಿಕ ಬಿಜೆಪಿ ಆಕೆಯನ್ನ ಪಕ್ಷದಿಂದಲೇ ವಜಾ ಮಾಡಿದೆ.

**ಏನಿದು ಘಟನೆ?:** ಅನಾಮಿಕಾ ಶರ್ಮಾ 2024ರ ವರೆಗೆ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆಯಾಗಿದ್ದರು. ನಂತರ ಪಕ್ಷದ ಸದಸ್ಯೆ ಆಗಿ ಮುಂದುವರಿದಿದ್ದರು. ಆಕೆ ತನ್ನ ಗಂಡನಿಂದ ಬೇರ್ಪಟ್ಟಿದ್ದಳು. ಆದ್ರೆ ಮಗಳು ಅಪ್ಪನೊಂದಿಗೆ ಉಳಿದುಕೊಂಡಿದ್ದಳು. ಅಪರೂಪಕ್ಕೆ ತಾಯಿ ಬಳಿ ಬರುತ್ತಿದ್ದಳು. ಈ ವೇಳೆ ಅನಾಮಿಕಾ, ಸುಮಿತ್‌ನ ಪ್ರೇಮ ಸಂಪಾದಿಸಿ ಆತನ ಹೋಟೆಲ್‌ನಲ್ಲಿಯೇ ಉಳಿದುಕೊಂಡಿದ್ದಳು. ಜನವರಿಯಿಂದ ಮಾರ್ಚ್ ವೇಳೆ ಹರಿದ್ವಾರ, ಬೃಂದಾವನ, ಆಗ್ರಾದಲ್ಲಿ ಹಲವು ಬಾರಿ ಮಗಳ ಮೇಲೆ ಸುಮಿತ್, ಆತನ ಸ್ನೇಹಿತ ಶುಭಂನಿಂದ ಅತ್ಯಾಚಾರ ಮಾಡಿಸಿದ್ದಳು. ಈ ವಿಷಯವನ್ನ ತಂದೆಗೆ ಹೇಳದಂತೆ ಬೆದರಿಕೆಯೂ ಹಾಕಿದ್ದಳು ಎಂದು ವರದಿಗಳಿಂದ ತಿಳಿದುಬಂದಿದೆ. ತನ್ನ ತಾಯಿಯ ವರ್ತನೆಯಿಂದ ಮನನೊಂದ ಮಗಳು ಘಟನೆ ಬಗ್ಗೆ ತನ್ನ ತಂದೆಗೆ ಮಾಹಿತಿ ನೀಡಿದ್ದಳು. ಪರಿಣಾಮ ತಂದೆ ನೀಡಿದ ದೂರಿನ ಮೇರೆಗೆ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಪೋಕ್ಸೋ ಕಾಯ್ದೆ ಸೇರಿ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

### ಮೂರನೇ ಬಾರಿ ರೆಪೋ ದರ ಕಡಿತ


**ನವದೆಹಲಿ:** ಆರ್‌ಬಿಐ ಮೂರನೇ ಬಾರಿ ರೆಪೋ ದರ ಕಡಿತಗೊಳಿಸಿದೆ. ನಿರೀಕ್ಷೆಯಂತೆ ಈ ಬಾರಿ ಬಡ್ಡಿದರವನ್ನು 50 ಮೂಲಾಂಕಗಳಷ್ಟು ಇಳಿಕೆ ಮಾಡಿದೆ. ಇದರೊಂದಿಗೆ ಶೇ. 6ರಷ್ಟಿರುವ ಬಡ್ಡಿದರ ಈಗ ಶೇ. 5.50ಕ್ಕೆ ಇಳಿಕೆಯಾಗಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದ್ದಾರೆ. ಎಂಪಿಸಿ ಸಭೆಯ ನಿರ್ಧಾರದಂತೆ ರೆಪೋ ದರವನ್ನು ಸತತ ಮೂರನೇ ಬಾರಿ ಇಳಿಕೆ ಮಾಡಲಾಗಿದೆ.

ಈ ವರ್ಷದ ಆರಂಭದಲ್ಲಿ ರೆಪೋ ದರ ಶೇ. 6.50ರಷ್ಟಿತ್ತು. ಆರು ತಿಂಗಳ ಅವಧಿಯಲ್ಲಿ ಶೇ. 1ರಷ್ಟು ದರ ಇಳಿದಂತಾಗಿದೆ ಎಂದು ಅವರು ಹೇಳಿದರು. ಈ ಹೊಸ ದರವು ತತ್‌ಕ್ಷಣದಿಂದಲೇ ಜಾರಿಗೆ ಬರಲಿದೆ. ಬಡ್ಡಿದರ ಇಳಿಸಲು ಇದು ಪ್ರಮುಖ ಕಾರಣವಾಗಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಸ್ಪಷ್ಟಪಡಿಸಿದರು. ಹಣದುಬ್ಬರ ನಿಯಂತ್ರಣದಲ್ಲಿರುವುದರಿಂದ ಆರ್‌ಬಿಐಗೆ ಈ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಾಗಿದೆ. ಜಾಗತಿಕ ಅನಿಶ್ಚಿತ ವಾತಾ ವರಣದಿಂದ ಹಿನ್ನಡೆಯಲ್ಲಿರುವ ಆರ್ಥಿಕತೆಗೆ ರೆಪೋ ದರ ಇಳಿಕೆಯು ಪುಷ್ಟಿ ಕೊಡುವ ನಿರೀಕ್ಷೆ ಇದೆ.

ಆರ್‌ಬಿಐ ಹಣಕಾಸು ನಿಲುವು ನ್ಯೂಟ್ರಲ್‌ಗೆ ಬದಲಾವಣೆ ಮತ್ತೊಂದು ಪ್ರಮುಖ ನಿರ್ಧಾರದಲ್ಲಿ ಆರ್‌ಬಿಐ ತನ್ನ ಮಾನಿಟರಿ ಪಾಲಿಸಿ ಸ್ಟ್ಯಾನ್ಸ್, ಹಣಕಾಸು ನೀತಿ ನಿಲುವನ್ನು ಬದಲಾಯಿಸಿದೆ. ಅಕಾಮೊಡೇಟಿವ್ ಎಂದಿದ್ದ ನಿಲುವನ್ನು ನ್ಯೂಟ್ರಲ್‌ಗೆ ಬದಲಾ ಯಿಸಲಾಗಿದೆ. ಕಳೆದ ಬಾರಿಯ ಎಂಪಿಸಿ ಸಭೆಯಲ್ಲಿ ನೀತಿ ನಿಲುವನ್ನು ನ್ಯೂಟ್ರಲ್‌ನಿಂದ ಅಕಾಮೊಡೇಟಿವ್‌ಗೆ ಬದಲಾಯಿಸಲಾಗಿತ್ತು.

### ಸ್ತ್ರೀಯರು ತುಂಡು ಉಡುಗೆ ಧರಿಸುವುದನ್ನು ಒಪ್ಪಲ್ಲ: ಬಿಜೆಪಿ ನಾಯಕ ಕೈಲಾಶ್

**ಇಂದೋರ್:** ಮಹಿಳೆಯರು ತುಂಡು ಉಡುಗೆ ಧರಿಸುವುದನ್ನು ನಾನು ಒಪ್ಪುವುದಿಲ್ಲ. ತುಂಡು ಬಟ್ಟೆ ಧರಿಸುವುದು ವಿದೇಶಿ ಪರಿಕಲ್ಪನೆಯಾಗಿದ್ದು, ಇದು ಬಾರತೀಯ ಸಂಪ್ರದಾಯಕ್ಕೆ ಹೊಂದಿಕೆಯಾಗುವುದಿಲ್ಲ ಎಂದು ಮಧ್ಯಪ್ರದೇಶ ಸಚಿವ ಕೈಲಾಶ್ ವಿಜಯವರ್ಗೀಯ ಹೇಳಿದ್ದಾರೆ. ಸ್ಥಳೀಯ ಬಿಜೆಪಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಡಿಮೆ ಬಟ್ಟೆ ಧರಿಸಿದ ಮಹಿಳೆ ಸುಂದರ ಹಾಗೂ ಕಡಿಮೆ ಭಾಷಣ ಮಾಡುವ ನಾಯಕ ಉತ್ತಮ ಎಂಬ ಗಾದೆ ವಿದೇಶಗಳಲ್ಲಿದೆ. ಆದರೆ ನಾನು ಇದನ್ನು ಅನುಸರಿಸುವುದಿಲ್ಲ ಮತ್ತು ಇದು ತಪ್ಪು ಎಂದರು. ಭಾರತೀಯ ಸಂಸ್ಕೃತಿಯಲ್ಲಿ ಸ್ತ್ರೀಯನ್ನು ದೇವತೆ ಎಂದು ಪರಿಗಣಿಸಲಾಗುತ್ತದೆ. ಇಲ್ಲಿಯ ಮಹಿಳೆ ಒಂದೊಳ್ಳೆ ಬಟ್ಟೆ ಧರಿಸಿ, ಅಲಂಕಾರ ಮಾಡಿಕೊಂಡು ಅಭರಣಗಳನ್ನು ಧರಿಸಿದರೆ ಅವಳನ್ನು ಸುಂದರ ಮಹಿಳೆ ಎಂದು ಜನರು ಪರಿಗಣಿಸುತ್ತಾರೆ.



ಆದರೆ ವಿದೇಶ ಗಳಲ್ಲಿ ಕಡಿಮೆ ಬಟ್ಟೆ ಧರಿಸಿದ ಮಹಿಳೆಯನ್ನು ಸುಂದರ ಎಂದು ಪರಿಗಣಿಸಲಾಗುತ್ತದೆ. ಅದು ಅವರ ಚಿಂತನೆಯಾಗಿದೆ ಎಂದು ವಿಜಯವರ್ಗೀಯ ಹೇಳಿದರು. ಕಡಿಮೆ ಬಟ್ಟೆ ಧರಿಸುವ ಮಹಿಳೆಯರು ಶೂರ್ಪನಖಿಯರು ಎಂದು ಈ ಹಿಂದೆ ಇವರು ಹೇಳಿಕೆ ನೀಡಿದ್ದರು.

# ವಿರಾಟ್ ಕೊಹ್ಲಿಯನ್ನು ಬಂಧಿಸಲು ಆಗ್ರಹ

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಐಪಿಎಲ್ 2025ರ ಫೈನಲ್‌ನಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಆರು ರನ್‌ಗಳಿಂದ ಮಣಿಸಿ ಚೊಚ್ಚಲ ಐಪಿಎಲ್ ಟ್ರೋಫಿ ಎತ್ತಿ ಹಿಡಿದಿತ್ತು. ಆರ್‌ಸಿಬಿ ಚಾಂಪಿಯನ್ ಆಗುತ್ತಿದ್ದಂತೆ ದೇಶದಾದ್ಯಂತ ಸಂಭ್ರಮಾಚರಣೆ ಮುಗಿಲು ಮುಟ್ಟಿತ್ತು. ಅದರಲ್ಲೂ ಆರ್‌ಸಿಬಿ ತವರಾದ ಕರ್ನಾಟಕದಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿತ್ತು. ಕೋಟ್ಯಾಂತರ ಅಭಿಮಾನಿಗಳು ರಸ್ತೆಗಿಳಿದು ಸಂಭ್ರಮಿಸಿದ್ದರು. ಇತ್ತ ಆರ್‌ಸಿಬಿ ಕೂಡ ಅಭಿಮಾನಿಗಳನ್ನು ಇನ್ನಷ್ಟು ರಂಜಿಸಲು ಮೆರವಣಿಗೆಯ ಕಾರ್ಯಕ್ರಮ ಕೂಡ ಹಮ್ಮಿಕೊಂಡಿತ್ತು. ಆದರೆ ಮೆರವಣಿಗೆ ನಡೆಯುವುದಕ್ಕೂ ಮುನ್ನವೇ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾದ ಕಾಲ್ತುಳಿತದಿಂದ 11 ಅಮಾಯಕರು ಸಾವನ್ನಪ್ಪಿದರು. ಸರ್ಕಾರ ಕೂಡ ಹಲವರ ವಿರುದ್ಧ ಕ್ರಮ ಕೈಗೊಂಡಿದೆ. ಇದೆಲ್ಲದರ ನಡುವೆ ಹ್ಯಾಶ್‌ಟ್ಯಾಗ್ ಕಳೆದ 24 ಗಂಟೆಗಳಿಂದ ಸಾಮಾಜಿಕ ಮಾಧ್ಯಮದಲ್ಲಿ ಸಾಕಷ್ಟು ಟ್ರೆಂಡಿಂಗ್‌ನಲ್ಲಿದೆ.

**ಏಕೆ ಟ್ರೆಂಡಿಂಗ್ ಆಗುತ್ತಿದೆ**

ಜೂನ್ 4 ರಂದು ನಡೆದ ಈ ಘಟನೆಯ ನಂತರ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ತಂಡದ ಸ್ಟಾರ್ ಆಟಗಾರ ವಿರಾಟ್ ಕೊಹ್ಲಿ ತೀವ್ರ ಟೀಕೆಗಳನ್ನು ಎದುರಿಸುತ್ತಿದ್ದಾರೆ. ಈ ಅವಘಡ ದಲ್ಲಿ ಕೊಹ್ಲಿಯ ಪಾತ್ರವಿಲ್ಲದಿದ್ದರೂ, ಒಂದು ರೀತಿಯಲ್ಲಿ ಕೊಹ್ಲಿ ಕೂಡ ಈ ದುರಂತಕ್ಕೆ ಕಾರಣ ಎಂಬುದು ಕೆಲವರ ಅಭಿಪ್ರಾಯ. ಹೀಗಾಗಿ ಸೋಶಿಯಲ್ ಮೀಡಿಯಾದಲ್ಲಿ ಕೊಹ್ಲಿಯ ಬಂಧನಕ್ಕೆ ಒತ್ತಾಯ ಜೋರಾಗಿದೆ.

ಮೇಲೆ ಹೇಳಿದಂತೆ ವಿರಾಟ್ ಕೊಹ್ಲಿಯಿಂದಾಗಿ ಈ ಕಾಲ್ತುಳಿತ ಸಂಭವಿಸಿದೆ ಎಂಬುದು ಹಲವರ ಅಭಿಪ್ರಾಯವಾಗಿದೆ. ಹೀಗಾಗಿ ಕೊಹ್ಲಿ ವಿರುದ್ಧ ಕ್ರಮ ಕೈಗೊಂಡು ಅವರನ್ನು ಸಹ ಬಂಧಿಸಬೇಕು ಒಂದು ಒತ್ತಾಯಿಸಲಾಗುತ್ತಿದೆ. ಅವಘಡ ನಡೆದ ಮಾರನೇ ದಿನವೇ ವಿರಾಟ್ ಕೊಹ್ಲಿ ಮುಂಬೈಗೆ ಮರಳಿದರು. ಅದರ ಬದಲು ವಿರಾಟ್ ಕೊಹ್ಲಿ ಸಂತ್ರಸ್ಥರ ಕುಟುಂಬಗಳನ್ನು ಭೇಟಿ ಮಾಡಬೇಕಿತ್ತು. ಮೃತರ ಕುಟುಂಬಗಳಿಗೆ ನೆರವಾಗಬೇಕಿತ್ತು ಎಂಬುದು ಕೆಲವರ ವಾದವಾಗಿದೆ. ಹೀಗಾಗಿ ಯೇ ನೆಟ್ಟಿಗರು ಸಾಮಾಜಿಕ ಜಾಲತಾಣಗಳಲ್ಲಿ ಂಡಿಡಿಜಣಏಝುಟ ಅನ್ನು ಟ್ರೆಂಡ್ ಮಾಡುತ್ತಿದ್ದಾರೆ.

**ಕೊಹ್ಲಿ ವಿರುದ್ಧವೂ ದೂರು ದಾಖಲು**

ಇದು ಮಾತ್ರವಲ್ಲದೆ ಈ ದುರಂತಕ್ಕೆ ವಿರಾಟ್ ಕೊಹ್ಲಿಯೂ ಕಾರಣರೆಂದು ನೈಜ ಹೋರಾಟ ಗಾರರ ವೇದಿಕೆಯ ಎಚ್ ಎಂ ವೆಂಕಟೇಶ್ ಆರೋಪ ಹೊರಿಸುತ್ತಿದ್ದು,ಇದೀಗ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಕೊಹ್ಲಿ ವಿರುದ್ಧವೂ ದೂರು ದಾಖಲಾಗಿದೆ. ಈಗಾಗಲೇ ಆರ್‌ಸಿಬಿ ವಿರುದ್ದ ದಾಖಲಾಗಿರುವ ಎಫ್‌ಐಆರ್ ಜೊತೆಗೆ ಕೊಹ್ಲಿ ವಿರುದ್ಧದ ದೂರನ್ನು ಪರಿಗಣಿಸುವುದಾಗಿ ಕಬ್ಬನ್ ಪಾರ್ಕ್ ಪೊಲೀಸರು ಹಿಂಬರಹ ನೀಡಿದ್ದಾರೆ.

**ಹಲವರ ತಲೆ ದಂಡ:** ಈಗಾಗಲೇ ಈ ದುರಂತಕ್ಕೆ ಕಾರಣರಾದವರ ವಿರುದ್ಧ ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ. ಅಲ್ಲದೆ ಆರ್‌ಸಿಬಿ ಫ್ರಾಂಚೈಸಿಯ ಕೆಲವರನ್ನು ಈಗಾಗಲೇ ಬಂಧಿಸಲಾಗಿದೆ. ಅಲ್ಲದೆ ರಾಜ್ಯ ಪೊಲೀಸ್ ಇಲಾಖೆಯಲ್ಲೂ ಕೆಲವರ ತಲೆದಂಡವಾಗಿದೆ. ರಾಜ್ಯ ಸರ್ಕಾರ ಕೂಡ ಮಡಿದವರ ಕುಟುಂಬಗಳಿಗೆ 10 ಲಕ್ಷ ರೂ. ಪರಿಹಾರ ಘೋಷಿಸಿದೆ. ಕೆಎಸ್‌ಸಿಎ ಹಾಗೂ ಆರ್‌ಸಿಬಿ ಫ್ರಾಂಚೈಸಿ ಕೂಡ ಪರಿಹಾರ ಘೋಷಿಸಿದ್ದು, ಗಾಯಾಳುಗಳ ನೆರವಿಗೆ ನಿಲ್ಲುವುದಾಗಿ ತಿಳಿಸಿದೆ. ಇದೆಲ್ಲದರ ನಡುವೆ ಕೊಹ್ಲಿಯನ್ನು ಬಂಧಿಸುವಂತೆ ಒತ್ತಾಯಿಸುತ್ತಿರುವುದು ಮುಂದಿನ ದಿನಗಳಲ್ಲಿ ಯಾವ ರೂಪ ಪಡೆದುಕೊಳ್ಳುತ್ತದೆ ಎಂಬುದನ್ನು ಕಾದುನೋಡಬೇಕಿದೆ.



# ಇತಿಹಾಸ ಸೃಷ್ಟಿಸುವ ಗುರಿಯೊಂದಿಗೆ ಇಂಗ್ಲೆಂಡ್ ತಲುಪಿದ ಟೀಂ ಇಂಡಿಯಾ

ವಿರಾಟ್ ಮತ್ತು ರೋಹಿತ್ ಅವರ ಅನುಪಸ್ಥಿತಿಯಲ್ಲಿ ಶುಭ್ಮನ್ ಗಿಲ್ ನೇತೃತ್ವದ ಯುವ ಭಾರತ ಕ್ರಿಕೆಟ್ ತಂಡ ಇಂಗ್ಲೆಂಡ್ ವಿರುದ್ಧ ಐದು ಪಂದ್ಯಗಳ ಟೆಸ್ಟ್ ಸರಣಿ ಆಡಲು ಸಜ್ಜಾಗಿದೆ. ಜೂನ್ 20ರಿಂದ ಆರಂಭವಾಗುವ ಈ ಸರಣಿಯಲ್ಲಿ ಯುವ ಆಟಗಾರರ ಸಾಮರ್ಥ್ಯವನ್ನು ಪ್ರದರ್ಶಿಸುವ ನಿರೀಕ್ಷೆಯಿದೆ. ಗಿಲ್ ತಂಡದ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. 18 ವರ್ಷಗಳ ನಂತರ ಇಂಗ್ಲೆಂಡ್‌ನಲ್ಲಿ ಟೆಸ್ಟ್ ಸರಣಿ ಗೆಲ್ಲುವ ಗುರಿ ಭಾರತ ತಂಡದ್ದಾಗಿದೆ.

ಹೊಸ ನಾಯಕ ಶುಭ್‌ಮನ್ ಗಿಲ್ ನೇತೃತ್ವದಲ್ಲಿ, ಭಾರತ ಯುವ ತಂಡವು ಇತಿಹಾಸ ರಚಿಸಲು ಇಂಗ್ಲೆಂಡ್ ತಲುಪಿದೆ. ಭಾರತ ಹಾಗೂ ಇಂಗ್ಲೆಂಡ್ ನಡುವಿನ ಮೊದಲ ಟೆಸ್ಟ್ ಜೂನ್ 20 ರಂದು ಲೀಡ್ಸ್ ಮೈದಾನದಲ್ಲಿ ಆರಂಭವಾಗಲಿದೆ. ಈ ಬಾರಿ ಇಂಗ್ಲೆಂಡ್ ವಿರುದ್ಧದ 5-ಟೆಸ್ಟ್ ಸರಣಿಯಲ್ಲಿ, ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಇಬ್ಬರೂ ಆಟಗಾರರು ಟೆಸ್ಟ್ ಕ್ರಿಕೆಟ್‌ನಿಂದ ನಿವೃತ್ತರಾಗಿ ರುವುದರಿಂದ ಭಾರತ ತಂಡವು ಅವರಿಲ್ಲದೆ ಆಡಲಿದೆ. ಅಂತಹ ಪರಿಸ್ಥಿತಿಯಲ್ಲಿ, ಆಡುವ ಹನ್ನೊಂದರಲ್ಲಿ ಈ ಇಬ್ಬರು ಆಟಗಾರರನ್ನು ಯಾರು ಬದಲಾಯಿಸುತ್ತಾರೆ ಎಂಬುದು ದೊಡ್ಡ ಪ್ರಶ್ನೆಯಾಗಿದೆ ಆದರೆ ಮುಂದಿನ 10 ದಿನಗಳಲ್ಲಿ ಬಲಿಷ್ಠ ಪ್ಲೇಯಿಂಗ್ 11 ಕಟ್ಟುವ ವಿಶ್ವಾಸ ನಾಯಕ ಶುಭಮನ್ ಗಿಲ್ ಅವರಿಗಿದೆ.



**ವಿರಾಟ್ - ರೋಹಿತ್ ಸ್ಥಾನ ತುಂಬುವುದು ಕಷ್ಟ**

ಇಂಗ್ಲೆಂಡ್ ಪ್ರವಾಸಕ್ಕೆ ತೆರಳುವ ಮೊದಲು ಪತ್ರಿಕಾ ಗೋಷ್ಠಿಯಲ್ಲಿ ನಾಯಕ ಶುಭ್‌ಮನ್ ಗಿಲ್, ವಿರಾಟ್ ಮತ್ತು ರೋಹಿತ್ ಅವರ ಸ್ಥಾನವನ್ನು ತುಂಬುವುದು ಕಷ್ಟ, ಆದರೆ ನಾವು ಅದರ ಯಾವುದೇ ಒತ್ತಡವನ್ನು ತೆಗೆದು ಕೊಳ್ಳುತ್ತಿಲ್ಲ ಎಂದು ಹೇಳಿದರು. ತಂಡದ ಮೇಲೆ ನಮಗೆ ಸಂಪೂರ್ಣ ನಂಬಿಕೆ ಇದೆ.

ಪ್ಲೇಯಿಂಗ್ ಇಲೆವೆನ್ ಬಗ್ಗೆ ಈಗಲೇ ಏನನ್ನೂ ಹೇಳುವುದು ಕಷ್ಟ, ಆದರೆ ಶೀಘ್ರದಲ್ಲೇ ನಾವು ವಿನ್ನಿಂಗ್ ಪ್ಲೇಯಿಂಗ್ ಇಲೆವೆನ್ ಅನ್ನು ಮಾಡುತ್ತೇವೆ. ಯಾವುದೇ ಕಷ್ಟದ ಸಮಯದಲ್ಲಿ ಆಡಲು ಸಿದ್ಧರಾಗಿರುವ ಉತ್ತಮ ಬ್ಯಾಟ್ಸ್‌ಮನ್‌ಗಳನ್ನು ನಮ್ಮ ತಂಡ ಹೊಂದಿದೆ ಎಂದು ಗಿಲ್ ಹೇಳಿದರು. ಈ ಬಾರಿ ಟೀಂ ಇಂಡಿಯಾ 2007 ರ ನಂತರ ಮೊದಲ ಬಾರಿಗೆ ಟೆಸ್ಟ್ ಸರಣಿಯನ್ನು ಗೆಲ್ಲುವ ಉದ್ದೇಶದಿಂದ ಇಂಗ್ಲೆಂಡ್ ತಲುಪಿದೆ. 18 ವರ್ಷಗಳಲ್ಲಿ, ಟೀಂ ಇಂಡಿಯಾ ಇಂಗ್ಲೆಂಡ್‌ನಲ್ಲಿ ಯಾವುದೇ ಟೆಸ್ಟ್ ಸರಣಿಯನ್ನು ಗೆದ್ದಿಲ್ಲ. ಈ ಹಿನ್ನೆಲೆಯಲ್ಲಿ, ಭಾರತ ತಂಡ ಶೀಘ್ರದಲ್ಲೇ ಅಭ್ಯಾಸವನ್ನು ಪ್ರಾರಂಭಿಸಲಿದೆ.

**ತಂಡದ ಮೇಲೆ ನಮಗೆ ಸಂಪೂರ್ಣ ನಂಬಿಕೆ**

ಅಭ್ಯಾಸ ಶಿಬಿರ ಜೂನ್ 8 ರಂದು ಆರಂಭ

ಜೂನ್ 8 ರಿಂದ ಇಂಗ್ಲೆಂಡ್‌ನಲ್ಲಿ ಟೀಂ ಇಂಡಿಯಾ ತನ್ನ ಅಭ್ಯಾಸ ಶಿಬಿರವನ್ನು ಪ್ರಾರಂಭಿಸಲಿದೆ. ಅದಕ್ಕೂ ಮೊದಲು, ತಂಡದ ಕೆಲವು ಆಟಗಾರರು ಇಂಗ್ಲೆಂಡ್ ಲಯನ್ಸ್ ವಿರುದ್ಧ ಅನಧಿಕೃತ ಪಂದ್ಯವನ್ನು ಆಡಲಿದ್ದಾರೆ. ಎರಡನೇ ಅನಧಿಕೃತ ಪಂದ್ಯದಲ್ಲಿ ಕೆಎಲ್ ರಾಹುಲ್ ಆಡುವ ನಿರೀಕ್ಷೆಯಿದೆ. ಇದರ ನಂತರ, ಟೀಂ ಇಂಡಿಯಾ ಮೇ 13 ರಂದು ಭಾರತ-ಎ ವಿರುದ್ಧ ಅಭ್ಯಾಸ ಪಂದ್ಯವನ್ನು ಆಡಲಿದೆ. ಜೂನ್ 20 ರಂದು ಪ್ರಾರಂಭವಾಗುವ ಮೊದಲ ಟೆಸ್ಟ್ ಪಂದ್ಯದ ಮೊದಲು ಈ ಅಭ್ಯಾಸ ಪಂದ್ಯವು ಟೀಂ ಇಂಡಿಯಾಕ್ಕೆ ತುಂಬಾ ಉಪಯುಕ್ತವಾಗಿದೆ.

# ಆರ್‌ಸಿಬಿ ಚಾಂಪಿಯನ್ ಆದ ಬೆನ್ನಲ್ಲೇ ಜಿತೇಶ್ ಶರ್ಮಾಗೆ ಜಾಕ್‌ಪಾಟ್

ಜಿತೇಶ್ ಶರ್ಮಾ ತಂಡವು ಜೂನ್ 6 ರಂದು ಭಾರತ್ ರೇಂಜರ್ಸ್ ವಿರುದ್ಧ ಮಾಸ್ಟರ್ ಬ್ಲಾಸ್ಟರ್ ಲೀಗ್‌ನಲ್ಲಿ ತನ್ನ ಮೊದಲ ಪಂದ್ಯವನ್ನು ಆಡಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ 2:45 ಕ್ಕೆ ಪ್ರಾರಂಭವಾಗಲಿದೆ. ವಿದರ್ಭ ಪ್ರೊ ಟಿ20 ಲೀಗ್‌ನ ಆರಂಭಿಕ ಪಂದ್ಯದಲ್ಲಿ, ಪಗೇರಿಯಾ ಸ್ಟ್ರೈಕರ್ಸ್ ನಾಗ್ಪುರ ಟೈಟಾನ್ಸ್ ಅನ್ನು ಎದುರಿಸಲಿದೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ಪ್ರಶಸ್ತಿ ಗೆಲ್ಲುವಲ್ಲಿ ಸ್ಟಾರ್ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಜಿತೇಶ್ ಶರ್ಮಾ ಪ್ರಮುಖ ಪಾತ್ರ ವಹಿಸಿದರು. ಈಗ ಇಂಡಿಯನ್ ಪ್ರೀಮಿಯರ್ ಲೀಗ್ 2025 ಟೂರ್ನಿ ಮುಗಿದ ನಂತರ, ಜಿತೇಶ್ ವಿದರ್ಭ ಪ್ರೊ ಟಿ20 ಲೀಗ್‌ನಲ್ಲಿ ಆಡಲಿದ್ದಾರೆ. ವಿಶೇಷ ಎಂದರೆ ಇಲ್ಲಿ ಇವರು ಎನ್‌ಇಸಿಒ ಮಾಸ್ಟರ್ ಬ್ಲಾಸ್ಟರ್ ತಂಡವನ್ನು ಮುನ್ನಡೆಸಲಿದ್ದಾರೆ, ಅಂದರೆ ಇವರಿಗೆ ನಾಯಕತ್ವದ ಜವಾಬ್ದಾರಿ ನೀಡಲಾಗಿ ದೆ. ಸಂಜಯ್ ರಾಮಸ್ವಾಮಿ ಈ ತಂಡದ ಉಪನಾಯಕರಾಗಿರುತ್ತಾರೆ. ಜಿತೇಶ್ ಈಗಾಗಲೇ ನಾಯಕತ್ವದ ಅನುಭವ ಹೊಂದಿದ್ದು, ಐಪಿಎಲ್‌ನಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಆರ್‌ಸಿಬಿ ತಂಡದ ನಾಯಕತ್ವ ವಹಿಸಿದ್ದಾರೆ.

ಮಾಸ್ಟರ್ ಬ್ಲಾಸ್ಟರ್ ತಂಡವು ಜೂನ್ 6 ರಂದು ತಮ್ಮ ಮೊದಲ ಪಂದ್ಯವನ್ನು ಆಡಲಿದೆ. ಜಿತೇಶ್ ಶರ್ಮಾ ತಂಡವು ಜೂನ್ 6 ರಂದು ಭಾರತ್ ರೇಂಜರ್ಸ್ ವಿರುದ್ಧ ಓಇಅಔ ಮಾಸ್ಟರ್ ಬ್ಲಾಸ್ಟರ್ ಲೀಗ್‌ನಲ್ಲಿ ತನ್ನ ಮೊದಲ ಪಂದ್ಯವನ್ನು ಆಡಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ 2:45 ಕ್ಕೆ ಪ್ರಾರಂಭವಾಗಲಿದೆ. ವಿದರ್ಭ ಪ್ರೊ ಟಿ20 ಲೀಗ್‌ನ ಆರಂಭಿಕ ಪಂದ್ಯದಲ್ಲಿ, ಪಗೇರಿಯಾ ಸ್ಟ್ರೈಕರ್ಸ್ ನಾಗ್ಪುರ ಟೈಟಾನ್ಸ್ ಅನ್ನು ಎದುರಿಸಲಿದೆ.




# ಜನರ ಜೀವಗಳು ಮುಖ್ಯ

ಬೆಂಗಳೂರಿನಲ್ಲಿ ಆರ್‌ಸಿಬಿ ತಂಡದ ವಿಜಯೋತ್ಸವ ಮೆರವಣಿಗೆಗೂ ಮುನ್ನ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಸಾವನ್ನಪ್ಪಿದವರ ಕುಟುಂಬಗಳಿಗೆ ಆರ್‌ಸಿಬಿ ಫ್ರಾಂಚೈಸಿ ಸಹಾಯ ಹಸ್ತ ಚಾಚಿದ್ದು, 10 ಲಕ್ಷ ರೂ ಪರಿಹಾರ ಘೋಷಿಸಿದೆ. ಅಲ್ಲದೆ ಈ ವಿಚಾರವಾಗಿ ಆರ್‌ಸಿಬಿ ವಿರುದ್ಧ ಪ್ರಕರಣವೂ ದಾಖಲಾಗಿದೆ. ಇದೀಗ ಟೀಂ ಇಂಡಿಯಾದ ಮುಖ್ಯ ಕೋಚ್ ಗೌತಮ್ ಗಂಭೀರ್ ಈ ವಿಷಯದ ಬಗ್ಗೆ ದೊಡ್ಡ ಹೇಳಿಕೆ ನೀಡಿದ್ದಾರೆ. ಇಂಗ್ಲೆಂಡ್ ಪ್ರವಾಸಕ್ಕೂ ಮುನ್ನ ಪತ್ರಿಕಾಗೋಷ್ಠಿಯನ್ನುದ್ದೇಶಿ ಮಾತನಾಡಿದ ಗಂಭೀರ್, 'ಗೆಲುವಿನ ನಂತರ ಇಂತಹ ರೋಡ್ ಶೋಗಳು ನಡೆಯಬಾರದು ಎಂದು ಗೌತಮ್ ಗಂಭೀರ್ ಹೇಳಿದ್ದಾರೆ. ಏಕೆಂದರೆ ಆಚರಣೆಗಳಿಗಿಂತ ಜೀವಗಳು ಮುಖ್ಯ. ನನಗೆ ರೋಡ್ ಶೋಗಳಲ್ಲಿ ನಂಬಿಕೆ ಇಲ್ಲ. ನಾನು ಆಡುತ್ತಿದ್ದಾಗ ಮತ್ತು ನಾವು ಟಿ20 ವಿಶ್ವಕಪ್ ಗೆದ್ದಾಗಲೂ, ನಾನು ಈ ರೋಡ್ ಶೋಗೆ ಬೆಂಬಲ ನೀಡಿರಲಿಲ್ಲ. ಜನರ ಜೀವಗಳು ಹೆಚ್ಚು ಮುಖ್ಯ.

ಬೆಂಗಳೂರಿನಲ್ಲಿ ನಡೆದದ್ದು ನೋವಿನ ಸಂಗತಿ ಎಂದರು. ಆರ್‌ಸಿಬಿ ಐಪಿಎಲ್ ಟ್ರೋಫಿ ಗೆದ್ದಾಗ, ಕೋಟ್ಯಾಂತರ ಅಭಿಮಾನಿ ಗಳು ತುಂಬಾ ಸಂತೋಷಪಟ್ಟರು. ಫೈನಲ್ ಪಂದ್ಯ ಮುಗಿದ ಮರು ದಿನ ವಿಜಯೋತ್ಸವ ಮೆರವಣಿಗೆ ಯನ್ನು ವಿಧಾನಸೌಧ ದಿಂದ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದವರೆಗೆ ನಡೆಸಬೇಕಿತ್ತು. ಆದರೆ ನಿರೀಕ್ಷೆಗೂ ಮೀರಿ ಅಭಿಮಾನಿಗಳು ಕ್ರೀಡಾಂಗಣದ ಬಳಿ ಜಮಾಯಿಸಿದರು, ಅವರನ್ನು ನಿಭಾಯಿಸುವುದು ಪೊಲೀಸರಿಗೂ ಕಷ್ಟಕರವಾಯಿತು. ಆ ನಂತರ ಕಾಲ್ತುಳಿತ ಸಂಭವಿಸಿ 11 ಅಭಿಮಾನಿಗಳು ಕೂಡ ಸಾವನ್ನಪ್ಪಿದರು. ಈ ದುರಂತದ ಬಗ್ಗೆ ನ್ಯಾಯಾಂಗ ತನಿಖೆಗೆ ಆದೇಶ ನೀಡಲಾಗಿದ್ದು, ಆರ್‌ಸಿಬಿ ವಿರುದ್ಧ ಎಫ್‌ಐಆರ್ ಕೂಡ ದಾಖಲಾಗಿದೆ.

**ನ್ಯಾಯಾಂಗ ತನಿಖೆಗೆ ಆದೇಶ**



# ಅಖಿಲ್ ಅಕ್ಕಿನೇನಿ, ಜೈನಾಬ್ ವಿವಾಹ



ಸ್ಟಾರ್ ಅಕ್ಕಿನೇನಿ ನಾಗಾರ್ಜುನ ಅವರ ಕಿರಿಯ ಪುತ್ರ, ಅಕ್ಕಿನೇನಿ ಅಖಿಲ್ ಮತ್ತು ಖ್ಯಾತ ಉದ್ಯಮಿಯ ಪುತ್ರಿ ಝೈನಬ್ ರೌಜಿ ಅವರುಗಳು ಇಂದು ವಿವಾಹ ಆಗಿದ್ದಾರೆ. ಮನೆಯಲ್ಲಿಯೇ ಸರಳವಾಗಿ ಮಾಂಗಲ್ಯಧಾರಣ ಮಹೋತ್ಸವ ನಡೆದಿದೆ. ಆ ನಂತರ ನಡೆಯಲಿರುವ ಆರತಕ್ಷತೆಗೆ ರಾಜಕಾರಣಿಗಳು, ಸಿನಿಮಾ ಸೆಲೆಬ್ರಿಟಿಗಳು ಭಾಗಿ ಆಗಲಿದ್ದಾರೆ. ಅಷ್ಟಕ್ಕೂ ಅಖಿಲ್ ಮದುವೆ ಆಗುತ್ತಿರುವ ಝೈನಬ್ ಯಾರು ತೆಲುಗು ಚಿತ್ರರಂಗದ ಜನಪ್ರಿಯ ನಟ ಅಕ್ಕಿನೇನಿ ನಾಗಾರ್ಜುನ ಅವರ ಕಿರಿಯ ಪುತ್ರ, ನಟ ಅಖಿಲ್ ಅಕ್ಕಿನೇನಿ ಹಾಗೂ ಝೈನಬ್ ರೌಜಿ ವಿವಾಹ ಸಮಾರಂಭ ಹೈದರಾಬಾದ್‌ನಲ್ಲಿ ಬಲು ಅದ್ದೂರಿಯಾಗಿ ನೆರವೇರಿದೆ. ನಾಗಾರ್ಜುನ ಅವರ ಜ್ಯೂಬ್ಲಿ ಹಿಲ್ಸ್ ನಿವಾಸದಲ್ಲಿಯೇ ಇಂದು ಬೆಳಿಗಿನ ಜಾವ 3 ಗಂಟೆಗೆ ಅಖಿಲ್ ಹಾಗೂ ಝೈನಬ್ ರೌಜಿ ಅವರ ವಿವಾಹ ಕುಟುಂಬ ಸದಸ್ಯರು ಮತ್ತು ಕೆಲವೇ ಆಪ್ತರ ಸಮ್ಮುಖದಲ್ಲಿ ಶಾಸ್ತ್ರೋಕ್ತವಾಗಿ ನಡೆದಿದೆ.

ಅಕ್ಕಿನೇನಿ ಅಖಿಲ್ ಮತ್ತು ಝೈನಬ್ ರೌಜಿ ಕಳೆದ ಕೆಲ ವರ್ಷಗಳಿಂದಲೂ ಪರಸ್ಪರ ಪ್ರೀತಿಯಲ್ಲಿ ದ್ದರು. ಕಳೆದ ವರ್ಷ ನವೆಂಬರ್ ತಿಂಗಳಲ್ಲಿ ಅಖಿಲ್ ಹಾಗೂ ಝೈನಬ್ ತಾವಿಬ್ಬರೂ ಮದುವೆ ಆಗುತ್ತಿರುವುದಾಗಿ ಘೋಷಿಸಿದ್ದರು. ಇದೀಗ ಇಬ್ಬರ ಕುಟುಂಬದವರ ಸಮ್ಮುಖದಲ್ಲಿ ಸರಳವಾಗಿ ವಿವಾಹ ಆಗಿದ್ದಾರೆ. ಆದರೆ ಇಬ್ಬರ ಆರತಕ್ಷತೆ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಲಿದ್ದು, ಚಿತ್ರರಂಗದ ಹಲವು ಗಣ್ಯರು, ರಾಜಕಾರಣಿಗಳು ಭಾಗಿ ಆಗಲಿದ್ದಾರೆ. ಜೂನ್ 5 ರಂದು ಅಖಿಲ್-ಝೈನಬ್ ವಿವಾಹಾರ್ಥ ಅದ್ದೂರಿಯಾಗಿ ಬಾರಾತ್ ಮತ್ತು ಸಂಗೀತ್ ಕಾರ್ಯ ಕ್ರಮಗಳು ನಡೆದಿವೆ.

ಕಾರ್ಯಕ್ರಮದಲ್ಲಿ ಅಖಿಲ್ ಅವರ ಸಹೋದರ ನಾಗ ಚೈತನ್ಯ ಮತ್ತು ಅವರ ಪತ್ನಿ ಶೋಭಿತಾ ಧುಲಿಪಾಲ ಸಕ್ರಿಯವಾಗಿ ಭಾಗವಹಿಸಿದ್ದರು. ತಮ್ಮನ ಮದುವೆಯಲ್ಲಿ ನಾಗ ಚೈತನ್ಯ ಸಖತ್ ಆಗಿ ಸ್ಟೆಪ್ ಸಹ ಹಾಕಿದರು. ಅಕ್ಕಿನೇನಿ ಕುಟುಂಬಕ್ಕೆ ಬಲು ಹತ್ತಿರದವರಾದ ಚಿರಂಜೀವಿ ಕುಟುಂಬದ ಕೆಲವು ಪ್ರಮುಖ ಸದಸ್ಯರು ಮದುವೆಯ ಹಲವು ಕಾರ್ಯಕ್ರಮಗಳಲ್ಲಿ ಭಾಗಿ ಆಗಿದ್ದರು.

**ಕುಟುಂಬದವರ ಸಮ್ಮುಖದಲ್ಲಿ ಸರಳವಾಗಿ ವಿವಾಹ**

# ವಿಶಾಲ್‌ಗೆ ಭಾರಿ ಸಂಕಷ್ಟ, 27.68 ಕೋಟಿ ಹಣ ನೀಡುವಂತೆ ಆದೇಶ

ನಿರ್ಮಾಣ ಸಂಸ್ಥೆ ಲೈಕಾ ಜೊತೆಗೆ ಕಳೆದ ಐದು ವರ್ಷದಿಂದಲೂ ಹಣಕಾಸು ವಿಷಯಕ್ಕೆ ಸಂಬಂಧಿಸಿದಂತೆ ವ್ಯಾಜ್ಯ ನಡೆಸುತ್ತಿದ್ದು, ಇದೀಗ ಮದ್ರಾಸ್ ಹೈಕೋರ್ಟ್ ನಟ ವಿಶಾಲ್‌ಗೆ ದೊಡ್ಡ ಶಾಕ್ ನೀಡಿದೆ. ಭಾರಿ ಮೊತ್ತದ ಹಣವನ್ನು ಮರಳಿಸುವಂತೆ ಹೇಳಿದೆ. ತಮಿಳಿನ ಸ್ಟಾರ್ ನಟ ಮತ್ತು ನಿರ್ಮಾಪಕ ವಿಶಾಲ್‌ಗೆ ಭಾರಿ ಸಂಕಷ್ಟ ಎದುರಾಗಿದೆ. ನಿರ್ಮಾಣ ಸಂಸ್ಥೆಗಳು, ವತರಕರು, ಫಿಲಂ ಚೇಂಬರ್, ನಿರ್ದೇಶಕರುಗಳೊಟ್ಟಿಗೆ ಪದೇ ಪದೇ ಕಿರಿಕ್ ಮಾಡಿಕೊಳ್ಳುತ್ತಲೇ ಬರುತ್ತಿರುವ ವಿಶಾಲ್‌ಗೆ ಈಗ ಕೋರ್ಟ್‌ನಿಂದ 'ಶಿಕ್ಷೆ' ದೊರೆತಿದೆ. ತಮಿಳಿನ ಖ್ಯಾತ ನಿರ್ಮಾಣ ಸಂಸ್ಥೆ ಲೈಕಾಗೆ ಬರೋಬ್ಬರಿ 21.29 ಕೋಟಿ ಹಣವನ್ನು 30% ಬಡ್ಡಿ ಜೊತೆಗೆ ಸೇರಿಸಿ ನೀಡುವಂತೆ ಮದ್ರಾಸ್ ಹೈಕೋರ್ಟ್ ಆದೇಶ ನೀಡಿದೆ. ಲೈಕಾ ಪ್ರೊಡಕ್ಷನ್ ಹೌಸ್ ಹಾಗೂ ವಿಶಾಲ್ ನಡುವೆ ಕಳೆದ ಕೆಲ ವರ್ಷಗಳಿಂದಲೂ ಹಣಕಾಸಿಗೆ ಸಂಬಂಧಿಸಿದಂತೆ ವಿವಾದ ಚಾಲ್ತಿಯಲ್ಲಿದೆ. ಪ್ರಕರಣ ಕುರಿತಂತೆ ಮದ್ರಾಸ್ ಹೈಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿತ್ತು, ಎರಡೂ ಕಡೆಯ ವಾದಗಳನ್ನು ಆಲಿಸಿದ ನ್ಯಾಯಮೂರ್ತಿ ಪಿಟಿ ಆಶಾ ಅವರು ನಟ ವಿಶಾಲ್ ಅವರು 21.29 ಕೋಟಿ ಹಣವನ್ನು 30% ಬಡ್ಡಿ ಜೊತೆ ಸೇರಿಸಿ ನಿರ್ಮಾಣ ಸಂಸ್ಥೆಗೆ ನಿಗದಿತ ಅವಧಿಯ ಒಳಗಾಗಿ ನೀಡಬೇಕು ಎಂದು ಆದೇಶಿಸಿದ್ದಾರೆ.



# ಮೋರಿಯಾ ಮನೆ ಮೇಲೆ ಇಡಿ ದಾಳಿ

ಮುಂಬೈನ ಮಿಥಿ ನದಿ ಹೂಳು ತೆಗೆಯುವ ಯೋಜನೆಯಲ್ಲಿ ಅಕ್ರಮ ನಡೆದಿದೆ.ಇದರ ತನಿಖೆಯ ಭಾಗವಾಗಿ ಇಡಿ ಅಧಿಕಾರಿಗಳು ಬಹುಭಾಷಾ ನಟ ಡೀನೋ ಮೋರಿಯಾ ಅವರ ಮುಂಬೈ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ. 65 ಕೋಟಿ ರೂಪಾಯಿಗಳ ಅಕ್ರಮದ ಆರೋಪದಲ್ಲಿ ಡೀನೋ ಅವರ ಹಣಕಾಸಿನ ವ್ಯವಹಾರಗಳನ್ನು ಇಡಿ ತನಿಖೆ ಮಾಡುತ್ತಿದೆ.

ಮುಂಬೈನ ಮಿಥಿ ನದಿ ಹೂಳು ತೆಗೆಯುವ ಯೋಜನೆಯಲ್ಲಿ ನಡೆದ ಅಕ್ರಮದಲ್ಲಿ ಬಹುಭಾಷಾ ನಟ ಡೀನೋ ಮೋರಿಯಾ ಅವರ ಮುಂಬೈನ ಮನೆ ಮೇಲೆ ಇಡಿ ದಾಳಿ ನಡೆಸಿದೆ. ಬೆಳಿಗ್ಗೆ 8 ಗಂಟೆ ಸುಮಾರಿಗೆ ಈ ದಾಳಿ ನಡೆದಿದ್ದು, ಶೋಧ ಕಾರ್ಯ ಮುಂದುವರಿದಿದೆ. ಪ್ರಕರಣದಲ್ಲಿ ಈ ಮೊದಲು ಮುಂಬೈ ಪೊಲೀಸರು ಅವರನ್ನು ವಿಚಾರಣೆ ನಡೆಸಿದ್ದರು. ಈಗ ಇಡಿ ದಾಳಿಯಿಂದ ಅವರು ಕಂಗೆಟ್ಟಿದ್ದಾರೆ.

ಮಿಥಿ ನದಿ ಹೂಳು ತೆಗೆಯುವ ಪ್ರಕರಣ ತುಂಬಾನೇ ದೊಡ್ಡದಿದೆ. ಬರೋಬ್ಬರಿ 65 ಕೋಟಿ ರೂಪಾಯಿ ಅಕ್ರಮ ಇಲ್ಲಿ ನಡೆದಿದೆ ಎನ್ನಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿ ಮುಂಬೈ ಹಾಗೂ ಕೇರಳದ 15 ಕಡೆಗಳಲ್ಲಿ ಇಡಿ ದಾಳಿ ನಡೆಸಿದೆ. ಈ ಪೈಕಿ ನಟ ಡೀನೋ ಮೋರಿಯಾ ಅವರ ನಿವಾಸ, ಬಾಂಬೆ ನಗರದ ಸಹಾಯಕ ಇಂಜಿಯರ್ ಪ್ರಶಾಂತ್ ರಾಮುಗಡೆ ಅವರ ಮನೆ ಸೇರಿದೆ. ಡೀನೋ ಮೋರಿಯಾ ಅವರನ್ನು ಶಿವಸೇನೆ ಯುವ ನಾಯಕ ಮತ್ತು ಶಾಸಕ ಆದಿತ್ಯ ಠಾಕ್ರೆ ಅವರ ಆಪ್ತ ಸಹಾಯಕ ಎಂದು ಪರಿಗಣಿಸಲಾಗಿದೆ.

**65 ಕೋಟಿ ರೂಪಾಯಿಗಳ ಅಕ್ರಮ**




# 150 ವರ್ಷ ಬದುಕುತ್ತೇನೆ ಆ ಗುಟ್ಟು ಹೇಳುತ್ತೇನೆ

ನಟ ಶರತ್ ಕುಮಾರ್ ಕನ್ನಡ ಸೇರಿದಂತೆ ಹಲವಾರು ಭಾಷೆಗಳಲ್ಲಿ ನಟಿಸಿದ್ದು, ಶರತ್ ಅವರ ವಯಸ್ಸು 69 ಆದರೆ ಈಗಲೂ ಫಿಟ್ ಆಗಿದ್ದಾರೆ. ಶರತ್ ಅವರು ಹೇಳಿರುವಂತೆ ಅವರು 150 ವರ್ಷ ಬದುಕಿರಲಿದ್ದಾರಂತೆ. 150 ವರ್ಷ ಹೇಗೆ ಬದುಕಿರಬೇಕು ಎಂಬುದು ಅವರಿಗೆ ಗೊತ್ತಿದ್ದು, ಅದನ್ನು ಎಲ್ಲಾರಿಗೂ ಹೇಳಿಕೊಡುತ್ತಾರಂತೆ ಆದರೆ ಒಂದು ಷರತ್ತು ವಿಧಿಸಿದ್ದಾರೆ. ನಟ ಶರತ್ ಕುಮಾರ್ ಕನ್ನಡ ಸೇರಿದಂತೆ ಹಲವಾರು ಭಾಷೆಗಳಲ್ಲಿ ನಟಿಸಿರುವ ಬಲು ಜನಪ್ರಿಯ ನಟ. ಈಗ ನಟ ಶರತ್‌ಗೆ ವಯಸ್ಸು 69 ಆದರೆ ಈಗಲೂ ಸಹ ಫಿಟ್ ಆಗಿದ್ದಾರೆ. ಒಳ್ಳೆಯ ದೇಹದಾರ್ಢ್ಯ ಹೊಂದಿದ್ದಾರೆ. ಈಗಲೂ ಸಿನಿಮಾಗಳಲ್ಲಿ ಪೋಷಕ ನಟ, ವಿಲನ್ ಪಾತ್ರಗಳಲ್ಲಿಯೂ ಮಿಂಚುತ್ತಿದ್ದಾರೆ. ರಾಜಕೀಯದಲ್ಲಿಯೂ ಶರತ್ ಕುಮಾರ್ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಇತ್ತೀಚೆಗೆ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಶರತ್ ಕುಮಾರ್, 'ನಾನು 150 ವರ್ಷ ಬದುಕುತ್ತೇನೆ, ಆ ವಿದ್ಯೆ ಎಲ್ಲಾರಿಗೂ ಹೇಳಿಕೊಡುತ್ತೇನೆ, ಆದರೆ ಅದಕ್ಕೊಂದು ಷರತ್ತು ಇದೆ' ಎಂದಿದ್ದಾರೆ. ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಶರತ್ ಕುಮಾರ್, 'ನನಗೀಗ 69 ವರ್ಷ ವಯಸ್ಸು, ಕೆಲವೇ ದಿನಗಳಲ್ಲಿ 70 ವರ್ಷದವನಾಗಲಿದ್ದೇನೆ, ಆದರೆ ಈಗಲೂ ಸಹ 25 ವರ್ಷದವನಂತೆ ಉತ್ಸಾಹ ಶಕ್ತಿ ನನ್ನಲ್ಲಿದೆ. ನಾನು 150 ವರ್ಷಗಳ ವರೆಗೆ ಬದುಕುತ್ತೇನೆ, ಏಕೆಂದರೆ ಅಷ್ಟು ವರ್ಷ ಹೇಗೆ ಬದುಕಬೇಕು ಎಂಬುದನ್ನು ನಾನು ಕಲಿತಿದ್ದೇನೆ. ಅದನ್ನು ಪಾಲಿಸುತ್ತಿದ್ದೇನೆ. ಆ ವಿದ್ಯೆಯನ್ನು ನಿಮಗೂ ಹೇಳಿಕೊಡುತ್ತೇನೆ. ಆದರೆ 2026ರ ಚುನಾವಣೆಯಲ್ಲಿ ಗೆಲ್ಲಿಸಿ, ನನ್ನನ್ನು ಸಿಎಂ ಮಾಡಿದರೆ ಮಾತ್ರವೇ ನಿಮಗೆ ಆ ಗುಟ್ಟು ನಾನು ಹೇಳಲಿದ್ದೇನೆ' ಎಂದಿದ್ದಾರೆ.

**ವಯಸ್ಸು 69 ಆದರೆ ಈಗಲೂ ಸಹ ಫಿಟ್**



**ನೆಟ್ಟಿಗರ ಕಾಮೆಂಟ್‌ಗೆ ಖುಷಿ ಮುಖರ್ಜಿ ಬೋಲ್ಡ್ ಉತ್ತರ**



# ನಾನು ಚಡ್ಡಿ ಹಾಕಿದ್ನಾ.. ಇಲ್ವಾ ಅಂತ ಬಂದು ನೋಡಿದ್ರಾ...

ಸೋಷಿಯಲ್ ಮೀಡಿಯಾದಲ್ಲಿ ಸದಾ ಆಕ್ಟೀವ್ ಆಗಿರುವ ಬಹುಭಾಷಾ ನಟಿ ಖುಷಿ ಮುಖರ್ಜಿ ಇತ್ತೀಚೆಗೆ ಒಳ ಉಡುಪು ಕಾಣುವಂತಹ ಹಾಟ್ ವಿಡಿಯೋವೊಂದನ್ನ ಹಂಚಿಕೊಂಡಿದ್ದರು. ಇದರ ಫೋಟೋಗಳು ವೈರಲ್ ಆಗ್ತಿದಂತೆ ನಟಿಯ ಬಗ್ಗೆ ನಾನಾ ರೀತಿ ಕಾಮೆಂಟ್‌ಗಳು ಬರ್ತಿದ್ದವು, ಅಲ್ಲದೇ ನೀವು ಒಳ ಉಡುಪು ಧರಿಸಿದ್ದೀರಾ ಅಂತ ಕೆಲ ನೆಟ್ಟಿಗರು ಪ್ರಶ್ನೆ ಕೇಳಿದ್ದರು. ಇದೆಲ್ಲದಕ್ಕೂ ನಟಿ ಉತ್ತರ ಕೊಡೋ ಕೆಲಸ ಮಾಡಿದ್ದಾರೆ. ನಾನು ಚಡ್ಡಿ ಹಾಕಿದ್ದೀನಾ.. ಇಲ್ವಾ ಅಂತ ನೀವು ಬಂದು ನೋಡಿದ್ರಾ, ಆ ಬಟ್ಟೆಯಲ್ಲಿ ನಾನು ಚಡ್ಡಿ ಹಾಕಿರಲ್ಲ, ಬದಲಿಕೆ ಥಾಂಗ್ಸ್ ಹಾಕಿದ್ದೆ. ಅದನ್ನ ಮೇಲೆ ಕಟ್ಟಿದ್ದರಿಂದ ಹಾಕಿರೋದು ಕಾಣ್ತಿರಲಿಲ್ಲ ಅದಕ್ಕೆ ಕೀಳಾಗಿ ಮಾತನಾಡೋದು ಎಷ್ಟು ಸರಿ ಅಂತ ಪ್ರಶ್ನೆ ಮಾಡಿದರು. ಮುಂದುವರಿದು.. ನಾನು ಆ ಡ್ರೆಸ್‌ನಲ್ಲಿ ಅನ್‌ಕಂಫರ್ಟ್ ಆಗಿರಲಿಲ್ಲ. ಒಂದು ಕಡೆ ಕೈ, ಮತ್ತೊಂದು ಕಡೆ ತೊಡೆ ಕಾಣಿಸುವಂತೆ ಡ್ರೆಸ್ ಹಾಕಿದ್ದೆ. ಜೊತೆಗೆ ಎಷ್ಟು ತೋರಿಸಬೇಕು ಎಷ್ಟು ತೋರಿಸಬಾರದು ಎಲ್ಲಾವೂ ನನಗೆ ಗೊತ್ತಿತ್ತು. ಆದ್ರೆ ಯಾವನೋ ಒಬ್ಬ ಕುಡುಕ ಒಂದು ಕಾಮೆಂಟ್ ಪಾಸ್ ಮಾಡಿದ, ಅದಕ್ಕೆ ಎಲ್ಲಾರೂ ಸಪೋರ್ಟ್ ಮಾಡಿ ಟ್ರೋಲ್ ಮಾಡೋಕೆ ಶುರು ಮಾಡಿದ್ರು, ಅಂತ ಅಸಮಾಧಾನ ಹೊರಹಾಕಿದ್ರು. ಇತ್ತೀಚೆಗೆ ಮುಂಬೈನಲ್ಲಿ ಕಾರ್ಯಕ್ರಮವೊಂದಕ್ಕೆ ಒಳಉಡುಪು ಧರಿಸದೇ ಇರೋದು ಕಾಣಿಸುವಂತಹ ಟ್ರಾನ್ಸ್‌ಪರೆಂಟ್ ಡ್ರೆಸ್ ತೊಟ್ಟು ಫೋಟೋಗೆ ಪೋಸ್ ಕೊಟ್ಟಿದ್ದರು. ಅದಕ್ಕೂ ಮುನ್ನ ಗೋಲ್ಡನ್ ಕಲ್ಲರ್ ತುಂಡು ಬಟ್ಟೆ ಧರಿಸಿದ್ದ ವಿಡಿಯೋ ಹಂಚಿಕೊಂಡಿದ್ದರು. ಈ ವಿಡಿಯೋವನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿದ್ದು, ಅಭಿಮಾನಿಗಳ ಕಣ್ಣುಕುಕ್ಕುವಂತೆ ಮಾಡಿತ್ತು. ಕೆಲ ನೆಟ್ಟಿಗರು ನಟಿಯ ಬೋಲ್ಡ್ ಅವತಾರಕ್ಕೆ ವಾವ್ ಎಷ್ಟು ಸೆಕ್ಸಿ ಅಂತಾ ಕಾಮೆಂಟ್ ಮಾಡಿದ್ರೆ, ಇನ್ನೂ ಕೆಲವರು ಇನ್ನೂ ಸ್ವಲ್ಪ ಚೋಟುದ್ದ ಡ್ರೆಸ್ ತೊಟ್ಟಿದ್ರೆ ಮಜಾ ಇರ್ತಿತ್ತು, ನಾನೇ ಒಳಉಡುಪು ಕೊಡಿಸಲೇ ಅಂತೆಲ್ಲಾ ಕಾಮೆಂಟ್ ಮಾಡಿದ್ದರು. ಇನ್ನೂ ಕೆಲವರು ನಟಿಯನ್ನ ಟ್ರೋಲಿಗೆಳೆದಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966